23 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 23 | ಸಂಚಿಕೆ 296 | ನವದೆಹಲಿ | ಬೆಲೆ ₹10 | ಮೇ 2, 2026, ಶನಿವಾರ

## ಒಳಪುಟಗಳಲ್ಲಿ

ಮದ್ಯ ಸೇವಿಸಿ ಮುಖ್ಯಮಂತ್ರಿ ಕಲಾಪಕ್ಕೆ ಬಂದ ಆರೋಪ: ಪಂಜಾಬ್ ವಿಧಾನಸಭೆಯಲ್ಲಿ ಹೈಡ್ರಾಮ - ಪು.4

ಬೈಕ್ ಮೆಕಾನಿಕ್‌ಗಳ ಸಮಾವೇಶದಲ್ಲಿ ಅನಾವರಣಗೊಂಡ ಅತ್ಯಾಧುನಿಕ ತಂತ್ರಜ್ಞಾನ - ಪು.5

ಕಾಂಗ್ರೆಸ್ ಅಧಿಕಾರದಲ್ಲಿರುವವರೆಗೆ ರಾಜ್ಯದ ಅಭಿವೃದ್ಧಿ ಸಾಧ್ಯವಿಲ್ಲ: ನಿಖಿಲ್ ಕುಮಾರಸ್ವಾಮಿ - ಪು.6

# ವಾಣಿಜ್ಯ ಬಳಕೆ ಅನಿಲ ಸಿಲಿಂಡರ್ ಬೆಲೆ 993 ರೂ.ಹೆಚ್ಚಳ

**■ ಕೇಂದ್ರ ಸರ್ಕಾರ ಶಾಕ್ ■ ದೆಹಲಿಯಲ್ಲಿ 3071 ರೂ. ತಲುಪಿದ ಸಿಲಿಂಡರ್ ಬೆಲೆ ■ ಹೋಟೆಲ್ ಉದ್ಯಮದ ಮೇಲೆ ಭಾರಿ ಪರಿಣಾಮ**

**ನವದೆಹಲಿ, ಮೇ 1: ಬಂಗಾಳ ಸೇರಿದಂತೆ 5 ರಾಜ್ಯಗಳ ಚುನಾವಣಾ ಫಲಿತಾಂಶಗಳು ಮೇ 4 ರಂದು ಪ್ರಕಟವಾಗಲಿವೆ. ಇದಕ್ಕೂ ಮುನ್ನ, ಸಾಮಾನ್ಯ ಜನರು ಮತ್ತು ವಿಶೇಷವಾಗಿ ಉದ್ಯಮಿಗಳು ಹಣದುಬ್ಬರದ ಮತ್ತೊಂದು ಹೊಡೆತಕ್ಕೆ ಸಿಲುಕಿದ್ದಾರೆ. 19 ಕೆಜಿ ವಾಣಿಜ್ಯ ಎಲ್‌ಪಿಜಿ ಸಿಲಿಂಡರ್‌ನ ಬೆಲೆಯನ್ನು ಭಾರೀ ಪ್ರಮಾಣದಲ್ಲಿ ಹೆಚ್ಚಿಸಲಾಗಿದ್ದು 19 ಕೆಜಿ ವಾಣಿಜ್ಯ ಸಿಲಿಂಡರ್‌ನ ಬೆಲೆಯನ್ನು 993 ರೂ.ನಷ್ಟು ಹೆಚ್ಚಿಸಲಾಗಿದೆ. ಈ ಹೆಚ್ಚಳದ ನಂತರ, ದೆಹಲಿಯಲ್ಲಿ ವಾಣಿಜ್ಯ ಸಿಲಿಂಡರ್‌ನ ಬೆಲೆ ಈಗ 3071.50 ರೂ.ಗೆ ಏರಿದೆ.**



ಇದು ಮೊದಲಿಗಿಂತ ಹೆಚ್ಚು. ಈ ಹೆಚ್ಚಳದ ನಂತರ, ಇಡೀ ಮಾರುಕಟ್ಟೆ ತೊಂದರೆಗೊಳಗಾಗುವ ಎಲ್ಲಾ ಸಾಧ್ಯತೆಗಳಿವೆ. ಈಗಾಗಲೇ ಹಣದುಬ್ಬರದಿಂದ ಬಳಲುತ್ತಿರುವ ಜನರ ಮುಂದೆ ದೊಡ್ಡ ಬಿಕ್ಕಟ್ಟು ಉದ್ಭವಿಸಿದೆ.

ಈ ಹಠಾತ್ ಹೆಚ್ಚಳವು, ವಿಶೇಷವಾಗಿ ಆಹಾರ ಉದ್ಯಮ ಮತ್ತು ಸಣ್ಣ ವ್ಯವಹಾರಗಳಲ್ಲಿ ಕಳವಳವನ್ನು ಹುಟ್ಟುಹಾಕಿದೆ. ರೆಸ್ಟೋರೆಂಟ್‌ಗಳು, ಧಾಬಾಗಳು ಮತ್ತು ಅಡುಗೆ ಸೇವೆಗಳು ಈಗ ತಮ್ಮ ವೆಚ್ಚಗಳನ್ನು ನಿರ್ವಹಿಸುವಲ್ಲಿ ತೊಂದರೆಗಳನ್ನು ಎದುರಿಸಬಹುದು, ಇದು ಗ್ರಾಹಕರ ಮೇಲೂ ಪರಿಣಾಮ ಬೀರುವ ಸಾಧ್ಯತೆಯಿದೆ. ಆದಾಗ್ಯೂ, ದೇಶೀಯ ಎಲ್‌ಪಿಜಿ ಸಿಲಿಂಡರ್ ಬೆಲೆಗಳನ್ನು ಸದ್ಯಕ್ಕೆ ಬದಲಾಯಿಸಲಾಗಿಲ್ಲ ಎಂಬುದು ಸಮಾಧಾನಕರ ವಿಷಯ. ಪರಿಣಾಮವಾಗಿ, ಸಾಮಾನ್ಯ ದೇಶೀಯ ಗ್ರಾಹಕರು ಈ ಹೆಚ್ಚಳದಿಂದ ನೇರವಾಗಿ ಪರಿಣಾಮ ಬೀರುವುದಿಲ್ಲ.

ಇನ್ನು ವಾಣಿಜ್ಯ ಅನಿಲ ಸಿಲಿಂಡರ್ ಬೆಲೆಗಳ ಹೆಚ್ಚಳವು ಮಾರುಕಟ್ಟೆಯಲ್ಲಿ ಆಹಾರ ಮತ್ತು ಪಾನೀಯಗಳ ಬೆಲೆಗಳ ಮೇಲೆ ಪರಿಣಾಮ ಬೀರಬಹುದು ಎಂದು ತಜ್ಞರು ನಂಬಿದ್ದಾರೆ. ಮುಂಬರುವ ದಿನಗಳಲ್ಲಿ ಹೋಟೆಲ್‌ಗಳು ಮತ್ತು ರೆಸ್ಟೋರೆಂಟ್‌ಗಳು ತಮ್ಮ ಆಹಾರದ ಬೆಲೆಗಳನ್ನು ಹೆಚ್ಚಿಸಬಹುದು, ಇದು ಸಾಮಾನ್ಯ ಜನರ ಜೇಬಿನ ಮೇಲೆ ಹೆಚ್ಚುವರಿ ಹೊರೆಯನ್ನು ಹಾಕಬಹುದು.

ಫೆಬ್ರವರಿ 28 ರಿಂದ 19 ಕೆಜಿ ಎಲ್‌ಪಿಜಿ ಸಿಲಿಂಡರ್‌ನ ಬೆಲೆಯನ್ನು ಹೆಚ್ಚಿಸಿದ ನಂತರ ಇದು ಮೂರನೇ ಬಾರಿಯಾಗಿದೆ. ಇದನ್ನು ಮೊದಲು ಮಾರ್ಚ್‌ನಲ್ಲಿ 144 ರೂ.ಗಳಷ್ಟು ಮತ್ತು ನಂತರ ಏಪ್ರಿಲ್ 1 ರಂದು 200 ರೂ.ಗಳಷ್ಟು ಹೆಚ್ಚಿಸಲಾಗಿತ್ತು.

ಇನ್ನು ವಾಣಿಜ್ಯ ಸಿಲಿಂಡರ್ ಬೆಲೆ ಏರಿಕೆಗೆ ಕಾಂಗ್ರೆಸ್ ಆಕ್ರೋಶ ವ್ಯಕ್ತಪಡಿಸಿದ್ದು, ಪ್ರಧಾನಿ ನರೇಂದ್ರ ಮೋದಿಯನ್ನು ಕುಟುಕಿದೆ. 'ಹಣದುಬ್ಬರ ಮನುಷ್ಯ ಮೋದಿ' ಮತ್ತೊಮ್ಮೆ ಚಾಟಿ ಬೀಸಿದ್ದಾರೆ. ವಾಣಿಜ್ಯ ಸಿಲಿಂಡರ್‌ಗಳ ಬೆಲೆ 993 ರೂ.ನಷ್ಟು ಹೆಚ್ಚಿಸಿದ್ದಾರೆ. ಕಳೆದ ನಾಲ್ಕು ತಿಂಗಳಲ್ಲಿ ಮೋದಿ ವಾಣಿಜ್ಯ ಸಿಲಿಂಡರ್‌ಗಳ ಬೆಲೆಯನ್ನು ಹೆಚ್ಚಿಸಿದ್ದಾರೆ. ವರ್ಷಕ್ಕೆ ಇನ್ನೂ ಎಂಟು ತಿಂಗಳುಗಳು ಬಾಕಿ ಉಳಿದಿವೆ. ಇನ್ನು ಬೆಲೆ ಏರಿಕೆಯಾಗಲಿದೆ ಎಂದು ಎಕ್ಸ್ ಖಾತೆಯಲ್ಲಿ ಪೋಸ್ಟ್ ಮಾಡಿದೆ.

ಮೋದಿ ಸರ್ಕಾರಕ್ಕೆ ಕೇವಲ ಹಣ ಸುಲಿಗೆ ಮಾಡುವುದೊಂದೇ ಗೊತ್ತು. ಈಗ 5 ಕೆಜಿಯ ಸಣ್ಣ ಸಿಲಿಂಡರ್ ಕೂಡ ದುಬಾರಿಯಾಗಿದೆ. ಮೊದಲು ಆಧಾರ್ ಕಾರ್ಡ್‌ಗಳ ಆಧಾರದ ಮೇಲೆ ಸಿಲಿಂಡರ್‌ಗಳನ್ನು ವಿತರಿಸಿದರು. ನಂತರ ಬೆಲೆಗಳನ್ನು ಹೆಚ್ಚಿಸಿದರು, ಇವರು ಕುತಂತ್ರಿಗಳು ಎಂದು ತೀಕ್ಷ್ಣ ಪ್ರತಿಕ್ರಿಯೆ ನೀಡಿದೆ.

# ಜನರನ್ನು ದಾರಿತಪ್ಪಿಸಿ ನಂತರ ಹೊರೆ ಹಾಕುವುದು ಮೋದಿ ಮಾದರಿ

**ಬೆಂಗಳೂರು, ಮೇ 1:** ಕಮರ್ಷಿಯಲ್ ಸಿಲಿಂಡರ್ ದರ ಏರಿಸಿರುವ ಕೇಂದ್ರ ಸರ್ಕಾರದ ವಿರುದ್ಧ ಸಿಎಂ ಸಿದ್ದರಾಮಯ್ಯ ಆಕ್ರೋಶ ಹೊರಹಾಕಿದ್ದಾರೆ. ಇದು ಆಡಳಿತವಲ್ಲ, ಇದು ಸಂಘಟಿತ ಲೂಟಿ. ಚುನಾವಣೆಯ ಸಮಯದಲ್ಲಿ ಜನರನ್ನು ದಾರಿತಪ್ಪಿಸುವುದು ಮತ್ತು ನಂತರ ಅವರ ಮೇಲೆ ಹೊರೆ ಹಾಕುವುದು ಪ್ರಧಾನಿ ನರೇಂದ್ರ ಮೋದಿ ಮಾದರಿ ಎಂದು ಸಿಎಂ ವಾಗ್ದಾಳಿ ಮಾಡಿದ್ದಾರೆ.

ಈ ಬಗ್ಗೆ ಟ್ವೀಟ್ ಮಾಡಿರುವ ಸಿಎಂ ಸಿದ್ದರಾಮಯ್ಯ, ನಾವು ಮೊದಲೇ ಎಚ್ಚರಿಕೆ ನೀಡಿದಂತೆ, ಚುನಾವಣೆ ಮುಗಿಯುತ್ತಿದ್ದಂತೇ ಮೋದಿ ಸರ್ಕಾರವು ಮತ್ತೊಮ್ಮೆ ಬೆಲೆಯನ್ನು ಏರಿಕೆ ಮಾಡಿದೆ. ಚುನಾವಣೆಗಳ ಅವಧಿಯಲ್ಲಿ ದರ ಏರಿಕೆಯನ್ನು ಉದ್ದೇಶಪೂರ್ವಕವಾಗಿ ತಡೆಹಿಡಿದಿದ್ದ ಸರ್ಕಾರ, ಮೇ 1ರಂದು ವಾಣಿಜ್ಯ ಎಲ್‌ಪಿಜಿ ಸಿಲಿಂಡರ್ ಬೆಲೆಯನ್ನು 993 ರೂರಷ್ಟು ಹೆಚ್ಚಿಸಿದೆ. ಇದರಿಂದ ಈಗ ಒಂದು ಸಿಲಿಂಡರ್ ಬೆಲೆ 3,071.50 ರೂ.ಕ್ಕೆ ತಲುಪಿದೆ ಎಂದರು. ಕೇವಲ 4 ತಿಂಗಳಲ್ಲಿ, ಮೋದಿ ಸರ್ಕಾರವು ವಾಣಿಜ್ಯ ಎಲ್‌ಪಿಜಿ ಸಿಲಿಂಡರ್ ಬೆಲೆಯನ್ನು ಆರು ಬಾರಿ ಹೆಚ್ಚಿಸಿದೆ, ಇದರಿಂದ ಸಾಮಾನ್ಯ ಜನರ ಮೇಲೆ 1,518ರೂ ರಷ್ಟು ಹೆಚ್ಚುವರಿ ಹೊರೆ ಬಿದ್ದಿದೆ. ಜಾಗತಿಕವಾಗಿ ಸಮಸ್ಯೆ ಬಂದಾಗ ದೇಶದ ಜನರನ್ನು ರಕ್ಷಿಸುವ ಬದಲು, ಮೋದಿ ದೇಶದ ಜನರ ಮೇಲೆ ಹೊರೆ ಹಾಕುತ್ತಿದ್ದಾರೆ ಎಂದು ಸಿಎಂ ಹರಿಹಾಯ್ದಿದ್ದಾರೆ.

ಟೊಳ್ಳಾದ ವಿದೇಶಾಂಗ ನೀತಿ ನಮ್ಮ ಆರ್ಥಿಕತೆ ರಕ್ಷಿಸಲು ವಿಫಲವಾಗಿದೆ. ಈಗ ಸಾಮಾನ್ಯ ಭಾರತೀಯರು ಅದಕ್ಕೆ ಬೆಲೆಯನ್ನು ಪಾವತಿಸುತ್ತಿದ್ದಾರೆ. ಈ ಹೆಚ್ಚಳವು ಕೇವಲ ವ್ಯವಹಾರಗಳ ಮೇಲೆ



**■ ಕಮರ್ಷಿಯಲ್ ಸಿಲಿಂಡರ್ ದರ ಏರಿಕೆಗೆ ಸಿದ್ದರಾಮಯ್ಯ ಆಕ್ರೋಶ**

ಪರಿಣಾಮ ಬೀರುವುದಿಲ್ಲ, ಹೋಟೆಲ್‌ಗಳು, ರೆಸ್ಟೋರೆಂಟ್‌ಗಳು, ಸಣ್ಣ ತಿನಿಸುಗಳು ಹಾಗೂ ಅಡುಗೆ ಸೇವೆಗಳು ಬೆಲೆಗಳನ್ನು ಹೆಚ್ಚಿಸಲು ಒತ್ತಾಯಿಸಲ್ಪಡುತ್ತವೆ ಎಂದಿದ್ದಾರೆ.

ಇದು ದೈನಂದಿನ ಆಹಾರವನ್ನು ಮತ್ತಷ್ಟು ದುಬಾರಿಯನ್ನಾಗಿ ಮಾಡುತ್ತದೆ. ಕಾರ್ಮಿಕ ವರ್ಗ, ಸಣ್ಣ ವ್ಯಾಪಾರಿಗಳು ಹೆಚ್ಚು ತೊಂದರೆ ಅನುಭವಿಸ್ತಾರೆ. 1 ಕಪ್ ಚಹಾದಿಂದ ಹಿಡಿದು ಸಣ್ಣಪುಟ್ಟ ತಿಂಡಿ ಸಹ ದುಬಾರಿಯಾಗುತ್ತೆ, ಎಂತಹ ಕ್ರೂರ ಪರಿಸ್ಥಿತಿ ನೋಡಿ. ಕಾರ್ಮಿಕ ದಿನದಂದು, ಇದು ಕಾರ್ಮಿಕ ವರ್ಗಕ್ಕೆ ಪ್ರಧಾನಿ ಮೋದಿ ನೀಡಿರುವ ಉಡುಗೊರೆ ಎಂದು ಕಿಡಿಕಾರಿದ್ದಾರೆ.

ಇದು ಕೇವಲ ಆರಂಭವಷ್ಟೇ, ಇಂತಹ ಇನ್ನೂ ಅನೇಕ ಏರಿಕೆಗಳು ಮುಂದಿನ ದಿನಗಳಲ್ಲಿ ಬರಲಿವೆ ಮತ್ತು ಆ ಹೊರೆಯನ್ನು ನಾಗರಿಕರ ಮೇಲೆಯೇ ಹಾಕಲಾಗುತ್ತದೆ. ಇದು ಮೋದಿ ಮಾದರಿ, ಚುನಾವಣೆ ಸಮಯದಲ್ಲಿ ಜನರನ್ನು ದಾರಿತಪ್ಪಿಸುವುದು, ಮತ್ತು ನಂತರ ಅವರ ಮೇಲೆ ಹೊರೆ ಹಾಕುವುದು ಎಂದು ಸಿಎಂ ಸಿದ್ದರಾಮಯ್ಯ ವಾಗ್ದಾಳಿ ಮಾಡಿದ್ದಾರೆ.

## ಬೆಲೆ ಹೆಚ್ಚಳಕ್ಕೆ ಹೊಣೆ ಯಾರು

**ಬೆಂಗಳೂರು, ಮೇ 1:**ಕೇಂದ್ರ ಸರ್ಕಾರ ಜನಸಾಮಾನ್ಯರ ನೋವನ್ನು ಅರ್ಥ ಮಾಡಿಕೊಳ್ಳಬೇಕಿತ್ತು. ಎಲ್ಲಾ ಪದಾರ್ಥಗಳ ಬೆಲೆ ಆಕಾಶಕ್ಕೇರಿದೆ. ಆದಾಯ ಪಾತಾಳಕ್ಕೆ ಕುಸಿದಿದೆ. ಬೆಲೆ ಹೆಚ್ಚಳಕ್ಕೆ ಹೊಣೆ ಯಾರು ಎಂದು ಪ್ರಶ್ನಿಸಿದರು. ಅಡುಗೆ ಅನಿಲ ಸಿಲಿಂಡರ್ ಬೆಲೆ ಹಾಗೂ ಇತರೆ ಅಗತ್ಯ ಸೇವೆಗಳ ಬೆಲೆ ಏರಿಕೆ ಕುರಿತ ವಾಣಿಜ್ಯ ಸಿಲಿಂಡರ್ ಬೆಲೆ ಹೆಚ್ಚಳದ ಹೊರೆ ಜನಸಾಮಾನ್ಯರ ಮೇಲೆಯೇ ಹೋಗುತ್ತದೆ. ಇದರಿಂದಾಗಿ ಅನೇಕ ಹೊಟೇಲ್‌ಗಳು ಬಂದ್ ಆಗಿವೆ. ಇದರ ಬಗ್ಗೆ ಕೇಂದ್ರ ಸರ್ಕಾರ ಗಮನವಿಡಬೇಕಿತ್ತು. ಬೆಲೆ ಏರಿಕೆಯಿಲ್ಲದೇ ಜನಸಾಮಾನ್ಯ ನಿಶ್ಚಿಂತೆಯಿಂದ ಬದುಕುವ ದಾರಿಯನ್ನು ಕೇಂದ್ರ ಸರ್ಕಾರ ಮಾಡಬೇಕಿದೆ" ಎಂದರು.



ಯುದ್ಧ ನಡೆಯುತ್ತಿರುವ ಹೊತ್ತಿನಲ್ಲಿ ಅಂತರರಾಷ್ಟ್ರೀಯ ಸಂಬಂಧ ಉಳಿಸಿಕೊಳ್ಳುವುದು ಅತ್ಯವಶ್ಯ. ಅನೇಕ ದೇಶಗಳು ಭಾರತವನ್ನು ಬೆಂಬಲಿಸಿವೆ. ನಮ್ಮ ವಿದೇಶಾಂಗ ನೀತಿ ವಿಫಲವಾಗದಂತೆ ನೋಡಿಕೊಳ್ಳಬೇಕು . ಪಂಚರಾಜ್ಯ ಚುನಾವಣೆ ಮುಗಿಯುತ್ತಿದ್ದಂತೆ ವಾಣಿಜ್ಯ ಬಳಕೆ ಅನಿಲ ಸಿಲಿಂಡರ್ ಬೆಲೆ ಏರಿಕೆಯಾಗಿದೆ. ಸರ್ಕಾರದ ಈ ತೀರ್ಮಾನದಿಂದ ಹೊಟೇಲ್‌ಗಳು ಮುಚ್ಚುವ ಪರಿಸ್ಥಿತಿ ಬಂದಿದೆ. ಜನರಿಗೆ ಕೇಂದ್ರ ಸರ್ಕಾರ ಸೌದೆ ಭಾಗ್ಯ ನೀಡಿದೆ. ಸೌದೆ ಒಲೆ ಕಡಿಮೆ ಮಾಡುತ್ತೇವೆ ಎಂದು ಉಜ್ವಲ ಯೋಜನೆ ಮೂಲಕ ಪ್ರಚಾರ ಪಡೆದರು. ಜನ ಹೇಗೆ ಬದುಕಬೇಕು. ಈ ಕಾರಣಕ್ಕೆ ನಾವು ಐದು ಗ್ಯಾರಂಟಿ ಯೋಜನೆ ಜಾರಿಗೆ ತಂದಿದ್ದೇವೆ. ನಾವು ರಾಜ್ಯದಲ್ಲಿ ಒಂದೂವರೆ ಕೋಟಿ ಕುಟುಂಬಗಳಿಗೆ ಗ್ಯಾರಂಟಿ ಯೋಜನೆ ಲಾಭ ಸಿಗುತ್ತಿವೆ.

### ಬಿಜೆಪಿ ನಾಯಕರು ಬೊಗಳೆ ದಾಸರು

**ಕೇಂದ್ರ ಸರ್ಕಾರದ ಬೆಲೆ ಏರಿಕೆ ತೀರ್ಮಾನ ಖಂಡನೀಯ. ನಾವು ಇದರ ವಿರುದ್ಧ ಹೋರಾಟ ಮುಂದುವರಿಸುತ್ತೇವೆ. ರಾಜ್ಯ ಬಿಜೆಪಿ ನಾಯಕರಾದ ವಿಜಯೇಂದ್ರ, ಅಶೋಕ್ ಎಲ್ಲರೂ ಬೊಗಳೆ ದಾಸರು. ಟೀಕೆಗೆ ಮಾತ್ರ ಸೀಮಿತ. ಅವರಿಗೆ ಬಡವರು, ಕಾರ್ಮಿಕರ ಬಗ್ಗೆ ಕಾಳಜಿ ಇದ್ದರೆ, ರಾಜ್ಯ ಬಿಜೆಪಿ ನಾಯಕರು ಈ ಬಗ್ಗೆ ಹೋರಾಟ ಆರಂಭಿಸಲಿ. ಬೇರೆ ಎಲ್ಲಾ ವಿಚಾರದ ಬಗ್ಗೆ ಮಾತನಾಡುವವರು, ಈ ವಿಚಾರದಲ್ಲಿ ಯಾಕೆ ಮಾತನಾಡುತ್ತಿಲ್ಲ ಎಂದು ಪ್ರಶ್ನಿಸಿದ ಡಿ.ಕೆ. ಶಿವಕುಮಾರ್, ಸಚಿವ ಸಂಪುಟ ಸಭೆಯಲ್ಲಿ ಅಲ್ಪಸಂಖ್ಯಾತರ ಪ್ರದೇಶ ಅಭಿವೃದ್ಧಿಗೆ 600 ಕೋಟಿ ಅನುದಾನ ಬಿಡುಗಡೆ ಬಗ್ಗೆ ಕೇಳಿದಾಗ, ಅದನ್ನು ದೊಡ್ಡದಾಗಿ ಬಿಂಬಿಸುತ್ತೀರಿ? ಸಚಿವ ಸಂಪುಟ ಸಭೆಯಲ್ಲಿ 18 ಸಾವಿರ ಕೋಟಿ ವೆಚ್ಚದಲ್ಲಿ ಬಿಡದಿ ಬಳಿ ಸ್ಯಾಟಲೈಟ್ ಟೌನ್‌ಶಿಪ್ ನಿರ್ಮಾಣಕ್ಕೆ ಅನುಮೋದನೆ ನೀಡಲಾಗಿದೆ. ಈ ಬಗ್ಗೆ ಮಾತ್ರ ಮಾತನಾಡುವುದೇಕೆ ಎಂದು ಪ್ರಶ್ನಿಸಿದರು.**

# ವಾಣಿಜ್ಯ ಸಿಲಿಂಡರ್ ಬೆಲೆ ಏರಿಕೆಗೆ ರಾಹುಲ್‌ಗಾಂಧಿ ಟೀಕೆ

**ನವದೆಹಲಿ, ಮೇ 1:** ವಾಣಿಜ್ಯ ಎಲ್ಪಿಜಿ ಸಿಲಿಂಡರ್ ಬೆಲೆ ಏರಿಕೆ ಖಂಡಿಸಿರುವ ಲೋಕಸಭೆ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ ಕೇಂದ್ರದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ್ದಾರೆ.

ಈ ಏರಿಕೆಯು ಇತ್ತೀಚೆಗೆ ಮುಕ್ತಾಯಗೊಂಡ ಚುನಾವಣೆಗಳ ನೇರ ಪರಿಣಾಮವಾಗಿದೆ ಎಂದು ಆರೋಪಿಸಿದ್ದಾರೆ. ಈ ಬಗ್ಗೆ ಮಾಹಿತಿ ಹಂಚಿಕೊಂಡಿರುವ ಅವರು, ಬೆಲೆ ಏರಿಕೆಯು ಹೆಚ್ಚುತ್ತಿರುವ ಹಣದುಬ್ಬರದ ಬಗೆಗಿನ ತಮ್ಮ ಈ ಹಿಂದಿನ ಹೇಳಿಕೆಯನ್ನು ಸಮರ್ಥಿಸಿದೆ ಎಂದಿದ್ದಾರೆ.

ಜಾಗತಿಕ ಇಂಧನ ಒತ್ತಡಗಳು ಮತ್ತು ಅಂತರರಾಷ್ಟ್ರೀಯ ಇಂಧನ ಮಾರುಕಟ್ಟೆಗಳಲ್ಲಿ ನಿರಂತರ ಚಂಚಲತೆಯ ಮಧ್ಯೆ, ಕೇಂದ್ರವು ಗುರುವಾರ ಸಂಜೆ ಭಾರತದಾದ್ಯಂತ ವಾಣಿಜ್ಯ ಎಲ್ಪಿಜಿ ಸಿಲಿಂಡರ್‌ಗಳ ಬೆಲೆಯನ್ನು 993 ರೂ.ಗಳಷ್ಟು ಹೆಚ್ಚಿಸಿದೆ.

ಹೋಟೆಲ್‌ಗಳು, ರೆಸ್ಟೋರೆಂಟ್‌ಗಳು, ಆಹಾರ ಮಳಿಗೆಗಳು ಮತ್ತು ಇತರ ವ್ಯವಹಾರಗಳು ವ್ಯಾಪಕವಾಗಿ ಬಳಸುವ 19 ಕೆಜಿ ವಾಣಿಜ್ಯ ಸಿಲಿಂಡರ್ ಇತ್ತೀಚಿನ ಪರಿಷ್ಕರಣೆಯ ನಂತರ ಗಮನಾರ್ಹವಾಗಿ ದುಬಾರಿಯಾಗಿದೆ. ನಾನು ಮೊದಲೇ ಹೇಳಿದ್ದಂತೆ ಪಂಚರಾಜ್ಯಗಳ ಚುನಾವಣೆಯ ನಂತರ, ಹಣದುಬ್ಬರದ ಬಿಸಿ ತಟ್ಟಿದೆ ಎಂದಿದ್ದಾರೆ.

ವಾಣಿಜ್ಯ ಅನಿಲ ಸಿಲಿಂಡರ್‌ಗಳಲ್ಲಿ 993 ರೂ.ಗಳ ಇತ್ತೀಚಿನ ಹೆಚ್ಚಳವು



ಒಂದು ದಿನದ ಅತಿದೊಡ್ಡ ಹೆಚ್ಚಳವಾಗಿದೆ. ಫೆಬ್ರವರಿಯಿಂದ ಇದುವರೆಗೆ ಮೂರು ತಿಂಗಳಲ್ಲಿ ವಾಣಿಜ್ಯ ಸಿಲಿಂಡರ್ ಬೆಲೆ ಶೇ.81 ಏರಿಕೆಯಾಗಿದೆ. ಈ ಹೆಚ್ಚಳವು ದೂರಗಾಮಿ ಪರಿಣಾಮಗಳನ್ನು ಬೀರುತ್ತದೆ ಎಂದು ಗಮನ ಸೆಳೆದಿದ್ದಾರೆ.

ವಿಶೇಷವಾಗಿ ಸಣ್ಣ ವ್ಯವಹಾರಗಳು ಮತ್ತು ದೈನಂದಿನ ಗ್ರಾಹಕರಿಗೆ. "ಚಹಾ ಮಾರಾಟಗಾರರು, ಧಾಬಾಗಳು, ಹೋಟೆಲ್ಗಳು, ಬೇಕರಿಗಳು, ಹಲ್ವಾಯಿಗಳು – ಪ್ರತಿಯೊಂದು ಅಡುಗೆಮನೆಯು ಹೆಚ್ಚಿನ ಹೊರೆಯಲ್ಲಿದೆ. ಮತ್ತು ಅದರ ಪರಿಣಾಮವು ನಿಮ್ಮ ತಟ್ಟೆಯ ಮೇಲೂ ಬೀರಲಿದೆ.

ಹೆಚ್ಚುತ್ತಿರುವ ವೆಚ್ಚಗಳು ಸಾರ್ವಜನಿಕರಿಗೆ ಹೆಚ್ಚಿನ ಹೊರೆಯಾಗಿ ಪರಿವರ್ತನೆಗೊಳ್ಳುತ್ತವೆ. ಈಗ ಅನಿಲದ ಮೇಲಿನ ಹೊಡೆತ, ಮುಂದಿನ ದಿನಗಳಲ್ಲಿ ಪೆಟ್ರೋಲ್ ಮತ್ತು ಡೀಸೆಲ್ ಬೆಲೆ ಏರಿಕೆಯಾಗಲಿದೆ ಎಂದು ಎಚ್ಚರಿಕೆ ನೀಡಿದರು.

# ಮುಂದಿನ ಅಧಿವೇಶನದಲ್ಲಿ ಮತ್ತೆ ಮಹಿಳಾ ಮೀಸಲಾತಿ ಮಸೂದೆ ಮಂಡನೆ



**■ ಪ್ರಧಾನಿ ನರೇಂದ್ರ ನಿರ್ಧರಿಸಲಿದ್ದಾರೆ: ಕೇಂದ್ರ ಸಚಿವ ಪ್ರಲ್ಹಾದ ಜೋಶಿ**

**■ ಪ್ರತಿಪಕ್ಷಗಳ ವಿರುದ್ಧ ಬಿಜೆಪಿ ಹೋರಾಟ ಮುಂದುವರಿಯಲಿದೆ**

**ಹುಬ್ಬಳ್ಳಿ, ಮೇ 1:** ಮುಂದಿನ ಅಧಿವೇಶನದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಮತ್ತೊಮ್ಮೆ ಮಹಿಳಾ ಮೀಸಲಾತಿ ಮಸೂದೆ ಮಂಡಿಸುವ ಕುರಿತು ನಿರ್ಧಾರ ತೆಗೆದುಕೊಳ್ಳಲಿದ್ದಾರೆ. ಅಲ್ಲಿಯವರೆಗೂ ಕಾಂಗ್ರೆಸ್ ಹಾಗೂ ಅದರ ಮಿತ್ರ ಪಕ್ಷಗಳ ವಿರುದ್ಧ ನಮ್ಮ ಹೋರಾಟ ಮುಂದುವರಿಯಲಿದೆ ಎಂದು ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಹೇಳಿದರು.

ರಾಜ್ಯ ಬಿಜೆಪಿ ಮಹಿಳಾ ಘಟಕ ಶುಕ್ರವಾರ ನಗರದಲ್ಲಿ ಹಮ್ಮಿಕೊಂಡಿದ್ದ ಕಾಂಗ್ರೆಸ್ ಮತ್ತು ಅದರ ಮಿತ್ರ ಪಕ್ಷ ವಿರುದ್ಧದ ಜನಾಕ್ರೋಶ ಪಾದಯಾತ್ರೆಗೆ ಚಾಲನೆ ನೀಡಿ ಮಾತನಾಡಿ, ಎಚ್.ಡಿ. ದೇವೇಗೌಡ ಅವರು ಪ್ರಧಾನ ಮಂತ್ರಿಯಾಗಿದ್ದ ಸಂದರ್ಭದಲ್ಲಿಯೂ ಮಹಿಳಾ ಮೀಸಲಾತಿ ಮಸೂದೆ ಮಂಡಿಸಲಾಗಿತ್ತು. ಆಗಲೂ ಅಂದಿನ ಕಾಂಗ್ರೆಸ್ ಅದಕ್ಕೆ ಸಹಕಾರ ನೀಡಿರಲಿಲ್ಲ. ಇದೀಗ ಈಗಿನ ಕಾಂಗ್ರೆಸ್ ಮತ್ತು ಅದರ ಮಿತ್ರಪಕ್ಷಗಳು ವಿರೋಧ ವ್ಯಕ್ತಪಡಿಸಿವೆ. ಹಿಂದಿನಿಂದಲೂ ಕಾಂಗ್ರೆಸ್ ಮಹಿಳಾ ವಿರೋಧಿಯೇ ಆಗಿದೆ' ಎಂದರು.

ಬಿಜೆಪಿ ರಾಜ್ಯ ಘಟಕದ ಅಧ್ಯಕ್ಷ ಬಿ.ವೈ. ವಿಜಯೇಂದ್ರ ಮಾತನಾಡಿ, 'ಏಪ್ರಿಲ್ 17 ದೇಶಕ್ಕೆ ಕರಾಳ ದಿನವಾಗಿದೆ. ಮಹಿಳಾ ಮೀಸಲಾತಿ ಮಸೂದೆಗೆ ಕಾಂಗ್ರೆಸ್ ಷಡ್ಯಂತ್ರ ನಡೆಸುವ ಮೂಲಕ ತನ್ನ ನಿಜಬಣ್ಣ ಬಯಲಾಗಿಸಿಕೊಂಡಿದೆ. ಮಹಿಳೆಯರು ಸಮಾಜದ ಮುಂಚೂಣಿಗೆ ಬರಬಾರದು ಎನ್ನುವುದು ಅದರ ಉದ್ದೇಶ. ಮುಂದಿನ ದಿನಗಳಲ್ಲಿ ಮಹಿಳೆಯರು ಕಾಂಗ್ರೆಸ್‌ಗೆ ತಕ್ಕ ಪಾಠ ಕಲಿಸಲಿದ್ದಾರೆ' ಎಂದರು.

ವಾಣಿಜ್ಯ ಬಳಕೆಯ ಅನಿಲದ ಸಿಲಿಂಡರ್ ದರ ಹೆಚ್ಚಳ ಕುರಿತು ಪ್ರತಿಕ್ರಿಯಿಸಿದ ವಿಜಯೇಂದ್ರ, 'ಜಗತ್ತಿನ ಪರಿಸ್ಥಿತಿ ಎಲ್ಲರಿಗೂ ತಿಳಿದಿದೆ. ಎಲ್ಲಾ ದೇಶಗಳಲ್ಲಿಯೂ ಇದೇ ಸ್ಥಿತಿ ನಿರ್ಮಾಣವಾಗಿದೆ. ಕಾಂಗ್ರೆಸ್‌ನವರು ಮೊಸರಲ್ಲಿ ಕಲ್ಲು ಹುಡುಕುವ ಕೆಲಸ ಮಾಡುತ್ತಿದ್ದಾರೆ' ಎಂದು ಆಕ್ರೋಶ ವ್ಯಕ್ತಪಡಿಸಿದರು.

## ಏಳು ವಲಯಗಳಲ್ಲಿ ಚೀನಾ ಹೂಡಿಕೆ: ಕೇಂದ್ರ ಸರ್ಕಾರದ ಅನುಮೋದನೆ

**ನವದೆಹಲಿ, ಮೇ 1:** ಚೀನಾದಿಂದ ಭಾರತದಲ್ಲಿ ಹೂಡಿಕೆಗಳಿಗೆ ವೇಗವಾದ ಅನುಮೋದನೆ ನೀಡಲು ಸರ್ಕಾರವು ಏಳು ಪ್ರಮುಖ ಕ್ಷೇತ್ರಗಳು/ಉತ್ಪಾದನಾ ಚಟುವಟಿಕೆಗಳನ್ನು ಗುರುತಿಸಿದೆ ಎಂದು ಹಿರಿಯ ಅಧಿಕಾರಿಗಳು ತಿಳಿಸಿದ್ದಾರೆ. ಇದರಲ್ಲಿ ಎಲೆಕ್ಟ್ರಾನಿಕ್ ಬಂಡವಾಳ ಸರಕುಗಳು, ಎಲೆಕ್ಟ್ರಾನಿಕ್ ಘಟಕಗಳು, ಪಾಲಿಸಿಲಿಕಾನ್ ಮತ್ತು ಇಂಗೋಟ್ ವೇಫರ್, ಅಡ್ವಾನ್ಸ್ಡ್ ಬ್ಯಾಟರಿ ಘಟಕಗಳು, ಅಪರೂಪದ ಭೂಮಿಯ ಶಾಶ್ವತ ಆಯಸ್ಕಾಂತಗಳು ಮತ್ತು ಅಪರೂಪದ ಭೂಮಿಯ ಸಂಸ್ಕರಣೆಗಳು ಸೇರಿವೆ.

ಕ್ಯಾಪಿಟಲ್ ಗೂಡ್ಸ್ ಅಥವಾ ಬಂಡವಾಳ ಸರಕುಗಳು ಎಂದರೆ ಉತ್ಪಾದನೆಗೆ ಅಗತ್ಯವಾದ ಯಂತ್ರೋಪಕರಣಗಳು, ಭಾರಿ ಉಪಕರಣಗಳು ಅಥವಾ ಅವುಗಳ ಭಾಗಗಳಾಗಿವೆ. ಎಲೆಕ್ಟ್ರಾನಿಕ್ ವಸ್ತುಗಳು ಎಂದರೆ ಲಿಥಿಯಂ–ಐಯಾನ್ ಬ್ಯಾಟರಿ, ಮೊಬೈಲ್ ಫೋನ್‌ಗಳ ತಯಾರಿಕೆಗೆ ಬಳಸುವ ಯಂತ್ರೋಪಕರಣಗಳಾಗಿವೆ.

ಎಲೆಕ್ಟ್ರಾನಿಕ್ ಘಟಕಗಳಲ್ಲಿ ಡಿಸ್ಪ್ಲೇ ಮೋಡ್ಯೂಲ್, ಕ್ಯಾಮೆರಾ ಮೋಡ್ಯೂಲ್, ಪ್ರಿಂಟೆಡ್ ಸರ್ಕ್ಯೂಟ್ ಬೋರ್ಡ್, ಮೊಬೈಲ್ ಫೋನ್‌ಗಳ ಎನ್‌ಕ್ಲೋಶರ್ ಇತ್ಯಾದಿ ಒಳಗೊಂಡಿವೆ. ಪಾಲಿಸಿಲಿಕಾನ್ ಎಂದರೆ ಸಿಲಿಕಾನ್ ವೇಫರ್ ತಯಾರಿಸಲು ಬಳಸುವ ಪ್ರಮುಖ ಮೂಲವಸ್ತು. ಇದನ್ನು ಕರಗಿಸಿ ಇಂಗಾಟ್ ರೂಪದಲ್ಲಿ ತಯಾರಿಸಲಾಗುತ್ತದೆ, ಇದು ಸ್ಫಟಿಕಾಕಾರದ ಸಿಲಿಕಾನ್‌ನ ಘನ ದಂಡ ಅಥವಾ ಬ್ಲಾಕ್ ಆಕಾರದಲ್ಲಿರುತ್ತದೆ.

ಈ ಪಟ್ಟಿಗೆ ಇನ್ನಷ್ಟು ವಲಯಗಳನ್ನು ಸೇರಿಸುವ ಸಾಧ್ಯತೆಯಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಚೀನಾದಿಂದ ಸುಮಾರು 600 ಹೂಡಿಕೆ ಪ್ರಸ್ತಾವನೆಗಳು ಇನ್ನೂ ಅನುಮೋದನೆಗಾಗಿ ಬಾಕಿ ಇವೆ ಎಂದಿದ್ದಾರೆ.

# ಯಾವುದೇ ನಿರ್ಧಾರ ಕೈಗೊಳ್ಳುವ ಮುನ್ನ ಪರಿಣಾಮಗಳ ಅವಲೋಕನ

**ನಾನು, ಸೋನಿಯಾ, ರಾಹುಲ್ ಜೊತೆ ಚರ್ಚಿಸಿ ತೀರ್ಮಾನ: ಖರ್ಗೆ**

**ನಾಯಕತ್ವ ಬದಲಾವಣೆ ಊಹಾಪೋಹಗಳ ನಡುವೆ ಸ್ಪಷ್ಟ ಸಂದೇಶ**

**ಬೆಂಗಳೂರು, ಮೇ.1:** ಕಾಂಗ್ರೆಸ್ ಪಕ್ಷದೊಳಗೆ ಯಾವುದೇ ನಿರ್ಧಾರವನ್ನು ಹೈಕಮಾಂಡ್ ಮಟ್ಟದಲ್ಲಿ, ಅಂದರೆ ತಾವು, ಸೋನಿಯಾ ಗಾಂಧಿ ಮತ್ತು ರಾಹುಲ್ ಗಾಂದಿ ಒಟ್ಟಾಗಿ ತೆಗೆದುಕೊಳ್ಳುತ್ತೇವೆ ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹೇಳಿದ್ದಾರೆ.

ಕಲಬುರಗಿಯಲ್ಲಿ ಸುದ್ದಿಗಾರರ ಜೊತೆ ಮಾತನಾಡಿದ ಅವರು, ರಾಜ್ಯದಲ್ಲಿ ನಾಯಕತ್ವ ಬದಲಾವಣೆ ಕುರಿತ ಊಹಾಪೋಹಗಳು ಮುಂದುವರಿದಿರುವ ನಡುವೆಯೇ ಈ ಹೇಳಿಕೆ ಮೂಲಕ ಸ್ಪಷ್ಟ ಸಂದೇಶ ರವಾನಿಸುವ ಪ್ರಯತ್ನ ಮಾಡಿದ್ದಾರೆ. ತಕ್ಷಣ ನಾಯಕತ್ವ ಬದಲಾವಣೆ ಆಗಲಿದೆ ಎಂಬ ವರದಿಗಳು ಕೇವಲ ಊಹಾಪೋಹಗಳಷ್ಟೇ. ಇನ್ನೂ ಯಾವುದೇ ಅಂತಿಮ ನಿರ್ಧಾರ ಕೈಗೊಂಡಿಲ್ಲ ಎಂದರು.

ಪ್ರತಿದಿನ ಬದಲಾವಣೆಯ ಮಾತುಗಳು ಕೇಳಿಬರುತ್ತಿವೆ, ಹೀಗಾಗಿ ಈ ಬಗ್ಗೆ ಸ್ಪಷ್ಟಪಡಿಸಲು ಬಯಸುತ್ತೇನೆ. ನಾನು ಎಐಸಿಸಿ ಅಧ್ಯಕ್ಷನಾಗಿ, ಸೋನಿಯಾ ಗಾಂಧಿಯವರು ಕಾಂಗ್ರೆಸ್ ಸಂಸದೀಯ ಪಕ್ಷದ ಅಧ್ಯಕ್ಷೆಯಾಗಿ, ರಾಹುಲ್ ಗಾಂಧಿ ಲೋಕಸಭೆ ವಿರೋಧ ಪಕ್ಷದ ನಾಯಕರಾಗಿ ಮೂವರೂ ಸೇರಿ ನಿರ್ಧಾರ ತೆಗೆದುಕೊಳ್ಳುತ್ತೇವೆ ಎಂದು ಹೇಳಿದರು.

ಕಾಂಗ್ರೆಸ್ ಪಕ್ಷವು ಪ್ರಮುಖ ಸಂಘಟನೆ ಹಾಗೂ ರಾಜಕೀಯ ವಿಚಾರಗಳಲ್ಲಿ ನಿರ್ಧಾರ ಕೈಗೊಳ್ಳುವ ಮೊದಲು ಹಿರಿಯ ನಾಯಕರೊಂದಿಗೆ



ಸಮಗ್ರ ಚರ್ಚೆ ನಡೆಸುವ ವ್ಯವಸ್ಥಿತ ವಿಧಾನವನ್ನು ಅನುಸರಿಸುತ್ತದೆ ಎಂದು ಒತ್ತಿಹೇಳಿದರು.

ಹೈಕಮಾಂಡ್ ಒಳಗೂ ಹಾಗೂ ಇತರ ಹಿರಿಯ ನಾಯಕರೊಂದಿಗೆ ಚರ್ಚೆಗಳು ನಡೆಯುತ್ತವೆ. ಯಾವುದೇ ಕ್ರಮ ಕೈಗೊಳ್ಳುವ ಮೊದಲು ಅದರ ಪರಿಣಾಮಗಳನ್ನು ನಾವು ಸೂಕ್ಷ್ಮವಾಗಿ ಪರಿಶೀಲಿಸುತ್ತೇವೆ. ದಿನಾಂಕ ನಿಗದಿಯಾದ ಬಳಿಕ ಅಂತಿಮ ನಿರ್ಧಾರ ತೆಗೆದುಕೊಳ್ಳುತ್ತೇವೆ. ಈಗಾಗಲೇ ಯಾವುದೇ ದಿನಾಂಕ ನಿಗದಿಯಾಗಿಲ್ಲ, ಆದ್ದರಿಂದ ಊಹಾಪೋಹಗಳಿಗೆ ಅರ್ಥವಿಲ್ಲ ಎಂದು ಹೇಳಿದರು.

ನಿರ್ಧಾರ ತೆಗೆದುಕೊಳ್ಳುವಾಗ ಅದು ಕರ್ನಾಟಕದ ಹಿತಾಸಕ್ತಿಯನ್ನು ಗಮನದಲ್ಲಿಟ್ಟುಕೊಂಡೇ ಇರುತ್ತದೆ, ಪಕ್ಷದ ಅಂತಿಮ ತೀರ್ಮಾನವನ್ನು ಎಲ್ಲರೂ ಗೌರವಿಸಬೇಕು ಎಂದು ಮನವಿ ಮಾಡಿದರು. ವಾಸ್ತವಾಂಶಗಳನ್ನು ಮಾತ್ರ ವರದಿ ಮಾಡುವಂತೆ ನಾನು ನಿಮ್ಮಲ್ಲಿ ವಿನಂತಿಸುತ್ತೇನೆ. ನಾವು ನಮ್ಮ ಮಾತಿಗೆ ಬದ್ಧರಾಗಿದ್ದೇವೆ, ಯಾವುದೇ ನಿರ್ಧಾರವೂ ರಾಜ್ಯದ ಹಿತಾಸಕ್ತಿಯನ್ನು ಪ್ರಧಾನವಾಗಿಟ್ಟುಕೊಂಡೇ ತೆಗೆದುಕೊಳ್ಳಲಾಗುತ್ತದೆ. ಹೈಕಮಾಂಡ್‌ನ ಅಂತಿಮ ತೀರ್ಮಾನವನ್ನು ಎಲ್ಲರೂ ಗೌರವಿಸಬೇಕು ಎಂದು ಅವರು ಹೇಳಿದರು.

ನಿನ್ನೆ ಕೂಡ ಖರ್ಗೆ ಅವರು ಕರ್ನಾಟಕದ ನಾಯಕತ್ವದ ಅನಿಶ್ಚಿತತೆಗೆ ಶೀಘ್ರದಲ್ಲೇ ಪರಿಹಾರ ಕಂಡುಕೊಳ್ಳಲಾಗುತ್ತದೆ ಎಂದು ಹೇಳಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ ಮುಂದುವರಿಯುವಂತೆ ಅವಕಾಶ ನೀಡುವುದಾಗಲೀ ಅಥವಾ ಸಂಘಟನಾ ಮೌಲ್ಯಮಾಪನದ ಆಧಾರದ ಮೇಲೆ ಸಚಿವ ಸಂಪುಟ ಪುನಾರಚನೆ ಮಾಡುವುದಾಗಲೀ ನಿರ್ಧಾರ ಕೈಗೊಳ್ಳಬಹುದು ಎಂದು ಹೇಳಿದ್ದರು.

ಕಾಂಗ್ರೆಸ್‌ನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಬೆಂಬಲಿಗರ ನಡುವೆ ನಾಯಕತ್ವದ ವಿಷಯದಲ್ಲಿ ಆಂತರ್ಯದಲ್ಲಿ ಭಿನ್ನಾಭಿಪ್ರಾಯಗಳು ಕಂಡುಬರುತ್ತಿವೆ.

2023ರಲ್ಲಿ ಅಧಿಕಾರ ಹಂಚಿಕೆ ಒಪ್ಪಂದವಾಗಿದೆ ಎಂದು ಹೇಳಲಾಗುತ್ತಿದ್ದು, ಅದರ ಆಧಾರದ ಮೇಲೆ ಇನ್ನು ಉಳಿದ ಅವಧಿಗೆ ಡಿ ಕೆ ಶಿವಕುಮಾರ್ ಅವರನ್ನು ಮುಖ್ಯಮಂತ್ರಿ ಮಾಡಬೇಕು ಎಂಬ ಬೇಡಿಕೆ ಪಕ್ಷದ ಕೆಲವರಿಂದ ಕೇಳಿಬರುತ್ತಿದೆ.

## ಹೈಕಮಾಂಡ್ ತೀರ್ಮಾನ ಪ್ರಸಾದವೆಂದು ಸ್ವೀಕಾರ: ಡಿಕೆಶಿ ಮಾರ್ಮಿಕ ನುಡಿ



**ಬೆಂಗಳೂರು, ಮೇ 1: ಹೈಕಮಾಂಡ್ ತೀರ್ಮಾನವನ್ನು ಪ್ರಸಾದವೆಂದು ಸ್ವೀಕರಿಸುತ್ತೇನೆ ಎಂದು ಉಪಮುಖ್ಯಮಂತ್ರಿ ಡಿ. ಕೆ. ಶಿವಕುಮಾರ್ ಹೇಳಿದ್ದಾರೆ. ನಗರದಲ್ಲಿ ಸುದ್ದಿಗಾರರ ಜೊತೆ ಮಾತನಾಡಿದ ಅವರು, ಪಕ್ಷದ ತೀರ್ಮಾನ ಏನೇ ಇದ್ದರೂ ಅದನ್ನು ಸ್ವೀಕರಿಸಬೇಕು ಎಂಬ ಎಐಸಿಸಿ ಅಧ್ಯಕ್ಷ ಖರ್ಗೆ ಅವರ ಹೇಳಿಕೆ ಬಗ್ಗೆ ಪ್ರತಿಕ್ರಿಯಿಸಿ, ಮಲ್ಲಿಕಾರ್ಜುನ ಖರ್ಗೆ, ರಾಹುಲ್ ಗಾಂಧಿ ಸೇರಿದಂತೆ ಹೈಕಮಾಂಡ್ ತೀರ್ಮಾನವನ್ನು ಪ್ರಸಾದವೆಂದು ಸ್ವೀಕರಿಸುತ್ತೇವೆ ಎಂದು ಸ್ಪಷ್ಟಪಡಿಸಿದರು.**

## ನಿತ್ಯ ಪಂಚಾಂಗ 2.05.2026 ಶನಿವಾರ

ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ಉತ್ತರಾಯಣ–ವಸಂತ ಋತು, ಚಾಂದ್ರಮಾನ, ಚೈತ್ರ–ವೈಶಾಖ ಮಾಸ

ವೈಶಾಖ ಬಹುಳ, ಪಾಡ್ಯ, ವಿಶಾಖ ನಕ್ಷತ್ರ, ಬಂಗಾರಪೇಟೆ ಕರಗ, ಶೃಂಗೇರಿ ಶಾರದಾ ಮಹಾಬೀಷೇಕ, ಶಿರಹಟ್ಟಿ ರಥ, ದೊಡ್ಡಬಳ್ಳಾಪುರ ವೇಣುಗೋಪಾಲ ರಥ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | 4.30 – 6.00 | 12.00 – 1.30 | 3.00 – 4.30 |
| ಸೋಮ | 7.30 – 9.00 | 10.30 – 12.00 | 1.30 – 3.00 |
| ಮಂಗಳ | 3.00 – 4.30 | 9.00 – 10.30 | 12.00 – 1.30 |
| ಬುಧ | 12.00 – 1.30 | 7.30 – 9.00 | 10.30 – 12.00 |
| ಗುರು | 1.30 – 3.00 | 6.00 – 7.30 | 9.00 – 10.30 |
| ಶುಕ್ರ | 10.30 – 12.00 | 3.00 – 4.30 | 7.30 – 9.00 |
| ಶನಿ | 9.00 – 10.30 | 1.30 – 3.00 | 6.00 – 7.30 |

# ನಾಯಕತ್ವ ಬದಲಾವಣೆ: ಊಹಾಪೋಹಗಳಿಗೆ ಪೂರ್ಣವಿರಾಮ

### ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹೇಳಿಕೆ ಸ್ವಾಗತಿಸಿದ ಸಚಿವ ಜಿ.ಪರಮೇಶ್ವರ್



**ಬೆಂಗಳೂರು, ಮೇ 1:** ರಾಜ್ಯ ಸರ್ಕಾರದ ನಾಯಕತ್ವದಲ್ಲಿ ಯಾವುದೇ ಬದಲಾವಣೆ ಇಲ್ಲ ಎಂದು ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ನೀಡಿದ ಇತ್ತೀಚಿನ ಹೇಳಿಕೆಯನ್ನು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಸ್ವಾಗತಿಸಿದ್ದಾರೆ. ಮುಖ್ಯಮಂತ್ರಿ ಸ್ಥಾನ ಬದಲಾವಣೆಯ ಬಗ್ಗೆ ನಡೆಯುತ್ತಿದ್ದ ಊಹಾಪೋಹಗಳಿಗೆ ಖರ್ಗೆಯವರು ಪೂರ್ಣ ವಿರಾಮ ಹೇಳಿದ್ದಾರೆ ಎಂದು ವ್ಯಾಖ್ಯಾನಿಸಿದ್ದಾರೆ.

ಪತ್ರಕರ್ತರೊಂದಿಗೆ ಮಾತನಾಡಿದ ಅವರು, ಪಕ್ಷದೊಳಗೆ ಮಲ್ಲಿಕಾರ್ಜುನ ಖರ್ಗೆಯವರ ಹೇಳಿಕೆ ಅಂತಿಮವಾಗಿದ್ದು, ಸೋನಿಯಾ ಗಾಂಧಿ, ರಾಹುಲ್ ಗಾಂಧಿ ಮತ್ತು ಕಾಂಗ್ರೆಸ್ ಅಧ್ಯಕ್ಷರನ್ನೊಳಗೊಂಡ ಹೈಕಮಾಂಡ್‌ನ ನಿರ್ಧಾರಗಳನ್ನು ಯಾವುದೇ ಅತಿ ವ್ಯಾಖ್ಯಾನವಿಲ್ಲದೆ ಅಂಗೀಕರಿಸಬೇಕು ಎಂದು ಒತ್ತಿಹೇಳಿದರು.

ವಿವಿಧ ಜನರು ವಿಭಿನ್ನವಾಗಿ ಹೇಳಬಹುದು, ಆದರೆ ನಮ್ಮ ದೃಷ್ಟಿಯಲ್ಲಿ ಮಲ್ಲಿಕಾರ್ಜುನ ಖರ್ಗೆ ಪರಮಾಧಿಕಾರಿ. ಸೋನಿಯಾ ಗಾಂಧಿ ಮತ್ತು ರಾಹುಲ್ ಗಾಂಧಿ ಅವರು ಹೈಕಮಾಂಡ್. ಅವರಿಂದ ಇಂತಹ ಮಾತುಗಳು ಬಂದರೆ ಅವನ್ನು ಅಂಗೀಕರಿಸಲೇ ಬೇಕು. ವಿಷಯ ಅಲ್ಲಿ ಮುಗಿದಂತೆಯೇ. ಅದನ್ನು ಅತಿಯಾಗಿ ವ್ಯಾಖ್ಯಾನಿಸುವ ಅರ್ಥವಿಲ್ಲ. ಅವರು ಬದಲಾವಣೆ ಇಲ್ಲ ಎಂದಾಗ, ಈ ವಿಷಯಕ್ಕೆ ಪೂರ್ಣ ವಿರಾಮ ಎಂದರ್ಥ ಎಂದರು.

ಮುಖ್ಯಮಂತ್ರಿ ಬದಲಾವಣೆ ವಿಷಯ ಈಗ ಸಂಪೂರ್ಣವಾಗಿ ಅಂತ್ಯಗೊಂಡಿದೆ ಎಂಬುದು ತಮ್ಮ ವೈಯಕ್ತಿಕ ಅಭಿಪ್ರಾಯ ಎಂದು ಪುನರುಚ್ಚರಿಸಿದರು.

ಖರ್ಗೆ ಅವರು ಅನುಭವಸಂಪನ್ನ ನಾಯಕರು ಮತ್ತು ಕಾಂಗ್ರೆಸ್ ಪಕ್ಷದ ರಾಷ್ಟ್ರೀಯ ಅಧ್ಯಕ್ಷರಾಗಿದ್ದು, ಪಕ್ಷದೊಳಗೆ ಅಪಾರ ಗೌರವ ಹೊಂದಿದ್ದಾರೆ ಎಂದು ಹೇಳಿದರು. ರಾಜ್ಯ ನಾಯಕತ್ವದ ಯಾವುದೇ ನಿರ್ಧಾರವೂ ಹಿರಿಯ ನಾಯಕರ ನಡುವಿನ ಚರ್ಚೆಯ ನಂತರವೇ ಆಗುತ್ತದೆ, ಮಲ್ಲಿಕಾರ್ಜುನ ಖರ್ಗೆಯವರ ಇತ್ತೀಚಿನ ಹೇಳಿಕೆ ಆ ಒಪ್ಪಂದದ ಪ್ರತಿಬಿಂಬವಾಗಿದೆ ಎಂದು ಪರಮೇಶ್ವರ್ ವ್ಯಾಖ್ಯಾನಿಸಿದರು. ಈ ಕ್ಷಣದಲ್ಲಿ, ಈ ವಿಷಯಕ್ಕೆ ಪೂರ್ಣವಿರಾಮ ಬಿದ್ದಿದೆ ಎಂದು ನಾನು ಭಾವಿಸುತ್ತೇನೆ. ಖರ್ಗೆ ನಮ್ಮ ಪಕ್ಷದ ರಾಷ್ಟ್ರೀಯ ಅಧ್ಯಕ್ಷರು ಮತ್ತು ಅಪಾರ ಅನುಭವ ಹೊಂದಿದ ನಾಯಕರು. ರಾಜ್ಯ ನಾಯಕತ್ವದಲ್ಲಿ ಬದಲಾವಣೆ ಇದ್ದಿದ್ದರೆ, ಅವರು ಹೇಳಿದ್ದರೆ ಯಾರೂ ವಿರೋಧಿಸಿರಲಿಲ್ಲ ಎಲ್ಲರೂ ಒಪ್ಪಿಕೊಂಡಿರುತ್ತಿದ್ದರು. ಈಗ ಅವರು ಸ್ಪಷ್ಟವಾಗಿ ಮುಖ್ಯಮಂತ್ರಿ ಮುಂದುವರಿಯುತ್ತಾರೆ ಮತ್ತು ಬದಲಾವಣೆ ಪ್ರಶ್ನೆಯೇ ಇಲ್ಲ ಎಂದು ಹೇಳಿದ್ದಾರೆ.

ನಾನು ಈ ಹೇಳಿಕೆಯನ್ನು ಸ್ವಾಗತಿಸುತ್ತೇನೆ. ಇಂತಹ ಹೇಳಿಕೆ ನೀಡುವ ಮೊದಲು ರಾಹುಲ್ ಗಾಂಧಿ, ಸೋನಿಯಾ ಗಾಂಧಿ, ವೇಣುಗೋಪಾಲ್ ಮತ್ತು ಸುರ್ಜೆವಾಲಾ ಅವರ ಜೊತೆ ಚರ್ಚಿಸಿ ಒಮ್ಮತಕ್ಕೆ ಬಂದಿರುತ್ತಾರೆ. ಅವರ ಮಾತುಗಳಿಗೆ ಮಹತ್ವವಿದ್ದು, ಇದರಿಂದ ವಿಷಯ ಈಗ ಮುಕ್ತಾಯಗೊಂಡಿದೆ ಎಂದು ಹೇಳಿದರು.

ಇಂದಿನ ರಾಜಕೀಯ ಪರಿಸ್ಥಿತಿ ಮತ್ತು ನಡೆಯುತ್ತಿರುವ ಚುನಾವಣಾ ಫಲಿತಾಂಶಗಳ ಬಗ್ಗೆ ಮಾತನಾಡಿದ ಪರಮೇಶ್ವರ್, ಸಮೀಕ್ಷೆಗಳು ಮತ್ತು ಮತಗಟ್ಟೆ ಸಮೀಕ್ಷೆಗಳು ಹೇಗೆ ಬದಲಾಗುತ್ತವೆ ಎಂಬುದನ್ನು ನಾವು ನೋಡಿದ್ದೇವೆ, ತಳಮಟ್ಟದ ವಾಸ್ತವವನ್ನೂ ಗಮನಿಸಿದ್ದೇವೆ. ನಾವು ಕೇರಳದಲ್ಲಿ ಸರ್ಕಾರ ರಚಿಸುತ್ತೇವೆ ಎಂಬ ವಿಶ್ವಾಸವಿದೆ. ನಮ್ಮ ರಾಜ್ಯದಿಂದ ಅನೇಕರು ಅಲ್ಲಿ ಚುನಾವಣಾ ಕಾರ್ಯದಲ್ಲಿ ಭಾಗವಹಿಸಿದ್ದರು, ವರದಿಗಳು ನಾವು ಅಧಿಕಾರಕ್ಕೆ ಬರುತ್ತೇವೆ ಎಂದು ಸೂಚಿಸುತ್ತಿವೆ ಎಂದು ಹೇಳಿದರು.

## ನಾಯಕತ್ವ ಬದಲಾವಣೆ ವಿಚಾರದಲ್ಲಿ ಹೈಕಮಾಂಡ್ ತೀರ್ಮಾನವೇ ಅಂತಿಮ: ಸಚಿವ ಬೋಸರಾಜು ಸ್ಪಷ್ಟನೆ



ರಾಜ್ಯದಲ್ಲಿ ನಾಯಕತ್ವ ಬದಲಾವಣೆ ಬಗ್ಗೆ ನಾಯಕರು ತಮ್ಮ ಅಭಿಪ್ರಾಯಗಳನ್ನು ಹೇಳುತ್ತಾರೆ, ಆದರೆ ಯಾವುದೇ ತೀರ್ಮಾನ ಹೈಕಮಾಂಡ್‌ಗೆ ಬಿಟ್ಟಿದ್ದು, ಅದೇ ಅಂತಿಮ ಎಂದು ಸಚಿವ ಎನ್. ಎಸ್. ಬೋಸರಾಜು ಹೇಳಿದ್ದಾರೆ.

ವಿಜಯಪುರದಲ್ಲಿ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ನಾನು 55 ವರ್ಷಗಳಿಂದ ಕಾಂಗ್ರೆಸ್ ಪಕ್ಷದಲ್ಲಿದ್ದೇನೆ, ನಾಯಕರು ಏನೇ ಅಭಿಪ್ರಾಯಗಳನ್ನು ಹೇಳಿದರೂ ತೀರ್ಮಾನವಾಗುವುದು ದೆಹಲಿಯಲ್ಲಿ, ಹೈಕಮಾಂಡ್ ತೀರ್ಮಾನಕ್ಕೆ ಬದ್ಧರಾಗಿರಬೇಕು ಎಂದರು. ಮೇ 10ಕ್ಕೆ ರಾಜ್ಯದಲ್ಲಿ ನಾಯಕತ್ವ ಬದಲಾವಣೆಗೆ ಗಡುವು ನೀಡಲಾಗಿದೆ ಎಂಬ ವದಂತಿ ಬಗ್ಗೆ ಕೇಳಿದಾಗ,ಯಾರು ಹೇಳಿದರು ನಿಮಗೆ ಎಂದು ಕೇಳಿದರು. ಮೇ 15ಕ್ಕೆ ಡಿ.ಕೆ. ಶಿವಕುಮಾರ್ ಹುಟ್ಟುಹಬ್ಬಕ್ಕೆ ಮುನ್ನ ತೀರ್ಮಾನವಾಗಬೇಕೆಂದಾಗಿದೆಯಂತಲ್ಲವೇ ಎಂದು ಕೇಳಿದಾಗ, ಬರ್ತ್‌ಡೇಗಳು ಬರುತ್ತವೆ, ಹೋಗುತ್ತವೆ. ಅವರ ಬರ್ತ್ ಡೇಗೂ ನಾಯಕತ್ವ ಬದಲಾವಣೆಗೆ ಸಂಬಂಧವಿಲ್ಲ, ಹೈಕಮಾಂಡ್ ಸಮಯ ಬಂದಾಗ ಸೂಕ್ತ ನಿರ್ಧಾರ ತೆಗೆದುಕೊಳ್ಳುತ್ತದೆ ಎಂದರು.

## ಸಿಎಂ ಕುರ್ಚಿ ವಿಚಾರ: ಮಲ್ಲಿಕಾರ್ಜುನ ಖರ್ಗೆ ಹೇಳಿಕೆಯಿಂದ ಹೆಚ್ಚಿದ ಗೊಂದಲ - ಆರ್.ಅಶೋಕ್



**ಬೆಂಗಳೂರು, ಮೇ 1:** ಕಾಂಗ್ರೆಸ್‌ನಲ್ಲಿ ಮುಖ್ಯಮಂತ್ರಿ ಕುರ್ಚಿಗಾಗಿ ನಡೆಯುತ್ತಿರುವ ಕಲಹದಿಂದ ಹೆಚ್ಚು ಗೊಂದಲ ಉಂಟಾಗಿದೆ. ಇಬ್ಬರ ಜಗಳ ಮೂರನೆಯವನಿಗೆ ಲಾಭ ಎಂಬಂತೆ ಮಲ್ಲಿಕಾರ್ಜುನ ಖರ್ಗೆ ಕೂಡ ಸಿಎಂ ಆಗಲು ಪ್ರಯತ್ನ ಮಾಡಿದ್ದಾರೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ವ್ಯಂಗ್ಯವಾಡಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ಸಿಎಂ ಕುರ್ಚಿ ಕಲಹದಿಂದಾಗಿ ಇಡೀ ಸರ್ಕಾರ ಗೊಂದಲದ ಗೂಡಾಗಿದೆ. ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹೊಸ ಹೇಳಿಕೆ ನೀಡಿ ಇನ್ನಷ್ಟು ಗೊಂದಲಕ್ಕೆ ಕಾರಣವಾಗಿದೆ. ಮುಂದೆ ನನ್ನ ಪರ್ವ ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಹೇಳುತ್ತಿದ್ದು, ಆ ಪರ್ವಕ್ಕೆ ಕಲ್ಲು ಬಿದ್ದಿದೆ. ಈಗ ಮಲ್ಲಿಕಾರ್ಜುನ ಖರ್ಗೆ ಮಧ್ಯ ಪ್ರವೇಶ ಮಾಡಿ ನನಗೂ ಆಸೆಯಿದೆ, ಹಿಂದೆ ನನಗೆ ಮೋಸವಾಗಿದೆ ಎಂದು ಹೇಳಿದ್ದಾರೆ. ಬಹುಶಃ ಕಾಂಗ್ರೆಸ್ ಹೈಕಮಾಂಡ್‌ನಿಂದ ಅವರು ಸಿಎಂ ಆಗಲು ಗ್ರೀನ್ ಸಿಗ್ನಲ್ ಸಿಕ್ಕಿರಬಹುದು.

ಖರ್ಗೆ ಸಿಎಂ ಆಗಬೇಕೆಂದು ಈಗಾಗಲೇ ಎಲ್ಲರೂ ಹೇಳಿದ್ದಾರೆ. ನಾನು ಸಿಎಂ ಆಗಲು ಸಿದ್ಧನಿದ್ದೇನೆ ಎಂದು ಖರ್ಗೆ ಹೇಳಿದ್ದಾರೆ. ಇದುವರೆಗೆ ಅವರ ಪ್ರಯತ್ನ ಮಾಡಿದ್ದರೂ ಫಲ ನೀಡಿರಲಿಲ್ಲ. ಈ ಸಮಯದಲ್ಲಾದರೂ ಸಿಎಂ ಆಗೋಣ ಎಂದು ಪ್ರಯತ್ನ ಮಾಡುತ್ತಿದ್ದಾರೆ.

ಹಾಗಾಗಿ ಕಾಂಗ್ರೆಸ್‌ನಲ್ಲೀಗ ಇಬ್ಬರ ಜಗಳ ಮೂರನೆಯವನಿಗೆ ಲಾಭ ಎನ್ನುವಂತಾಗಿದೆ ಎಂದಿದ್ದಾರೆ. ಸಿನಿಮಾದ ಕ್ಲೈಮಾಕ್ಸ್‌ನಲ್ಲಿ ಆಗುವಂತೆಯೇ ಮಲ್ಲಿಕಾರ್ಜುನ ಖರ್ಗೆ ಬಂದಿದ್ದಾರೆ. ಮಾತುಕತೆಗೆ ಇನ್ನಷ್ಟು ಸಮಯ ಬೇಕೆಂದು ಅವರು ಹೇಳಿದ್ದಾರೆ. ಹಾಗೆಯೇ ಆದರೆ ಸಿಎಂ ಬದಲಾವಣೆ ಬಹಳ ತಡವಾಗುತ್ತದೆ. ಆ ವೇಳೆಗೆ ಚುನಾವಣೆ ಸಮೀಪ ಬಂದಿರುತ್ತದೆ. ರಾಜಸ್ಥಾನ, ಮಧ್ಯಪ್ರದೇಶದಲ್ಲಾದಂತೆ ಕಾಂಗ್ರೆಸ್ ಗೊಂದಲದ ಗೂಡಾಗಿ ಸರ್ವನಾಶವಾಗಲಿದೆ ಎಂದರು.

## ರಾಜ್ಯ ಸರ್ಕಾರ ದಿವಾಳಿ, ಕುಸಿದ ಆಡಳಿತ ಯಂತ್ರ, ಮಿತಿಮೀರಿದ ಭ್ರಷ್ಟಾಚಾರ: ವಿಜಯೇಂದ್ರ ಆರೋಪ



ಬೆಂಗಳೂರು, ಮೇ 1: ನೌಕರರ ವೇತನಕ್ಕೂ ಹಣ ನೀಡಲಾಗದ ಪರಿಸ್ಥಿತಿ ಎದುರಾಗಿದ್ದು ರಾಜ್ಯ ಕಾಂಗ್ರೆಸ್ ಸರ್ಕಾರ ದಿವಾಳಿಯಾಗಿದ್ದು, ಆಡಳಿತ ಯಂತ್ರ ಸಂಪೂರ್ಣ ಕುಸಿದಿದೆ, ಭ್ರಷ್ಟಾಚಾರ ಮಿತಿಮೀರಿಗೆ ಎಂದು ಶಾಸಕ ಹಾಗೂ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಆರೋಪಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದ ಅಭಿವೃದ್ಧಿ ಕಾರ್ಯಗಳಿಗೆ ಸರ್ಕಾರ ಹಣ ನೀಡುತ್ತಿಲ್ಲ. ಕೇಂದ್ರ ಸರ್ಕಾರದ ಮೇಲೆ ಆರೋಪ ಹೊರಿಸುವುದರಲ್ಲಿ ತೊಡಗಿದೆ ಎಂದು ದೂರಿದರು. ಆಡಳಿತ ಪಕ್ಷದ ಆಂತರಿಕ ಕಚ್ಚಾಟ ಹೆಚ್ಚಾಗಿದೆ. ಮುಖ್ಯಮಂತ್ರಿ ಕುರ್ಚಿಗೆ ದಿನೇದಿನೆ ಪೈಪೋಟಿ ಹೆಚ್ಚಾಗಿದೆ. ಆಡಳಿತ ಪಕ್ಷದ ಶಾಸಕರು ಸಚಿವ ಸ್ಥಾನಕ್ಕಾಗಿ ದೆಹಲಿಯಲ್ಲಿ ವಾಸ್ತವ್ಯ ಹೂಡಿದ್ದಾರೆ. ಇವರೇನು ನಮ್ಮ ರಾಜ್ಯದ ಶಾಸಕರೋ ಅಥವಾ ದೆಹಲಿ ಶಾಸಕರೋ ಎಂಬ ಅನುಮಾನ ಬರುತ್ತಿದೆ ಎಂದರು.

ಧಾರವಾಡದಲ್ಲಿ ಆದಿತ್ಯ ಮ್ಯಾಗೇರಿ ಎಂಬ ಕಾಲೇಜಿಗೆ ಹೋಗುವ ಯುವಕನನ್ನು ಪೊಲೀಸರು ಡ್ರಗ್ಸ್ ಪ್ರಕರಣದಲ್ಲಿ ವಿನಾಕಾರಣ ಸಿಲುಕಿಸಿದ್ದಾರೆ. ಅವನು ನಿರಪರಾಧಿ ಎಂದು ಗೊತ್ತಾದ ನಂತರವೂ ತಂದೆ ಇಲ್ಲದೆ ಇರುವ ಆತನ ತಾಯಿಯನ್ನು ಪೀಡಿಸಿ ಸಾವಿರಾರು ರೂಪಾಯಿ ವಸೂಲಿ ಮಾಡಿದ್ದಾರೆ. ರಾಜ್ಯದ ಪೊಲೀಸ್ ಇಲಾಖೆ ಯಾವ ಮಟ್ಟಕ್ಕೆ ಇಳಿದಿದೆ ಎಂಬುದು ಇದರಿಂದ ಗೊತ್ತಾಗುತ್ತದೆ. ಮುಖ್ಯಮಂತ್ರಿಗಳು ಹಾಗೂ ಗೃಹ ಸಚಿವರಿಗೆ ಮಾನ ಮರ್ಯಾದೆ ಇದ್ದರೆ ಈ ಘಟನೆಯಿಂದ ಎಚ್ಚೆತ್ತುಕೊಂಡು ಯಾವ ಅಧಿಕಾರಿಗಳು ಈ ಪ್ರಕರಣದ ಹಿಂದೆ ಇದ್ದಾರೋ ಅವರ ವಿರುದ್ಧ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳಬೇಕು. ಬಡ ಕುಟುಂಬಕ್ಕೆ 50 ಲಕ್ಷ ರೂಪಾಯಿ ಪರಿಹಾರ ಕೊಡಬೇಕು ಎಂದು ಆಗ್ರಹಿಸಿದರು.

ಇತ್ತೀಚೆಗೆ ನಡೆದ ಸಚಿವ ಸಂಪುಟದ ಸಭೆ ಅಲ್ಪಸಂಖ್ಯಾತರಿಗೆ ಮತ್ತೆ 650 ಕೋಟಿ ರೂ. ನೀಡಲು ತೀರ್ಮಾನ ಕೈಗೊಂಡಿದೆ. ಬಿಜೆಪಿ ಅಲ್ಪಸಂಖ್ಯಾತರ ವಿರೋಧಿಗಳಲ್ಲ.

ಆದರೆ ಈ ಸರ್ಕಾರ ಮಾತ್ರ ಪದೇಪದೇ ಅಲ್ಪಸಂಖ್ಯಾತರನ್ನು ಓಲೈಸಲು ಹಣ ನೀಡುತ್ತಿದೆ. ರಾಜ್ಯದ ಕಾಂಗ್ರೆಸ್ ಸರ್ಕಾರಕ್ಕೆ ಹಿಂದೂಗಳು ಮತ ಹಾಕಿಲ್ಲವೇ ಎಂದು ಪ್ರಶ್ನಿಸಿದರು.

ರಾಜ್ಯ ಸರ್ಕಾರವು ಯಾವುದೇ ಅಭಿವೃದ್ಧಿ ಕಾರ್ಯ ಮಾಡದೇ ಕೇಂದ್ರ ಸರ್ಕಾರದ ಮೇಲೆ ಪದೇ ಪದೇ ಆರೋಪ ಮಾಡುತ್ತಾ ಇದೆ. ಕೇಂದ್ರ ಸರ್ಕಾರದ ಮೇಲೆ ಆರೋಪ ಹೊರಿಸಲು ಸಂಪುಟ ದರ್ಜೆ ಸಚಿವರನ್ನು ನೇಮಕ ಮಾಡಿಕೊಳ್ಳಲಿ. ಈ ಸರ್ಕಾರ ಕಳೆದ ಮೂರು ವರ್ಷಗಳಿಂದ ಏನು ಕಡಿದು ಕಟ್ಟೆ ಹಾಕಿದೆ ಎಂದು ರಾಜ್ಯದ ಜನರಿಗೆ ಗೊತ್ತಿದೆ ಎಂದು ತಿಳಿಸಿದರು.

ಅಧಿಕಾರಕ್ಕೆ ಬಂದಾಗಿನಿಂದ ಕೇಂದ್ರ ಸರ್ಕಾರದ ಮೇಲೆ ಆರೋಪ ಹೊರಿಸುವುದು ಬಿಟ್ಟರೆ ಏನು ಮಾಡಿಲ್ಲ. ಜಲಜೀವನ್ ಮಿಷನ್ ಸೇರಿ ಬೇರೆ ಬೇರೆ ಯೋಜನೆಗಳಿಗೆ ಕೇಂದ್ರದಿಂದ ಏನು ಹಣ ಬರಬೇಕೊ ಅದು ಬರುತ್ತೆ. ನಿಮ್ಮ ಯೋಗ್ಯತೆಗೆ ಅಭಿವೃದ್ಧಿ ಯೋಜನೆಗೆ ಹಣ ಬಿಡುಗಡೆ ಮಾಡಿ. ಶಾಸಕರ ಕ್ಷೇತ್ರಗಳ ಅಭಿವೃದ್ಧಿಗೆ ರೂ. 25 ಕೋಟಿ ಕೊಡ್ತೇವೆ ಅಂತ ಹೇಳಿ ಆರು ತಿಂಗಳು ಆಯಿತು. ಶಾಸಕರು ಯೋಜನೆ ರೂಪಿಸಿಕೊಂಡು ಕಾಯುತ್ತಾ ಇದ್ದಾರೆ. ಆದರೆ ಸರ್ಕಾರ ಹಣವನ್ನು ಈವರೆಗೆ ನೀಡಿಲ್ಲ ಎಂದು ಕಿಡಿ ಕಾರಿದರು.

ರಾಜ್ಯದ ಸರ್ಕಾರಿ ನೌಕರರಿಗೆ ಎರಡು ತಿಂಗಳಿಂದ ವೇತನ ಬಿಡುಗಡೆ ಮಾಡಿಲ್ಲ. ಇದರಿಂದಲೇ ಈ ಸರ್ಕಾರ ದಿವಾಳಿ ಆಗಿದೆ ಎಂದು ತಿಳಿಯುತ್ತದೆ. ಗುತ್ತಿಗೆದಾರರು ರಾಜ್ಯ ಸರ್ಕಾರದ ಧೋರಣೆಯಿಂದ ಬೇಸತ್ತು ಬೇರೆ ರಾಜ್ಯಗಳಿಗೆ ಓಡಿ ಹೋಗಿದ್ದಾರೆ. ಅವರು ಆತ್ಮಹತ್ಯೆ ಮಾಡಿಕೊಳ್ಳಬೇಕಾದ ಸ್ಥಿತಿ ಬಂದಿದೆ. ಕೇಂದ್ರ ಸರ್ಕಾರವನ್ನು ದೂರುವ ಬದಲು ರಾಜ್ಯ ಸರ್ಕಾರ ಏನು ಅಭಿವೃದ್ಧಿ ಮಾಡುತ್ತಿದೆ ಎಂದು ಆತ್ಮಾವಲೋಕನ ಮಾಡಿಕೊಳ್ಳಲಿ ಎಂದು ವಿಜಯೇಂದ್ರ ತಾಕೀತು ಮಾಡಿದರು.



ಬನಶಂಕರಿ ಬಸ್ ನಿಲ್ದಾಣದ ಜಂಕ್ಷನ್‌ನಲ್ಲಿ ಅತ್ಯಾಧುನಿಕ ಸ್ಕೈವಾಕ್ ನಿರ್ಮಾಣಕ್ಕೆ ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಹಾಗೂ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಗುದ್ದಲಿಪೂಜೆ ನೆರವೇರಿಸಿದರು. ಈ ಸಂದರ್ಭದಲ್ಲಿ ಬೆಂಗಳೂರು ದಕ್ಷಿಣ ಕ್ಷೇತ್ರದ ಸಂಸದ ತೇಜಸ್ವಿ ಸೂರ್ಯ, ಜಯನಗರ ' ಶಾಸಕ ಸಿ.ಕೆ. ರಾಮಮೂರ್ತಿ, ಬೊಮ್ಮನಹಳ್ಳಿ ಶಾಸಕ ಸತೀಶ್ ರೆಡ್ಡಿ, ಸಚಿವ ರಾಮಲಿಂಗಾರೆಡ್ಡಿ, ಪದ್ಮನಾಭ ನಗರ ಬಿಜೆಪಿ ಮಂಡಲ ಅಧ್ಯಕ್ಷ ಎನ್.ಲಕ್ಷ್ಮೀಕಾಂತ, ಬಿಜೆಪಿ ಓಬಿಸಿ ರಾಜ್ಯ ಕೋಶಾಧ್ಯಕ್ಷ ಎ.ಎಚ್.ಬಸವರಾಜ್ ಹಾಗೂ ಎಲ್ಲ ಬಿಜೆಪಿ ನಾಯಕರು, ಮುಖಂಡರು, ಕಾರ್ಯಕರ್ತರು ಇದ್ದರು.

## ಧಾರ್ಮಿಕ ತಾಣಗಳಲ್ಲಿ ಮೂಲಭೂತ ಸೌಕರ್ಯ, ಬಸ್ ತಂಗುದಾಣ, ಶುದ್ಧ ಕುಡಿಯುವ ನೀರಿನ ಘಟಕ ಉದ್ಘಾಟನೆ





**ಬೆಂಗಳೂರು, ಮೇ 1:** ಬೆಂಗಳೂರು ದಕ್ಷಿಣ ಜಿಲ್ಲೆಯ ರಾಮನಗರ ಹಾಗೂ ಮಾಗಡಿ ವಿಧಾನಸಭಾ ಕ್ಷೇತ್ರದ ಹಲವು ಕಡೆಗಳಲ್ಲಿ ಮಾನ್ಯ ಸಂಸದರ ಪ್ರದೇಶಾಭಿವೃದ್ಧಿ ನಿಧಿ ಹಾಗೂ ಜಿಲ್ಲಾ ಖನಿಜ ಪ್ರತಿಷ್ಠಾನ ಯೋಜನೆಯಡಿ ನಿರ್ಮಿಸಲಾಗಿರುವ ವಿವಿಧ ಕಾಮಗಾರಿಗಳನ್ನು ಜನಪ್ರಿಯ ಬೆಂಗಳೂರು ಗ್ರಾಮಾಂತರ ಕ್ಷೇತ್ರದ ಸಂಸದ ಡಾ. ಸಿ.ಎನ್. ಮಂಜುನಾಥ್ ಅವರು ಸ್ಥಳೀಯ ಮುಖಂಡರೊಂದಿಗೆ ಸೇರಿ ಉದ್ಘಾಟಿಸಿದರು.

1.) ನೂತನ ಬಸ್ ತಂಗುದಾಣ–

ಶ್ರೀ ರೇವಣಸಿದ್ದೇಶ್ವರಸ್ವಾಮಿ ಬೆಟ್ಟ, ಅವೇರಹಳ್ಳಿ, ಕೈಲಾಂಚ ಹೋಬಳಿ, ರಾಮನಗರ ತಾಲ್ಲೂಕು, ಬೆಂಗಳೂರು ದಕ್ಷಿಣ ಜಿಲ್ಲೆ.

2.) ನೂತನ ಬಸ್ ತಂಗುದಾಣ –

ಮಹಿಳಾ ಸರ್ಕಾರಿ ಕಾಲೇಜು ಹತ್ತಿರ, ರಾಯರದೊಡ್ಡಿ ಸರ್ಕಲ್, ರಾಮನಗರ ಟೌನ್, ಬೆಂಗಳೂರು ದಕ್ಷಿಣ ಜಿಲ್ಲೆ.

3.) ನೂತನ ಬಸ್ ತಂಗುದಾಣ –

ಕೆಂಪವಡೇಯರಹಳ್ಳಿ, ಲಕ್ಷ್ಮೀಪುರ ಗ್ರಾಮ ಪಂಚಾಯಿತಿ, ರಾಮನಗರ ತಾಲ್ಲೂಕು, ಬೆಂಗಳೂರು ದಕ್ಷಿಣ ಜಿಲ್ಲೆ.

4.)ನೂತನ ಶುದ್ಧ ಕುಡಿಯುವ ನೀರಿನ ಘಟಕ –

ಕುಂಬಾರದೊಡ್ಡಿ ಗ್ರಾಮ, ಸುಗ್ಗನಹಳ್ಳಿ ಗ್ರಾಮ ಪಂಚಾಯಿತಿ, ರಾಮನಗರ ತಾಲ್ಲೂಕು, ಬೆಂಗಳೂರು ದಕ್ಷಿಣ ಜಿಲ್ಲೆ.

ಈ ಸಂದರ್ಭದಲ್ಲಿ ಮಾತನಾಡಿದ ಸಂಸದರು, ಪುರಾತನ ಕಾಲದಿಂದಲೇ ಆಧ್ಯಾತ್ಮಿಕ ಮಹತ್ವ ಹೊಂದಿರುವ ಎಸ್. ಆರ್.ಎಸ್. ಬೆಟ್ಟವು ನಮ್ಮ ಪ್ರದೇಶದ ಹೆಮ್ಮೆಯ ಸಂಕೇತವಾಗಿದ್ದು, ಇಂತಹ ಪವಿತ್ರ ಸ್ಥಳಗಳಿಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸುವುದು ಅತ್ಯಾವಶ್ಯಕವೆಂದು ಹೇಳಿದರು. ನಿರ್ಮಿಸಲಾದ ಬಸ್ ತಂಗುದಾಣಗಳು ಗ್ರಾಮಸ್ಥರು, ಭಕ್ತಾದಿಗಳು ಮತ್ತು ಪ್ರಯಾಣಿಕರಿಗೆ ಸುರಕ್ಷಿತ ನೀರಿಕ್ಷಣ ಸ್ಥಳದ ವ್ಯವಸ್ಥೆಯನ್ನು ಒದಗಿಸಲಾಗಿದೆ. ಇದಲ್ಲದೆ, ಪ್ರಸ್ತುತ ಸ್ಥಾಪಿಸಲಾಗಿರುವ ಶುದ್ಧ ಕುಡಿಯುವ ನೀರಿನ ಘಟಕವು ಸ್ಥಳೀಯ ಜನರಿಗೆ ಆರೋಗ್ಯಕರ ಮತ್ತು ಸ್ವಚ್ಛ ನೀರನ್ನು ಒದಗಿಸುವ ಮೂಲಕ ಸಾರ್ವಜನಿಕ ಆರೋಗ್ಯವನ್ನು ಕಾಪಾಡುವಲ್ಲಿ ಮಹತ್ವದ ಪಾತ್ರವಹಿಸುತ್ತದೆ ಎಂದು ಅವರು ತಿಳಿಸಿದರು.

ಇಂತಹ ಅಭಿವೃದ್ಧಿ ಕಾರ್ಯಗಳ ಮೂಲಕ ಗ್ರಾಮೀಣ ಭಾಗದ ಸಮಗ್ರ ಅಭಿವೃದ್ಧಿಗೆ ಮತ್ತಷ್ಟು ಉತ್ತೇಜನ ನೀಡಲಾಗುವುದು ಎಂದು ಡಾ. ಮಂಜುನಾಥ್ ಹೇಳಿದರು.

ಈ ಸಂದರ್ಭದಲ್ಲಿ ರಾಮನಗರ ತಾಲೂಕು ಜೆಡಿಎಸ್ ಅಧ್ಯಕ್ಷ ಸಬಕೆರೆ ಶಿವಲಿಂಗಯ್ಯನವರು, ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಚಂದನ್ ಹಾಗೂ ಎನ್‌ಡಿಎ ಮುಖಂಡರು ಮತ್ತು ಜನಪ್ರತಿನಿಧಿಗಳು ಉಪಸ್ಥಿತರಿದ್ದರು.

## ಹೋಟೆಲ್ ಉದ್ಯಮ, ಜನಸಾಮಾನ್ಯರ ಮೇಲೆ ಗದಾಪ್ರಹಾರ

### ವಾಣಿಜ್ಯ ಬಳಕೆ ಸಿಲಿಂಡರ್ ಬೆಲೆ ಏರಿಕೆಗೆ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಖಂಡನೆ




**ಬೆಳಗಾವಿ, ಮೇ 1:** ವಾಣಿಜ್ಯ ಗ್ಯಾಸ್ ಸಿಲಿಂಡರ್ ದರವನ್ನು 2162 ರೂ.ನಿಂದ 3153 ರೂ.ಗಳಿಗೆ ಏರಿಸಿರುವುದು, ಒಟ್ಟು 991 ರೂ. ಏರಿಕೆ ಮಾಡಿರುವುದು ಕೇಂದ್ರ ಸರ್ಕಾರದ ಜನವಿರೋಧಿ ನಿರ್ಧಾರವಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಖಂಡಿಸಿದ್ದಾರೆ.

ಹಿಂದೆಂದೂ ಈ ಪ್ರಮಾಣದ ಬೆಲೆ ಏರಿಕೆ ಕಂಡಿಲ್ಲ. ಕೆಲವು ರಾಜ್ಯಗಳ ಚುನಾವಣೆ ಮುಗಿದ ತಕ್ಷಣ ಇಂತಹ ಜನವಿರೋಧಿ ನಿರ್ಧಾರ ತೆಗೆದುಕೊಂಡಿರುವುದು ಜನರಿಗೆ ನೀಡಿದ ಭರವಸೆಗಳನ್ನೇ ಮರೆತಂತಾಗಿದೆ. ಇದು ನೇರವಾಗಿ ಹೋಟೆಲ್ ಉದ್ಯಮದ ಮೇಲೆ ಹಾಗೂ ಸಾಮಾನ್ಯ ಜನರ ಬದುಕಿನ ಮೇಲೆ ಗದಾಪ್ರಹಾರವಾಗಿದೆ ಎಂದು ವಾಗ್ದಾಳಿ ನಡೆಸಿದ್ದಾರೆ.

ಹೋಟೆಲ್ ಮಾಲೀಕರು ಈಗಾಗಲೇ ಬೆಲೆ ಏರಿಕೆಯ ಒತ್ತಡವನ್ನು ಎದುರಿಸುತ್ತಿದ್ದಾರೆ. ಈ ನಿರ್ಧಾರದಿಂದ ಆಹಾರ ಪದಾರ್ಥಗಳ ಬೆಲೆ ಮತ್ತಷ್ಟು ಏರಿಕೆಯಾಗಲಿದೆ. ಅದರ ಪರಿಣಾಮವಾಗಿ ದಿನನಿತ್ಯ ಜೀವನ ನಡೆಸುವ ಸಾಮಾನ್ಯ ಜನರು ಸಂಕಷ್ಟಕ್ಕೆ ಸಿಲುಕುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಹೆಬ್ಬಾಳ್ಕರ್ ಕೇಂದ್ರ ಸರ್ಕಾರದ ವಿರುದ್ಧ ಕಿಡಿಕಾರಿದ್ದಾರೆ. ಕೇಂದ್ರ ಜನರ ಜೀವನೋಪಾಯವನ್ನು ಕಷ್ಟಕರಗೊಳಿಸುವ ಬದಲು, ಬೆಲೆ ನಿಯಂತ್ರಣಕ್ಕೆ ಕ್ರಮ ಕೈಗೊಳ್ಳಬೇಕು. ಆದರೆ, ಚುನಾವಣೆಯ ಬಳಿಕ ಜನರಿಗೆ ಮತ್ತೊಮ್ಮೆ ಮೋಸ ಮಾಡುತ್ತಿರುವುದು ಸ್ಪಷ್ಟವಾಗಿದೆ. ತಕ್ಷಣವೇ ಈ ಅನ್ಯಾಯಕರ ಬೆಲೆ ಏರಿಕೆಯನ್ನು ಹಿಂಪಡೆಯಬೇಕು ಹಾಗೂ ಜನಪರ ನೀತಿ ಅನುಸರಿಸಬೇಕು ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಒತ್ತಾಯಿಸಿದ್ದಾರೆ.

## ಸಿಲಿಂಡರ್ ಮಾತ್ರವಲ್ಲ ಮುಂದಿನ ದಿನಗಳಲ್ಲಿ ಬೆಲೆ ಏರಿಕೆ ಬಿಸಿ ಇನ್ನಷ್ಟು ತಟ್ಟಲಿದೆ: ಡಿ.ಕೆ. ಸುರೇಶ್



ಬೆಂಗಳೂರು, ಮೇ.1: ಸಿಲಿಂಡರ್ ಮಾತ್ರವಲ್ಲ, ಮುಂದಿನ ದಿನಗಳಲ್ಲಿ ಬೆಲೆ ಏರಿಕೆ ಬಿಸಿ ಇನ್ನಷ್ಟು ತಟ್ಟಲಿದೆ. ಇದಕ್ಕೆ ಪ್ರಧಾನಮಂತ್ರಿಗಳು ಉತ್ತರಿಸಬೇಕು ಎಂದು ಬಮುಲ್ ಅಧ್ಯಕ್ಷ ಡಿ.ಕೆ. ಸುರೇಶ್ ಆಗ್ರಹಿಸಿದ್ದಾರೆ.

ವಾಣಿಜ್ಯ ಸಿಲಿಂಡರ್ ದರ ಏರಿಕೆ ಬಗ್ಗೆ ಮಾಧ್ಯಮಗಳ ಪ್ರಶ್ನೆಗಳಿಗೆ ಪ್ರತಿಕ್ರಿಯಿಸಿದ ಅವರು, ಪ್ರಧಾನಮಂತ್ರಿಗಳು ಅಚ್ಛೇ ದಿನದ ಮಾತು ಕೊಟ್ಟಿದ್ದರು. ರಾಷ್ಟ್ರದ ಜನರ ಸಂಕಷ್ಟ ಯಾವ ರೀತಿ ಬಗೆಹರಿಸುತ್ತಾರೆ ಎಂದು ಹೇಳಬೇಕು. ಪಂಚ ರಾಜ್ಯ ಚುನಾವಣೆ ಬಳಿಕ ದರ ಏರಿಕೆ ಮಾಡಿರುವ ಬಗ್ಗೆ ಕೇಳಿದಾಗ, ಬೆಲೆ ಏರಿಕೆ ಇಷ್ಟೇ ಅಲ್ಲ. ಇನ್ನು ಏನೆಲ್ಲಾ ಏರುತ್ತದೆ ಕಾದು ನೋಡಬೇಕು.

ಸಿಲಿಂಡರ್ ಸಿಗದೆ ಹೋಟೇಲ್ ಉದ್ಯಮ ಸಂಕಷ್ಟದಲ್ಲಿದೆ. ಇದಕ್ಕೆಲ್ಲ ಆಡಳಿತ ನಡೆಸುತ್ತಿರುವ ಬಿಜೆಪಿ ನಾಯಕರು ಹಾಗೂ ಜನಪ್ರತಿನಿಧಿಗಳು ಉತ್ತರಿಸಬೇಕು ಎಂದರು. ನಾಯಕತ್ವ ಬದಲಾವಣೆ ವಿಚಾರವಾಗಿ ಮಲ್ಲಿಕಾರ್ಜುನ ಖರ್ಗೆ ಅವರ ಹೇಳಿಕೆಗೆ ಪ್ರತಿಕ್ರಿಯಿಸಿ, ಆ ಬಗ್ಗೆ ಮಾಹಿತಿ ಇಲ್ಲ. ಅವರು ಪಕ್ಷದ ಅಧ್ಯಕ್ಷರು. ಅವರು ಹೇಳುವುದನ್ನು ಪಕ್ಷ ಕೇಳುತ್ತದೆ ಎಂದರು. ಶಿವಕುಮಾರ್ ಅವರ ಹುಟ್ಟುಹಬ್ಬಕ್ಕೆ ಉಡುಗೊರೆ ಸಿಗಲಿದೆಯೇ ಎಂದು ಸುದ್ದಿಗಾರರು ಕೇಳಿದಾಗ, ಅದರ ಬಗ್ಗೆ ಗೊತ್ತಿಲ್ಲ. ನೀವು ಹೇಳುವುದನ್ನು ಕೇಳುತ್ತಿದ್ದೇನೆ. ಜನ ನಮಗೆ ಆಶೀರ್ವಾದ ಮಾಡಿದ್ದು, ಅದರಂತೆ ಕೆಲಸ ಮಾಡುತ್ತಿದ್ದೇವೆ. ನಮ್ಮ ಜಿಲ್ಲೆ ಅಭಿವೃದ್ಧಿ ಬಗ್ಗೆ ಚಿಂತನೆ ಮಾಡುತ್ತಿದ್ದು, ಬೇರೆ ಬಗ್ಗೆ ಚಿಂತಿಸುತ್ತಿಲ್ಲ. ಪಕ್ಷದ ತೀರ್ಮಾನ ಕಾದು ನೋಡುತ್ತೇವೆ. ಈ ವಿಚಾರದಲ್ಲಿ ಗೊಂದಲ ಇಲ್ಲ. ಎಲ್ಲವೂ ಪಕ್ಷದ ಹೈಕಮಾಂಡ್ ತೀರ್ಮಾನದಂತೆ ನಡೆಯುತ್ತದೆ ಎಂದು ಸ್ಪಷ್ಟಪಡಿಸಿದರು.

Chief reporter : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com
Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

# ಕಾರ್ಮಿಕರು ದೇಶದ ಆರ್ಥಿಕ, ಸಾಮಾಜಿಕ ಅಭಿವೃದ್ಧಿಯ ಶಿಲ್ಪಿಗಳು: ಸಿಎಂ ಸಿದ್ದರಾಮಯ್ಯ

## ಕಾರ್ಪೋರೇಟ್‌ಗಳ ಪರ, ಕಾರ್ಮಿಕ ವಿರೋಧಿ ಕೇಂದ್ರ ಸರ್ಕಾರ ಕಾರ್ಮಿಕ ವಿರೋಧಿ

**ಬೆಂಗಳೂರು, ಮೇ 1:** ಕಾರ್ಮಿಕರು ದೇಶದ ಆರ್ಥಿಕ, ಸಾಮಾಜಿಕ, ಅಭಿವೃದ್ಧಿಯ ಶಿಲ್ಪಿಗಳು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಬಣ್ಣಿಸಿದ್ದಾರೆ.



ಕೆಪಿಸಿಸಿ ಕಚೇರಿಯಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ ವಿಶ್ವ ಕಾರ್ಮಿಕ ದಿನಾಚರಣೆ ಉದ್ಘಾಟಿಸಿ ಮಾತನಾಡಿದ ಅವರು, ಕಾಯಕವೇ ಕೈಲಾಸ ಎಂದು ಬಸವಣ್ಣ ಹೇಳಿದ್ದರು. ಯಾವುದೇ ಕೆಲಸ ಮಾಡಿದರೂ ಅದಕ್ಕೆ ಸಮಾನ ಗೌರವ ನೀಡಬೇಕು. ಕಾರ್ಮಿಕರು ದೇಶದ ಸಾಮಾಜಿಕ, ಆರ್ಥಿಕ ಅಭಿವೃದ್ಧಿಗೆ ಅಗತ್ಯ. ದೇಶದಲ್ಲಿ 75%ಕ್ಕಿಂತ ಹೆಚ್ಚು ಅಸಂಘಟಿತ ಕಾರ್ಮಿಕರಿದ್ದಾರೆ. ಕೇಂದ್ರ ಸರ್ಕಾರ ಕಾರ್ಮಿಕರ ವಿರೋಧಿಯಾಗಿದ್ದು, ಕಾರ್ಪೊರೇಟ್ ಸಂಸ್ಥೆಗಳ ಪರವಾಗಿದೆ ಎಂದರು.

ನಮ್ಮ ಸರ್ಕಾರ ಯಾವಾಗಲೂ ಕಾರ್ಮಿಕರ ಪರವಾಗಿದ್ದು, ಅವರನ್ನು ಗೌರವಿಸುತ್ತದೆ. ರಾಜ್ಯ ಸರ್ಕಾರ ಕಾರ್ಮಿಕರಿಗೆ ಅನೇಕ ಸೌಲಭ್ಯಗಳನ್ನು ನೀಡಿದೆ. ಕಾರ್ಮಿಕರು ಕೆಲಸದ ವೇಳೆ ಮೃತಪಟ್ಟರೆ ಅವರಿಗೆ ನೀಡುತ್ತಿದ್ದ 5 ಲಕ್ಷಗಳ ಪರಿಹಾರ ಮೊತ್ತವನ್ನು 8 ಲಕ್ಷಕ್ಕೆ ಹೆಚ್ಚಿಸಿದೆ. ಸಹಜ ಮರಣ ಹೊಂದಿದವರ ಸಂಸ್ಕಾರಕ್ಕೆ ನೀಡುತ್ತಿದ್ದ 75 ಸಾವಿರ ರೂ.ಗಳನ್ನು ಒಂದೂವರೆ ಲಕ್ಷಕ್ಕೆ ಹೆಚ್ಚಿಸಿದೆ ಎಂದರು.

ಕಾಂಗ್ರೆಸ್ ಪಕ್ಷದ ವರಿಷ್ಠ ರಾಹುಲ್ ಗಾಂಧಿಯವರು ಸಂತೋಷ ಲಾಡ್ ಹಾಗೂ ಪ್ರಿಯಾಂಕಾ ಖರ್ಗೆ ಹಾಗೂ ನನ್ನೊಂದಿಗೆ ಚರ್ಚಿಸಿ ಕಾರ್ಮಿಕರಿಗೆ ನೆರವಾಗುವ ಕೆಲಸವನ್ನು ಮಾಡಿದ್ದಾರೆ. ಕರ್ನಾಟಕ ರಾಜ್ಯ ಗಿಗ್ ಕಾರ್ಮಿಕರ ವಿಮಾ ಯೋಜನೆ ಯಡಿ 30256 ಗಿಗ್ ಕಾರ್ಮಿಕರನ್ನು ನೋಂದಾಯಿಸಲಾಗಿದ್ದು, ಅಪಘಾತದಲ್ಲಿ ಮರಣ ಹೊಂದಿವವರಿಗೆ 4 ಲಕ್ಷ ರೂ ಪರಿಹಾರ ನೀಡಲು ತೀರ್ಮಾನಿಸಿದೆ. ಈಗಾಗಲೇ ಐದು ಪ್ರಕರಣಗಳಲ್ಲಿ ಪರಿಹಾರ ನೀಡಲಾಗಿದೆ ಎಂದರು.

2026-27 ಕ್ಕೆ ಶ್ರಮಿಕ ವರ್ಗಗಳ ಮಕ್ಕಳೂ ಉತ್ತಮ ಶಿಕ್ಷಣ ಪಡೆಯಬೇಕೆಂಬ ಉದ್ದೇಶದಿಂದ ಕಾರ್ಮಿಕರ ಮಕ್ಕಳಿಗೆ 104 ವಸತಿ ಶಾಲೆಗಳನ್ನು ತೆರೆಯಲಾಗಿದೆ. ವಸತಿ ಶಾಲೆಗಳಲ್ಲಿ 99.42% ವಿದ್ಯಾರ್ಥಿಗಳು ತೇರ್ಗಡೆಯಾಗಿದ್ದಾರೆ.

ಕಾರ್ಮಿಕರ ಮಕ್ಕಳೂ ಉನ್ನತ ಶಿಕ್ಷಣ ಪಡೆಯಲು ಈ ಶಾಲೆಗಳು ನೆರವಾಗಲಿವೆ ಎಂದರು.

ಬಾಬಾ ಸಾಹೇಬ್ ಅಂಬೇಡ್ಕರ್ ಅವರು ಜಾರಿಗೆ ತಂಡ ಕಾನೂನುಗಳು ಕಾರ್ಮಿಕರ ಹಿತವನ್ನು ಕಾದಿವೆ ಹಾಗೂ ಜಗಜೀವನ ರಾಮ್ ಅವರೂ ಕಾರ್ಮಿಕರ ಪರವಾಗಿ ಸಾಕಷ್ಟು ಕೆಲಸ ಮಾಡಿದ್ದರು. ಕಾಂಗ್ರೆಸ್ ಪಕ್ಷ ಕಾರ್ಮಿಕರ ಜೊತೆಗಿದೆ ಎಂದರು.

ಎಂಟು ಗಂಟೆಗಳ ಕೆಲಸದ ಅವಧಿ, ಎಂಟು ಗಂಟೆಗಳ ವಿಶ್ರಾಂತಿ, ಎಂಟು ಗಂಟೆಗಳ ಕಾಲ ಮನರಂಜನೆ ಅಗತ್ಯವೆಂದು 1886 ರಲ್ಲಿ ಚಿಕಾಗೋದಲ್ಲಿ ನಡೆದ ಕಾರ್ಮಿಕರ ಸಂಘಟನೆಗಳು ಹೋರಾಟಗಾರರ ಬೇಡಿಕೆಯಾಗಿತ್ತು. ಅದಕ್ಕೂ ಮುನ್ನ 14 ರಿಂದ 18 ಗಂಟೆಗಳ ಕಾಲ ಕೆಲಸ ಮಾಡಬೇಕಿತ್ತು. ಕಾರ್ಮಿಕರ ಹೋರಾಟದ ದಿನವನ್ನೇ ವಿಶ್ವ ಕಾರ್ಮಿಕರ ದಿನಾಚರಣೆಯನ್ನಾಗಿ ಆಚರಿಸಲಾಗುತ್ತಿದೆ ಎಂದರು.

ಡಿಸಿಎಂ ಡಿ.ಕೆ.ಶಿವಕುಮಾರ್, ವಿಧಾನ ಪರಿಷತ್ ಮುಖ್ಯ ಸಚೇತಕ ಸಲೀಂ ಅಹಮದ್, ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಎಚ್.ಎಂ.ರೇವಣ್ಣ, ಯುವ ಕಾಂಗ್ರೆಸ್ ಅಧ್ಯಕ್ಷ ಮಂಜುನಾಥ್, ಕೆಪಿಸಿಸಿ ಕಾರ್ಯಾಧ್ಯಕ್ಷ ಜಿ.ಸಿ.ಚಂದ್ರಶೇಖರ್ ಸೇರಿ ಹಲವು ಗಣ್ಯರು ಉಪಸ್ಥಿತರಿದ್ದರು.

# 3 ವರ್ಷದ ಅವಧಿಗೆ 10419 ಅತಿಥಿ ಉಪನ್ಯಾಸಕರ ನೇಮಕಕ್ಕೆ ನಿರ್ಧಾರ

■ ಉನ್ನತ ಶಿಕ್ಷಣ ಸಚಿವ ಡಾ. ಎಂ.ಸಿ. ಸುಧಾಕರ್ ಮಾಹಿತಿ



ಬೆಂಗಳೂರು, ಮೇ 1: ರಾಜ್ಯಾದ್ಯಂತ ಇರುವ ಸರ್ಕಾರಿ ಕಾಲೇಜುಗಳಲ್ಲಿ ಮೂರು ವರ್ಷಗಳ ಅವಧಿಗೆ ಒಟ್ಟು 10,419 ಅತಿಥಿ ಉಪನ್ಯಾಸಕರ ನೇಮಕ ಮಾಡಲು ಉನ್ನತ ಶಿಕ್ಷಣ ಇಲಾಖೆ ಮಹತ್ವದ ನಿರ್ಧಾರ ಕೈಗೊಂಡಿದೆ ಎಂದು ಉನ್ನತ ಶಿಕ್ಷಣ ಸಚಿವ ಡಾ. ಎಂ.ಸಿ. ಸುಧಾಕರ್ ಮಾಹಿತಿ ನೀಡಿದ್ದಾರೆ.

ಸೆಪ್ಟೆಂಬರ್ 2024ರಲ್ಲಿ ಹೈಕೋರ್ಟ್ ನೀಡಿದ ಆದೇಶದ ಅನ್ವಯ ಅತಿಥಿ ಉಪನ್ಯಾಸಕರ ಹುದ್ದೆಗಳಿಗೆ ಸಂಭಾವ್ಯ ಅಭ್ಯರ್ಥಿಗಳಿಗೆ ಆನ್‌ಲೈನ್ ಕೌನ್ಸೆಲಿಂಗ್ ನಡೆಸಿದ ನಂತರ ಈ ನಿರ್ಧಾರಕ್ಕೆ ಬರಲಾಗಿದೆ. ಇದಲ್ಲದೆ, ನಿಗದಿತ ವಿಶ್ವವಿದ್ಯಾಲಯ ಅನುದಾನ ಆಯೋಗದ ಮಾನದಂಡಗಳನ್ನು ಪೂರೈಸದ 3,853 ಅತಿಥಿ ಉಪನ್ಯಾಸಕರನ್ನು 2026-27ನೇ ಶೈಕ್ಷಣಿಕ ವರ್ಷದಿಂದ ಸರ್ಕಾರಿ ಕಾಲೇಜುಗಳಲ್ಲಿ 'ಶಿಕ್ಷಣ ಸಂಯೋಜಕರು' ಆಗಿ ನೇಮಿಸಲು ಇಲಾಖೆ ತೀರ್ಮಾನಿಸಿದೆ. ಈ ಹುದ್ದೆಯು ಪ್ರಯೋಗಾಲಯಗಳಲ್ಲಿ (ಲ್ಯಾಬ್) ಇತರ ಉಪನ್ಯಾಸಕರಿಗೆ ಸಹಾಯ ಮಾಡುವುದು ಮತ್ತು ಕಾಲೇಜುಗಳಲ್ಲಿ ಶೈಕ್ಷಣಿಕ ಹಾಗೂ ಶೈಕ್ಷಣಿಕೇತರ ಚಟುವಟಿಕೆಗಳಲ್ಲಿ ನೆರವಾಗುವ ಜವಾಬ್ದಾರಿಯನ್ನು ಒಳಗೊಂಡಿರುತ್ತದೆ. ಈ ಮೂಲಕ ಯುಜಿಸಿ ನಿಯಮಾವಳಿಗಳ ಪ್ರಕಾರ ಅರ್ಹತೆ ಹೊಂದಿಲ್ಲದಿದ್ದರೂ, ಸುದೀರ್ಘ ಕಾಲ ಸೇವೆ ಸಲ್ಲಿಸಿದ ಉಪನ್ಯಾಸಕರಿಗೆ ಮಾನವೀಯ ನೆಲೆಯಲ್ಲಿ ಸರ್ಕಾರ ಆಸರೆಯಾಗಿದೆ ಎಂದಿದ್ದಾರೆ.

ಸರ್ಕಾರವು ಒಟ್ಟು 11,100 ಅತಿಥಿ ಉಪನ್ಯಾಸಕರನ್ನು ನೇಮಿಸಲು ಅನುಮತಿ ನೀಡಿತ್ತು. ಅದರಂತೆ ಆನ್‌ಲೈನ್ ಕೌನ್ಸೆಲಿಂಗ್ ಮೂಲಕ 10,419 ಅಭ್ಯರ್ಥಿಗಳನ್ನು ಪಾರದರ್ಶಕವಾಗಿ ಆಯ್ಕೆ ಮಾಡಿದ್ದೇವೆ. ಈ ಆಯ್ಕೆಯಾದ ಅಭ್ಯರ್ಥಿಗಳನ್ನು ಕಾಯಂ ಸಿಬ್ಬಂದಿಯಾಗಿ ಪರಿಗಣಿಸುವುದಿಲ್ಲ, ಬದಲಾಗಿ ಮುಂದಿನ ಮೂರು ವರ್ಷಗಳ ಅವಧಿಗೆ ಮಾತ್ರ ನೇಮಿಸಲಾಗುವುದು" ಎಂದು ಸ್ಪಷ್ಟಪಡಿಸಿದ್ದಾರೆ.

ಶಿಕ್ಷಣ ಸಂಯೋಜಕರ ವೇತನದ ಕುರಿತು ಮುಂದುವರಿದು ಮಾತನಾಡಿದ ಸಚಿವರು, "ಮಾನವೀಯತೆಯ ಆಧಾರದ ಮೇಲೆ, 3,853 ಅತಿಥಿ ಉಪನ್ಯಾಸಕರನ್ನು ಸರ್ಕಾರವು ಶಿಕ್ಷಣ ಸಂಯೋಜಕರನ್ನಾಗಿ ನೇಮಿಸಿದೆ. ಇವರ ವೇತನವನ್ನು ಅವರ ಬೋಧನಾ ಅನುಭವದ ಆಧಾರದ ಮೇಲೆ ನಿಗದಿಪಡಿಸಲಾಗಿದೆ. 5 ರಿಂದ 10 ವರ್ಷಗಳ ಬೋಧನಾ ಅನುಭವ ಇರುವವರಿಗೆ ಮಾಸಿಕ 28,000 ರೂಪಾಯಿ, 10 ರಿಂದ 15 ವರ್ಷಗಳ ಅನುಭವ ಇರುವವರಿಗೆ 29,000 ರೂಪಾಯಿ ಹಾಗೂ 15 ವರ್ಷಗಳಿಗಿಂತ ಹೆಚ್ಚು ಅನುಭವ ಇರುವವರಿಗೆ 30,000 ರೂಪಾಯಿಗಳ ವೇತನವನ್ನು ನಿಗದಿಪಡಿಸಲಾಗಿದೆ. ಇದರ ಜೊತೆಗೆ ಈ ಎಲ್ಲಾ ಸಿಬ್ಬಂದಿಗೆ ವಾರ್ಷಿಕ ವೈದ್ಯಕೀಯ ವಿಮೆಯನ್ನು ಕೂಡ ಒದಗಿಸಲಾಗುವುದು" ಎಂದು ತಿಳಿಸಿದ್ದಾರೆ.

# ಕಾರ್ಮಿಕರದ್ದು ಬೆವರು, ಶ್ರಮದ ಜಾತಿ, ಎಲ್ಲಕ್ಕಿಂತ ಶ್ರೇಷ್ಠ: ಡಿಸಿಎಂ ಡಿ.ಕೆ.ಶಿವಕುಮಾರ್

**ಬೆಂಗಳೂರು, ಮೇ 01:** ನಾವು ನೀರಿನಲ್ಲಿ ಸ್ನಾನ ಮಾಡಿದರೆ, ಕಾರ್ಮಿಕರು ತಮ್ಮ ಬೆವರಿನಲ್ಲಿ ಸ್ನಾನ ಮಾಡಿ ಇತಿಹಾಸ ಬರೆಯುತ್ತಿದ್ದಾರೆ. ಇದು ಅವರ ಶಕ್ತಿ, ಸಂಕಲ್ಪ. ಕಾರ್ಮಿಕ ವರ್ಗದಲ್ಲಿ ಜಾತಿ, ಧರ್ಮದ ತಾರತಮ್ಯವಿಲ್ಲ. ಕಾರ್ಮಿಕರದ್ದು ಬೆವರು, ಶ್ರಮದ ಒಂದು ಜಾತಿ. ಎಲ್ಲಾ ಜಾತಿಗಳಿಗಿಂತ ಶ್ರೇಷ್ಠವಾದ ಜಾತಿ ಎಂದು ಡಿಸಿಎಂ ಡಿಕೆ ಶಿವಕುಮಾರ್ ಅವರು ಶ್ಲಾಘಿಸಿದರು.



ಕೆಪಿಸಿಸಿ ಕಚೇರಿ ಭಾರತ ಜೋಡೋ ಭವನದಲ್ಲಿ ಶುಕ್ರವಾರ ನಡೆದ ಕಾರ್ಮಿಕ ದಿನ ಕಾರ್ಯಕ್ರಮದಲ್ಲಿ ಶಿವಕುಮಾರ್ ಅವರು ಮಾತನಾಡಿ, ಸಮಾಜದಲ್ಲಿ ಕೃಷಿಕ, ಕಾರ್ಮಿಕ, ಸೈನಿಕ ಹಾಗೂ ಶಿಕ್ಷಕ ಪ್ರಮುಖ ನಾಲ್ಕು ಆಧಾರಸ್ಥಂಬಗಳು. ಈ ನಾಲ್ವರಿಂದ ದೇಶವನ್ನು ಬಲಿಷ್ಠವಾಗಿ ಕಟ್ಟಬಹುದು. ನಾವು ಇಂದು ಕಾರ್ಮಿಕ ದಿನ ಆಚರಿಸುತ್ತಿದ್ದೇವೆ. ಆಮೂಲಕ ಕಾರ್ಮಿಕರಿಗೆ ಗೌರವ ಸಲ್ಲಿಸಲಾಗುತ್ತಿದೆ ಎಂದರು.

ಕಾರ್ಮಿಕರ ಬೆವರು ಈ ದೇಶಕ್ಕೆ ನಿಜವಾದ ಅಡಿಪಾಯ. ಕಾರ್ಮಿಕರಿಗೆ ನ್ಯಾಯ ಸಿಕ್ಕಾಗ ಮಾತ್ರ ದೇಶ ಪ್ರಗತಿ ಸಾಧ್ಯ. ಬೇರೆ ಪಕ್ಷಗಳು ಈ ಕಾರ್ಮಿಕರ ಬಗ್ಗೆ ಕಾಳಜಿ ತೋರುತ್ತಿಲ್ಲ. ಕಳೆದ 12 ವರ್ಷಗಳಲ್ಲಿ ಕೇಂದ್ರ ಎನ್‌ಡಿಎ ಸರ್ಕಾರ ಕಾರ್ಮಿಕರ ಬದುಕಿನಲ್ಲಿ ಸಣ್ಣ ಬದಲಾವಣೆ ತರಲು ಸಾಧ್ಯವಾಗಿಲ್ಲ. ಈ ದೇಶವನ್ನು ಕಟ್ಟಿದವರಿಗೆ ಗೌರವ ನೀಡುತ್ತಿಲ್ಲ. ದೇಶದ ಎಲ್ಲಾ ಸಂಪತ್ತು ಕಾರ್ಮಿಕರ ಪರಿಶ್ರಮದ ಕೊಡುಗೆಯಾಗಿದೆ. ಮನೆ, ಕಟ್ಟಡ, ರಸ್ತೆ ಸೇರಿದಂತೆ ಎಲ್ಲಾ ಪ್ರಗತಿ ಕಾರ್ಮಿಕರಿಂದ ಸಾಧ್ಯವಾಗಿದೆ. ದೇಶದ ಭವಿಷ್ಯದ ಕಾರ್ಮಿಕರ ಮೇಲೆ ನಿಂತಿದೆ.

ಕಾರ್ಮಿಕರ ರಕ್ಷಣೆಗೆ ಕಾಂಗ್ರೆಸ್ ಸರ್ಕಾರ ಬದ್ಧವಾಗಿದೆ. ಎಲ್ಲಿ ಶ್ರಮ ಇದೆಯೋ ಅಲ್ಲಿ ಫಲ ಇದೆ ಎಂದು ಹೇಳಿದರು.

ರಾಹುಲ್ ಗಾಂಧಿ ಅವರ ಮಾರ್ಗದರ್ಶನದಲ್ಲಿ ಸಿದ್ದರಾಮಯ್ಯ ಅವರ ನೇತೃತ್ವದ ಸರ್ಕಾರ ಗಿಗ್ ಕಾರ್ಮಿಕರ ಭವಿಷ್ಯ ರಕ್ಷಣೆ ನೀಡುವ ಕಾಯ್ದೆ ತರಲಾಗಿದೆ. ಪುಟ್ಟಸ್ವಾಮಿಗೌಡರು ಕೆಪಿಸಿಸಿ ಕಾರ್ಮಿಕ ವಿಭಾಗದ ಅಧ್ಯಕ್ಷರಾಗಿ ಉತ್ತಮವಾಗಿ ಸಂಘಟನೆ ಮಾಡಿಕೊಂಡು ಬಂದಿದ್ದಾರೆ. ಈ ಘಟಕ ದೊಡ್ಡ ಅಧಿಕಾರದ ಹಿಂದೆ ಹೋದವರಲ್ಲ" ಎಂದರು.

### ಕಾರ್ಮಿಕರ ಬದುಕಿಗೆ ಗ್ಯಾರಂಟಿ ಆಸರೆ

ಬದುಕಲು ಬೇಕಾದ ಕೂಲಿ ನೀಡದಿದ್ದರೆ ಅದೇ ದೊಡ್ಡ ಶೋಷಣೆ ಎಂದು ಮಹಾತ್ಮ ಗಾಂಧಿ ಹೇಳಿದ್ದಾರೆ. ಕಾರ್ಮಿಕರ ಮನೆಗಳಲ್ಲಿ ಬೆಳಕು ತರಲು ನಮ್ಮ ಸರ್ಕಾರ ಪಂಚ ಗ್ಯಾರಂಟಿ ಯೋಜನೆ ತಂದಿದೆ. ಗ್ಯಾರಂಟಿ ಯೋಜನೆಗಳಿಂದ ಜನರ ಬದುಕು ಯಾವ ರೀತಿ ಬದಲಾವಣೆಯಾಗಿದೆ ಎಂದು ಸಮೀಕ್ಷೆ ನಡೆಸಿದ್ದೇವೆ. ಪ್ರತಿ ಕುಟುಂಬಕ್ಕೆ ಮಾಸಿಕ ಸರಾಸರಿ 5 ಸಾವಿರ ರೂ. ಉಳಿತಾಯವಾಗುತ್ತಿದೆ ಎಂದು ಡಿ.ಕೆ. ಶಿವಕುಮಾರ್ ತಿಳಿಸಿದರು.

### ಬೂತ್‌ಗಳಲ್ಲಿ ಕಾರ್ಮಿಕರನ್ನು ಸಂಘಟಿಸಿ

"ಕಾರ್ಮಿಕ ಘಟಕದವರು ನಿಮ್ಮ ಬೂತ್ ಆಯ್ಕೆ ಮಾಡಿಕೊಂಡು ಸಂಘಟನೆ ಮಾಡಿ. ಗ್ಯಾರಂಟಿ ಫಲಾನುಭವಿಗಳ ಸಂಘಟನೆ ಮಾಡಿ. ಆಗ ನಿಮಗೆ ದೊಡ್ಡಶಕ್ತಿ ಸಿಗುತ್ತದೆ. ನಮ್ಮ ಸರ್ಕಾರ 12,500 ಪೌರ ಕಾರ್ಮಿಕರನ್ನು ಕಾಯಂ ಮಾಡಿ, ಅವರಿಗೆ ಉತ್ತಮ ವೇತನ ಸಿಗುವಂತೆ ಮಾಡಿದ್ದೇವೆ ಎಂದರು.

# ವಿಕಸಿತ ಭಾರತಕ್ಕೆ ಅಭೂತಪೂರ್ವ ಕೊಡುಗೆ ನೀಡಿ ಕಾರ್ಮಿಕರ ವಲಯಕ್ಕೆ ಶೋಭಾ ಕರಂದ್ಲಾಜೆ ಕರೆ

**ಹುಬ್ಬಳ್ಳಿ, ಮೇ 1:** ದೇಶದಲ್ಲಿ ಉದ್ಯೋಗದಾತರು ಹಾಗೂ ಉದ್ಯೋಗಿಗಳು ಪರಸ್ಪರ ಉತ್ತಮ ಸಂಬಂಧ ಹೊಂದಿರಬೇಕು. ಕೆಲಸ ಕೊಡುವವರು ಮತ್ತು ಕೆಲಸ ಮಾಡುವವರು ಇದ್ದಾಗ ಮಾತ್ರ ದೇಶದ ಅಭಿವೃದ್ಧಿ ಸಾಧ್ಯ. 2047ರೊಳಗೆ ಭಾರತವನ್ನು ವಿಕಸಿತ ರಾಷ್ಟ್ರವನ್ನಾಗಿ ಮಾಡಲು ಕಾರ್ಮಿಕರು ಅಭೂತಪೂರ್ವ ಕೊಡುಗೆ ನೀಡಬೇಕು ಎಂದು ಕೇಂದ್ರ ಕಾರ್ಮಿಕ ಹಾಗೂ ಉದ್ಯೋಗ, ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮಗಳ ಸಚಿವೆ ಶೋಭಾ ಕರಂದ್ಲಾಜೆ ಕರೆ ನೀಡಿದರು.



ಗೋಕುಲ ರಸ್ತೆಯ ಹೆಬಸೂರ ಭವನದಲ್ಲಿ ಕಾರ್ಮಿಕರ ರಾಜ್ಯ ವಿಮಾ ನಿಗಮ ವತಿಯಿಂದ ಆಯೋಜಿಸಿದ್ದ ಕಾರ್ಮಿಕರ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ದೇಶದಲ್ಲಿ ಕಾರ್ಮಿಕರ ಚಿಂತನೆ ಬದಲಾಗಬೇಕು. ಪ್ರಧಾನಮಂತ್ರಿ ನರೇಂದ್ರ ಮೋದಿ ಕೂಡ ಒಂದು ಕಾಲದಲ್ಲಿ ಕಾರ್ಮಿಕರಾಗಿದ್ದರು ಎಂದು ಉಲ್ಲೇಖಿಸಿದರು. ಬ್ರಿಟಿಷರ ಕಾಲದ ಕಾನೂನುಗಳು ಇನ್ನೂ ದೇಶದಲ್ಲಿವೆ. ಭಾರತೀಯರಿಗೆ ಭಾರತೀಯತೆ ಇರುವ ಕಾನೂನುಗಳು ಬೇಕು. ಅದಕ್ಕಾಗಿ ಹೊಸ ಲೇಬರ್ ಕೋಡ್ ಜಾರಿಗೆ ತರಲಾಗುತ್ತಿದೆ ಎಂದು ಹೇಳಿದರು.

ಕಾರ್ಮಿಕರಿಗೆ ಸಾಮಾಜಿಕ ಭದ್ರತೆ, ಸಮಾನ ಕೆಲಸಕ್ಕೆ ಸಮಾನ ವೇತನ, ಎಲ್ಲಾ ಕ್ಷೇತ್ರಗಳ ಕಾರ್ಮಿಕರಿಗೆ **ESIC** ಮತ್ತು ಪಿಂಚಣಿ ಸೌಲಭ್ಯ ಒದಗಿಸಬೇಕು. ದೇಶದ ಶೇ.90ರಷ್ಟು ಕಾರ್ಮಿಕರು ESIC ಹಾಗೂ **EPF** ಸೌಲಭ್ಯದಿಂದ ಹೊರಗಿದ್ದಾರೆ. ಅಸಂಘಟಿತ ಕಾರ್ಮಿಕರ ಸಂಖ್ಯೆಯೇ ಹೆಚ್ಚಾಗಿದೆ. ಇ-ಶ್ರಮ ಪೋರ್ಟಲ್‌ನಲ್ಲಿ 32 ಕೋಟಿಗೂ ಹೆಚ್ಚು ಕಾರ್ಮಿಕರು ನೋಂದಣಿ ಮಾಡಿಕೊಂಡಿದ್ದಾರೆ ಎಂದು ಹೇಳಿದರು.

ಮುಂದಿನ ದಿನಗಳಲ್ಲಿ **ESIC** ಉಚಿತ ಚಿಕಿತ್ಸೆ ಎಲ್ಲ ವರ್ಗಕ್ಕೂ ದೊರೆಯಬೇಕು. ಖಾಸಗಿ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆದರೂ ವೆಚ್ಚ ಭರಿಸುವ ವ್ಯವಸ್ಥೆ ಮಾಡಲಾಗುತ್ತದೆ.

ಮುಂದಿನ ದಿನಗಳಲ್ಲಿ ಪಿಎಫ್ ಹಣವನ್ನು ಎಟಿಎಂ ಮೂಲಕ ಪಡೆಯುವ ವ್ಯವಸ್ಥೆ ಜಾರಿಯಾಗಲಿದೆ ಎಂದು ತಿಳಿಸಿದರು. ಶಾಸಕ ಮಹೇಶ್ ಟೆಂಗಿನಕಾಯಿ ಮಾತನಾಡಿದರು. ಕರ್ನಾಟಕ ಗೋವಾದ ಹೆಚ್ಚುವರಿ ಭವಿಷ್ಯನಿಧಿ ಆಯುಕ್ತ ಜಯಕುಮಾರ್, ಪ್ರಾದೇಶಿಕ ಭವಿಷ್ಯ ನಿಧಿ ಆಯುಕ್ತ ಅಶುತೋಷ್ ತಿವಾರಿ, ಸಹಾಯಕ ಕಾರ್ಮಿಕ ಆಯುಕ್ತ ಎಂ. ರಾಮನಾಥನ್, ಎಸ್‌ಎಸ್‌ಓ ನಿರ್ಮಲಾ ಆರ್ ದಾವಣೆ, ಹುಬ್ಬಳ್ಳಿ ಚೇಂಬರ್ ಆಫ್ ಕಾಮರ್ಸ್ ಅಧ್ಯಕ್ಷ ಜಿ.ಕೆ. ಆದಪ್ಪಗೌಡರ, ಮಾಜಿ ಮೇಯರ್ ವೀರಣ್ಣ ಸವದಿ, ಮಹಾದೇವ ಕರಮರಿ, ಸಿದ್ದೇಶ್ವರ ಕಮ್ಮಾರ, ಉದಯ ರೇವಣಕರ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಕಾರ್ಮಿಕರು, ಸಾರ್ವಜನಿಕರು ಇತರರು ಭಾಗವಹಿಸಿದ್ದರು.

ಕಾರ್ಯಕ್ರಮದಲ್ಲಿ ಇಎಸ್‌ಐ ಮತ್ತು ಇಪಿಎಫ್‌ಓ ಫಲಾನುಭವಿಗಳಿಗೆ ಪಿಂಚಣಿ ಮಂಜೂರಾತಿ ಆದೇಶಗಳನ್ನು ವಿತರಿಸಲಾಯಿತು.

# ದೇಶದ ಭವಿಷ್ಯ ರೂಪಿಸುವಲ್ಲಿ ಕಟ್ಟಡ ಕಾರ್ಮಿಕರ ಪಾತ್ರ ಅನನ್ಯ

**ಗದಗ, ಮೇ 1:** ದೇಶದ ಭವ್ಯ ಭವಿಷ್ಯವನ್ನು ನಿಮಿರ್ಸುವಲ್ಲಿ ಕಟ್ಟಡ ಕಾಮಿರ್ಕರ ಪಾತ್ರ ಅನನ್ಯ. ಅಹರ್ನಿಶಿ ಬೆವರು ಸುರಿಸಿ ದುಡಿಯುವ ಕಾರ್ಮಿಕರ ಹಿತರಕ್ಷಣೆಗಾಗಿ ಸರ್ಕಾರ ಜಾರಿಗೆ ತಂದಿರುವ ವಿವಿಧ ಯೋಜನೆಗಳು ಅವರಿಗೆ ಶ್ರೀರಕ್ಷೆ ಆಗಿವೆ ಎಂದು ಕಾನೂನು ಸಚಿವ ಎಚ್.ಕೆ.ಪಾಟೀಲ್ ಹೇಳಿದರು.



ನಗರದ ಡಿಸಿ ಮಿಲ್ ಕಾಂಪೌಂಡ್‌ಆವರಣದಲ್ಲಿ ಕಟ್ಟಡ ನಿರ್ಮಾಣ ಕಾಮಿರ್ಕರ ಮಹಾ ಸಂದ ವತಿಯಿಂದ ಹಮ್ಮಿಕೊಂಡಿದ್ದ ಕಾರ್ಮಿಕ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಕಾಮಿರ್ಕರ ಪಾತ್ರ ಶ್ಲಾಘನೀಯ. ನಮ್ಮ ಕಣ್ಣಿಗೆ ಕಾಣುವ ರಸ್ತೆ, ಮೇಲ್ಸೇತುವೆ, ಕಾಲೇಜುಗಳು, ಮ್ಯೂಸಿಯಂ ಹಾಗೂ ಗುಡಿ ಗುಂಡಾರಗಳನ್ನು ನಿಮಿರ್ಸುವವರು ಕಾಮಿರ್ಕರು. ಸಾವಿರಾರು ವರ್ಷಗಳ ಕಾಲ ಉಳಿಯುವ ಇಂತಹ ಸ್ಮಾರಕಗಳ ಹಿಂದೆ ಕಾರ್ಮಿಕರ ರಕ್ತ ಮತ್ತು ಬೆವರಿದೆ. ದೇಶದಲ್ಲಿ ಕಾರ್ಮಿಕ ಕಲ್ಯಾಣ ಕಾನೂನುಗಳನ್ನು ಜಾರಿಗೆ ತರುವಲ್ಲಿ ಆಸ್ಕರ್ ಫರ್ನಾಂಡಿಸ್ ಮತ್ತು ಮಲ್ಲಿಕಾರ್ಜುನ ಖರ್ಗೆ ಅವರ ಕೊಡುಗೆ ಅಪಾರ. ಅವರ ಪ್ರಯತ್ನದಿಂದಾಗಿ ಇಂದು ಕಾಮಿರ್ಕರಿಗೆ ಸಾಮಾಜಿಕ ಭದ್ರತೆ ಲಭಿಸುತ್ತಿದೆ ಎಂದು ಹೇಳಿದರು.

ಕಾರ್ಮಿಕರ ಕಾರ್ಡ್ ಎಂಬುದು ಎಂಬುದು ಕೇವಲ ಚೀಟಿಯಲ್ಲ. ಅದು ಕಾಮಿರ್ಕರಿಗೆ ಒಂದು ಸರ್ಕಾರಿ ನೌಕರಿಯಷ್ಟೇ ಸಮಾನವಾದ ಭದ್ರತೆ ನೀಡುತ್ತದೆ. ಕೊರೊನಾ ಸಂಕಷ್ಟದ ಸಮಯದಲ್ಲಿ ಕಾಮಿರ್ಕರಿಗೆ ಈ ಕಾರ್ಡ್ ಮೂಲಕ ವಿತರಿಸಲಾದ ಕಿಟ್ ಮತ್ತು ಸಹಾಯಹಸ್ತ ದೊಡ್ಡ ನೆರವು ನೀಡಿದೆ. ಫಲಾನುಭವಿಗಳು ಕಾರ್ಮಿಕರ ಕಾರ್ಡ್‌ನಿಂದ ವಂಚಿತರಾಗಿದ್ದರೆ, ಅಂತಹವರು ಎಂಎಲ್‌ಎ ಕಚೇರಿ ಅಥವಾ ಕಾಮಿರ್ಕ ಸಂಟನೆಗೆ ಅಜಿರ್ ಸಲ್ಲಿಸಿದರೆ ಒಂದು ವಾರದೊಳಗೆ ಕಾರ್ಡ್ ವಿತರಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು.

ಕಟ್ಟಡ ಕಾರ್ಮಿಕರ ಮಕ್ಕಳ ಶೈಕ್ಷಣಿಕ ಅಭಿವೃದ್ಧಿಗಾಗಿ ಗದಗ ಜಿಲ್ಲೆಯಲ್ಲಿ ಸುಸಜ್ಜಿತ ಕಾಮಿರ್ಕರ ಮಕ್ಕಳ ವಸತಿ ಶಾಲೆ ಮಂಜೂರಾಗಿದ್ದು, ಶೀಘ್ರದಲ್ಲೇ ಕಾಮಗಾರಿ ಆರಂಭವಾಗಲಿದೆ. ಕಾರ್ಮಿಕರ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡುವುದು ಸರ್ಕಾರದ ಪ್ರಮುಖ ಗುರಿಯಾಗಿದೆ. ವಸತಿ ಶಾಲೆಗಾಗಿ ಗದಗ ನಗರದ ಸಮೀಪದಲ್ಲಿ 10 ಎಕರೆ ವಿಶಾಲವಾದ ಭೂಮಿಯನ್ನು ಗುರುತಿಸಲಾಗಿದೆ. ಇದೇ ವರ್ಷದಲ್ಲಿ ವಸತಿ ಶಾಲೆಯ ಕಟ್ಟಡ ನಿರ್ಮಾಣಕ್ಕೆ ಭೂಮಿ ಪೂಜೆ ನೆರವೇರಿಸಲಾಗುವುದು. ಮುಂದಿನ ಶೈಕ್ಷಣಿಕ ವರ್ಷದಿಂದಲೇ ಶಾಲೆಯಲ್ಲಿ ಚಟುವಟಿಕೆಗಳು ಆರಂಭವಾಗುವಂತೆ ಕ್ರಮ ಕೈಗೊಳ್ಳಲು ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಎಸೆಸೆಲ್ಸಿ ಹಾಗೂ ಪಿಯುಸಿಯಲ್ಲಿ ಶೇ. 85 ಕ್ಕೂ ಹೆಚ್ಚು ಅಂಕ ಪಡೆದ ಕಟ್ಟಡ ಕಾಮಿರ್ಕರ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು. ಅಭಿನವ ಕೊಟ್ಟೂರು ಶ್ರೀಗಳು, ವಿಧಾನ ಪರಿಷತ್ ಶಾಸಕ ಎಸ್. ವಿ. ಸಂಕನೂರು, ನಾಗರಾಭಿವೃದ್ಧಿ ಪ್ರಾಧಿಕಾರದ ಅಧ್ಯ ಅಕ್ಬರಸಾಬ್ ಬಬಜಿರ್, ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯ ಬಿ. ಬಿ. ಅಸೂಟಿ, ಕಟ್ಟಡ ನಿರ್ಮಾಣ ಕಾಮಿರ್ಕರ ಸಂದ ಅಧ್ಯ ಮಹಬೂಬ್ ಖಾನ್ ಪಠಾಣ್, ನಗರಸಭೆ ಮಾಜಿ ಅಧ್ಯೆ ಉಷಾ ದಾಸರ ಹಲವರು ಇದ್ದರು.

# ವಿಜಯಪುರದಲ್ಲಿ ಸಾಬೂನು ಕಾರ್ಖಾನೆ ಸ್ಥಾಪನೆಗೆ ಸಂಪುಟ ಅನುಮೋದನೆ

■ 227 ಕೋಟಿ ವೆಚ್ಚದಲ್ಲಿ ನಿರ್ಮಾಣ: ಸಚಿವ ಎಂ.ಬಿ. ಪಾಟೀಲ್ ಮಾಹಿತಿ

**ಬೆಂಗಳೂರು, ಮೇ 1:** ಕರ್ನಾಟಕ ಸಾಬೂನು ಮತ್ತು ಮಾರ್ಜಕ ನಿಯಮಿತದ ಉತ್ಪಾದನಾ ಘಟಕವನ್ನು ವಿಜಯಪುರದಲ್ಲಿ ಸ್ಥಾಪಿಸಲು ಸರ್ಕಾರ ಅನುಮೋದನೆ ನೀಡಿದೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ. ಪಾಟೀಲ್ ಮಾಹಿತಿ ನೀಡಿದ್ದಾರೆ.

ವಿಜಯಪುರದಲ್ಲಿ 227.91 ಕೋಟಿ ರೂ. ವೆಚ್ಚದಲ್ಲಿ ಸರಕಾರಿ ಸ್ವಾಮ್ಯದ ಕರ್ನಾಟಕ ಸಾಬೂನು ಮತ್ತು ಮಾರ್ಜಕ ನಿಯಮಿತದ (ಕೆ.ಎಸ್.ಡಿ.ಎಲ್) ನೂತನ ಉತ್ಪಾದನಾ ಘಟಕ ಸ್ಥಾಪಿಸುವ ಯೋಜನೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ಗುರುವಾರ ನಡೆದ ಸಚಿವ ಸಂಪುಟ ಸಭೆ ಅನುಮೋದನೆ ನೀಡಲಾಯಿತು. ಇದಕ್ಕಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸಹಿತ ಸಂಪುಟ ಸಹೋದ್ಯೋಗಿಗಳಿಗೆ ಧನ್ಯವಾದಗಳು ಎಂದಿದ್ದಾರೆ.

ಸಂಸ್ಥೆಯ ಉತ್ಪನ್ನಗಳಿಗೆ ಉತ್ತರ ಕರ್ನಾಟಕ ಸೇರಿ ತೆಲಂಗಾಣ, ಆಂಧ್ರಪ್ರದೇಶ, ಮಹಾರಾಷ್ಟ್ರ ಮುಂತಾದ ರಾಜ್ಯಗಳಲ್ಲಿ ಅಪಾರ ಬೇಡಿಕೆ ಇದೆ. ಸದ್ಯ ವಿಜಯಪುರದ ಇಟ್ಟಂಗಿಹಾಳ ಕೈಗಾರಿಕಾ ಪ್ರದೇಶದಲ್ಲಿ 50 ಎಕರೆ ಜಾಗದಲ್ಲಿ ಸಾಬೂನು ಕಾರ್ಖಾನೆಯ ನೂತನ ಉತ್ಪಾದನಾ ಘಟಕ ಆರಂಭಿಸಲಾಗುವುದು. ಇದರಿಂದ ಆ ಭಾಗದಲ್ಲಿ ಕೈಗಾರಿಕಾ ಬೆಳವಣಿಗೆ, ಉದ್ಯೋಗಸೃಷ್ಟಿ ಮತ್ತು ಮಾರುಕಟ್ಟೆ ವಿಸ್ತರಣೆ ಸಾಧ್ಯವಾಗಲಿದೆ ಎಂದರು.

227.91 ಕೋಟಿ ರೂ.ಗಳಲ್ಲಿ ಭೂಮಿ ಖರೀದಿಗೆ 30 ಕೋಟಿ ರೂ, ಉತ್ಪಾದನಾ ಸ್ಥಾವರ ನಿರ್ಮಾಣಕ್ಕೆ 77.88 ಕೋಟಿ ರೂ, ಮೂಲಸೌಕರ್ಯ ವ್ಯವಸ್ಥೆಗೆ 24 ಕೋಟಿ ರೂ, ಯಂತ್ರೋಪಕರಣಗಳ ಖರೀದಿಗೆ 70.80 ಕೋಟಿ ರೂ, ಟೆಂಡರ್ ಪ್ರೀಮಿಯಂಗೆ 8.63 ಕೋಟಿ ರೂ, ಸಾದಿಲ್ವಾರು ವೆಚ್ಚಕ್ಕೆ 8.63 ಕೋಟಿ ರೂ, ಮತ್ತು ಇತರೆ ವೆಚ್ಚಗಳಿಗೆಂದು 7.97 ಕೋಟಿ ರೂ ಮೀಸಲಿಡಲಾಗಿದೆ.

ಇಲ್ಲಿ ಎಕರೆಗೆ 59.30 ಲಕ್ಷ ರೂ. ನಿಗದಿಪಡಿಸಲಾಗಿದೆ. ನೂತನ ಘಟಕದ ಆರಂಭವು ಸಂಸ್ಥೆಗೆ ಮತ್ತಷ್ಟು ಬಲ ತರಲಿದೆ ಎಂದು ಪಾಟೀಲ ವಿಶ್ವಾಸ ವ್ಯಕ್ತಪಡಿಸಿದರು. ಸಂಸ್ಥೆಯ ಉತ್ಕರ್ಷಕ್ಕೆ ಕಳೆದ ಮೂರು ವರ್ಷಗಳಿಂದ ಬ್ರ್ಯಾಂಡಿಂಗ್, ಪ್ರಚಾರ, ಮಾರುಕಟ್ಟೆ, ಗುಣಮಟ್ಟ ನಿರ್ವಹಣೆ, ರಫ್ತು ವಹಿವಾಟು, ಇ-ಕಾಮರ್ಸ್ ಸೇರಿದಂತೆ ಹಲವು ಉಪಕ್ರಮಗಳನ್ನು ತೆಗೆದುಕೊಳ್ಳಲಾಗಿದೆ ಎಂದು ಹೇಳಿದರು.

# ಬಾಹ್ಯಾಕಾಶ ಆರ್ಥಿಕತೆ ಉತ್ತೇಜಿಸಲು ಶ್ರೇಷ್ಠತಾ ಕೇಂದ್ರ ಆರಂಭ

**ಬೆಂಗಳೂರು, ಮೇ 1:** ವ್ಯಾಪಕವಾಗಿ ಬೆಳೆಯುತ್ತಿರುವ ದೇಶದ ಬಾಹ್ಯಾಕಾಶ ಆರ್ಥಿಕತೆಗೆ ಗಮನಾರ್ಹ ಉತ್ತೇಜನ ನೀಡಲು ರಾಜ್ಯ ಸರ್ಕಾರದ ನೇತೃತ್ವದಲ್ಲಿನ ದೇಶದ ಮೊಟ್ಟಮೊದಲ ಬಾಹ್ಯಾಕಾಶ ತಂತ್ರಜ್ಞಾನ ಶ್ರೇಷ್ಠತಾ ಕೇಂದ್ರ ಬೆಂಗಳೂರಿನಲ್ಲಿ ಶುಕ್ರವಾರ ಕಾರ್ಯಾರಂಭ ಮಾಡಿದೆ. ಈ ಶ್ರೇಷ್ಠತಾ ಕೇಂದ್ರದ ಕಾರ್ಯವಿಧಾನ ಬಲಪಡಿಸುವುದಕ್ಕೆ ನೆರವಾಗಲು ಅಮೆರಿಕದ ಹ್ಯಾಲೋಜೆನ್ ಕಾರ್ಪೊರೇಷನ್ ಸೇರಿದಂತೆ ಐದು ಒಪ್ಪಂದಗಳಿಗೆ ಅಂಕಿತ ಹಾಕಲಾಗಿದೆ.



ರಾಜ್ಯ ಸರ್ಕಾರವು ಎಸ್‌ಐಎ-ಇಂಡಿಯಾ ಸಹಯೋಗದಲ್ಲಿ ಕರ್ನಾಟಕ ನಾವೀನ್ಯತೆ ಮತ್ತು ತಂತ್ರಜ್ಞಾನ ಸಂಸ್ಥೆ (ಕೆಐಟಿಎಸ್) ಮೂಲಕ ಸ್ಥಾಪಿಸಿರುವ ಈ ಕೇಂದ್ರವನ್ನು ವಿದ್ಯುನ್ಮಾನ, ಐಟಿ/ಬಿಟಿ ಸಚಿವ ಪ್ರಿಯಾಂಕ್ ಖರ್ಗೆ ಉದ್ಘಾಟಿಸಿದರು.

ಬಾಹ್ಯಾಕಾಶ ವಲಯದಲ್ಲಿನ ನಾವೀನ್ಯತೆಯ ಪ್ರಯೋಜನವನ್ನು ವಿವಿಧ ವಲಯಗಳಲ್ಲಿ ಬಳಕೆಗೆ ತರಲು ಹಾಗೂ ವಾಣಿಜ್ಯ ಉದ್ದೇಶಗಳಿಗೆ ಬಳಸಿಕೊಳ್ಳುವುದಕ್ಕೆ ದೇಶದ ಸಾಮರ್ಥ್ಯಗಳನ್ನು ಬಲಪಡಿಸುವಲ್ಲಿ ಈ ಉಪಕ್ರಮವು ಒಂದು ಪ್ರಮುಖ ಹೆಜ್ಜೆಯಾಗಿದೆ.

ರಾಜ್ಯ ಸರ್ಕಾರದ ಎಲೆಕ್ಟ್ರಾನಿಕ್ಸ್, ಐಟಿ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಕಾರ್ಯದರ್ಶಿ ಡಾ. ಮಂಜುಳಾ ಎನ್., ಎಸ್‌ಐಎ-ಇಂಡಿಯಾ ಅಧ್ಯಕ್ಷ ಸುಬ್ಬರಾವ್ ಪವುಲೂರಿ, ಎಸ್‌ಐಎ-ಇಂಡಿಯಾ ಮಹಾನಿರ್ದೇಶಕ ಅನಿಲ್ ಪ್ರಕಾಶ್, ಸರ್ಕಾರದ ಇತರ ಉನ್ನತಾಧಿಕಾರಿಗಳು, ಉದ್ಯಮ ಮುಖಂಡರು ಮತ್ತು ವೈಜ್ಞಾನಿಕ ಸಮುದಾಯದ ಗಣ್ಯರು ಸಮಾರಂಭದಲ್ಲಿ ಭಾಗವಹಿಸಿದ್ದರು.

ಸಚಿವ ಪ್ರಿಯಾಂಕ್ ಖರ್ಗೆ ಮಾತನಾಡಿ, "ದೇಶದ ತಂತ್ರಜ್ಞಾನ ಮತ್ತು ನಾವೀನ್ಯತೆಯ ಪಯಣದಲ್ಲಿ ಕರ್ನಾಟಕವು ನಿರಂತರವಾಗಿ ಮುಂಚೂಣಿಯಲ್ಲಿದೆ. ಈ ಬಾಹ್ಯಾಕಾಶ ತಂತ್ರಜ್ಞಾನ ಶ್ರೇಷ್ಠತಾ ಕೇಂದ್ರವನ್ನು ಪ್ರಾರಂಭಿಸುವುದರೊಂದಿಗೆ, ನಾವು ರಾಜ್ಯದ ನಾಯಕತ್ವವನ್ನು ಭವಿಷ್ಯದ ಅತ್ಯಂತ ಮಹತ್ವದ ಕ್ಷೇತ್ರಗಳಲ್ಲಿ ಒಂದಾಗಿರುವ ಬಾಹ್ಯಾಕಾಶ ತಂತ್ರಜ್ಞಾನಕ್ಕೆ ವಿಸ್ತರಿಸುತ್ತಿದ್ದೇವೆ. ಸಂಶೋಧನೆಗಳನ್ನು ಮುಂದುವರಿಸುವುದರ ಬಗ್ಗೆ ಮಾತ್ರ ನಾವು ಗಮನ ಕೇಂದ್ರೀಕರಿಸಿಲ್ಲ. ವಾಸ್ತವ ಬದುಕಿಗೆ ನಾವೀನ್ಯತೆಯು ಪ್ರಯೋಜನಕ್ಕೆ ಬರುವ ರೀತಿಯಲ್ಲಿ, ಆರ್ಥಿಕ ಬೆಳವಣಿಗೆಗೆ ನೆರವಾಗುವ ಮತ್ತು ಉತ್ತಮ-ಗುಣಮಟ್ಟದ ಉದ್ಯೋಗಗಳಾಗಿ ಪರಿವರ್ತಿಸಬಹುದಾದ ಪೂರಕ ವ್ಯವಸ್ಥೆ ನಿರ್ಮಾಣ ಮಾಡುವುದಕ್ಕೆ ಗಮನ ಕೇಂದ್ರೀಕರಿಸಲಾಗಿದೆ. ಈ ಕೇಂದ್ರವು ಕರ್ನಾಟಕವನ್ನು ಭಾರತದ ಬಾಹ್ಯಾಕಾಶ ಆರ್ಥಿಕತೆಯ ಪ್ರಮುಖ ಚಾಲಕನ ಸ್ಥಾನದಲ್ಲಿ ಇರಿಸುವಲ್ಲಿ ಮಹತ್ವದ ಪಾತ್ರ ನಿರ್ವಹಿಸಲಿದೆ ಎಂದು ಹೇಳಿದ್ದಾರೆ.

ರಾಜ್ಯದ ಐಟಿ, ಬಿಟಿ ಮತ್ತು ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಕಾರ್ಯದರ್ಶಿ ಡಾ. ಮಂಜುಳಾ ಎನ್. ಅವರು ಮಾತನಾಡಿ, "ಸರ್ಕಾರ, ಕೈಗಾರಿಕೆ, ನವೋದ್ಯಮಗಳು ಮತ್ತು ಶೈಕ್ಷಣಿಕ ವಲಯಗಳು ಸಮನ್ವಯದ ವೇದಿಕೆಯಾಗಿ ಕಾರ್ಯನಿರ್ವಹಿಸುವ ರೀತಿಯಲ್ಲಿ ಈ ಶ್ರೇಷ್ಠತಾ ಕೇಂದ್ರವನ್ನು ವಿನ್ಯಾಸಗೊಳಿಸಲಾಗಿದೆ.

ಕುಶಲ ಮಾನವ ಸಂಪನ್ಮೂಲ ಅಭಿವೃದ್ಧಿ, ಅನ್ವಯಿಕ ಸಂಶೋಧನೆ ಮತ್ತು ಪೂರಕ ವ್ಯವಸ್ಥೆಯ ನಿರ್ಮಾಣದ ಮೇಲೆ ಗಮನ ಕೇಂದ್ರೀಕರಿಸುವ ಮೂಲಕ, ಕಾರ್ಯಸಾಧ್ಯವಾದ ಮತ್ತು ಸುಸ್ಥಿರ ಸ್ವರೂಪದ ನಾವೀನ್ಯತೆಯ ಅವಕಾಶಗಳನ್ನು ಅಭಿವೃದ್ಧಿಪಡಿಸುವ ಗುರಿಯನ್ನು ನಾವು

> ದೇಶದ ಬಾಹ್ಯಾಕಾಶ ಆರ್ಥಿಕತೆಯ ಪ್ರಮುಖ ಚಾಲಕಶಕ್ತಿಯನ್ನಾಗಿ ಕರ್ನಾಟಕವನ್ನು ಅಭಿವೃದ್ಧಿಪಡಿಸುವಲ್ಲಿ ಈ ಶ್ರೇಷ್ಠತಾ ಕೇಂದ್ರವು ಮಹತ್ವದ ಪಾತ್ರ ನಿರ್ವಹಿಸಲಿದೆ
> **-ಪ್ರಿಯಾಂಕ್ ಖರ್ಗೆ । ಐಟಿ-ಬಿಟಿ ಸಚಿವ**

- ಬಾಹ್ಯಾಕಾಶ ತಂತ್ರಜ್ಞಾನಗಳಲ್ಲಿ ಸುಧಾರಿತ ಸಂಶೋಧನೆ ಮತ್ತು ನಾವೀನ್ಯತೆ
- ಉದ್ಯಮದ ನೆರವಿನಿಂದ ತರಬೇತಿ ಮತ್ತು ಕುಶಲ ಮಾನವ ಸಂಪನ್ಮೂಲ ಅಭಿವೃದ್ಧಿ
- ನವೋದ್ಯಮಗಳಿಗೆ ಚಿಮ್ಮುಹಲಗೆಯಾಗಿ ಕಾರ್ಯನಿರ್ವಹಿಸುವ ಸಂಸ್ಥೆಗಳಿಗೆ ಉತ್ತೇಜನ ಮತ್ತು ಪೂರಕ ಪರಿಸರ ನಿರ್ಮಾಣ
- ವಿವಿಧ ವಲಯಗಳಲ್ಲಿ ಬಾಹ್ಯಾಕಾಶ ತಂತ್ರಜ್ಞಾನಗಳ ಬಳಕೆ
- ಐದು ಒಪ್ಪಂದಗಳಿಗೆ ಅಂಕಿತ
- ರಾಜ್ಯ ಸರ್ಕಾರದ ನೇತೃತ್ವದಲ್ಲಿನ ದೇಶದ ಮೊದಲ ಶ್ರೇಷ್ಠತಾ ಕೇಂದ್ರ
- ಬಾಹ್ಯಾಕಾಶ ನಾವೀನ್ಯತೆಯ ರಾಷ್ಟ್ರೀಯ ಕೇಂದ್ರವಾಗಿ ಬಲಗೊಂಡ ಕರ್ನಾಟಕದ ಸ್ಥಾನ
- ಕೃಷಿ, ಹವಾಮಾನ, ನೈಸರ್ಗಿಕ ವಿಪತ್ತು ನಿರ್ವಹಣೆ, ಸಂವಹನ, ಔಷಧ, ಜೀವ ವಿಜ್ಞಾನ ಮತ್ತು ರಾಷ್ಟ್ರೀಯ ಸುರಕ್ಷತೆಯಂತಹ ಕ್ಷೇತ್ರಗಳಲ್ಲಿನ ಸವಾಲುಗಳಿಗೆ ಬಾಹ್ಯಾಕಾಶ ತಂತ್ರಜ್ಞಾನಗಳ ಬಳಕೆಗೆ ಅವಕಾಶ
- ಕೇಂದ್ರದ ಕಾರ್ಯವಿಧಾನ ಬಲಪಡಿಸಲು ನೆರವಾಗುವ ಐದು ಒಪ್ಪಂದಗಳಿಗೆ ಅಂಕಿತ

# ಮದ್ಯ ಸೇವಿಸಿ ಮುಖ್ಯಮಂತ್ರಿ ಕಲಾಪಕ್ಕೆ ಬಂದ ಆರೋಪ: ಪಂಜಾಬ್ ವಿಧಾನಸಭೆಯಲ್ಲಿ ಹೈಡ್ರಾಮ

**ಚಂಡೀಗಢ:** ಕಾರ್ಮಿಕರ ದಿನದ ಅಂಗವಾಗಿ ಕರೆದಿದ್ದ ವಿಶೇಷ ಅಧಿವೇಶನದಲ್ಲಿ ಮುಖ್ಯಮಂತ್ರಿ ಭಗವಂತ್ ಮಾನ್ ಅವರು ತೂರಾಡಿಕೊಂಡು ಮದ್ಯದ ಅಮಲಿನಲ್ಲಿ ಸದನಕ್ಕೆ ಬಂದಿದ್ದಾರೆ ಎಂಬ ಆರೋಪದ ಹಿನ್ನೆಲೆಯಲ್ಲಿ ಪಂಜಾಬ್ ವಿಧಾನಸಭೆಯಲ್ಲಿ ಭಾರಿ ಗದ್ದಲ ಉಂಟಾಯಿತು.

ಕಾಂಗ್ರೆಸ್ ಶಾಸಕರೊಬ್ಬರು ಮುಖ್ಯಮಂತ್ರಿಯವರ ಮೇಲೆ ಈ ಆರೋಪ ಮಾಡುತ್ತಿದ್ದಂತೆ ಸದನದಲ್ಲಿ ಉದ್ವಿಗ್ನ ವಾತಾವರಣ ನಿರ್ಮಾಣವಾಯಿತು. ವಿರೋಧ ಪಕ್ಷದ ನಾಯಕ ಪ್ರತಾಪ್‌ಸಿಂಗ್ ಬಜ್ವಾ ಎಲ್ಲ ಶಾಸಕರಿಗೂ ಆಲ್ಕೋಹಾಲ್ ಮೀಟರ್ ಪರೀಕ್ಷೆ ನಡೆಸಬೇಕು ಎಂದು ಆಗ್ರಹಿಸಿದರು. ರಾಜ್ಯದ ಮುಖ್ಯಸ್ಥರ ವಿರುದ್ಧ ಗಂಭೀರ



ಆರೋಪ ಕೇಳಿಬಂದಿರುವುದರಿಂದ ಸತ್ಯಾಸತ್ಯತೆ ಹೊರತರುವ ಉದ್ದೇಶದಿಂದ ಪ್ರತಿಯೊಬ್ಬ ಸದಸ್ಯನಿಗೂ ಪರೀಕ್ಷೆ ನಡೆಸಬೇಕು ಎಂದು ಅವರು ಹೇಳಿದರು.

ಶಿರೋಮಣಿ ಅಕಾಲಿದಳ ಕೂಡ ಈ ವಿಚಾರದಲ್ಲಿ ಆಗ್ರಹಿಸಿದ್ದು, ವಿಧಾನಸಭೆಯ ದೃಶ್ಯಾವಳಿಗಳನ್ನು ಬಿಡುಗಡೆ ಮಾಡಿ ಮುಖ್ಯಮಂತ್ರಿಯವರ ವಿರುದ್ಧ ಟೀಕಿಸಿದೆ. ಕಾರ್ಮಿಕ ದಿನದಂದು ಮದ್ಯ ಸೇವಿಸಿ ತೂರಾಡಿಕೊಂಡು ಸದನಕ್ಕೆ ಬಂದಿದ್ದಾರೆ ಎನ್ನುವುದು ನಾಚಿಕೆಗೇಡಿನ ಸಂಗತಿ ಎಂದು ಪಕ್ಷ ಹೇಳಿಕೆ ನೀಡಿದೆ. ಮುಖ್ಯಮಂತ್ರಿಯವರ ನಡವಳಿಕೆಯನ್ನು ಸಾರ್ವಜನಿಕರು ಗಮನಿಸಬೇಕೆಂದು ಮನವಿ ಮಾಡಿದೆ. ಮುಖ್ಯಮಂತ್ರಿಯನ್ನು ಸಾರ್ವಜನಿಕವಾಗಿ ಡೋಪ್ ಪರೀಕ್ಷೆಗೆ ಒಳಪಡಿಸಬೇಕು ಎಂಬ ಬೇಡಿಕೆಯನ್ನು ಅಕಾಲಿದಳ ಮುಂದಿಟ್ಟಿದೆ. ಇದರಿಂದ ರಾಜಕೀಯ ವಾಗ್ವಾದ ಮತ್ತಷ್ಟು ತೀವ್ರಗೊಂಡಿದೆ.

ಈ ಆರೋಪಗಳಿಗೆ ಪ್ರತಿಕ್ರಿಯಿಸಿದ ಮುಖ್ಯಮಂತ್ರಿ ಭಗವಂತ್ ಮಾನ್, ಕಾರ್ಮಿಕ ದಿನದ ವಿಶೇಷ ಅಧಿವೇಶನವು ಕಾರ್ಮಿಕ ವರ್ಗಕ್ಕೆ ಗೌರವ ಸಲ್ಲಿಸುವ ಉದ್ದೇಶದಿಂದ ಕರೆದಿರುವುದಾಗಿ ಸ್ಪಷ್ಟಪಡಿಸಿದರು. ಅನಾವಶ್ಯಕ ಆರೋಪ?ಪ್ರತ್ಯಾರೋಪಗಳನ್ನು ತಪ್ಪಿಸಿ ಸದನದ ಗೌರವ ಕಾಪಾಡಿಕೊಳ್ಳಬೇಕು ಎಂದು ಅವರು ಸದಸ್ಯರಿಗೆ ಮನವಿ ಮಾಡಿದರು.

ರಾಜ್ಯದ ಕಾರ್ಮಿಕರಿಗೆ ಗೌರವ ಸಲ್ಲಿಸಲು ಮೇ 1ರಂದು ವಿಶೇಷ ಅಧಿವೇಶನವನ್ನು ಕರೆದಿರುವುದಾಗಿ ಆಮ್ ಆದ್ಮಿ ಪಕ್ಷದ ಸರಕಾರ ತಿಳಿಸಿತ್ತು. ಆದರೆ, ಸರಕಾರ ತನ್ನ ಅಧಿಕಾರಾವಧಿಯ ಕೊನೆಯ ಹಂತದಲ್ಲಿರುವ ಸಂದರ್ಭದಲ್ಲಿಯೇ ಈ ಅಧಿವೇಶನದ ಉದ್ದೇಶವೇನು ಎಂಬ ಪ್ರಶ್ನೆಯನ್ನು ಕಾಂಗ್ರೆಸ್ ನಾಯಕರು ಎತ್ತಿದ್ದಾರೆ.



ಅದಾನಿ ಗ್ರೂಪ್‌ನ ಅಧ್ಯಕ್ಷ ಗೌತಮ್ ಅದಾನಿ ಮತ್ತು ಅವರ ಪತ್ನಿ ಪ್ರೀತಿ ಅದಾನಿ ಶುಕ್ರವಾರ ಉತ್ತರಾಖಂಡದ ರುದ್ರಪ್ರಯಾಗದಲ್ಲಿ ತಮ್ಮ 40ನೇ ವಿವಾಹ ವಾರ್ಷಿಕೋತ್ಸವದಂದು ಕೇದಾರನಾಥ ಧಾಮದಲ್ಲಿ ಪ್ರಾರ್ಥನೆ ಸಲ್ಲಿಸಿದರು.

# ಅಡುಗೆ ಅನಿಲ ಬೆಲೆ ಏರಿಕೆ: ಮೋದಿ ಹಣದುಬ್ಬರ ಮನುಷ್ಯ ಎಂದ ಕಾಂಗ್ರೆಸ್

**ನವದೆಹಲಿ, ಮೇ 1:** ವಾಣಿಜ್ಯ ಬಳಕೆಯ ಎಲ್ಪಿಜಿ ಸಿಲಿಂಡರ್ ಬೆಲೆಯಲ್ಲಿ ಬರೋಬ್ಬರಿ 993 ರೂ. ಭಾರಿ ಏರಿಕೆ ಮಾಡಿರುವ ಕೇಂದ್ರ ಸರ್ಕಾರದ ಕ್ರಮವನ್ನು ತೀವ್ರವಾಗಿ ಖಂಡಿಸಿರುವ ಕಾಂಗ್ರೆಸ್, ಪ್ರಧಾನಿ ನರೇಂದ್ರ ಮೋದಿಯವರನ್ನು 'ಇನ್ಫ್ಲೇಷನ್ ಮ್ಯಾನ್' (ಹಣದುಬ್ಬರದ ಮನುಷ್ಯ) ಎಂದು ಜರೆದಿದೆ. ಈ ನಿರಂತರ ಬೆಲೆ ಏರಿಕೆಯು ಸಣ್ಣ ಉದ್ಯಮಿಗಳ ಮೇಲೆ ತೀವ್ರ ಆರ್ಥಿಕ ಹೊರೆ ಹಾಕುತ್ತಿದೆ ಎಂದು ಪಕ್ಷ ಆರೋಪಿಸಿದೆ.



19 ಕೆಜಿ ತೂಕದ ವಾಣಿಜ್ಯ ಎಲ್ಪಿಜಿ ಸಿಲಿಂಡರ್ ಬೆಲೆಯನ್ನು 993 ರೂ. ಹೆಚ್ಚಿಸಿರುವುದರಿಂದ, ನವದೆಹಲಿಯಲ್ಲಿ ಈಗ ಒಂದು ಸಿಲಿಂಡರ್ ಬೆಲೆ 3,071.50 ರೂ. ಗೆ ತಲುಪಿದೆ. ಇದರೊಂದಿಗೆ 5 ಕೆಜಿ ಮುಕ್ತ ವ್ಯಾಪಾರದ ಎಲ್ಪಿಜಿ ಸಿಲಿಂಡರ್ ಬೆಲೆಯನ್ನು ಕೂಡ ಪ್ರತಿ ಯೂನಿಟ್ಗೆ 261 ರೂ. ರಷ್ಟು ಹೆಚ್ಚಿಸಲಾಗಿದೆ.

'ಎಕ್ಸ್' ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಕಾಂಗ್ರೆಸ್, ಕಳೆದ ನಾಲ್ಕು ತಿಂಗಳುಗಳಲ್ಲಿ ವಾಣಿಜ್ಯ ಸಿಲಿಂಡರ್ ಬೆಲೆಯಲ್ಲಿ ಆಗಿರುವ ನಿರಂತರ ಏರಿಕೆಯ ಅಂಕಿಅಂಶಗಳನ್ನು ಬಿಚ್ಚಿಟ್ಟಿದೆ. 'ಇನ್ಫ್ಲೇಷನ್ ಮ್ಯಾನ್ ಮೋದಿ' ಮತ್ತೆ ತಮ್ಮ ಚಾಟಿ ಬೀಸಿದ್ದಾರೆ ಎಂದು ಟೀಕಿಸಿರುವ ಪಕ್ಷವು, ಜನವರಿ 1 ರಂದು 111 ರೂ., ಫೆಬ್ರವರಿ 1 ರಂದು 50 ರೂ., ಮಾರ್ಚ್ 1 ರಂದು 31 ರೂ., ಮಾರ್ಚ್ 7 ರಂದು 115 ರೂ., ಏಪ್ರಿಲ್ 1 ರಂದು 218 ರೂ. ಹಾಗೂ ಮೇ 1 ರಂದು 993 ರೂ. ಬೆಲೆ ಹೆಚ್ಚಿಸಲಾಗಿದೆ ಎಂದು ವಿವರಿಸಿದೆ. ಈ ಮೂಲಕ ಕೇವಲ ನಾಲ್ಕು ತಿಂಗಳಲ್ಲಿ ವಾಣಿಜ್ಯ ಸಿಲಿಂಡರ್ ಬೆಲೆಯಲ್ಲಿ ಒಟ್ಟು 1,518 ರೂ. ದುಬಾರಿ ಏರಿಕೆಯಾಗಿದೆ. ವರ್ಷದಲ್ಲಿ ಇನ್ನೂ ಎಂಟು ತಿಂಗಳುಗಳು ಬಾಕಿ ಉಳಿದಿದ್ದು, ಮೋದಿಯವರ ಸುಲಿಗೆ ಹೀಗೆಯೇ ಮುಂದುವರಿಯುತ್ತಿದೆ ಎಂದು ಕಾಂಗ್ರೆಸ್ ಕಟುವಾಗಿ ಟೀಕಿಸಿದೆ.

# ಕಾಂಗ್ರೆಸ್ ನಾಯಕ ಪವನ್ ಖೇರಾಗೆ ನಿರೀಕ್ಷಣಾ ಜಾಮೀನು

**ನವದೆಹಲಿ:** ಅಸ್ಸಾಂ ಮುಖ್ಯಮಂತ್ರಿ ಹಿಮಂತ ಬಿಸ್ವಾ ಶರ್ಮಾ ಅವರ ಪತ್ನಿ ಹಲವು ದೇಶಗಳ ಪಾಸ್ಪೋರ್ಟ್ ಮತ್ತು ಬಹಿರಂಗಪಡಿಸದ ಆಸ್ತಿಗಳನ್ನು ಹೊಂದಿದ್ದಾರೆ ಎಂಬ ಆರೋಪ ಸಂಬಂಧ ದಾಖಲಾಗಿದ್ದ ಪ್ರಕರಣದಲ್ಲಿ ಕಾಂಗ್ರೆಸ್ ನಾಯಕ ಪವನ್ ಖೇರಾ ಅವರಿಗೆ ಸುಪ್ರೀಂ ಕೋರ್ಟ್ ನಿರೀಕ್ಷಣಾ ಜಾಮೀನು ನೀಡಿದೆ.

ನಿರೀಕ್ಷಣಾ ಜಾಮೀನು ಕೋರಿ ಖೇರಾ ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ಸುಪ್ರೀಂ ನ್ಯಾಯಮೂರ್ತಿಗಳಾದ ಜೆ.ಕೆ. ಮಹೇಶ್ವರಿ ಮತ್ತು ಎ.ಎಸ್. ಚಂದೂರ್ಕರ್ ಅವರ ಪೀಠವು ಇಂದು ತೀರ್ಪು ನೀಡಿದೆ.

ಖೇರಾ ಪರ ವಾದ ಮಂಡಿಸಿದ ಹಿರಿಯ ವಕೀಲ ಅಭಿಷೇಕ್ ಸಿಂಘ್ವಿ, ಪವನ್ ಖೇರಾ ವಿರುದ್ಧದ ಆರೋಪಗಳು ವಿಚಾರಣೆಯ ವಿಷಯವಾಗಿದ್ದು, ಅವರನ್ನು ಬಂಧಿಸುವ ಮೂಲಕ ಅವಮಾನಿಸುವ ಅಗತ್ಯವಿಲ್ಲ. ಅವರ ವಿರುದ್ಧ ದಾಖಲಾಗಿರುವ ಸೆಕ್ಷನ್ಗಳಲ್ಲಿನ ಕೆಲವಕ್ಕೆ ಜಾಮೀನು ನೀಡಬಹುದು, ಇನ್ನು ಕೆಲವು ಸೆಕ್ಷನ್ಗಳಲ್ಲಿ ಬಂಧಿಸುವ ಅಗತ್ಯವಿಲ್ಲ ಎಂದು ಪೀಠಕ್ಕೆ ತಿಳಿಸಿದರು.

ಅಸ್ಸಾಂ ಸರ್ಕಾರದ ಪರವಾಗಿ ಹಾಜರಾದ ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ, ಮುಖ್ಯಮಂತ್ರಿ ಹಿಮಂತ ಬಿಸ್ವಾ ಶರ್ಮಾ ಅವರ ಪತ್ನಿಯ ಪಾಸ್ಪೋರ್ಟ್ಗಳ ನಕಲಿ ಪ್ರತಿಗಳನ್ನು ಖೇರಾ ತೋರಿಸಿದ್ದಾರೆ. ಖೇರಾ ತಲೆಮರೆಸಿಕೊಂಡು ವಿಡಿಯೋಗಳನ್ನು ಬಿಡುಗಡೆ ಮಾಡುತ್ತಿದ್ದಾರೆ ಮತ್ತು ಸಿಎಂ ಪತ್ನಿ ಬಹು ಪೌರತ್ವಗಳನ್ನು ಹೊಂದಿದ್ದಾರೆ ಎಂಬ ಆರೋಪಗಳೆಲ್ಲ ಸುಳ್ಳು ಎಂದು ವಾದಿಸಿದರು

ಎಪ್ರಿಲ್ 24 ರಂದು ಗುವಾಹಟಿ ಹೈಕೋರ್ಟ್ ನಿರೀಕ್ಷಣಾ ಜಾಮೀನು ನೀಡಲು ನಿರಾಕರಿಸಿದ್ದನ್ನು ಪ್ರಶ್ನಿಸಿ ಖೇರಾ ಸುಪ್ರೀಂ ಕೋರ್ಟ್ ಮೆಟ್ಟಿಲೇರಿದ್ದರು.

ತಮ್ಮ ವಿರುದ್ಧ ಆರೋಪ ಮಾಡಿದ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಪತ್ನಿ ರಿನಿಕಿ ಭುಯಾನ್ ಶರ್ಮಾ ಅವರು ಖೇರಾ ಮತ್ತು ಇತರರ ವಿರುದ್ಧ ಗುವಾಹಟಿ ಅಪರಾಧ ಪೊಲೀಸ್ ಠಾಣೆಯಲ್ಲಿ ಭಾರತೀಯ ನ್ಯಾಯ ಸಂಹಿತಾ (ಬಿಎನ್‌ಎಸ್) ನ ವಿವಿಧ ಸೆಕ್ಷನ್ಗಳ ಅಡಿಯಲ್ಲಿ ಕ್ರಿಮಿನಲ್ ಮೊಕದ್ದಮೆ ದಾಖಲಿಸಿದ್ದರು.

# ನರ್ಮದಾ ನದಿಯಲ್ಲಿ ಪ್ರವಾಸಿ ದೋಣಿ ದುರಂತ ಸಾವಿನ ಸಂಖ್ಯೆ 9ಕ್ಕೆ ಏರಿಕೆ, ಇನ್ನೂ ಹಲವರು ನಾಪತ್ತೆ

ಜಬಲ್ಪುರ : ಮಧ್ಯಪ್ರದೇಶದ ಜಬಲ್ಪುರ ಜಿಲ್ಲೆಯ ನರ್ಮದಾ ನದಿಯ ಬರಗಿ ಅಣೆಕಟ್ಟಿನಲ್ಲಿ ಸಂಭವಿಸಿದ ಪ್ರವಾಸಿ ದೋಣಿ ಅವಘಡದಲ್ಲಿ ಮೃತಪಟ್ಟವರ ಸಂಖ್ಯೆ 9ಕ್ಕೆ ಏರಿಕೆಯಾಗಿದೆ. ಶುಕ್ರವಾರ ಮುಂಜಾನೆ ನದಿಯಿಂದ ಇನ್ನೂ ಐದು ಶವಗಳನ್ನು ಹೊರತೆಗೆಯಲಾಗಿದೆ. ಅಲ್ಲದೆ, ಹಲವಾರು ಪ್ರಯಾಣಿಕರು ಇನ್ನೂ ಕಾಣೆಯಾಗಿರುವುದರಿಂದ ರಕ್ಷಣಾ ಕಾರ್ಯಾಚರಣೆ ತೀವ್ರಗೊಂಡಿದೆ.

ಬರಗಿ ಅಣೆಕಟ್ಟಿನಲ್ಲಿ ಗುರುವಾರ ಹಠಾತ್ ಬಿರುಗಾಳಿಯಿಂದಾಗಿ ಸುಮಾರು 40 ಪ್ರಯಾಣಿಕರನ್ನು ಹೊತ್ತೊಯ್ಯುತ್ತಿದ್ದ ಕ್ರೂಸ್ ದೋಣಿ ಮಗುಚಿ ಬಿದ್ದಿದೆ. ಘಟನೆಯ ನಂತರ ತಕ್ಷಣವೇ ರಕ್ಷಣಾ ಕಾರ್ಯಾಚರಣೆಯನ್ನು ಪ್ರಾರಂಭಿಸಲಾಗಿದ್ದು, 22 ಜನರನ್ನು ಸುರಕ್ಷಿತವಾಗಿ ದಡಕ್ಕೆ ಕರೆತರಲಾಗಿದೆ. ಆದರೆ ಇನ್ನೂ ಹಲವರು ಕಾಣೆಯಾಗಿದ್ದಾರೆ ಎಂದು ಬಾರ್ಗಿ ಪೊಲೀಸ್ ವರಿಷ್ಠಾಧಿಕಾರಿ ಅಂಜುಲ್ ಮಿಶ್ರಾ ತಿಳಿಸಿದ್ದಾರೆ.

ಪೊಲೀಸ್, ನಾಗರಿಕ ಆಡಳಿತ ಮತ್ತು ರಾಜ್ಯ ವಿಪತ್ತು ನಿರ್ವಹಣಾ ಪಡೆ ಜಂಟಿ ತಂಡವು ಸ್ಥಳದಲ್ಲಿ ರಕ್ಷಣಾ ಕಾರ್ಯಾಚರಣೆ ನಡೆಸುತ್ತಿದೆ.



ಅವರಿಗೆ ವೃತ್ತಿಪರ ಡೈವರ್ಗಳು, ಮೋಟಾರ್‌ಬೋಟ್ ಮತ್ತು ಸ್ಪೀಡ್ ಬೋಟ್‌ಗಳು ನೆರವು ನೀಡುತ್ತಿವೆ.

ಘಟನಾ ಸ್ಥಳದಲ್ಲಿದ್ದ ಲೋಕೋಪಯೋಗಿ ಸಚಿವ ರಾಕೇಶ್ ಸಿಂಗ್ ಮಾತನಾಡಿ, ಇನ್ನೂ ಐದು ಶವಗಳನ್ನು ಹೊರತೆಗೆಯಲಾಗಿದೆ. ಕೆಲವರು ಲೈಫ್ ಜಾಕೆಟ್ ಧರಿಸಿದ್ದರು. ಅವರು ಕೆಳಗಿನ ಎಸಿ ಕ್ಯಾಬಿನ್‌ನಲ್ಲಿ ಸಿಲುಕಿಕೊಂಡಿದ್ದಾರೆ. ಕ್ರೂಸ್ ಮಗುಚಿ ಬಿದ್ದಾಗ ಅವರಿಗೆ ಹೊರಬರಲು ಸಾಧ್ಯವಾಗಲಿಲ್ಲ ಎಂದು ತಿಳಿಸಿದ್ದಾರೆ.

ಮಧ್ಯಪ್ರದೇಶದ ಮುಖ್ಯಮಂತ್ರಿ ಮೋಹನ್ ಯಾದವ್ ಅವರು ದುರಂತದ ಬಗ್ಗೆ ದುಃಖ ವ್ಯಕ್ತಪಡಿಸಿದ್ದು, ರಕ್ಷಣಾ ಕಾರ್ಯವನ್ನು ತ್ವರಿತಗೊಳಿಸಲು ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

# ಇವಿಎಂ ಅಕ್ರಮ: ಸ್ಟ್ರಾಂಗ್‌ರೂಮ್ ಬಳಿ ಮಮತಾ ಹೈಡ್ರಾಮಾ

**ಕೊಲ್ಕತ್ತಾ, ಮೇ 1:** ಚುನಾವಣಾ ಫಲಿತಾಂಶ ಹೊರಬರಲು ಇನ್ನು ಕೆಲವೇ ದಿನಗಳಿರುವಾಗ ಪಶ್ಚಿಮ ಬಂಗಾಳದಲ್ಲಿ ಇವಿಎಂ ಅಕ್ರಮದ ಆರೋಪಗಳು ಕೇಳಿಬಂದಿದೆ. ಸ್ಟ್ರಾಂಗ್‌ರೂಮ್‌ನ ಮೊಹರು ತೆಗೆದು ಇವಿಎಂ ತೆರೆದಿರುವ ವಿಡಿಯೋಗಳು ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿದೆ. ಈ ನಡುವೆ ಪಶ್ಚಿಮ ಬಂಗಾಳ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ದಕ್ಷಿಣ ಕೋಲ್ಕತ್ತಾದ ಭಬಾನಿಪುರ ಕ್ಷೇತ್ರದ ಸಖಾವತ್ ಸ್ಮಾರಕ ಶಾಲೆಯ ಸ್ಟ್ರಾಂಗ್ ರೂಮ್ಗೆ



ಭೇಟಿ ನೀಡಿದ್ದಾರೆ. ಮೂರು ಗಂಟೆಗಳಿಗೂ ಹೆಚ್ಚು ಕಾಲ ಅಲ್ಲೇ ಇದ್ದು ಪರಿಸ್ಥಿತಿ ಅವಲೋಕಿಸಿದ್ದಾರೆ. ಸ್ಟ್ರಾಂಗ್‌ರೂಮ್‌ನಿಂದ ನಿರ್ಗಮಿಸಿದ ನಂತರ ಸುದ್ದಿಗಾರರನ್ನುದ್ದೇಶಿಸಿ ಮಾತನಾಡಿದ ಬ್ಯಾನರ್ಜಿ, "ಇವಿಎಂಗಳನ್ನು ಇಡಲು ಸ್ಟ್ರಾಂಗ್ ರೂಮ್ ಇದೆ. ನಾನು ಅದನ್ನು ಟಿವಿಯಲ್ಲಿ ನೋಡಿದಾಗ, ನಾನು ಬರಬೇಕೆಂದು ಭಾವಿಸಿದೆ. ಕೇಂದ್ರ ಭದ್ರತಾ ಸಿಬ್ಬಂದಿ ಆರಂಭದಲ್ಲಿ ನನಗೆ ಪ್ರವೇಶಿಸಲು ಅವಕಾಶ ನೀಡಿಲ್ಲ. ಆದರೆ ಅಭ್ಯರ್ಥಿಯಾಗಿ ನನಗೆ ಪ್ರವೇಶದ ಹಕ್ಕಿದೆ ಎಂದು ಪ್ರತಿಪಾದಿಸಿದ ಬಳಿಕ ಒಪ್ಪಿಕೊಂಡಿದ್ದಾರೆ ಎಂದು ಹೇಳಿದ್ದಾರೆ.

ಚುನಾವಣಾ ನಿಯಮಗಳ ಪ್ರಕಾರ, ಅಭ್ಯರ್ಥಿಗಳನ್ನು ಸೀಲ್ ಮಾಡಿದ ಕೋಣೆಯ ಹೊರ ಪರಿಧಿಯವರೆಗೆ ಹೋಗಲು ಅವಕಾಶ ನೀಡಲಾಗುತ್ತದೆ. ಅದರ ಪ್ರಕಾರ ನನಗೆ ಅಲ್ಲಿಯವರೆಗೆ ಹೋಗಲು ಅವಕಾಶ ನೀಡಲಾಯಿತು" ಎಂದು ತಿಳಿಸಿದ್ದಾರೆ.

"ನಾನು ನನ್ನ ಜೀವಮಾನವಿಡೀ ಹೋರಾಡುತ್ತೇನೆ. ಇದು ಸಾವು ಬದುಕಿನ ಹೋರಾಟ. ಯಾವುದೇ ಅಕ್ರಮ ನಡೆದರೆ, ನಾವು ಹೋರಾಡುತ್ತೇವೆ. ಇವಿಎಂಗಳನ್ನು ತಿರುಚುವ ಯತ್ನ ಮಾಡಿದರೆ ತೀವ್ರ ಹೋರಾಟ ನಡೆಸಲಾಗುವುದು" ಮಮತಾ ಬ್ಯಾನರ್ಜಿ ಎಚ್ಚರಿಸಿದರು.

# ಹಜ್ ಯಾತ್ರೆಯ ವಿಮಾನ ದರ 10,000 ರೂ. ಹೆಚ್ಚಳ

**ನವದೆಹಲಿ, ಮೇ.1:** ಜೆಟ್ ಇಂಧನ ಬೆಲೆ ಏರಿಕೆ ಹಿನ್ನೆಲೆಯಲ್ಲಿ ಹಜ್ ಯಾತ್ರೆಯ ವಿಮಾನ ದರವನ್ನು 10,000 ರೂ. ಹೆಚ್ಚಳ ಮಾಡಲಾಗಿದೆ. ಈ ವರ್ಷ ಹಜ್ ಸಮಿತಿಯು ಪ್ರತಿ ಯಾತ್ರಿಕರಿಗೆ 10,000 ರೂ.ಗಳಷ್ಟು ವಿಮಾನ ದರವನ್ನು ಹೆಚ್ಚಿಸುವ ನಿರ್ಧಾರ ಕೈಗೊಂಡಿದೆ. ಈ ನಡೆ ರಾಜಕೀಯ ವಿವಾದಕ್ಕೆ ಕಾರಣವಾಗಿದೆ. ದರ ಏರಿಕೆಯನ್ನು ವಿಪಕ್ಷಗಳು ತೀವ್ರವಾಗಿ ಖಂಡಿಸಿವೆ.

ಮಧ್ಯಪ್ರಾಚ್ಯದಲ್ಲಿ ನಡೆಯುತ್ತಿರುವ ಹೋರಾಟ, ಅಮೆರಿಕ ಮತ್ತು ಇಸ್ರೇಲ್ನ ಇರಾನ್ ವಿರುದ್ಧದ ಯುದ್ಧ, ವಿಶ್ವಾದ್ಯಂತ ಕಚ್ಚಾತೈಲ ಪೂರೈಕೆ ವ್ಯವಸ್ಥೆಯನ್ನೇ ಬಡಮೇಲು ಮಾಡಿದೆ. ಈ ಹಿನ್ನೆಲೆಯಲ್ಲಿ ದರ ಏರಿಕೆಯನ್ನು ಸರ್ಕಾರ ಸಮರ್ಥಿಸಿಕೊಂಡಿದೆ.

ಅಲ್ಪಸಂಖ್ಯಾತ ವ್ಯವಹಾರಗಳ ಸಚಿವಾಲಯದ ಅಡಿಯಲ್ಲಿರುವ ಶಾಸನಬದ್ಧ ಸಂಸ್ಥೆಯಾದ ಹಜ್ ಸಮಿತಿಯು, 'ಮಧ್ಯಪ್ರಾಚ್ಯದಲ್ಲಿ ನಡೆಯುತ್ತಿರುವ ಬಿಕ್ಕಟ್ಟಿನಿಂದ ಉಂಟಾಗುವ ಅಸಾಧಾರಣ ಸಂದರ್ಭಗಳು'



ಎಂದು ಉಲ್ಲೇಖಿಸುವ ಸುತ್ತೋಲೆಯನ್ನು ಹೊರಡಿಸಿದೆ. ಸೌದಿ ಅರೇಬಿಯಾದ ಪವಿತ್ರ ನಗರವಾದ ಮೆಕ್ಕಾಗೆ ಪ್ರಯಾಣಿಸುವ ಯಾತ್ರಿಕರಿಗೆ ವಿಮಾನ ದರಗಳಲ್ಲಿ ಒಂದು ಬಾರಿ ಪರಿಷ್ಕರಣೆ ಮಾಡುವುದಾಗಿ ತಿಳಿಸಿದೆ.

ಮಧ್ಯಪ್ರಾಚ್ಯದಲ್ಲಿ ಯುದ್ಧದ ಪರಿಸ್ಥಿತಿಯಿಂದಾಗಿ ವಿಮಾನಯಾನ ಟರ್ಬೈನ್ ಇಂಧನ ಬೆಲೆಗಳಲ್ಲಿ ತೀವ್ರ ಏರಿಕೆ ಕಂಡುಬಂದಿರುವುದರಿಂದ, ಮೂಲದರ ಪರಿಷ್ಕರಣೆಗಾಗಿ ವಿಮಾನಯಾನ ಸಂಸ್ಥೆಗಳಿಂದ ಒತ್ತಾಯ ಕೇಳಿಬಂದಿತ್ತು. ಇದನ್ನು ಗಮನದಲ್ಲಿಟ್ಟುಕೊಂಡು ನಿರ್ಧಾರ ಕೈಗೊಳ್ಳಲಾಗಿದೆ ಎಂದು ಸುತ್ತೋಲೆಯಲ್ಲಿ ತಿಳಿಸಲಾಗಿದೆ. ಈ ವರ್ಷ ಪ್ರಯಾಣ ಬೆಳೆಸಲು ಬಯಸುವವರು ಮೇ 15 ರೊಳಗೆ ಹೆಚ್ಚುವರಿ ಮೊತ್ತವನ್ನು ಪಾವತಿಸಬೇಕು.

ಅಲ್ಪಸಂಖ್ಯಾತ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಅವರು ದರ ಏರಿಕೆಯನ್ನು ಸಮರ್ಥಿಸಿಕೊಂಡಿದ್ದಾರೆ. 'ಅಸಂಖ್ಯಾತ ಕುಟುಂಬಗಳಿಗೆ ವರ್ಷಕ್ಕೊಮ್ಮೆ ಪವಿತ್ರ ಹಜ್ ಯಾತ್ರೆ ಮಾಡುವ ಆಸೆ ಇರುತ್ತದೆ. ಆ ಭಾವನೆಯನ್ನು ನಾನು ಗೌರವಿಸುತ್ತೇನೆ. ಆದರೆ, ಪ್ರಸ್ತುತ ನಡೆಯುತ್ತಿರುವ ಭೌಗೋಳಿಕ ರಾಜಕೀಯ ಉದ್ವಿಗ್ನತೆಗಳಿಂದಾಗಿ ಎಟಿಎಫ್ ಬೆಲೆಗಳಲ್ಲಿ ಜಾಗತಿಕವಾಗಿ ತೀವ್ರ ಏರಿಕೆ ಕಂಡುಬಂದಿದೆ.

ವಿಮಾನಯಾನ ಸಂಸ್ಥೆಗಳು ಪ್ರತಿ ಯಾತ್ರಿಕರಿಗೆ ಅಂದಾಜು 28,459?37,945 ರೂ. ತೀವ್ರ ಏರಿಕೆಯನ್ನು ಬಯಸಿವೆ. ಎಟಿಎಫ್ ಬೆಲೆಗಳ ಏರಿಕೆಗೆ ನಾವು ವಿಮಾನಯಾನ ಸಂಸ್ಥೆಗಳನ್ನು ದೂಷಿಸಲು ಸಾಧ್ಯವಿಲ್ಲ ಎಂದು ತಿಳಿಸಿದ್ದಾರೆ.

# ರಾಮಮಂದಿರದಲ್ಲಿ ದಲಿತರಿಗೆ ಪ್ರತ್ಯೇಕ ಊಟ

**ಅಹಮದಾಬಾದ್, ಮೇ 1:** ಗುಜರಾತ್‌ನ ಜುನಾಗಢ್ ಜಿಲ್ಲೆಯಲ್ಲಿ ಜಾತಿ ತಾರತಮ್ಯದ ಆರೋಪ ಹೊರಿಸಲಾಗಿದ್ದು, ಧಾರ್ಮಿಕ ಕಾರ್ಯಕ್ರಮದ ಸಂದರ್ಭದಲ್ಲಿ ದೇವಾಲಯದ ಆಯೋಜಕರು ಅಸ್ಪೃಶ್ಯತೆ ಆಚರಿಸುತ್ತಿದ್ದಾರೆ ಎಂದು ದಲಿತ ಸಮುದಾಯದ ಸದಸ್ಯರು ಆರೋಪಿಸಿದ್ದಾರೆ.

ಭುಟ್ಡಿ ಗ್ರಾಮದ ನಿವಾಸಿ 25 ವರ್ಷದ ಅಜಯ್ ಚತುರ್ ಬೋರಿಚಾ ನೀಡಿದ ದೂರಿನ ನಂತರ ಐದು ಜನರ ವಿರುದ್ಧ ವಿಶಾವದರ್ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಿಸಲಾಗಿದೆ. ಬೋರಿಚಾ ಮತ್ತು ಪರಿಶಿಷ್ಟ ಜಾತಿ ಸಮುದಾಯದ ಇತರ ಸದಸ್ಯರನ್ನು ದೇವಾಲಯದ ಪವಿತ್ರೀಕರಣ ಸಮಾರಂಭಕ್ಕೆ ಆಹ್ವಾನಿಸಲಾಗಿತ್ತು. ಆದರೆ, ಅವಮಾನಕರ ಷರತ್ತುಗಳನ್ನು ಪಾಲಿಸುವಂತೆ ಕೇಳಲಾಗಿತ್ತು ಎಂದು ಆರೋಪಿಸಿದ್ದಾರೆ.

"ನಮ್ಮ ಸ್ವಂತ ತಟ್ಟೆಗಳು ಮತ್ತು ಲೋಟಗಳನ್ನು ತರಲು, ಇತರರು ಊಟ ಮುಗಿದ ನಂತರ ಪ್ರತ್ಯೇಕವಾಗಿ ಊಟ ಮಾಡಲು ಒತ್ತಾಯಿಸಲಾಯಿತು. ದೇವಾಲಯಕ್ಕೆ ಪ್ರವೇಶಿಸದಂತೆ ನಮಗೆ ತಿಳಿಸಲಾಯಿತು" ಎಂದು ಬೋರಿಚಾ ತಮ್ಮ ದೂರಿನಲ್ಲಿ ತಿಳಿಸಿದ್ದಾರೆ.

ಈ ಘಟನೆಯು ಏ.29 ರಂದು ನಡೆದ ಶ್ರೀರಾಮ ಮಂದಿರದ 'ಪ್ರಾಣ ಪ್ರತಿಷ್ಠಾ' ಸಮಾರಂಭಕ್ಕೆ ಸಂಬಂಧಿಸಿದೆ. ಎಫ್‌ಐಆರ್ ಪ್ರಕಾರ, ಆಯೋಜಕರು ಏಪ್ರಿಲ್ 27 ರಂದು 10 ದಲಿತ ನಿವಾಸಿಗಳನ್ನು ಸಂಪರ್ಕಿಸಿ ಕಾರ್ಯಕ್ರಮಕ್ಕೆ ಆಹ್ವಾನಿಸಿದರು. ಆದರೆ ತಾರತಮ್ಯದ ಷರತ್ತುಗಳನ್ನು ವಿಧಿಸಿದ್ದಾರೆ ಎಂದು ಆರೋಪಿಸಲಾಗಿದೆ. ನಮಗೆ ಆಹಾರ ಮತ್ತು ನೀರನ್ನು ಪ್ರತ್ಯೇಕವಾಗಿ ವ್ಯವಸ್ಥೆ ಮಾಡಲಾಗಿತ್ತು. ಇತರ ಜಾತಿಗಳ ಜನರು ಊಟ ಮುಗಿಸಿದ ನಂತರವೇ ಹಾಜರಾಗಬೇಕು ಎಂದು ಆಯೋಜಕರು ಹೇಳಿದ್ದರು ಎಂದು ದೂರುದಾರರು ಹೇಳಿಕೊಂಡಿದ್ದಾರೆ. ದಲಿತ ಸಮುದಾಯದ ಸದಸ್ಯರು ಅಂತಹ ಪರಿಸ್ಥಿತಿಗಳಲ್ಲಿ ಊಟದಲ್ಲಿ ಭಾಗವಹಿಸಲು ನಿರಾಕರಿಸಿದರು. ಇದು ಸ್ಪಷ್ಟ ಅಸ್ಪೃಶ್ಯತೆಯ ನಡವಳಿಕೆ, ನಮ್ಮ ಘನತೆಗೆ ಅವಮಾನ ಎಂದು ಹೇಳಿದ್ದಾರೆ.

ದೂರಿನ ನಂತರ, ಯೋಜಿತ ಸಮುದಾಯ ಭೋಜನವನ್ನು ರದ್ದುಗೊಳಿಸಲಾಯಿತು. ಆದರೂ ದೇವಾಲಯದ ಸಮಾರಂಭವು ನಿಗದಿಯಂತೆ ನಡೆಯಿತು. ಪ್ರಕರಣದ ತನಿಖೆ ನಡೆಸಲಾಗುತ್ತಿದೆ, ಎರಡೂ ಕಡೆಯಿಂದ ಹೇಳಿಕೆಗಳನ್ನು ದಾಖಲಿಸಲಾಗುತ್ತಿದೆ ಎಂದು ಉಪ ಪೊಲೀಸ್ ವರಿಷ್ಠಾಧಿಕಾರಿ ರವಿರಾಜ್ಸಿನ್ಹ್ ಪರ್ಮಾರ್ ಹೇಳಿದ್ದಾರೆ.

"ಆರೋಪಿಗಳಿಗೆ ಪೊಲೀಸರ ಮುಂದೆ ಹಾಜರಾಗಿ ಹೇಳಿಕೆ ನೀಡುವಂತೆ ನಾವು ನೋಟಿಸ್ ಜಾರಿ ಮಾಡಿದ್ದೇವೆ. ಯಾವುದೇ ಡಿಜಿಟಲ್ ಪುರಾವೆ ಲಭ್ಯವಿದೆಯೇ ಎಂದು ನಾವು ಪರಿಶೀಲಿಸುತ್ತಿದ್ದೇವೆ. ಪ್ರಕರಣವು ಪ್ರಸ್ತುತ ಆರೋಪ ಮತ್ತು ಪ್ರತಿವಾದಗಳನ್ನು ಆಧರಿಸಿದೆ. ಮುಂದಿನ ಕ್ರಮವು ತನಿಖೆಯ ಸಂಶೋಧನೆಯ ಆಧಾರದ ಮೇಲೆ ಅವಲಂಬಿತವಾಗಿರುತ್ತದೆ ಎಂದು ಪೊಲೀಸರು ಹೇಳಿದರು.

ಐವರು ಆರೋಪಿ ಸಂಘಟಕರಾದ ಬಾಬು ಉಕಾ ಹಪಾನಿ, ನರೇಂದ್ರ ಭಂಜಿ ಸಿರೋಯಾ, ರಾಮ್ನಿಕ್ ಸಂಜಿ ಸೊರಥಿಯಾ, ಅತುಲ್ ಭಿಖಾ ಸಿರೋಯಾ ಮತ್ತು ಪುಲಾ ಪೊಪಟ್ ಸಿರೋಯಾ ವಿರುದ್ಧ ಹಲವಾರು ಕಾನೂನು ನಿಬಂಧನೆಗಳ ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ. ಇವುಗಳಲ್ಲಿ ದ್ವೇಷವನ್ನು ಉತ್ತೇಜಿಸುವುದಕ್ಕೆ ಸಂಬಂಧಿಸಿದ ಭಾರತೀಯ ನ್ಯಾಯ ಸಂಹಿತಾ (ಬಿಎನ್‌ಎಸ್) ವಿಭಾಗಗಳು ಮತ್ತು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ (ದೌರ್ಜನ್ಯ ತಡೆ) ಕಾಯ್ದೆಯ ನಿಬಂಧನೆಗಳು ಸೇರಿವೆ.

# ವಾಣಿಜ್ಯ ಸಿಲಿಂಡರ್ ಬೆಲೆ 993 ಹೆಚ್ಚಳ: ಕಾಂಗ್ರೆಸ್‌ನಿಂದ ತೀಕ್ಷ್ಣ ಪ್ರತಿಕ್ರಿಯೆ

**ನವದೆಹಲಿ, ಮೇ 1:** ಬಂಗಾಳ ಸೇರಿದಂತೆ 5 ರಾಜ್ಯಗಳ ಚುನಾವಣಾ ಫಲಿತಾಂಶಗಳು ಮೇ 4 ರಂದು ಪ್ರಕಟವಾಗಲಿವೆ. ಇದಕ್ಕೂ ಮುನ್ನ, ಸಾಮಾನ್ಯ ಜನರು ಮತ್ತು ವಿಶೇಷವಾಗಿ ಉದ್ಯಮಿಗಳು ಹಣದುಬ್ಬರದ ಮತ್ತೊಂದು ಹೊಡೆತಕ್ಕೆ ಸಿಲುಕಿದ್ದಾರೆ. 19 ಕೆಜಿ ವಾಣಿಜ್ಯ ಎಲ್ಪಿಜಿ ಸಿಲಿಂಡರ್ ಬೆಲೆಯನ್ನು ಭಾರಿ ಪ್ರಮಾಣದಲ್ಲಿ ಹೆಚ್ಚಿಸಲಾಗಿದ್ದು 19 ಕೆಜಿ ವಾಣಿಜ್ಯ ಸಿಲಿಂಡರ್ ಬೆಲೆಯನ್ನು 993 ರಷ್ಟು ಹೆಚ್ಚಿಸಲಾಗಿದೆ.

ಈ ಹೆಚ್ಚಳದ ನಂತರ, ದೆಹಲಿಯಲ್ಲಿ ವಾಣಿಜ್ಯ ಸಿಲಿಂಡರ್‌ನ ಬೆಲೆ ಈಗ 3071.50 ರೂ. ಆಗಿದೆ, ಇದು ಮೊದಲಿಗಿಂತ ಹೆಚ್ಚು. ಈ ಹೆಚ್ಚಳದ ನಂತರ, ಇಡೀ ಮಾರುಕಟ್ಟೆ ತೊಂದರೆಗೊಳಗಾಗುವ ಎಲ್ಲಾ ಸಾಧ್ಯತೆಗಳಿವೆ. ಈಗಾಗಲೇ ಹಣದುಬ್ಬರದಿಂದ ಬಳಲುತ್ತಿರುವ ಜನರ ಮುಂದೆ ದೊಡ್ಡ ಬಿಕ್ಕಟ್ಟು ಉದ್ಭವಿಸಿದೆ.

ಈ ಹಠಾತ್ ಹೆಚ್ಚಳವು, ವಿಶೇಷವಾಗಿ ಆಹಾರ ಉದ್ಯಮ ಮತ್ತು ಸಣ್ಣ ವ್ಯವಹಾರಗಳಲ್ಲಿ ಕಳವಳವನ್ನು ಹುಟ್ಟುಹಾಕಿದೆ. ರೆಸ್ಟೋರೆಂಟ್, ಧಾಬಾ ಮತ್ತು ಅಡುಗೆ ಸೇವೆ ಈಗ ತಮ್ಮ ವೆಚ್ಚಗಳನ್ನು ನಿರ್ವಹಿಸುವಲ್ಲಿ ತೊಂದರೆಗಳನ್ನು ಎದುರಿಸಬಹುದು, ಇದು ಗ್ರಾಹಕರ ಮೇಲೂ ಪರಿಣಾಮ ಬೀರುವ ಸಾಧ್ಯತೆಯಿದೆ. ಆದಾಗ್ಯೂ, ದೇಶೀಯ ಎಲ್ಪಿಜಿ ಸಿಲಿಂಡರ್ ಬೆಲೆಗಳನ್ನು ಸದ್ಯಕ್ಕೆ ಬದಲಾಯಿಸಲಾಗಿಲ್ಲ ಎಂಬುದು ಸಮಾಧಾನಕರ ವಿಷಯ. ಪರಿಣಾಮವಾಗಿ, ಸಾಮಾನ್ಯ ದೇಶೀಯ ಗ್ರಾಹಕರು ಈ ಹೆಚ್ಚಳದಿಂದ ನೇರವಾಗಿ ಪರಿಣಾಮ ಬೀರುವುದಿಲ್ಲ.

ಇನ್ನು ವಾಣಿಜ್ಯ ಅನಿಲ ಸಿಲಿಂಡರ್ ಬೆಲೆಗಳ ಹೆಚ್ಚಳವು ಮಾರುಕಟ್ಟೆಯಲ್ಲಿ ಆಹಾರ ಮತ್ತು ಪಾನೀಯಗಳ ಬೆಲೆಗಳ ಮೇಲೆ ಪರಿಣಾಮ ಬೀರಬಹುದು ಎಂದು ತಜ್ಞರು ನಂಬಿದ್ದಾರೆ. ಮುಂಬರುವ ದಿನಗಳಲ್ಲಿ ಹೋಟೆಲ್ ಮತ್ತು ರೆಸ್ಟೋರೆಂಟ್‌ಗಳು ತಮ್ಮ ಆಹಾರದ ಬೆಲೆಗಳನ್ನು ಹೆಚ್ಚಿಸಬಹುದು, ಇದು ಸಾಮಾನ್ಯ ಜನರ ಜೇಬಿನ ಮೇಲೆ ಹೆಚ್ಚುವರಿ ಹೊರೆಯನ್ನು ಹಾಕಬಹುದು.

ಫೆಬ್ರವರಿ 28 ರಿಂದ 19 ಕೆಜಿ ಎಲ್‌ಪಿಜಿ ಸಿಲಿಂಡರ್ ಬೆಲೆಯನ್ನು ಹೆಚ್ಚಿಸಿದ ನಂತರ ಇದು ಮೂರನೇ ಬಾರಿಯಾಗಿದೆ. ಇದನ್ನು ಮೊದಲು ಮಾರ್ಚ್‌ನಲ್ಲಿ 144 ರೂ.ಗಳಷ್ಟು ಮತ್ತು ನಂತರ ಏಪ್ರಿಲ್ 1 ರಂದು 200 ರೂ.ಗಳಷ್ಟು ಹೆಚ್ಚಿಸಲಾಗಿತ್ತು.

ವಾಣಿಜ್ಯ ಸಿಲಿಂಡರ್ ಬೆಲೆ ಏರಿಕೆಗೆ ಕಾಂಗ್ರೆಸ್ ಆಕ್ರೋಶ ವ್ಯಕ್ತಪಡಿಸಿದ್ದು, ಪ್ರಧಾನಿ ನರೇಂದ್ರ ಮೋದಿಯನ್ನು ಕುಟುಕಿದೆ. 'ಹಣದುಬ್ಬರ ಮನುಷ್ಯ ಮೋದಿ' ಮತ್ತೊಮ್ಮೆ ಚಾಟಿ ಬೀಸಿದ್ದಾರೆ. ವಾಣಿಜ್ಯ ಸಿಲಿಂಡರ್‌ಗಳ ಬೆಲೆ 993 ರೂನಷ್ಟು ಹೆಚ್ಚಿಸಿದ್ದಾರೆ. ಕಳೆದ ನಾಲ್ಕು ತಿಂಗಳಲ್ಲಿ ಮೋದಿ ವಾಣಿಜ್ಯ ಸಿಲಿಂಡರ್‌ಗಳ ಬೆಲೆಯನ್ನು ಹೆಚ್ಚಿಸಿದ್ದಾರೆ.

ವರ್ಷಕ್ಕೆ ಇನ್ನೂ ಎಂಟು ತಿಂಗಳು ಬಾಕಿ ಉಳಿದಿದೆ. ಇನ್ನು ಬೆಲೆ ಏರಿಕೆಯಾಗಲಿದೆ ಎಂದು ಎಕ್ಸ್ ಖಾತೆಯಲ್ಲಿ ಪೋಸ್ಟ್ ಮಾಡಿದೆ.

ಮೋದಿ ಸರ್ಕಾರಕ್ಕೆ ಕೇವಲ ಹಣ ಸುಲಿಗೆ ಮಾಡುವುದೊಂದೇ ಗೊತ್ತು. ಈಗ 5 ಕೆಜಿಯ ಸಣ್ಣ ಸಿಲಿಂಡರ್ ಕೂಡ ದುಬಾರಿಯಾಗಿದೆ. ಮೊದಲು ಆಧಾರ್ ಕಾರ್ಡ್ ಆಧಾರದ ಮೇಲೆ ಸಿಲಿಂಡರ್‌ಗಳನ್ನು ವಿತರಿಸಿದರು. ನಂತರ ಬೆಲೆಗಳನ್ನು ಹೆಚ್ಚಿಸಿದರು, ಇವರು ಕುತಂತ್ರಿಗಳು ಎಂದು ತೀಕ್ಷ್ಣ ಪ್ರತಿಕ್ರಿಯೆ ನೀಡಿದೆ.

# ಬಿಸಿಲು ಹೆಚ್ಚಾಗುವ ಸಾಧ್ಯತೆ: ಹವಾಮಾನ ಇಲಾಖೆ

**ನವದೆಹಲಿ, ಮೇ 1:** ಹಿಮಾಲಯದ ತಪ್ಪಲಿನ ಕೆಲವು ಭಾಗಗಳು, ಪೂರ್ವ ಕರಾವಳಿ ರಾಜ್ಯಗಳು, ಗುಜರಾತ್ ಮತ್ತು ಮಹಾರಾಷ್ಟ್ರದಲ್ಲಿ ಮೇ ತಿಂಗಳಲ್ಲಿ ಸಾಮಾನ್ಯಕ್ಕಿಂತ ತೀವ್ರ ಬಿಸಿಲಿನ ದಿನಗಳನ್ನು ಕಾಣುವ ಸಾಧ್ಯತೆಯಿದೆ ಎಂದು ಭಾರತೀಯ ಹವಾಮಾನ ಇಲಾಖೆ(ಐಎಂಡಿ) ಶುಕ್ರವಾರ ತನ್ನ ಮಾಸಿಕ ಮುನ್ಸೂಚನೆಯಲ್ಲಿ ತಿಳಿಸಿದೆ. "ದೇಶದ ಹಲವು ಭಾಗಗಳಲ್ಲಿ ಈ ತಿಂಗಳು ತಾಪಮಾನವು ಸಾಮಾನ್ಯಕ್ಕಿಂತ ಹೆಚ್ಚಾಗಿರುತ್ತದೆ" ಎಂದು ಹವಾಮಾನ ಶಾಸ್ತ್ರದ ಮಹಾನಿರ್ದೇಶಕ ಮೃತ್ಯುಂಜಯ್ ಮೊಹಾಪಾತ್ರ ತಿಳಿಸಿದ್ದಾರೆ. "ಆದಾಗ್ಯೂ, ವಾಯುವ್ಯ ಭಾರತದ ಅನೇಕ ಪ್ರದೇಶಗಳು, ಮಧ್ಯ ಭಾರತದ ಕೆಲವು ಭಾಗಗಳು ಮತ್ತು ಪಕ್ಕದ ಪರ್ಯಾಯ ದ್ವೀಪ ಭಾರತದ ಪ್ರದೇಶಗಳು ಹಾಗೂ ಈಶಾನ್ಯ ಭಾರತದ ದಕ್ಷಿಣ ಭಾಗಗಳು ಸಾಮಾನ್ಯಕ್ಕಿಂತ ಕಡಿಮೆ ತಾಪಮಾನವನ್ನು ಅನುಭವಿಸುವ ಸಾಧ್ಯತೆಯಿದೆ" ಎಂದು ಅವರು ಹೇಳಿದರು. ಭಾರತದ ಪೂರ್ವ, ಈಶಾನ್ಯ ಮತ್ತು ಪೂರ್ವ ಮಧ್ಯ ಭಾಗದ ಕೆಲವು ಭಾಗಗಳನ್ನು ಹೊರತುಪಡಿಸಿ, ಮೇ ತಿಂಗಳಲ್ಲಿ ಭಾರತದಾದ್ಯಂತ ಸಾಮಾನ್ಯಕ್ಕಿಂತ ಹೆಚ್ಚಿನ ಮಳೆಯಾಗುವ ಸಾಧ್ಯತೆಯಿದೆ ಎಂದು ಐಎಂಡಿ ಹೇಳಿದೆ.

# ವಾಣಿಜ್ಯ ಬಳಕೆ ಅನಿಲ ಸಿಲಿಂಡರ್ ದರ ಏರಿಕೆ: ತಿಂಡಿ, ಕಾಫಿ ಬೆಲೆ ಏರಿಕೆಗೆ ಹೋಟೆಲ್ ಉದ್ಯಮಿಗಳ ಚಿಂತನೆ



**ಬೆಂಗಳೂರು, ಮೇ 1:** ಮಾರ್ಚ್ ತಿಂಗಳಲ್ಲಿ ಏರಿಕೆ ಆಗಿದ್ದ ವಾಣಿಜ್ಯ ಬಳಕೆಯ ಸಿಲಿಂಡರ್ (19ಕೆಜಿ ಗ್ಯಾಸ್) ದರ ಮೇ 1ರಂದು ಮತ್ತೆ ಬರೋಬ್ಬರಿ 991 ರೂಪಾಯಿ ಏರಿಕೆ ಆಗಿದೆ. ಈ ಮೂಲಕ ಕೇಂದ್ರ ಸರ್ಕಾರ ಕಾರ್ಮಿಕರ ದಿನದಂದು ಜನರಿಗೆ ಆಘಾತ ನೀಡಿದೆ. ಪಂಚ ರಾಜ್ಯ ಚುನಾವಣೆ ಮುಗಿದ ಬಳಿಕ ಪ್ರಧಾನಿ ಮೋದಿಯವರ ತಮ್ಮ ಬುದ್ಧಿ ತೋರಿಸಿದ್ದಾರೆ ಎಂದು ಹೋಟೆಲ್ ಮಾಲೀಕರು ದೂರಿದ್ದಾರೆ. ದರ ಏರಿಕೆಗೆ ತೀವ್ರ ಅಸಮಾಧಾನ ಹೊರ ಹಾಕಿದ್ದಾರೆ. ಇತಿಹಾಸದಲ್ಲೇ ದೊಡ್ಡಮಟ್ಟದ ಗ್ಯಾಸ್ ದರ ಏರಿಕೆ ಆಗಿದ್ದು, ಈ ನಿರ್ಧಾರವು ನೇರ ಹೋಟೆಲ್ ಉದ್ಯಮದ ಮೇಲೆ ಪರಿಣಾಮ ಬೀರಲಿದೆ ಎಂದು ಹೋಟೆಲ್ ಮಾಲೀಕರು ಆತಂಕ ವ್ಯಕ್ತಪಡಿಸಿದ್ದಾರೆ.

ಇಷ್ಟೊಂದು ದರ ಏರಿಕೆ ಸರಿಯೇ ಎಂದು ಬೆಂಗಳೂರು ಹೋಟೆಲ್ ಮಾಲೀಕರು ಪ್ರಶ್ನಿಸಿದ್ದಾರೆ. ಬೆಂಗಳೂರು ಸೇರಿ ರಾಜ್ಯದಲ್ಲಿ ಅಗತ್ಯ ವಸ್ತುಗಳು, ಸಾರಿಗೆ ಪ್ರಯಾಣ ದರ ಏರಿಕೆಯಿಂದ ಜನರು ಕಂಗಾಲಾಗಿದ್ದರು. ನೌಕರ ವರ್ಗವು ಉದ್ಯೋಗ ವಜಾ ಎದುರಿಸುತ್ತಿದೆ. ಇದೆಲ್ಲದರ ಮಧ್ಯೆ ಬೆಲೆಗಳು ಏರಿಕೆ ಆಗುತ್ತಿವೆ. ಇದೀಗ ವಾಣಿಜ್ಯ ಸಿಲಿಂಡರ್ ದರ ಏರಿಕೆಯಿಂದ ಹೋಟೆಲ್, ಊಟ-ತಿಂಡಿ, ಟೀ-ಕಾಫಿ ಬೆಲೆ ಏರಿಕೆ ಮಾಡುವ ಬಗ್ಗೆ ಹೋಟೆಲ್ ಉದ್ಯಮಿಗಳು ಗಂಭೀರ ಚಿಂತನೆ ಮಾಡಿದ್ದಾರೆ.

ಈ ಹಿಂದೆ ತಾತ್ಕಾಲಿಕವಾಗಿ ಗ್ಯಾಸ್ ಹೆಚ್ಚಳದ (ಪೂರೈಕೆ ಕೊರತೆ ಹಿನ್ನೆಲೆ ಬ್ಲಾಕ್‌ನಲ್ಲಿ ಅಧಿಕ ಬೆಲೆ ಗ್ಯಾಸ್ ಖರೀದಿ) ದರವನ್ನು ಹೋಟೆಲ್ ಊಟ ತಿಂಡಿ ಬಿಲ್‌ನಲ್ಲಿ ಜನರಿಗೆ ವಸೂಲಿ ಮಾಡಲಾಗಿತ್ತು. ಇನ್ನೇನು ಹಾರ್ಮುಜ್ ಜಲಸಂಧಿಯಿಂದ ತೈಲದ ಹಡಗು ಬರುತ್ತಿವೆ, ಸಮಸ್ಯೆಗೆ ಪರಿಹಾರ ಸಿಕ್ಕಿತು ಎನ್ನುವಷ್ಟರಲ್ಲಿ ಕೇಂದ್ರವು ಅನಿಲ ದರ ಏರಿಕೆ ಮಾಡಿದೆ. ಹೋಟೆಲ್ ಉತ್ಪನ್ನಗಳ ದರ ಹೆಚ್ಚಾದರೆ ಅದರ ನೇರ ಪರಿಣಾಮ ಹೋಟೆಲ್ ಉದ್ಯಮ ಮತ್ತು ಗ್ರಾಹಕರ ಮೇಲೆ ಉಂಟಾಗುತ್ತದೆ. ದರ ಏರಿಕೆ ನಿರ್ಧಾರ ಸರಿಯಲ್ಲ ಎಂಬ ಸಾರ್ವಜನಿಕ ಆಕ್ರೋಶಗಳು ವ್ಯಕ್ತವಾಗಿವೆ.

ಮೊದಲಿನ ದರಕ್ಕೆ ಸಮರ್ಪಕವಾಗಿ ವಾಣಿಜ್ಯ ಬಳಕೆಯ ಅನಿಲವು ಪೂರೈಕೆ ಆಗಲಿವೆ ಎಂಬ ಹೋಟೆಲ್ ಮಾಲೀಕರ ನಿರೀಕ್ಷೆ ಹುಸಿಯಾಗಿದೆ. ಗ್ಯಾಸ್ ದರ ಅತ್ಯಧಿಕ ಪ್ರಮಾಣದಲ್ಲಿ ಏರಿಕೆ ಮಾಡಲಾಗಿದೆ. ಈಗಾಗಲೇ ಹೋಟೆಲ್ ಉದ್ಯಮವು ಸಂಕಷ್ಟದಲ್ಲಿದೆ. ಬೆಲೆ ಹೆಚ್ಚಿಸಿದರೆ ಮತ್ತಷ್ಟು ನಷ್ಟವಾಗಲಿದೆ. ಆದರೆ ಇಷ್ಟೊಂದು ಹಣ ನೀಡಿ ಅನಿಲ ಬಳಸಿ ಹೋಟೆಲ್ ನಡೆಸಿದರೆ ಊಟ ತಿಂಡಿ ದರ ಏರಿಕೆ ಮಾಡುವುದು ಅನಿವಾರ್ಯವಾಗುತ್ತದೆ. ಆಗ ಗ್ರಾಹಕರ ಬರದೇ ಹೋದರೆ ಉದ್ಯಮ ಮುಚ್ಚುವ ಸ್ಥಿತಿ ಬರುತ್ತದೆ. ಇದಕ್ಕೆಲ್ಲ ಕೇಂದ್ರ ಸರ್ಕಾರ ಕಾರಣವೆಂದು ಕೆಲವು ಹೋಟೆಲ್ ಮಾಲೀಕರು ಅಸಹಾಯಕತೆ ವ್ಯಕ್ತಪಡಿಸಿದರು. ದರ ಇಳಿಸದೇ ಹೋದರೆ ಹೋಟೆಲ್ ಮಾಲೀಕರಿಗೆ ತೀವ್ರ ಸಂಕಷ್ಟ ಎದುರಾಗಲಿದೆ ಎಂದು ಅವರು ಮನವಿ ಮಾಡಿದರು.

* ಮಾರ್ಚ್ 01ರಂದು 28ರಿಂದ 31 ರೂಪಾಯಿ ಏರಿಕೆ
* ಮಾರ್ಚ್ 07ರಂದು 114.5 ರೂಪಾಯಿ ಹೆಚ್ಚಳ





ಬೆಂಗಳೂರಿನಲ್ಲಿ ಶುಕ್ರವಾರ ಅಖಿಲ ಭಾರತ ಕೇಂದ್ರ ಕಾರ್ಮಿಕ ಸಂಘಗಳ ಮಂಡಳಿ ಆಯೋಜಿಸಿದ್ದ ಮೇ ದಿನದಂದು (ಅಂತರರಾಷ್ಟ್ರೀಯ ಕಾರ್ಮಿಕರ ದಿನ) ಟೌನ್‌ಹಾಲ್‌ನಿಂದ ಫ್ರೀಡಂ ಪಾರ್ಕ್‌ವರೆಗೆ ಮೆರವಣಿಗೆ ಮಡೆಸಲಾಯಿತು.

### ರಾಜಕೀಯ ಉದ್ದೇಶಕ್ಕೆ ಧಾರ್ಮಿಕ ಸ್ಥಳ ಬಳಕೆ:

# ಕೆ.ಎಸ್.ಈಶ್ವರಪ್ಪ ವಿರುದ್ಧದ ಪ್ರಕರಣಕ್ಕೆ ತಡೆ ನೀಡಲು ಹೈಕೋರ್ಟ್ ನಕಾರ




**ಬೆಂಗಳೂರು, ಮೇ 1:** ರಾಜಕೀಯ ಉದ್ದೇಶಕ್ಕೆ ಧಾರ್ಮಿಕ ಸ್ಥಳಗಳನ್ನು ಬಳಸುವುದು ಸರಿಯಾದ ಕ್ರಮವಲ್ಲ ಎಂದು ತಿಳಿಸಿರುವ ಹೈಕೋರ್ಟ್, ಕಳೆದ ಲೋಕಸಭಾ ಚುನಾವಣೆಯ ವೇಳೆ ಶಿವಮೊಗ್ಗ ದೇವಸ್ಥಾನದಲ್ಲಿ ರಾಜಕೀಯ ಸಭೆ ನಡೆಸಿದ ಆರೋಪ ಸಂಬಂಧ ಮಾಜಿ ಉಪಮುಖ್ಯಮಂತ್ರಿ ಕೆ.ಎಸ್. ಈಶ್ವರಪ್ಪ ಮತ್ತಿತರರ ವಿರುದ್ಧದ ಪ್ರಕರಣಕ್ಕೆ ತಡೆ ನೀಡಲು ನಿರಾಕರಿಸಿದೆ.

ಶಿವಮೊಗ್ಗದ ತುಂಗಾನಗರ ಪೊಲೀಸ್ ಠಾಣೆಯಲ್ಲಿ ದಾಖಲಾಗಿರುವ ಪ್ರಕರಣ ಮತ್ತು ಆ ಸಂಬಂಧ ಸಕ್ಷಮ ನ್ಯಾಯಾಲಯಕ್ಕೆ ಸಲ್ಲಿಸಿರುವ ಆರೋಪ ಪಟ್ಟಿ ರದ್ದತಿ ಕೆ.ಎಸ್. ಈಶ್ವರಪ್ಪ ಮತ್ತಿತರರು ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಎಸ್. ಸುನೀಲ್ ದತ್ ಯಾದವ್ ಅವರಿದ್ದ ಏಕಸದಸ್ಯ ಪೀಠ, ರಾಜಕೀಯ ಕಾರಣಗಳಿಗೆ ನೀವು ಧಾರ್ಮಿಕ ಸ್ಥಳಗಳನ್ನು ಬಳಕೆ ಮಾಡಲಾಗದು. ಇದಕ್ಕೆ ವಿರಾಮ ಇಡಬೇಕು ಎಂದು ತಿಳಿಸಿ, ವಿಚಾರಣೆ ಮುಂದೂಡಿತು.ವಿಚಾರಣೆ ವೇಳೆ ಅರ್ಜಿದಾರರ ಪರ ವಕೀಲರು, ದೇವಸ್ಥಾನದಲ್ಲಿ ಆಯೋಜಿಸಿದ್ದ ಸಭೆಯಲ್ಲಿ ಯಾವುದೇ ರಾಜಕೀಯ ಭಾಷಣ ಮಾಡಿಲ್ಲ. ಯಾವ ರಾಜಕೀಯ ಚಟುವಟಿಕೆ ನಡೆಸಲಾಗಿದೆ ಎಂಬುದನ್ನು ದೂರಿನಲ್ಲಿ ವಿವರಿಸಲಾಗಿಲ್ಲ. ಕಾಯಿದೆ ಅಡಿ ಅಪರಾಧವಾಗುವ ಯಾವುದೇ ಕೃತ್ಯ ನಡೆಸಿಲ್ಲ. 14 ಸಾಕ್ಷಿಗಳ ಪೈಕಿ 13 ಸರ್ಕಾರಿ ಅಧಿಕಾರಿಗಳೇ ಆಗಿದ್ದಾರೆ. ಒಬ್ಬರು ಪ್ರತ್ಯಕ್ಷದರ್ಶಿ ಇದ್ದಾರೆ. ಪ್ರಕರಣದಲ್ಲಿ ದೇವಾಲಯದ ಅರ್ಚಕ ಮತ್ತು ಇನ್ನೊಬ್ಬ ಅರ್ಜಿದಾರರ ವಿರುದ್ಧದ ಪ್ರಕರಣ ರದ್ದು ಮಾಡಬೇಕು ಎಂದು ಕೋರಿದರು.

ಸರ್ಕಾರದ ಪರ ವಕೀಲರು, ದೇವಸ್ಥಾನದಲ್ಲಿ ಸಭೆ ನಡೆಸಲಾಗಿದ್ದು, ಚುನಾವಣೆಯಲ್ಲಿ ಸ್ಪರ್ಧಿಸುವ ಸಂಬಂಧ ಚರ್ಚೆ ನಡೆಸಲಾಗಿದೆ. ಆದ್ದರಿಂದ ಧಾರ್ಮಿಕ ಸ್ಥಳಗಳ (ದುರ್ಬಳಕೆ) ತಡೆ ಕಾಯಿದೆ ಅಡಿ ಪ್ರಕರಣ ದಾಖಲಿಸಿರುವುದು ಸರಿಯಾದ ಕ್ರಮವಾಗಿದೆ ಎಂದು ಪೀಠಕ್ಕೆ ವಿವರಿಸಿದರು. ವಾದ ಆಲಿಸಿದ ಪೀಠ, ವಿಚಾರಣೆಯನ್ನು ಮುಂದೂಡಿತು.ಪ್ರಕರಣದ ಹಿನ್ನೆಲೆ: 2024ರ ಲೋಕಸಭಾ ಚುನಾವಣೆಯ ವೇಳೆ ನೀತಿ ಸಂಹಿತೆ ಜಾರಿಯಲ್ಲಿದ್ದಾಗ ಶಿವಮೊಗ್ಗದ ಆದಿರಂಗನಾಥ ದೇವಾಲಯದಲ್ಲಿ ಮಾಜಿ ಸಚಿವ ಕೆ.ಎಸ್. ಈಶ್ವರಪ್ಪ ಮತ್ತು ಇತರರು ಚುನಾವಣೆಯಲ್ಲಿ ಸ್ಪರ್ಧಿಸುವ ಕುರಿತಾಗಿ ಸಭೆ ನಡೆಸಿ ಚರ್ಚಿಸಿದ್ದರು. ಇದರ ಮಾಹಿತಿಯ ಹಿನ್ನೆಲೆಯಲ್ಲಿ ಚುನಾವಣಾ ವೀಕ್ಷಕರು ತುಂಗಾನಗರ ಠಾಣೆಯಲ್ಲಿ ದೂರು ದಾಖಲಿಸಿದ್ದರು. ಅದರ ಅನ್ವಯ ಈಶ್ವರಪ್ಪ ಸೇರಿ 9 ಮಂದಿಯ ವಿರುದ್ಧ ಧಾರ್ಮಿಕ ಸಂಸ್ಥೆಗಳ (ದುರ್ಬಳಕೆ ತಡೆ) ಕಾಯಿದೆ ಸೆಕ್ಷನ್‌ಗಳಾದ 3, 6, ಮತ್ತು 7ರ ಪ್ರಕರಣ ದಾಖಲಿಸಲಾಗಿದೆ. ಇದನ್ನು ಪ್ರಶ್ನಿಸಿ ಕೆ.ಎಸ್. ಈಶ್ವರಪ್ಪ, ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದಾರೆ.

### ಬೈಕ್ ಉದ್ಯಮದ ಅಭಿವೃದ್ಧಿ, ತಾಂತ್ರಿಕ ಪ್ರಗತಿ - ಕಾರ್ಮಿಕ ಕಲ್ಯಾಣ ಕುರಿತು ಚರ್ಚೆ

# ಬೈಕ್ ಮೆಕಾನಿಕ್‌ಗಳ ಸಮಾವೇಶದಲ್ಲಿ ಅನಾವರಣಗೊಂಡ ಅತ್ಯಾಧುನಿಕ ತಂತ್ರಜ್ಞಾನ





**ಬೆಂಗಳೂರು, ಮೇ.1:** ಕಾರ್ಮಿಕ ದಿನಾಚರಣೆಯ ಅಂಗವಾಗಿ ಕರ್ನಾಟಕ ದ್ವಿಚಕ್ರ ವಾಹನ ಕಾರ್ಯಗಾರ ಮಾಲೀಕರು ಮತ್ತು ತಂತ್ರಜ್ಞರ ಸಂಘದಿಂದ ನಗರದ ಅರಮನೆ ಮೈದಾನದಲ್ಲಿ ಬೃಹತ್ ಆಲ್ ಇಂಡಿಯಾ ಬೈಕ್ ಮೆಕಾನಿಕಲ್ ಸಮಾವೇಶ ಯಶಸ್ವಿಯಾಗಿ ನೆರವೇರಿತು.

ಈ ಐತಿಹಾಸಿಕ ಸಮಾವೇಶದಲ್ಲಿ ದೇಶದ ವಿವಿಧ ರಾಜ್ಯಗಳಿಂದ ಸುಮಾರು 12,500ಕ್ಕೂ ಹೆಚ್ಚು ಬೈಕ್ ಮೆಕಾನಿಕ್ಸ್ ಮತ್ತು ಕಾರ್ಯಗಾರ ಮಾಲೀಕರು ಭಾಗವಹಿಸಿ, ಉದ್ಯಮದ ಅಭಿವೃದ್ಧಿ, ತಾಂತ್ರಿಕ ಪ್ರಗತಿ ಹಾಗೂ ಕಾರ್ಮಿಕರ ಕಲ್ಯಾಣ ಕುರಿತು ಚರ್ಚಿಸಿದರು. ನಂಜಾವಧೂತ ಮಹಾ ಸ್ವಾಮೀಜಿ, ಜಾಮಿಯಾ ಮಸ್ಜಿದ್ ನ ಮಹಮದ್ ಮಕ್ಸೂದ್ ಇಮ್ರಾನ್ ರಶೀದ್, ವಿಧಾನಪರಿಷತ್ ಮುಖ್ಯ ಸಚೇತಕ ಸಲೀಮ್ ಅಹಮದ್ ಹಾಗೂ ಸಂಘದ ಕಾರ್ಯದರ್ಶಿ ಭಾಸ್ಕರ್ ನಾಯ್ಡು ಸಮಾವೇಶಕ್ಕೆ ಚಾಲನೆ ನೀಡಿದರು.

ಬಳಿಕ ಮಾತನಾಡಿದ ನಂಜಾವಧೂತ ಮಹಾಸ್ವಾಮೀಜಿ, ಸಹಸ್ರಾರು ಬೈಕ್ ಮೆಕಾನಿಕ್‌ಗಳು ಒಂದೇ ವೇದಿಕೆಯಲ್ಲಿ ಸೇರುವುದು ಮಹತ್ವದ ಸಾಧನೆ. ನಿಮ್ಮ ಕೈಯಲ್ಲಿ ದೇಶದ ಚಾಲನಾ ಶಕ್ತಿ ಇದೆ. ಪ್ರತಿಯೊಂದು ಬೈಕ್ ಓಡಲು ನಿಮ್ಮ ಪರಿಶ್ರಮವೇ ಕಾರಣ. ನೀವು ಕೇವಲ ಮೆಕ್ಯಾನಿಕ್‌ಗಳಲ್ಲ. ಸಮಾಜದ ನಿರ್ಮಾತೃಗಳು. ತಂತ್ರಜ್ಞಾನವನ್ನು ಅಳವಡಿಸಿಕೊಂಡು, ನಿಷ್ಠೆ ಮತ್ತು ಪ್ರಾಮಾಣಿಕತೆಯಿಂದ ಕೆಲಸ ಮಾಡಿದರೆ ನಿಮ್ಮ ಭವಿಷ್ಯ ಇನ್ನಷ್ಟು ಪ್ರಕಾಶಮಾನವಾಗುತ್ತದೆ. ಸಂಘಟಿತ ಶಕ್ತಿಯ ಮೂಲಕ ನೀವು ನಿಮ್ಮ ಹಕ್ಕುಗಳನ್ನು ಸಾಧಿಸಿ, ಮುಂದಿನ ಪೀಳಿಗೆಗೆ ಉತ್ತಮ ದಾರಿ ತೋರಿಸಬೇಕು ಎಂದು ಕರೆ ನೀಡಿದರು.

ಬೈಕ್ ಮೆಕ್ಯಾನಿಕ್ ಸಮುದಾಯಕ್ಕೆ ಹೊಸ ದಿಕ್ಕು ನೀಡುವಲ್ಲಿ ಈ ಸಮಾವೇಶ ಮಹತ್ವದ ಹೆಜ್ಜೆಯಾಗಿದೆ ಮತ್ತು ಸಂಘಟಿತ ಅಭಿವೃದ್ಧಿಯ ಅಗತ್ಯತೆಯನ್ನು ಸಮಾವೇಶ ಸಾದರಪಡಿಸಿತು. ಈ ಸಂದರ್ಭದಲ್ಲಿ ಹೊಸ ತಂತ್ರಜ್ಞಾನ,. ಆಧುನಿಕ ಸಾಧನಗಳು ಹಾಗೂ ಬೈಕ್ ಸರ್ವಿಸ್ ಕ್ಷೇತ್ರದ ನಾವೀನ್ಯತೆ ಅನಾವರಣ ಗೊಂಡಿತು.

# ವಾಯ್ಸ್ ಆಫ್ ಸದಾಶಿವನಗರದಿಂದ 170 ಪೌರಕಾರ್ಮಿಕರಿಗೆ ಸನ್ಮಾನ



**ಬೆಂಗಳೂರು, ಮೇ 1:** ವಿಶ್ವ ಕಾರ್ಮಿಕರ ದಿನಾಚರಣೆ ಪ್ರಯುಕ್ತ ಸದಾಶಿವನಗರ ಸ್ಯಾಂಕಿ ಕೆರೆ ಬಳಿ ವಾಯ್ಸ್ ಆಫ್ ಸದಾಶಿವನಗರ ಸಾಮಾ ಜಿಕ ಸೇವಾ ಸಂಘಟನೆಯಿಂದ 170 ಪೌರ ಕಾರ್ಮಿಕರನ್ನು ಗೌರವಿಸಲಾಯಿತು. ಪ್ರಯುಕ್ತ ವಾಯ್ಸ್ ಆಫ್ ಸದಾಶಿವನಗರ ಸಾಮಾಜಿಕ ಸೇವಾ ಸಂಘಟನೆಯ ಅಧ್ಯಕ್ಷೆ ಶಿಲ್ಪಾ ಜತ್ತಿ ಹಾಗೂ ಮಲ್ಲೇಶ್ವರ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಅನೂಪ್ ಅಯ್ಯಂಗಾರ್ ನೇತೃತ್ವದಲ್ಲಿ ಸ್ವಚ್ಛತಾ ಅಭಿಯಾನ ನಡೆಯಿತು. ಇದೇ ಸಂದರ್ಭದಲ್ಲಿ ಪೌರ ಕಾರ್ಮಿಕರಿಗೆ ಉಡುಗೊರೆ ನೀಡಿ ಸನ್ಮಾನಿಸಲಾಯಿತು.

ಶಿಲ್ಪಾಜತ್ತಿ ಮಾತನಾಡಿ, ಸಾರ್ವಜನಿಕರು ಎಲ್ಲೆಂದರಲ್ಲಿ ಕಸ ಎಸೆಯುವುದು ಸರಿಯಲ್ಲ. ಏಕಬಳಕೆ ಪ್ಲಾಸ್ಟಿಕ್ ಅಪಾಯಕಾರಿಯಾಗಿದ್ದು, ಇಂತಹ ಪ್ಲಾಸ್ಟಿಕ್ ನಿಂದ ದೂರ ಇರುವುದು ಪ್ರತಿಯೊಬ್ಬರ ಕರ್ತವ್ಯ ವಾಗಬೇಕು. ಪರಿಸರ ಉಳಿಯಬೇಕು, ಜೀವಜಲದ ಮಟ್ಟದ ಹೆಚ್ಚಾಗಬೇಕು. ನಗರದಲ್ಲಿ ಮರಗಳು ಮಳೆಯಿಂದ ಧರೆಗೆ ಉರುಳುತ್ತಿದ್ದು, ಇನ್ನು ಮುಂದೆ ಗ್ರೇಟರ್ ಬೆಂಗಳೂರು ಪ್ರಾಧಿಕಾರದಿಂದ ಹುಣಸೆ, ಹೊಂಗೆ ಸಸಿಗಳನ್ನು ಬೆಳೆಸಿದರೆ ಮರಗಳು ಹೆಚ್ಚು ಬಾಳಿಕೆ ಬರುತ್ತವೆ.

ಅನೂಪ್ ಅಯ್ಯಂಗಾರ್ ಮಾತನಾಡಿ, ವೈದ್ಯ ಎಷ್ಟು ಮುಖ್ಯವೊ ಪೌರಕಾರ್ಮಿಕರು ಅಷ್ಟೇ ಮುಖ್ಯ. ಪೌರಕಾರ್ಮಿಕರು ನಮ್ಮ ಸ್ವಚ್ಛತಾ ರಾಯಭಾರಿಗಳು. ಜೀವದ ಹಂಗು ತೊರೆದು ಕಾರ್ಯ ನಿರ್ವಹಿಸುತ್ತಾರೆ. ನಗರದ ನಾಗರಿಕರು ಕಸ ವಿಂಗಡಣೆಗೆ ಆದ್ಯತೆ ನೀಡಬೇಕು. ಸ್ವಚ್ಛತೆ ಇದ್ದರೆ ಆರೋಗ್ಯ ಎಂಬುದನ್ನು ಪ್ರತಿಯೊಬ್ಬರು ಅರ್ಥಮಾಡಿಕೊಳ್ಳಬೇಕು ಎಂದರು.



ಬೆಂಗಳೂರು ಮಹಾನಗರದಲ್ಲಿ ಬಿದ್ದ ಭಾರಿ ಮಳೆಯಿಂದಾಗಿ ಮತ್ತಿಕೆರೆಯ ಎಂ.ಎಸ್.ರಾಮಯ್ಯ ರಸ್ತೆಯಲ್ಲಿ ವಾಹನ ಸವಾರರು ಪರದಾಡಿದರು.

# ಜೆಡಿಎಸ್ ಕಚೇರಿ ಜೆ.ಪಿ. ಭವನದಲ್ಲಿ ವಿಶ್ವ ಕಾರ್ಮಿಕರ ದಿನಾಚರಣೆ ಆಚರಣೆ



**25 ಕಾರ್ಮಿಕ ಸಾಧಕರಿಗೆ ಎಚ್‌ಡಿಕೆ ಕಾರ್ಮಿಕ ರತ್ನ ಪ್ರಶಸ್ತಿ ಪ್ರದಾನ**

**ಕಾರ್ಮಿಕನ ಬೆವರ ಹನಿಯೂ ನಾಡಿನ ಪ್ರಗತಿಗೆ ಕೊಡುಗೆ: ಎಚ್.ಎಂ. ರಮೇಶ್ ಗೌಡ**

**ಬೆಂಗಳೂರು, ಮೇ 1:** 2026ಜೆಡಿಎಸ್ ಪಕ್ಷದ ಕಚೇರಿಯಲ್ಲಿ ನಡೆದ ವಿಶ್ವ ಕಾರ್ಮಿಕ ದಿನಾಚರಣೆ ಕಾರ್ಯಕ್ರಮದ ಸಂದರ್ಭದಲ್ಲಿ 25 ಶ್ರಮಜೀವಿಗಳಿಗೆ ಎಚ್.ಡಿ.ಕುಮಾರಸ್ವಾಮಿ ಕಾರ್ಮಿಕ ರತ್ನ ಪ್ರಶಸ್ತಿ ಪ್ರದಾನ ಮಾಡಿ ಗೌರವಿಸಲಾಯಿತು.

ಕಾರ್ಮಿಕನ ಬೆವರು ದೇಶದ ಬೆಳವಣಿಗೆಯ ಬುನಾದಿ. ಆ ಶ್ರಮಕ್ಕೆ ಗೌರವ ಸಲ್ಲಿಸುವ ಸಲುವಾಗಿ ಇಂದು ಜೆಡಿಎಸ್ ಕಚೇರಿ ಜೆ.ಪಿ. ಭವನದಲ್ಲಿ ವಿಶ್ವ ಕಾರ್ಮಿಕರ ದಿನಾಚರಣೆಯನ್ನು ಬಹಳ ಅರ್ಥಪೂರ್ಣವಾಗಿ ಪಕ್ಷದ ವತಿಯಿಂದ ಆಚರಿಸಲಾಯಿತು.

ಕಾರ್ಯಕ್ರಮ ಉದ್ಘಾಟಿಸಿ, ಗ್ರೇಟರ್ ಬೆಂಗಳೂರು ಜೆಡಿಎಸ್ ಅಧ್ಯಕ್ಷ ಎಚ್.ಎಂ. ರಮೇಶ್ ಗೌಡ ಅವರು ಮಾತನಾಡಿದರು.


"ಕಾರ್ಮಿಕ ಅಂದರೆ, ಎಸಿ ರೂಮಲ್ಲಿ ಕುಳಿತು ಫೈಲ್‌ಗೆ ಸಹಿ ಹಾಕುವವನಲ್ಲ. ಬಿಸಿಲಲ್ಲಿ ನಿಂತು ಇಟ್ಟಿಗೆ ಹೊರುವವನು, ಮಳೆಯಲ್ಲಿ ನೆನೆದು ರಸ್ತೆ ಗುಡಿಸುವ ತಾಯಿ, ಹಗಲು-ರಾತ್ರಿ ಎನ್ನದೇ ಆಟೋ ಓಡಿಸುವ ಅಣ್ಣ, ಸೂಜಿ-ದಾರ ಹಿಡಿದು ಗಾರ್ಮೆಂಟ್ಸ್‌ನಲ್ಲಿ ಬೆವರು ಸುರಿಸುವ ತಾಯಂದಿರು - ಇವರೇ ನಿಜವಾದ ದೇಶದ ಮಾಲೀಕರು" ಎಂದು ತಿಳಿಸಿದರು. "ಕಾರ್ಮಿಕನ ಬೆವರು ಬಂಗಾರಕ್ಕಿಂತ ಹೆಚ್ಚು. ಆ ಬೆವರಿನ ಮೇಲೆ ಈ ದೇಶ ನಿಂತಿದೆ. ಆದರೆ ಆ ಕಾರ್ಮಿಕನ ಬದುಕು ಇವತ್ತಿಗೂ ಬೀದಿಯಲ್ಲಿದೆ. ಯಾಕೆ? ಯಾಕೆಂದರೆ ಆಳುವವರಿಗೆ ಕಾರ್ಮಿಕರ ನೋವು ಅರ್ಥ ಆಗಿಲ್ಲ. ಇಂತಹ ಕಾರ್ಮಿಕ ವರ್ಗಕ್ಕೆ ಸರಕಾರ ನ್ಯಾಯಯುತವಾಗಿ ಸಲ್ಲಬೇಕಾದ ಸೌಲಭ್ಯಗಳನ್ನು ಕೊಡಬೇಕು" ಎಂದು ಆಗ್ರಹಿಸಿದರು.

"ಕಾರ್ಮಿಕನೇ ದೇಶದ ನಿಜವಾದ ನಿರ್ಮಾತೃ. ಕಟ್ಟಡ ಕಾರ್ಮಿಕ, ಗಾರ್ಮೆಂಟ್ಸ್ ನೌಕರ, ಆಟೋ ಚಾಲಕ, ಪೌರಕಾರ್ಮಿಕ, ಕೃಷಿ ಕೂಲಿ, ಅಸಂಘಟಿತ ವಲಯದ ದುಡಿಮೆಗಾರ... ನಿಮ್ಮ ಶ್ರಮವಿಲ್ಲದೆ ಈ ಸಮಾಜವಿಲ್ಲ. ನಿಮ್ಮ ಬೆವರ ಹನಿ ಹನಿಯೂ ನಾಡಿನ ಪ್ರಗತಿಗೆ ಕೊಡುಗೆ" ಎಂದರು.

25 ಜನ ಶ್ರಮಜೀವಿಗಳಿಗೆ "ಶ್ರೀ ಹೆಚ್.ಡಿ. ಕುಮಾರಸ್ವಾಮಿ ಕಾರ್ಮಿಕ ರತ್ನ ಪ್ರಶಸ್ತಿ"

ಕಟ್ಟಡ ನಿರ್ಮಾಣ, ಗಾರ್ಮೆಂಟ್ಸ್, ಆಟೋ, ಟ್ಯಾಕ್ಸಿ, ಪೌರಕಾರ್ಮಿಕ, ಭದ್ರತಾ ಸಿಬ್ಬಂದಿ, ಮನೆ ಕೆಲಸ, ಹಮಾಲಿ ಸೇರಿದಂತೆ ವಿವಿಧ ಕಾರ್ಮಿಕ ಕ್ಷೇತ್ರದಲ್ಲಿ ನಿಸ್ವಾರ್ಥ ಸೇವೆ ಸಲ್ಲಿಸಿರುವ 25 ' ಶ್ರಮಜೀವಿಗಳಿಗೆ ಎಚ್.ಡಿ. ಕುಮಾರಸ್ವಾಮಿ ಕಾರ್ಮಿಕ ರತ್ನ ಪ್ರಶಸ್ತಿ ಪ್ರದಾನ ಮಾಡಿ ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ವಿಧಾನ ಪರಿಷತ್ ಸದಸ್ಯ ಟಿ.ಎನ್. ಜವರಾಯಿಗೌಡ , ಮಾಜಿ ಸಚಿವೆ ಲೀಲಾದೇವಿ ಆರ್. ಪ್ರಸಾದ್, ಮಾಜಿ ಶಾಸಕ ಕೆ.ಎ. ತಿಪ್ಪೇಸ್ವಾಮಿ ಗ್ರೇಟರ್ ಬೆಂಗಳೂರು ಕಾರ್ಮಿಕ ವಿಭಾಗದ ಅಧ್ಯಕ್ಷ ಎಂ. ಗೋಪಾಲ, ಶೈಲಾ ಸಂತೋಜಿ ರಾವ್ ಹಾಗೂ ಪಕ್ಷದ ಮುಖಂಡರು ಉಪಸ್ಥಿತರಿದ್ದರು.



# ರಾಜ್ಯದಲ್ಲಿ ವಿದ್ಯುತ್ ದರ ಏರಿಕೆ, ಪ್ರತಿ ಯೂನಿಟ್‌ಗೆ 56 ಪೈಸೆ ಹೆಚ್ಚಳ

**ಬೆಂಗಳೂರು, ಮೇ 1:** ಗೃಹಬಳಕೆ ವಿದ್ಯುತ್ ದರ ಹೆಚ್ಚಿಸಿ ಕೆಇಆರ್‌ಸಿ ಆದೇಶ ಹೊರಡಿಸಿದ್ದು, ಗ್ರಾಹಕರಿಗೆ ಮತ್ತೊಂದು ಬೆಲೆ ಏರಿಕೆಯ ಶಾಕ್ ಎದುರಾಗಿದೆ.

ಶುಕ್ರವಾರದಿಂದಲೇ ಗೃಹಬಳಕೆ ವಿದ್ಯುತ್ ದರದಲ್ಲಿ ಏರಿಕೆ ಜಾರಿಯಾಗಿದ್ದು, ಪ್ರತಿ ಯೂನಿಟ್‌ಗೆ 56 ಪೈಸೆ ಹೆಚ್ಚಳ ಮಾಡಲಾಗಿದೆ. ಮೇ ತಿಂಗಳ ಬಿಲ್‌ನಿಂದ ಈ ಹೊಸ ದರ ಅನ್ವಯವಾಗಲಿದೆ.

ಎಸ್ಕಾಂಗಳು ಸಲ್ಲಿಸಿದ್ದ ಪ್ರಸ್ತಾವನೆಯನ್ನು ಪರಿಗಣಿಸಿದ ಕೆಇಆರ್‌ಸಿ, ಈ ದರ ಏರಿಕೆಗೆ ಮಂಜೂರು ನೀಡಿದೆ. 2024-25ನೇ ಆರ್ಥಿಕ ವರ್ಷದಲ್ಲಿ ವಿದ್ಯುತ್ ಮಾರಾಟದಿಂದ 34,084 ಕೋಟಿ ರೂಪಾಯಿ ಆದಾಯ ನಿರೀಕ್ಷಿಸಲಾಗಿತ್ತು. ಆದರೆ, ಕೇವಲ 32,019 ಕೋಟಿ ರೂಪಾಯಿ ಆದಾಯ ಮಾತ್ರ ಬಂದಿದ್ದು, 2,068 ಕೋಟಿ ರೂಪಾಯಿ ಕೊರತೆ ಉಂಟಾಗಿದೆ. ಈ ಕೊರತೆಯನ್ನು ಪೂರೈಸಲು ಗ್ರಾಹಕರಿಂದಲೇ ಸಂಗ್ರಹಿಸುವಂತೆ ಕೆಇಆರ್‌ಸಿ ಆದೇಶಿಸಿದೆ. ಅದರ ಭಾಗವಾಗಿ ಪ್ರತಿ ಯೂನಿಟ್‌ಗೆ 56 ಪೈಸೆ ಹೆಚ್ಚಳ ಮಾಡಲಾಗಿದೆ.

ದರ ಏರಿಕೆಯಿಂದ ಈಗಾಗಲೇ ಬೆಲೆ ಏರಿಕೆಯಿಂದ ಸಂಕಷ್ಟದಲ್ಲಿರುವ ಜನರಿಗೆ ಮತ್ತಷ್ಟು ಭಾರವಾಗಲಿದೆ.

# ವಿಧಾನಸೌಧ ಸಮೀಪವೇ ಕುಸಿದ ರಸ್ತೆ, ಗುಂಡಿಯಲ್ಲಿ ಸಿಲುಕಿದ ಪೊಲೀಸ್ ಜೀಪ್

**ಬೆಂಗಳೂರು.ಮೇ.1:** ಸಿಲಿಕಾನ್ ಸಿಟಿಯಲ್ಲಿ ಸುರಿಯುತ್ತಿರುವ ಮಹಾಮಳೆಯ ಅವಾಂತರಗಳು ದಿನೇದಿನೇ ಗಂಭೀರವಾಗುತ್ತಿವೆ. ನಗರದ ಹೃದಯಭಾಗದಲ್ಲೇ ಭಾರೀ ಅಪಾಯಕರ ಘಟನೆ ಬೆಳಕಿಗೆ ಬಂದಿದೆ. ವಿಧಾನಸೌಧ ಸಮೀಪದಲ್ಲೇ ರಸ್ತೆ ಏಕಾಏಕಿ ಕುಸಿದು ಆತಂಕ ಸೃಷ್ಟಿಸಿದೆ.

ಎಂಎಸ್ ಬಿಲ್ಡಿಂಗ್ ಮುಂಭಾಗ ದಲ್ಲಿ ಸುಮಾರು ಆರೇಳು ಅಡಿ ಆಳಕ್ಕೆ ರಸ್ತೆ ಬಾಯ್ತೆರೆದುಕೊಂಡಿದೆ. ಸ್ಥಳದಲ್ಲೇ ನಿಂತಿದ್ದ ಪೊಲೀಸ್ ಜೀಪ್ ಗುಂಡಿಗೆ ಸಿಲುಕಿದ್ದು, ದೊಡ್ಡ ಅನಾಹುತ ತಪ್ಪಿದಂತಾಗಿದೆ. ಅದೃಷ್ಟವಶಾತ್ ಯಾವುದೇ ಪ್ರಾಣಾಪಾಯ ಸಂಭವಿಸಿಲ್ಲ.

ಪ್ರಾಥಮಿಕ ಮಾಹಿತಿಯ ಪ್ರಕಾರ, ಇತ್ತೀಚೆಗೆ ಭೂಗತ ಪೈಪ್ ಅಳವಡಿಕೆಗಾಗಿ ಅಗೆದು ಮರು ನಿರ್ಮಾಣ ಮಾಡಲಾಗಿದ್ದ ರಸ್ತೆಯೇ ಕುಸಿದಿದೆ. ನಿರಂತರ ಮಳೆಯಿಂದ ರಸ್ತೆ ತೇವಗೊಂಡು, ಒಳಭಾಗ ದುರ್ಬಲಗೊಂಡ ಹಿನ್ನೆಲೆ ಈ ಕುಸಿತ ಸಂಭವಿಸಿರುವ ಶಂಕೆ ವ್ಯಕ್ತವಾಗಿದೆ.

ಸ್ಥಳದಲ್ಲಿ ನೀರು ನಿಂತಿದ್ದು, ಪರಿಸ್ಥಿತಿ ಇನ್ನಷ್ಟು ಗಂಭೀರವಾಗುವ ಭೀತಿ ಇದೆ. ಸಂಚಾರಿ ಪೊಲೀಸರು ಹಾಗೂ ಜಿಬಿಎ ಅಧಿಕಾರಿಗಳು ಸ್ಥಳಕ್ಕೆ ದೌಡಾಯಿಸಿ ಪರಿಶೀಲನೆ ನಡೆಸುತ್ತಿದ್ದಾರೆ. ಸುತ್ತಮುತ್ತ ಬ್ಯಾರಿಕೇಡ್ ಹಾಕಿ ವಾಹನ ಸಂಚಾರವನ್ನು ನಿಯಂತ್ರಿಸಲಾಗಿದೆ.

ನಗರದಲ್ಲಿ ಮಳೆ ಹೆಚ್ಚಾದಂತೆ ಇಂತಹ ರಸ್ತೆ ಕುಸಿತ ಘಟನೆಗಳು ಹೆಚ್ಚಾಗುತ್ತಿರುವುದು ಸಾರ್ವಜನಿಕರಲ್ಲಿ ಆತಂಕ ಮೂಡಿಸಿದೆ. ಕಾಮಗಾರಿಗಳ ಗುಣಮಟ್ಟದ ಬಗ್ಗೆ ಕೂಡ ಪ್ರಶ್ನೆಗಳು ಕೇಳಿಬರುತ್ತಿವೆ.

ಒಟ್ಟಿನಲ್ಲಿ ಮಳೆಗಾಲದ ನಡುವೆ ಮೂಲಸೌಕರ್ಯಗಳ ಸ್ಥಿತಿ ಮತ್ತೊಮ್ಮೆ ಬಯಲಾಗಿದ್ದು, ತುರ್ತು ಕ್ರಮ ಕೈಗೊಳ್ಳಬೇಕೆಂದು ನಾಗರಿಕರು ಒತ್ತಾಯಿಸುತ್ತಿದ್ದಾರೆ.



ಬೆಂಗಳೂರಿನ ಮಹಾಬೋಧಿ ಸೊಸೈಟಿಯಲ್ಲಿ ಶುಕ್ರವಾರ ಬುದ್ಧ ಪೂರ್ಣಿಮೆಯನ್ನು ಆಚರಿಸಲಾಯಿತು.

# ರಣಬಿಸಿಲಿಗೆ ದಿನೇದಿನೇ ಕುಸಿಯುತ್ತಿದೆ ಕೆಆರ್‌ಎಸ್ ಜಲಾಶಯದ ಮಟ್ಟ

**ಮಂಡ್ಯ, ಮೇ 1:** ಕಡು ಬೇಸಿಗೆಯ ರಣಬಿಸಿಲಿಗೆ ಮಂಡ್ಯದ ಹೆಮ್ಮೆ, ನಾಡಿನ ಜೀವನಾಡಿ ಕೃಷ್ಣರಾಜಸಾಗರ ಜಲಾಶಯ ಸೊರಗುತ್ತಿದೆ. ದಿನೇದಿನೇ ನೀರಿನ ಮಟ್ಟ ಕುಸಿಯುತ್ತಿದ್ದು, ಇದು ಕೇವಲ ಅಂಕಿ-ಅಂಶಗಳ ಕುಸಿತವಲ್ಲ, ಬದಲಿಗೆ ಲಕ್ಷಾಂತರ ಜನರ ದಾಹ ತಣಿಸುವ ಆಧಾರಸ್ತಂಭವೇ ಅಲುಗಾಡುತ್ತಿರುವ ಮುನ್ಸೂಚನೆಯಾಗಿದೆ.

ಜಲಾಶಯದ ಗರಿಷ್ಠ ಮಟ್ಟ 124.80 ಅಡಿಯಾಗಿದ್ದು, ಪ್ರಸ್ತುತ ಇದು 92.91 ಅಡಿಗೆ ಕುಸಿದಿದೆ. ಅಂದರೆ, ಜಲಾಶಯವು ತನ್ನ ಅರ್ಧಕ್ಕಿಂತ ಹೆಚ್ಚಿನ ಸಂಗ್ರಹ ಸಾಮರ್ಥ್ಯವನ್ನು ಕಳೆದುಕೊಂಡಿದೆ. ಜಲಾಶಯಕ್ಕೆ ಬರುತ್ತಿರುವ ಒಳಹರಿವು ಕೇವಲ 60 ಕ್ಯೂಸೆಕ್ ಆಗಿದ್ದರೆ, ಕುಡಿಯುವ ನೀರು ಹಾಗೂ ಅನಿವಾರ್ಯ ಕಾರಣಗಳಿಗಾಗಿ ಬಿಡಲಾಗುತ್ತಿರುವ ಹೊರಹರಿವು 4371 ಕ್ಯೂಸೆಕ್ ದಾಟಿದೆ. ಈ ಅಸಮತೋಲನವು ಜಲಾಶಯವನ್ನು ಶೀಘ್ರವಾಗಿ ಖಾಲಿ ಮಾಡುತ್ತಿದೆ.

ಕೆಆರ್‌ಎಸ್ ಜಲಾಶಯವು ಕೇವಲ ಮಂಡ್ಯ ಜಿಲ್ಲೆಯ ಸೊತ್ತಲ್ಲ; ಇದು ಬೆಂಗಳೂರು, ಮೈಸೂರು ಮತ್ತು ಮಂಡ್ಯ ಸೇರಿದಂತೆ ಹಲವು ಜಿಲ್ಲೆಗಳ ಕುಡಿಯುವ ನೀರಿನ ಪ್ರಮುಖ ಆಸರೆಯಾಗಿದೆ. ಕೋಟಿಗೂ ಅಧಿಕ ಜನಸಂಖ್ಯೆ ಹೊಂದಿರುವ ರಾಜಧಾನಿ ಬೆಂಗಳೂರಿಗೆ ಕಾವೇರಿಯೇ ಆಸರೆ. ನೀರಿನ



ಮಟ್ಟ ಕುಸಿದಲ್ಲಿ ಬೆಂಗಳೂರಿನಲ್ಲಿ ಜಲಕ್ಷಾಮ ತಲೆದೂರುವ ಸಾಧ್ಯತೆ ದಟ್ಟವಾಗಿದೆ.

ರೈತರ ಆತಂಕ: ಈಗಾಗಲೇ ಬೇಸಿಗೆ ಬೆಳೆಗೆ ನೀರು ನಿಲ್ಲಿಸಲಾಗಿದ್ದು, ರೈತರು ಬೆಳೆಗಳನ್ನು ಉಳಿಸಿಕೊಳ್ಳಲು ಹರಸಾಹಸ ಪಡುತ್ತಿದ್ದಾರೆ. ಪರಿಸ್ಥಿತಿಯ ಗಂಭೀರತೆಯನ್ನು ಅರಿತಿರುವ ಸರ್ಕಾರ, ಜಲಾಶಯದಲ್ಲಿ ಉಳಿದಿರುವ ಅಲ್ಪಸ್ವಲ್ಪ ನೀರನ್ನು ಕೇವಲ ಕುಡಿಯುವ ಉದ್ದೇಶಕ್ಕೆ ಮಾತ್ರ ಬಳಸಿಕೊಳ್ಳುವಂತೆ ಕಟ್ಟುನಿಟ್ಟಿನ ಆದೇಶ ಹೊರಡಿಸಿದೆ. ಕೃಷಿ ಚಟುವಟಿಕೆಗಳಿಗೆ ನೀರು ಸ್ಥಗಿತಗೊಳಿಸಿರುವುದು ರೈತ ಸಮುದಾಯದಲ್ಲಿ ಅಸಮಾಧಾನ ಮೂಡಿಸಿದ್ದರೂ, ಕುಡಿಯುವ ನೀರಿನ ಭವಿಷ್ಯದ ದೃಷ್ಟಿಯಿಂದ ಇದು ಅನಿವಾರ್ಯ ಹೆಜ್ಜೆಯಾಗಿದೆ.

**ಮುಂದಿರುವ ಸವಾಲು**

ಮಳೆಗಾಲ ಆರಂಭವಾಗಲು ಇನ್ನೂ ತಿಂಗಳುಗಳು ಬಾಕಿ ಇವೆ. ಅಲ್ಲಿಯವರೆಗೆ ಲಭ್ಯವಿರುವ 17.746 ಟಿಎಂಸಿ ನೀರನ್ನು ಅತ್ಯಂತ ಮಿತವಾಗಿ ಬಳಸಬೇಕಾದ ಜವಾಬ್ದಾರಿ ಸರ್ಕಾರ ಮತ್ತು ಸಾರ್ವಜನಿಕರ ಮೇಲಿದೆ. ಬಿಸಿಲಿನ ಬೇಗೆ ಹೀಗೆಯೇ ಮುಂದುವರಿದು ಒಳಹರಿವು ಹೆಚ್ಚಾಗದಿದ್ದರೆ, ಮುಂಬರುವ ದಿನಗಳಲ್ಲಿ ಕುಡಿಯುವ ನೀರಿಗೂ ತತ್ವಾರ ಎದುರಾಗುವುದು ಖಚಿತ.

### ಕೆಆರ್‌ಎಸ್ ಜಲಾಶಯದ ನೀರಿನ ಸಂಗ್ರಹ ವಿವರ

| | |
|---|---|
| ಗರಿಷ್ಠ ಮಟ್ಟ | 124.80 ಅಡಿ |
| ಇಂದಿನ ಮಟ್ಟ | 92.91 ಅಡಿ |
| ಒಳಹರಿವು | 60 ಕ್ಯೂಸೆಕ್ |
| ಹೊರಹರಿವು | 4371 ಕ್ಯೂಸೆಕ್ |
| ಪ್ರಸ್ತುತ ಸಂಗ್ರಹ | 17.746 ಕ್ಯೂಸೆಕ್ |

# ರಾಜ್ಯದಲ್ಲೇ ಮೊದಲಬಾರಿಗೆ ಚಾಮರಾಜನಗರ ಉಪನೋಂದಣಾಧಿಕಾರಿ ಕಚೇರಿಯಲ್ಲಿ ಕಾಗದರಹಿತ ನೋಂದಣಿ

**ಚಾಮರಾಜನಗರ, ಮೇ.1–**ಮುದ್ರಾಂಕ ಇಲಾಖೆಯ ಮಹಾಪರಿವೀಕ್ಷಕ ಮತ್ತು ಮುದ್ರಾಂಕಗಳ ಆಯುಕ್ತ ಎಂ.ಪಿ. ಮುಲ್ಲೈ ಮುಗಿಲನ್ ಚಾಲನೆ ಚಾಮರಾಜನಗರ, ಮೇ 1: ರಾಜ್ಯ ಸರ್ಕಾರದ ನೋಂದಣಿ ಮತ್ತು ಮುದ್ರಾಂಕ ಇಲಾಖೆಯ ಕಾವೇರಿ 2.0 ಪೋರ್ಟಲ್ ಮೂಲಕ ರಾಜ್ಯದಲ್ಲಿ ಇದೇ ಮೊದಲ ಬಾರಿಗೆ ಚಾಮರಾಜನಗರದ ಉಪನೋಂದಣಿ ಕಚೇರಿಯಲ್ಲಿ ಕಾಗದರಹಿತ ನೋಂದಣಿಗೆ ಮುದ್ರಾಂಕ ಇಲಾಖೆಯ ಮಹಾಪರಿವೀಕ್ಷಕ ಮತ್ತು ಮುದ್ರಾಂಕಗಳ ಆಯುಕ್ತ ಎಂ.ಪಿ. ಮುಲ್ಲೈ ಮುಗಿಲನ್ ಚಾಲನೆ ನೀಡಿದರು.

ನಗರದ ತಾಲೂಕು ಕಚೇರಿ ಆವರಣದಲ್ಲಿರುವ ನೋಂದಣಿ ಕಚೇರಿಯಲ್ಲಿ ಜಿಲ್ಲೆಯ ರೈತರಿಗೆ ಕಾಗದರಹಿತ ನೋಂದಣಿ ಪ್ರಕ್ರಿಯೆಗೆ ಕಂಪ್ಯೂಟರ್ ಬಟನ್ ಒತ್ತುವ ಮೂಲಕ ಚಾಲನೆ ನೀಡಿದರು.

ಬಳಿಕ ಮಾತನಾಡಿದ ಅವರು, ನೂತನ ಕಾಗದರಹಿತ ನೋಂದಣಿ ವ್ಯವಸ್ಥೆಯು ನಾಗರಿಕ ಕೇಂದ್ರಿತ, ಪಾರದರ್ಶಕ ಹಾಗೂ ಪರಿಣಾಮಕಾರಿ ನೋಂದಣಿ ಸೇವೆಗಳನ್ನು ಒದಗಿಸುವಲ್ಲಿ ಮಹತ್ವದ ಮೈಲಿಗಲ್ಲಾಗಿದೆ. ಸಾಂಪ್ರದಾಯಿಕ ಕಾಗದ ಆಧಾರಿತ ನೋಂದಣಿ ವ್ಯವಸ್ಥೆಯಿಂದ ಸಂಪೂರ್ಣ ಡಿಜಿಟಲ್, ಕಾಗದರಹಿತ ವ್ಯವಸ್ಥೆಗೆ ಆಗುತ್ತಿರುವ ಪರಿವರ್ತನೆ, ಆಸ್ತಿ ವ್ಯವಹಾರಗಳನ್ನು ನಿರ್ವಹಿಸುವ ವಿಧಾನದಲ್ಲಿ ಮಹತ್ತರ ಬದಲಾವಣೆ ಜೊತೆಗೆ ವಿಶ್ವಾಸಾರ್ಹತೆ ಹೆಚ್ಚುತ್ತದೆ ಎಂದರು.

ಹೊಸ ವ್ಯವಸ್ಥೆಯ ಪ್ರಯೋಜನಗಳು ಕೇವಲ ಸುಧಾರಣೆಯಷ್ಟೇ



ಅಲ್ಲ. ಹಳೆಯ ಕೈಚಾಲಿತ ವ್ಯವಸ್ಥೆಯಲ್ಲಿದ್ದ ಸಮಸ್ಯೆಗಳು ಮತ್ತು ತೊಂದರೆಗಳಿಗೆ ಸಮಗ್ರ ಪರಿಹಾರ ಒದಗಿಸಲಿವೆ. ಕಾಗದದ ವ್ಯವಸ್ಥೆಯಿಂದ ಭೌತಿಕ ದಾಖಲೆಗಳು ನಕಲಿ, ಅಕ್ಷರ ಬದಲಾವಣೆ, ಪುಟ ಬದಲಾವಣೆ ಹಾಗೂ ನಂತರದ ತಿದ್ದುಪಡಿಗಳಿಗೆ ಒಳಪಡುವ ಸಾಧ್ಯತೆಗಳು ಇದ್ದವು. ಪರಿಶೀಲನೆ ಬಹುತೇಕ ಕೈಚಾಲಿತವಾಗಿದ್ದು, ದೋಷಗಳ ಸಾಧ್ಯತೆ ಹೆಚ್ಚು ಇರುತ್ತದೆ. ನೂತನ ವ್ಯವಸ್ಥೆಯಿಂದ ಡಿಜಿಟಲ್ ದಾಖಲೆಗಳು ಎನ್ಕ್ರಿಪ್ಷನ್, ಆಡಿಟ್ ಟ್ರೇಲ್ ಮತ್ತು ಹ್ಯಾಶ್ ಆಧಾರಿತ ಪರಿಶೀಲನೆಯ ಮೂಲಕ ಸುರಕ್ಷಿತವಾಗಿರುತ್ತವೆ. ಡಿಜಿಟಲ್ ಸಹಿ ಮಾಡಿದ ನಂತರ ಯಾವುದೇ ಬದಲಾವಣೆ ಪತ್ತೆಯಾಗಲಿದೆ ಎಂದು ತಿಳಿಸಿದರು.

ಕಾಗದ ರಹಿತ ನೋಂದಣಿಗೆ ಚಾಮರಾಜನಗರ ಜಿಲ್ಲೆಯಿಂದಲೇ ಚಾಲನೆ ನೀಡಿದ್ದು, ಇನ್ನು ಎರಡು ಮೂರು ತಿಂಗಳಲ್ಲಿ ಎಲ್ಲಾ ಜಿಲ್ಲೆಗಳಲ್ಲಿ ಈ ವ್ಯವಸ್ಥೆಯನ್ನು ಹಂತ ಹಂತವಾಗಿ ಜಾರಿ ಮಾಡಲಾಗುತ್ತದೆ. ಸಾರ್ವಜನಿಕರಿಗೆ ನೇರವಾಗಿ ಈ ವ್ಯವಸ್ಥೆಯಡಿಯಲ್ಲಿ ತಮ್ಮ ಅಸ್ತಿಗಳನ್ನು ನೋಂದಣಿ ಮಾಡಲು ಅವಕಾಶ ಇದೆ. ಎಲ್ಲವು ಆಧಾರ್ ಬೇಸ್ ಮೇಲೆ ನಡೆಯುತ್ತದೆ. ಇದರಿಂದ ಯಾವುದೇ ರೀತಿ ಮೋಸ ಆಗುವುದಿಲ್ಲ ಎಂದರು.

ಕಾವೇರಿ 2.0 ಪೋರ್ಟಲ್ ಅಡಿ ಅನುಷ್ಠಾನವಾಗುತ್ತಿರುವ ಕಾಗದರಹಿತ ನೋಂದಣಿ ಪ್ರಕ್ರಿಯೆ ಸರಳ, ಪಾರದರ್ಶಕ ಹಾಗೂ ಸಮಯ ಉಳಿತಾಯವಾಗುವಂತೆ ವಿನ್ಯಾಸಗೊಳಿಸಲಾಗಿದೆ. ನೂತನ ವ್ಯವಸ್ಥೆಯು ಡಿಜಿಟಲ್ ಭವಿಷ್ಯದತ್ತ ಒಂದು ಮಹತ್ವದ ಹೆಜ್ಜೆಯಾಗಿದ್ದು, ತಂತ್ರಜ್ಞಾನದ ಮೂಲಕ ಸಾರ್ವಜನಿಕ ಸೇವೆಗಳನ್ನು ಸುಧಾರಿಸಲು ಸರ್ಕಾರದ ಬದ್ಧತೆಯನ್ನು ತೋರಿಸುತ್ತದೆ. ಕಾಗದರಹಿತ ನೋಂದಣಿ ವ್ಯವಸ್ಥೆಯ ಮೂಲಕ ಪಾರದರ್ಶಕತೆ, ವೇಗ ಮತ್ತು ನಾಗರಿಕರಿಗೆ ಅನುಕೂಲ ಮಾಡುವ ಉದ್ದೇಶವನ್ನು ನಮ್ಮ ಸರ್ಕಾರ ಹೊಂದಿದೆ. ಇದೇ ವೇಳೆ ಜಿಲ್ಲಾ ಪತ್ರ ಬರಹಗಾರರ ಸಂಘದವರು ತಮ್ಮ ಬೇಡಿಕೆಗಳ ಕುರಿತ ಮನವಿಯನ್ನು ನೋಂದಣಿ ಮತ್ತು ಮುದ್ರಾಂಕ ಇಲಾಖೆಯ ಮಹಾಪರಿವೀಕ್ಷಕ ಮತ್ತು ಮುದ್ರಾಂಕಗಳ ಆಯುಕ್ತರಿಗೆ ಸಲ್ಲಿಸಿದರು.

ನೋಂದಣಿ ಉಪ ಮಹಾಪರಿವೀಕ್ಷಕ ಹೆಚ್.ಎನ್.ಪ್ರಭಾಕರನ್, ಚಾಮರಾಜನಗರ ಜಿಲ್ಲಾ ನೋಂದಣಾಧಿಕಾರಿ ಕಿರಣ್, ಮಂಡ್ಯ ಜಿಲ್ಲಾ ನೋಂದಣಾಧಿಕಾರಿ ಎಸ್.ಸಿದ್ದೇಶ್, ಕೇಂದ್ರ ಸ್ಥಾನಿಕ ಸಹಾಯಕ ಬಿ.ಜಿ.ಮಂಜುನಾಥ್ ಸೇರಿದಂತೆ ಇತರರು ಇದ್ದರು.

## ವಿಜಯಪುರ : ಪ.ಪಂ. ಕಾರ್ಯಾಲಯ ಕಟ್ಟಡ ಇಂದು ಉದ್ಘಾಟನೆ

**ವಿಜಯಪುರ,ಏ.30–**ದೇವರಹಿಪ್ಪರಗಿಯ ಪಟ್ಟಣ ಪಂಚಾಯತ ಕಾರ್ಯಾಲಯದ ನೂತನ ಕಟ್ಟಡದ ಉದ್ಘಾಟನಾ ಕಾರ್ಯಕ್ರಮವು ಮೇ 2ರಂದು (ಶನಿವಾರ) ಬೆಳಗ್ಗೆ 10 ಗಂಟೆಗೆ ಜರುಗಲಿದೆ.

ನೂತನ ಕಟ್ಟಡದ ಉದ್ಘಾಟನೆಯನ್ನು ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಮತ್ತು ವಿಜಯಪುರ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಬಿ. ಪಾಟೀಲ ಅವರು ನೆರವೇರಿಸಲಿದ್ದಾರೆ.

ಪೌರಾಡಳಿತ ಹಾಗೂ ಹಜ್ ಸಚಿವ ರಹೀಂ ಖಾನ್ ಮತ್ತು ನಗರಾಭಿವೃದ್ಧಿ ಸಚಿವ ಸುರೇಶ ಬಿ.ಎಸ್ ಅವರು ಕಾರ್ಯಕ್ರಮದ ಉಪಸ್ಥಿತಿ ಇರಲಿದ್ದಾರೆ. ಕಾರ್ಯಕ್ರಮದ ಅಧ್ಯಕ್ಷತೆಯನ್ನು ದೇವರಹಿಪ್ಪರಗಿ ಶಾಸಕ ರಾಜೂಗೌಡ ಪಾಟೀಲ ಅವರು ವಹಿಸಲಿದ್ದಾರೆ.

## ಮಹಿಳೆಯರಿಗೆ ಲೈಂಗಿಕ ಕಿರುಕುಳ: ಮಕ್ಕಳ ಕಲ್ಯಾಣ ಸಮಿತಿ ಸದಸ್ಯ ಹನಿಯೂರು ಚಂದ್ರೇಗೌಡ ಬಂಧನ

**ರಾಮನಗರ, ಮೇ 1:** ಹಲವು ಮಹಿಳೆಯರಿಗೆ ಬ್ಲ್ಯಾಕ್‌ಮೇಲ್ ಮಾಡಿ ಲೈಂಗಿಕ ದೌರ್ಜನ್ಯ ಎಸಗಿರುವ ಆರೋಪ ಸಂಬಂಧ ರಾಮನಗರ ಮಕ್ಕಳ ಕಲ್ಯಾಣ ಸಮಿತಿ ಸದಸ್ಯ ಹನಿಯೂರು ಚಂದ್ರೇಗೌಡ ಎಂಬಾತನನ್ನು ಬೆಂಗಳೂರಿನ ಆರ್.ಆರ್.ನಗರ ಪೊಲೀಸರು ಬಂಧಿಸಿದ್ದಾರೆ.

ಮಹಿಳೆಯರ ಮೇಲೆ ಲೈಂಗಿಕ ದೌರ್ಜನ್ಯವೆಸಗಿದ್ದಲ್ಲದೇ ಅದನ್ನು ವಿಡಿಯೋ ಮಾಡಿಟ್ಟುಕೊಳ್ಳುತ್ತಿದ್ದ ಆರೋಪಿ ಫೋಟೋ, ತನ್ನನ್ನು ಪೊಲೀಸ್ ಅಧಿಕಾರಿ, ವಕೀಲ, ಮಾಧ್ಯಮ ಪ್ರತಿನಿಧಿ ಎಂದು ಬಿಂಬಿಸಿ, ನಕಲಿ ಐಡಿ ಮಾಡಿಕೊಂಡು ಹಲವರಿಗೆ ಬೆದರಿಕೆ ಕೂಡ ಹಾಕಿದ್ದ ಎನ್ನಲಾಗಿದೆ.

ಮಹಿಳೆಯೊಬ್ಬರ ದೂರಿನ ಆಧಾರದಲ್ಲಿ ಪೊಲೀಸರು ವಿಚಾರಣೆ ನಡೆಸಿದ ವೇಳೆ 20ಕ್ಕೂ ಹೆಚ್ಚು ಮಹಿಳೆಯರ ವಿಡಿಯೋ, ಫೋಟೋಗಳು ಆತನ ಮೊಬೈಲ್‌ನಲ್ಲಿ ಪತ್ತೆಯಾಗಿದೆ ಎಂದು ವರದಿಯಾಗಿದೆ. ಗಂಡನಿಂದ ದೂರವಾಗಿದ್ದ ಮಹಿಳೆಯನ್ನು ಪರಿಚಯ ಮಾಡಿಕೊಂಡಿದ್ದ ಆರೋಪಿ, ಆಕೆಗೆ ತಾನು ಉಪನ್ಯಾಸಕ ಎಂದು ಹೇಳಿಕೊಂಡಿದ್ದ. ತನಗೆ ವಿಚ್ಛೇದನ ಆಗಿದೆ ಎಂದು ನಂಬಿಸಿ ಆಕೆಯೊಂದಿಗೆ ಸಂಬಂಧ ಬೆಳೆಸಿಕೊಂಡಿದ್ದ. ಆಕೆಯ ಜೊತೆಗಿನ ಖಾಸಗಿ ಕ್ಷಣವನ್ನು ವಿಡಿಯೋ ಮಾಡಿಕೊಂಡಿದ್ದ ಆರೋಪಿ ಮಹಿಳೆಯನ್ನು ಬೆದರಿಸಿ 5 ಲಕ್ಷ ರೂಪಾಯಿ ಹಣ ಪಡೆದಿದ್ದ. ಆದರೆ, ಆತನ ಮೊಬೈಲ್‌ನಲ್ಲಿ ಹಲವು ಮಹಿಳೆಯರ ವಿಡಿಯೋಗಳು ಇರುವುದನ್ನು ಗಮನಿಸಿದ ಸಂತ್ರಸ್ತೆ ಚಂದ್ರೇಗೌಡನ ವಿರುದ್ಧ ರಾಜರಾಜೇಶ್ವರಿ ನಗರ ಪೊಲೀಸ್ ಠಾಣೆಗೆ ದೂರು ನೀಡಿದ್ದರು. ಪೊಲೀಸರು ಆರೋಪಿಯನ್ನು ಬಂಧಿಸಿದ್ದಾರೆ.

# ಕಾಂಗ್ರೆಸ್ ಅಧಿಕಾರದಲ್ಲಿರುವವರೆಗೆ ರಾಜ್ಯದ ಅಭಿವೃದ್ಧಿ ಸಾಧ್ಯವಿಲ್ಲ: ನಿಖಿಲ್ ಕುಮಾರಸ್ವಾಮಿ

**ಸೇಡಂ, ಮೇ 1:** ಕಾಂಗ್ರೆಸ್ ಪಕ್ಷ ಅಧಿಕಾರದಲ್ಲಿರುವ ತನಕ ರಾಜ್ಯದಲ್ಲಿ ಅಭಿವೃದ್ಧಿ ಸಾಧ್ಯವಿಲ್ಲ. ಪ್ರತಿನಿತ್ಯ ಕುರ್ಚಿಗಾಗಿ ಜಗಳ ನಡೆಸುವವರಿಂದ ರಾಜ್ಯದ ಹಿತ ಕಾಯಲು ಸಾಧ್ಯವೇ ಎಂದು ಜೆಡಿಎಸ್ ಮುಖಂಡ ನಿಖಿಲ್ ಕುಮಾರಸ್ವಾಮಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯದಲ್ಲಿ ಬಹುಮತ ಪಡೆದು ಅಧಿಕಾರಕ್ಕೆ ಬಂದಿರುವ ಕಾಂಗ್ರೆಸ್ ನಾಯಕರು ಆಂತರಿಕ ಕಚ್ಚಾಟದಲ್ಲಿ ತೊಡಗಿಕೊಂಡಿದ್ದಾರೆ. ಮೂರು ವರ್ಷ ಕಾಲ ಕಳೆದಿದ್ದಾರೆ. ರಾಜ್ಯದ ಜನ ಕಾಂಗ್ರೆಸ್ ಪಕ್ಷಕ್ಕೆ ಬಹುಮತ ನೀಡಿದ್ದಾರೆ, ಇಷ್ಟು ಶಾಸಕರನ್ನು ಕೊಟ್ಟ ಮೇಲೆ ಇನ್ನೇನು ಕೊಡಲು ಸಾಧ್ಯ, ಅವರಿಂದ ಅಭಿವೃದ್ಧಿ ಶೂನ್ಯ ಎಂದಿದ್ದಾರೆ.

ಬರಗಾಲ ಹಾಗೂ ಅತಿವೃಷ್ಟಿಯಿಂದ ಸಂಕಷ್ಟಕ್ಕೆ ಸಿಲುಕಿರುವ ರೈತರಿಗೆ ಸಮರ್ಪಕ ಪರಿಹಾರ ನೀಡಲು ಸರ್ಕಾರ ಸಂಪೂರ್ಣ



ವಿಫಲವಾಗಿದೆ ಎಂದು ತೀವ್ರ ಆಕ್ರೋಶ ವ್ಯಕ್ತಪಡಿಸಿದರು.ಕಾಂಗ್ರೆಸ್ ನಾಯಕರು ಜನರ ಸಮಸ್ಯೆಗಳ ಪರಿಹಾರಕ್ಕಿಂತ ತಮ್ಮ ರಾಜಕೀಯ ಅಸ್ತಿತ್ವ ಉಳಿಸಿಕೊಳ್ಳುವುದರಲ್ಲಿ ತೊಡಗಿಸಿಕೊಂಡಿದ್ದಾರೆ ಎಂದು ಆರೋಪಿಸಿದರು.

2002ರಲ್ಲಿ ಡಾ. ನಂಜುಂಡಪ್ಪ ನೀಡಿದ ಅತಿ ಹಿಂದುಳಿದ ಪ್ರದೇಶಗಳ ವರದಿ ಬಳಿಕವೂ ಪರಿಸ್ಥಿತಿ ಬದಲಾಗಿಲ್ಲ.ವಿಶೇಷವಾಗಿ ಕಲ್ಯಾಣ ಕರ್ನಾಟಕ ಭಾಗದ ಸೇಡಂ, ಆಳಂದ ಹಾಗೂ ಅಫಜಲಪುರ ಕ್ಷೇತ್ರಗಳು ಇನ್ನೂ ಮೂಲಸೌಕರ್ಯ ಕೊರತೆಯಿಂದ ಬಳಲುತ್ತಿವೆ ಎಂದು ಹೇಳಿದರು.

ಕೆಕೆಆರ್‌ಡಿಬಿ ಮೂಲಕ ಸಾವಿರಾರು ಕೋಟಿ ರೂ. ಅನುದಾನ ಬಂದರೂ ಅದು ರಸ್ತೆ ಮತ್ತು ಕಟ್ಟಡ ಕಾಮಗಾರಿಗಳಿಗೆ ಮಾತ್ರ ಸೀಮಿತವಾಗಿದೆ ಎಂದು ಟೀಕಿಸಿದರು. ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ 3,000ಕ್ಕೂ ಹೆಚ್ಚು ರೈತರು ಆತ್ಮಹತ್ಯೆ ಮಾಡಿಕೊಂಡಿರುವುದು ದುಃಖದ ಸಂಗತಿ. ಬೀದರ್, ಕಲಬುರಗಿ ಹಾಗೂ ಯಾದಗಿರಿ ಜಿಲ್ಲೆಗಳಲ್ಲಿ ರೈತರ ಪರಿಸ್ಥಿತಿ ಅತ್ಯಂತ ಗಂಭೀರವಾಗಿದೆ ಎಂದು ಹೇಳಿದರು.

ಇನ್ನೂ 2028 ರ ವಿಧಾನಸಭೆ ಚುನಾವಣೆಯಲ್ಲಿ ಸ್ಪರ್ಧಿಸುವ ಸಂಬಂಧ ಮಾತನಾಡಿದ ನಿಖಿಲ್, ಜೆಡಿಎಸ್ ನಲ್ಲಿ ಪದೇ ಪದೇ ಕ್ಷೇತ್ರ ಬದಲಾವಣೆ ಮಾಡಲು ಅವಕಾಶವಿರುವುದಿಲ್ಲ, ಈ ನಿಯಮ ನಿಖಿಲ್ ಕುಮಾರಸ್ವಾಮಿಗೂ ಅನ್ವಯಿಸುತ್ತದೆ, ಬಾಲರಾಜ್ ಗುತ್ತೇದಾರ್ ಅವರಿಗೂ ಅನ್ವಯಿಸುತ್ತದೆ ಎಂದು ಹೇಳಿದರು.

# ಅಭಿವೃದ್ಧಿ, ಕ್ಷೇತ್ರ ಪುನರ್‌ವಿಂಗಡನೆ ದೃಷ್ಟಿಯಿಂದ ಇನ್ನೂ 6 ಹೊಸಜಿಲ್ಲೆ, 12 ತಾಲೂಕು ರಚಿಸಲು ಕಲ್ಯಾಣ ಕರ್ನಾಟಕ ಹೋರಾಟ ಸಮಿತಿ ಒತ್ತಾಯ

**ಕಲಬುರಗಿ, ಮೇ 1:** ಭವಿಷ್ಯದ ಅಭಿವೃದ್ಧಿ ಮತ್ತು ಕ್ಷೇತ್ರ ವಿಂಗಡಣೆ ದೃಷ್ಟಿಯಿಂದ ಕಲ್ಯಾಣ ಕರ್ನಾಟಕ ಭಾಗದಲ್ಲಿ ಇನ್ನೂ 6 ಹೊಸ ಜಿಲ್ಲೆಗಳು ಹಾಗೂ 12 ತಾಲೂಕುಗಳನ್ನು ರಚಿಸಬೇಕೆಂದು ಕಲ್ಯಾಣ ಕರ್ನಾಟಕ ಹೋರಾಟ ಸಮಿತಿ ಒತ್ತಾಯಿಸಿದೆ.

ಕೇಂದ್ರ ಸರಕಾರ ಬರುವ ದಿನಗಳಲ್ಲಿ ಲೋಕಸಭಾ ಸ್ಥಾನಗಳು ಅದರಂತೆ ವಿಧಾನ ಸಭಾ ಸ್ಥಾನಗಳು ಹೆಚ್ಚಿಸುವ ನಿಟ್ಟಿನಲ್ಲಿ ಕ್ಷೇತ್ರ ವಿಂಗಡಣೆ ಕಾರ್ಯ ಹಮ್ಮಿಕೊಳ್ಳುತ್ತಿರುವ ಹಿನ್ನಲೆಯಲ್ಲಿ ಕಲ್ಯಾಣ ಕರ್ನಾಟಕದ ಅಭಿವೃದ್ಧಿ ಮತ್ತು ಲೋಕಸಭಾ ಸ್ಥಾನಗಳು ಹೆಚ್ಚಾಗಲು ಅದರಂತೆ, ವಿಧಾನಸಭಾ ಸ್ಥಾನಗಳು ವೃದ್ಧಿಯಾಗಲು ಕಲ್ಯಾಣ ಕರ್ನಾಟಕದಲ್ಲಿ ಇನ್ನೂ ಹೊಸ 6 ಜಿಲ್ಲೆಗಳು ಹೊಸ 12 ತಾಲ್ಲೂಕುಗಳನ್ನು ರಚನೆ ಮಾಡುವುದು ಅತಿ ಅವಶ್ಯವಾಗಿದೆ ಎಂದು ಕಲ್ಯಾಣ ಕರ್ನಾಟಕ ಹೋರಾಟ ಸಮಿತಿಯ ಗೌರವ ಅಧ್ಯಕ್ಷ ಬಸವರಾಜ ದೇಶಮುಖ ಮತ್ತು ಸಂಸ್ಥಾಪಕ ಅಧ್ಯಕ್ಷ ಡಾ.ಲಕ್ಷ್ಮಣ ದಸ್ತಿಯವರು ರಾಜ್ಯ ಸರ್ಕಾರಕ್ಕೆ ಆಗ್ರಹಿಸಿದ್ದಾರೆ.

ಸ್ವಾತಂತ್ರ್ಯ ಪೂರ್ವದಲ್ಲಿ ನಿಜಾಂ ಹೈದ್ರಾಬಾದ್ ರಾಜ್ಯದಲ್ಲಿ ಒಟ್ಟು 16 ಜಿಲ್ಲೆಗಳಲ್ಲಿ ತೆಲಂಗಾಣದ 8 ಜಿಲ್ಲೆಗಳು, ಹೈದರಾಬಾದ ಕರ್ನಾಟಕದ 3 ಜಿಲ್ಲೆಗಳು, ಮರಾಠವಾಡದ 5 ಜಿಲ್ಲೆಗಳು ಇದ್ದವು. ತೆಲಂಗಾಣ ಪ್ರತ್ಯೇಕ ರಾಜ್ಯವಾದ ನಂತರ 8 ಜಿಲ್ಲೆಗಳಿದ್ದ ತೆಲಂಗಾಣ ಪ್ರದೇಶ ಚಂದ್ರಶೇಖರರಾವ್ ನೇತೃತ್ವದ ಸರ್ಕಾರದ ಅವಧಿಯಲ್ಲಿ ನಾಲ್ಕು ಪಟ್ಟು ಜಿಲ್ಲೆಗಳನ್ನು ಹೆಚ್ಚಿಸಿದ್ದಾರೆ. ಅಂದರೆ ಪ್ರಸ್ತುತ ತೆಲಂಗಾಣದಲ್ಲಿ 33 ಜಿಲ್ಲೆಗಳು ಅಸ್ತಿತ್ವದಲ್ಲಿವೆ. ಇದು ತೆಲಂಗಾಣದ ಅಭಿವೃದ್ಧಿಗೆ ಮತ್ತು ಭವಿಷ್ಯದಲ್ಲಿ ಲೋಕಸಭಾ ಮತ್ತು ವಿಧಾನಸಭಾ ಸ್ಥಾನಗಳ ಅಭಿವೃದ್ಧಿಗೆ ಅನುಕೂಲವಾಗುವದೆಂಬ ದೂರ ದೃಷ್ಟಿಕೋನದ ಉದ್ದೇಶವಷ್ಟೇ ಅಲ್ಲದೆ, ಅಭಿವೃದ್ಧಿಗೆ ಪೂರಕವಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪ್ರಸ್ತುತ ತೆಲಂಗಾಣದಲ್ಲಿ ಹೊಸ ಜಿಲ್ಲೆಗಳ ರಚನೆಯ ನಂತರ ಬಹುತೇಕ ಕ್ಷೇತ್ರಗಳಲ್ಲಿ ಅಭಿವೃದ್ಧಿ ಸಹ ಆಗಿರುವುದಲ್ಲದೆ ಮಾನವ ಅಭಿವೃದ್ಧಿಯೂ ಸಹ ಎತ್ತರಕ್ಕೆ ಏರಿದೆ. ಇದನ್ನು ಗಮನದಲ್ಲಿಟ್ಟು ಕೊಂಡು ಹಳೆಯ ಹೈದ್ರಾಬಾದ್ ರಾಜ್ಯದಲ್ಲಿದ್ದ ಹೈದರಾಬಾದ ಕರ್ನಾಟಕದ ಮೂರು ಜಿಲ್ಲೆಗಳಾದ ಬೀದರ, ಕಲಬುರಗಿ ರಾಯಚೂರು ಈಗ ಕೊಪ್ಪಳ, ಯಾದಗಿರಿ ಸೇರಿ ಐದು ಜಿಲ್ಲೆಗಳಾಗಿವೆ. ಮದ್ರಾಸ್ ರಾಜ್ಯಕ್ಕೆ ಒಳಪಟ್ಟಿದ್ದ ಬಳ್ಳಾರಿ ಜಿಲ್ಲೆ ವಿಂಗಡಣೆಯಾಗಿ ವಿಜಯನಗರ ಹೊಸ ಜಿಲ್ಲೆಯಾಗಿ ಕಲ್ಯಾಣ ಕರ್ನಾಟಕದಲ್ಲಿ ಈಗ ಏಳು ಜಿಲ್ಲೆಗಳಾಗಿವೆ ಎಂದು ವಿವರಿಸಿದ್ದಾರೆ.

ಕಲ್ಯಾಣ ಕರ್ನಾಟಕದಲ್ಲಿ ಹೊಸ ಜಿಲ್ಲೆಯಾಗಲು ಐತಿಹಾಸಿಕವಾಗಿ ತನ್ನದೇಯಾದ ಶ್ರೀಮಂತ ಇತಿಹಾಸ ಮೆರೆದಿರುವ ಮತ್ತು ಅಭಿವೃದ್ಧಿಗೆ ಪೂರಕವಾಗುವ ತಾಲ್ಲೂಕುಗಳಾದ ಸೇಡಂಗೆ ರಾಷ್ಟ್ರಕೂಟ ಜಿಲ್ಲೆ ಎಂದು, ಚಿತ್ತಾಪೂರಗೆ ನಾಗಾವಿ ಜಿಲ್ಲೆಯೆಂದು, ಐತಿಹಾಸಿಕವಾಗಿ ಮೆರೆದ ಸುರಪೂರ, ಬಸವಾದಿ ಶರಣರ ಕಾಯಕ ಭೂಮಿ ಬಸವಕಲ್ಯಾಣ ಸೇರಿದಂತೆ ಸಿಂಧನೂರ, ಗಂಗಾವತಿ ತಾಲ್ಲೂಕುಗಳನ್ನು ಹೊಸ ಜಿಲ್ಲೆಗಳನ್ನಾಗಿ ಮಾಡಬೇಕು. ಆಯಾ ಜಿಲ್ಲೆಗಳ ಮತ್ತು ತಾಲ್ಲೂಕುಗಳ ಸ್ಥಳಿಯ ಸಚಿವರು, ಶಾಸಕರು ಹಾಗೂ ಜನರ ಬೇಡಿಕೆಯಂತೆ ಹೊಸ ತಾಲ್ಲೂಕುಗಳನ್ನು ರಚಿಸಿ ಕಲ್ಯಾಣ ಕರ್ನಾಟಕ ಭವಿಷ್ಯದ ದೂರದೃಷ್ಟಿಕೋನದ ಸಮಗ್ರ ಅಭಿವೃದ್ಧಿ ದೃಷ್ಟಿಯಿಂದ ಈ ನಿರ್ಧಾರ ಕೈಗೊಳ್ಳುವುದು ಅತಿ ಅವಶ್ಯವಾಗಿದೆ? ಎಂದು ಆಗ್ರಹಿಸಿದ್ದಾರೆ.

ಕಲ್ಯಾಣ ಕರ್ನಾಟಕದ ಸಚಿವರು ಈ ವಿಷಯಕ್ಕೆ ಅತಿ ಗಂಭೀರವಾಗಿ ಪರಿಗಣಿಸಿ ಹೊಸ ಜಿಲ್ಲೆಗಳ ಮತ್ತು ತಾಲ್ಲುಕುಗಳ ರಚನೆಯ ಬಗ್ಗೆ ಸರಕಾರದ ಮಟ್ಟದಲ್ಲಿ ಚಿಂತನೆ ಮಾಡಿ ಸೂಕ್ತ ಕ್ರಮ ಕೈಗೊಳ್ಳಬೇಕು. ಉತ್ತರ ಭಾರತದ ಅನೇಕ ರಾಜ್ಯಗಳು ಭವಿಷ್ಯದ ದೂರ ದೃಷ್ಟಿಕೋನವನ್ನು ಇಟ್ಟುಕೊಂಡು ಹೊಸ ಚಿಕ್ಕ ಚಿಕ್ಕ ಜಿಲ್ಲೆಗಳನ್ನು ಮಾಡಿರುವುದು ಗಮನಿಸಿದರೆ, ಕರ್ನಾಟಕ ರಾಜ್ಯದಲ್ಲಿ ಕನಿಷ್ಟ 50ಕ್ಕೂ ಮೇಲ್ಪಟ್ಟು ಜಿಲ್ಲೆಗಳು ರಚನೆಯಾಗುವುದು ಅತಿ ಅವಶ್ಯವಾಗಿದೆ ಎಂದಿದ್ದಾರೆ.

ಪ್ರಸ್ತುತ ದಕ್ಷಣ ಭಾರತದಲ್ಲಿ ಲೋಕಸಭಾ ಸ್ಥಾನಗಳು ಕಡಿಮೆ ಇವೆ. ಇದರಿಂದ ಉತ್ತರ ಭಾರತ ಸತತ ಕೇಂದ್ರದಲ್ಲಿ ತನ್ನ ಪ್ರಾಬಲ್ಯ ಹೊಂದಿದೆ. ಭವಿಷ್ಯದಲ್ಲಿ ದಕ್ಷಿಣ ಭಾರತದಲ್ಲಿ ಲೋಕಸಭಾ ಸ್ಥಾನಗಳು ಹೆಚ್ಚಾಗಬೇಕು ಎಂಬ ಧ್ವನಿ ವ್ಯಾಪಕವಾಗಿದೆ. ಈ ಹಿನ್ನೆಲೆಯಲ್ಲಿ ಈ ಮಹತ್ವದ ವಿಷಯಕ್ಕೆ ಸಂಬಂಧಿಸಿದಂತೆ ರಾಜ್ಯದ ಮುಖ್ಯಮಂತ್ರಿಗಳು ಮತ್ತು ಉಪ ಮುಖ್ಯಮಂತ್ರಿಗಳು, ಸಂಪುಟ ಮತ್ತು ಶಾಸಕಾಂಗ ಗಂಭೀರವಾಗಿ ಪರಿಗಣಿಸಬೇಕು ಎಂದು ಕಲ್ಯಾಣ ಕರ್ನಾಟಕ ಹೋರಾಟ ಸಮಿತಿ ಒತ್ತಾಯಿಸಿದೆ.


# ಶೃಂಗೇರಿ ಕ್ಷೇತ್ರ 2023 ಚುನಾವಣೆ ಅಂಚೆ ಮತಗಳ ಮರುಎಣಿಕೆ ಇಂದು

**ಚಿಕ್ಕಮಗಳೂರು, ಮೇ 1:** ಶೃಂಗೇರಿ ವಿಧಾನಸಭಾ ಕ್ಷೇತ್ರದ 2023ರ ಚುನಾವಣೆಗೆ ಸಂಬಂಧಿಸಿದ ಅಂಚೆ ಮತಗಳ ಮರು ಎಣಿಕೆ ಕಾರ್ಯಕ್ಕೆ ಹೈಕೋರ್ಟ್ ನಿರ್ದೇಶನ ದಂತೆ ಜಿಲ್ಲಾಡಳಿತವು ಸಂಪೂರ್ಣ ಸಿದ್ಧತೆ ಕೈಗೊಂಡಿದೆ.

ಮೇ 2ರಂದು ಬೆಳಗ್ಗೆ 9 ಗಂಟೆಗೆ ಅಭ್ಯರ್ಥಿಗಳು ಹಾಗೂ ಅವರ ಪ್ರತಿನಿಧಿಗಳ ಸಮ್ಮುಖದಲ್ಲಿ ಚಿಕ್ಕಮಗಳೂರಿನ ಐಡಿಎಸ್‌ಜಿ ಸರ್ಕಾರಿ ಕಾಲೇಜಿನ ಮೊದಲ ಮಹಡಿಯಲ್ಲಿ ಅಂಚೆ ಮತಪತ್ರಗಳ ಪರಿಶೀಲನೆ ಮತ್ತು ಮರು ಎಣಿಕೆ ಪ್ರಕ್ರಿಯೆ ನಡೆಯಲಿದೆ. ಒಟ್ಟು 1822 ಅಂಚೆ ಮತಗಳ ಎಣಿಕೆ ಕಾರ್ಯ ನಡೆಯಲಿದ್ದು, ಬೆಳಗ್ಗೆ 6 ಗಂಟೆಯಿಂದ ಸಂಜೆ 5 ಗಂಟೆಯ ವರೆಗೂ ಮತ ಎಣಿಕೆ ಕೇಂದ್ರದ ಸುತ್ತ 200 ಮೀಟರ್ ನಿಷೇಧಾಜ್ಞೆ ಜಾರಿಗೊಳಿಸ ಲಾಗಿದೆ.

ಕೇಂದ್ರದ ಒಂದು ಕಿಲೋಮೀಟರ್ ವ್ಯಾಪ್ತಿಯೊಳಗೆ ಮದ್ಯ ಮಾರಾಟವನ್ನು ನಿಷೇಧಿಸಲಾಗಿದ್ದು, ಬೆಳಗ್ಗೆ 6ರಿಂದ ರಾತ್ರಿ 11ರವರೆಗೆ ಮದ್ಯ ಮಾರಾಟ ಸಂಪೂರ್ಣ ಬಂದ್ ಇರಲಿದೆ. ಐದಕ್ಕಿಂತ ಹೆಚ್ಚು ಜನರು ಗುಂಪು ಸೇರುವುದಕ್ಕೂ ನಿರ್ಬಂಧ ವಿಧಿಸಲಾಗಿದೆ.

ಅನಧಿಕೃತ ವ್ಯಕ್ತಿಗಳ ಪ್ರವೇಶಕ್ಕೆ ಸಂಪೂರ್ಣ ತಡೆ ವಿಧಿಸಲಾಗಿದ್ದು,



ವಿಜಯೋತ್ಸವ, ಘೋಷಣೆ ಕೂಗು ಹಾಗೂ ಧ್ವನಿವರ್ಧಕಗಳ ಬಳಕೆಗೂ ನಿಷೇಧ ಹೇರಲಾಗಿದೆ. ಸಾರ್ವಜನಿಕ ಶಾಂತಿ ಕಾಪಾಡಲು ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಳ್ಳಲಾಗಿದ್ದು, ಸೈಬರ್ ಕೇಂದ್ರ, ಜೆರಾಕ್ಸ್ ಅಂಗಡಿಗಳನ್ನು ತಾತ್ಕಾಲಿಕವಾಗಿ ಮುಚ್ಚುವಂತೆ ಆದೇಶಿಸಲಾಗಿದೆ. ಅಂಚೆ ಮತ ಎಣಿಕೆ ಪ್ರಕ್ರಿಯೆಗಾಗಿ ಒಬ್ಬ ಚುನಾವಣಾಧಿಕಾರಿ, ಒಬ್ಬ ಸಹಾಯಕ ಚುನಾವಣಾಧಿಕಾರಿ, ಇಬ್ಬರು ಎಣಿಕೆ ಸಹಾಯಕರು, ಒಬ್ಬ ಮೇಲ್ವಿಚಾರಕ ಹಾಗೂ ಒಬ್ಬ ಮೈಕ್ರೋ ಅಬ್ಸರ್ವರ್ ಸೇರಿದಂತೆ ಆರು ಅಧಿಕಾರಿಗಳನ್ನು ನಿಯೋಜಿಸಲಾಗಿದೆ. ಜೊತೆಗೆ, ಸ್ಟ್ರಾಂಗ್ ರೂಂನಿಂದ ಮತಪತ್ರಗಳನ್ನು ಎಣಿಕಾ ಕೇಂದ್ರಕ್ಕೆ ಸಾಗಿಸುವುದು ಹಾಗೂ ಕೇಂದ್ರದ ಭದ್ರತೆಗಾಗಿ ಸುಮಾರು 500ಕ್ಕೂ ಅಧಿಕ ಪೊಲೀಸ್ ಸಿಬ್ಬಂದಿಯನ್ನು ನಿಯೋಜಿಸಲಾಗಿದೆ. ಒಟ್ಟು 1822 ಅಂಚೆ ಮತಪತ್ರಗಳು ಬಂದಿದ್ದು, ಅವುಗಳಲ್ಲಿ 279 ಮತಪತ್ರಗಳನ್ನು ತಿರಸ್ಕರಿಸಲಾಗಿತ್ತು.

ಉಳಿದ 1543 ಮತಪತ್ರಗಳನ್ನು ಅರ್ಹವೆಂದು ಪರಿಗಣಿಸಲಾಗಿತ್ತು. ಈಗ ಮರು ಪರಿಶೀಲನೆಯಲ್ಲಿ ತಿರಸ್ಕೃತ ಮತಗಳಲ್ಲಿ ಕೆಲವು ಮಾನ್ಯವಾಗಿರುವುದು ಕಂಡುಬಂದರೆ, ಅವುಗಳನ್ನು ಕೂಡ ಸೇರಿಸಿ ಮರು ಎಣಿಕೆ ನಡೆಸಲಾಗುತ್ತದೆ. ಅಂಚೆ ಮತಪತ್ರಗಳ ಪರಿಶೀಲನೆ ವೇಳೆ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಲಾಗುತ್ತದೆ. ಮರು ಎಣಿಕೆಗೆ ಮುನ್ನ ಜಿಲ್ಲಾಧಿಕಾರಿ ಎನ್.ಎಂ. ನಾಗರಾಜ್ ಅವರು ಸ್ಪರ್ಧಿಸಿದ್ದ ಅಭ್ಯರ್ಥಿಗಳೊಂದಿಗೆ ಸಭೆ ನಡೆಸಿ ಪ್ರಕ್ರಿಯೆಯ ಬಗ್ಗೆ ವಿವರಿಸಿದರು. ಸಭೆಯಲ್ಲಿ ವಿಜೇತ ಶಾಸಕ ರಾಜೇಗೌಡ, ಪರಾಜಿತ ಅಭ್ಯರ್ಥಿ ಡಿ.ಎನ್. ಜೀವರಾಜ್ ಹಾಗೂ ಜೆಡಿಎಸ್ ಅಭ್ಯರ್ಥಿ ಸುಧಾಕರ ಎಸ್. ಶೆಟ್ಟಿ ಸೇರಿದಂತೆ ಇತರರು ಭಾಗವಹಿಸಿದ್ದರು.

### ಮೇ 5ರಂದು ಮಂಡ್ಯದಲ್ಲಿ ಪ್ರಶಸ್ತಿ ಪ್ರದಾನ

# ಎಸ್‌ಎಂ ಕೃಷ್ಣ ಪ್ರಶಸ್ತಿಗೆ ಮಾಜಿ ಸಚಿವ ಕಿಮ್ಮನೆ ರತ್ನಾಕರ್ ಆಯ್ಕೆ

**ಮಂಡ್ಯ, ಮೇ 1:** ಕರ್ನಾಟಕ ಸಂಘದ ವತಿಯಿಂದ ನೀಡುವ ಪ್ರಥಮ ವರ್ಷದ 'ಎಸ್.ಎಂ. ಕೃಷ್ಣ ಪ್ರಶಸ್ತಿ'ಗೆ ಮಾಜಿ ಸಚಿವ ಕಿಮ್ಮನೆ ರತ್ನಾಕರ್ ಆಯ್ಕೆಯಾಗಿದ್ದಾರೆ.

ಮಾಜಿ ಮುಖ್ಯಮಂತ್ರಿ ಎಸ್. ಎಂ. ಕೃಷ್ಣ ಅವರ ಹೆಸರಿನಲ್ಲಿ ಅವರ ಹಿತೈಷಿಗಳು ಕರ್ನಾಟಕ ಸಂಘದೊಂದಿಗೆ ಕೂಡಿ ಪ್ರಶಸ್ತಿಯನ್ನು ಸ್ಥಾಪಿಸಿದ್ದಾರೆ.

ರಾಜಕೀಯ, ಸಂಗೀತ, ಕ್ರೀಡಾ ಕ್ಷೇತ್ರಗಳಲ್ಲಿ ಸಾಧನೆ ಮಾಡಿರುವವರಿಗೆ ಈ ಪ್ರಶಸ್ತಿ ನೀಡಲಾಗುತ್ತದೆ. ಪ್ರಶಸ್ತಿಯು 50 ಸಾವಿರ ನಗದು ಮತ್ತು ಪ್ರಶಸ್ತಿ ಫಲಕವನ್ನು ಒಳಗೊಂಡಿದೆ. ಮಂಡ್ಯ ನಗರದ ಕರ್ನಾಟಕ ಸಂಘದ ಕೆ.ವಿ. ಶಂಕರಗೌಡ ಶತಮಾನೋತ್ಸವ ಭವನದಲ್ಲಿ ಮೇ 5ರಂದು ಏರ್ಪಡಿಸಿರುವ 'ಮರೆಯಲಾಗದ ಎಸ್.ಎಂ. ಕೃಷ್ಣ' ಸಂಸ್ಮರಣೆ ಸಮಾರಂಭದಲ್ಲಿ ಪ್ರಶಸ್ತಿ ಪ್ರದಾನ ನಡೆಯಲಿದೆ.

ಶಿವಮೊಗ್ಗ ಜಿಲ್ಲೆಯ ತೀರ್ಥಹಳ್ಳಿಯ ಕಿಮ್ಮನೆ ರತ್ನಾಕರ್ ಅವರು ಶುದ್ಧ ರಾಜಕಾರಣಕ್ಕೆ ಹೆಸರಾಗಿದ್ದಾರೆ. 2008ರಲ್ಲಿ ಮೊದಲ ಬಾರಿಗೆ ಶಾಸಕರಾಗಿ, 2013ರಲ್ಲಿ 2ನೇ ಬಾರಿಗೆ ಆಯ್ಕೆಗೊಂಡು ಸಿದ್ದರಾಮಯ್ಯ ನೇತೃತ್ವದ ಸರ್ಕಾರದಲ್ಲಿ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ



ಸಚಿವರಾಗಿ ಶಿಕ್ಷಣದ ಸುಧಾರಣೆ ಮತ್ತು ಆಧುನೀಕರಣಕ್ಕೆ ಶ್ರಮಿಸಿದ್ದಾರೆ' ಎಂದು ಕರ್ನಾಟಕ ಸಂಘದ ಅಧ್ಯಕ್ಷ ಎಂದು ಪ್ರೊ.ಜಯಪ್ರಕಾಶಗೌಡ ತಿಳಿಸಿದ್ದಾರೆ.

**ದರ ಏರಿಕೆ: ಖರ್ಗೆ ಆಕ್ರೋಶ**

ವಾಣಿಜ್ಯ ಎಲ್‌ಪಿಜಿ ಸಿಲಿಂಡರ್ ದರವನ್ನು 993 ರೂಪಾಯಿಗೆ ಏರಿಕೆ ಮಾಡಿರುವುದಕ್ಕೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಆಕ್ರೋಶ ವ್ಯಕ್ತಪಡಿಸಿದರು.

ಎಲ್‌ಪಿಜಿ ಸಿಲಿಂಡರ್ ಕೊರತೆಯಿಂದ ಜನ ಸಾಕಷ್ಟು ಸಮಸ್ಯೆ ಎದುರಿಸುತ್ತಿರುವ ನಡುವೆ ಕೇಂದ್ರ ಸರ್ಕಾರ ವಾಣಿಜ್ಯ ಸಿಲಿಂಡರ್ ಬೆಲೆ ಏರಿಕೆ ಮಾಡುವುದರ ಮೂಲಕ ಮತ್ತಷ್ಟು ಹೊರೆ ಹೇರಿದೆ ಎಂದರು.

## ತಾರಕಕ್ಕೇರಿದ ಮಾಲೂರು ಹಾಲಿ, ಮಾಜಿ ಶಾಸಕರ ವಾಕ್ಸಮರ

**ಕೋಲಾರ, ಮೇ 1:** ಜಿಲ್ಲೆಯ ಮಾಲೂರು ವಿಧಾನಸಭಾ ಕ್ಷೇತ್ರದ ಹಾಲಿ ಕಾಂಗ್ರೆಸ್ ಶಾಸಕ ಕೆ.ವೈ. ನಂಜೇಗೌಡ ಹಾಗೂ ಮಾಜಿ ಶಾಸಕ ಕೆ.ಎಸ್. ಮಂಜುನಾಥ್ ಗೌಡ ಅವರ ನಡುವೆ ಈ ವಿಷಯವಾಗಿ ವಾಕ್ಸಮರ ತಾರಕಕ್ಕೇರಿದೆ. ಈ ಹಿಂದೆ 300 ಕೋಟಿ ರೂ. ಹಗರಣದ ಆರೋಪ ಕೇಳಿಬಂದಿತ್ತು. ಆದರೆ ಈಗ ಪ್ರಕರಣದ ದೂರುದಾರರಾದ ಗೂಳಿಹಾನಹಳ್ಳಿ ನಾಗರಾಜ್ ಅವರು ಹೊಸ ಬಾಂಬ್ ಸಿಡಿಸಿದ್ದು, ಇದು 300 ಕೋಟಿ ಅಲ್ಲ ಬದಲಾಗಿ 512 ಕೋಟಿ ರೂಪಾಯಿಗಳ ಬೃಹತ್ ಹಗರಣ ಎಂದು ಗಂಭೀರ ಆರೋಪ ಮಾಡಿದ್ದಾರೆ.

ಅಲ್ಲದೆ, ಒಟ್ಟು 75 ಹುದ್ದೆಗಳ ನೇಮಕಾತಿಯಲ್ಲಿ 27 ಹುದ್ದೆಗಳಿಗೆ ಸಂಬಂಧಿಸಿದಂತೆ ಒಎಂಆರ್ ಶೀಟ್‌ಗಳನ್ನು ಅದಲುಬದಲು ಮಾಡುವ ಮೂಲಕ ಅಕ್ರಮ ಎಸಗಲಾಗಿದೆ. ನೇಮಕಾತಿ ಪ್ರಕ್ರಿಯೆ ಯಲ್ಲಿ ಅಧ್ಯಕ್ಷರು 9 ಕೋಟಿ ರೂ. ಹಣ ಪಡೆದಿದ್ದಾರೆ ಎಂಬ ದೂರು ಕೇಳಿಬಂದಿದೆ.

ಇನ್ನು ಸೋಲಾರ್ ಪ್ಲಾಂಟ್ ನಿರ್ಮಾಣ ಮತ್ತು ಗೋಲ್ಡನ್ ಡೈರಿ ಕಾಮಗಾರಿಗಳಲ್ಲಿ ವ್ಯಾಪಕ ಭ್ರಷ್ಟಾಚಾರ ನಡೆದಿದೆ ಎಂದು ಆರೋಪಿಸಲಾಗಿದ್ದು, ಒಕ್ಕೂಟದ ನಿರ್ದೇಶಕರುಗಳು ಧಾರ್ಮಿಕ ದತ್ತಿ ನಿಧಿಯ ಮೂಲಕ ತಲಾ ಒಂದು ಚಿನ್ನದ ನಾಣ್ಯವನ್ನು ಪಡೆದುಕೊಂಡಿದ್ದಾರೆ ಎಂಬ ಆಘಾತಕಾರಿ ಅಂಶ ಲೋಕಾಯುಕ್ತ ತನಿಖೆಯಿಂದ ಬಹಿರಂಗವಾಗಿದೆ ಎಂದು ಹೇಳಲಾಗಿದೆ.

**ಆರೋಪ ತಳ್ಳಿಹಾಕಿದ ಕೆ.ವೈ. ನಂಜೇಗೌಡ:**

ಈ ಎಲ್ಲಾ ಆರೋಪಗಳನ್ನು ತಳ್ಳಿಹಾಕಿರುವ ಶಾಸಕ ಕೆ.ವೈ. ನಂಜೇಗೌಡ ಅವರು, "ನನ್ನ ಅವಧಿಯಲ್ಲಿ ಯಾವುದೇ ಹಗರಣ ನಡೆದಿಲ್ಲ, ಬದಲಾಗಿ ಅಭಿವೃದ್ಧಿ ಕೆಲಸಗಳಾಗಿವೆ. ಒಂದು ವೇಳೆ ನನ್ನ ಮೇಲಿನ ಭ್ರಷ್ಟಾಚಾರದ ಆರೋಪ ಸಾಬೀತಾದರೆ ನಾನು ರಾಜಕೀಯದಿಂದಲೇ ನಿವೃತ್ತಿ ಹೊಂದುತ್ತೇನೆ" ಎಂದು ಸವಾಲು ಹಾಕಿದ್ದಾರೆ.

ಸದ್ಯ ಜಾರಿ ನಿರ್ದೇಶನಾಲಯ ಮತ್ತು ಲೋಕಾಯುಕ್ತ ಅಧಿಕಾರಿಗಳು ಪ್ರತ್ಯೇಕವಾಗಿ ತನಿಖೆ ನಡೆಸುತ್ತಿದ್ದು, ತನಿಖಾ ವರದಿ ಬಂದ ನಂತರವೇ ಈ ಬೃಹತ್ ಹಗರಣದ ಅಸಲಿಯತ್ತು ಹೊರಬೀಳಬೇಕಿದೆ. ರೈತರ ಶ್ರಮದ ಹಣದಲ್ಲಿ ರಾಜಕೀಯ ನಾಯಕರು ಬೇಳೆ ಬೇಯಿಸಿಕೊಳ್ಳುತ್ತಿದ್ದಾರೆ ಎಂಬ ಆಕ್ರೋಶ ಸಾರ್ವಜನಿಕ ವಲಯದಲ್ಲಿ ವ್ಯಕ್ತವಾಗುತ್ತಿದೆ.

## ಅರಿವಿನೊಳಗಿನ ಅರಿವು ನೋಡುವುದೇ ಆಧ್ಯಾತ್ಮ: ಪ್ರೊ.ಮಲ್ಲೇಪುರಂ

**ರಾಯಚೂರ, ಮೇ. 1:** ಇಡೀ ಭಾರತದಲ್ಲಿ ಬೇರೆ ಬೇರೆ ರೀತಿಯಲ್ಲಿ ತತ್ವಪದಗಳು ಬೇರೆ ಬೇರೆ ವಿನ್ಯಾಸದಲ್ಲಿ ಕರೆಯಲಾಗುತ್ತದೆ. ದರ್ಶನ, ಅನುಭಾವ, ಅಧ್ಯಾತ್ಮ ಎಂಬ ಮೂರು ಮುಖ್ಯ ಭಾಗಗಳಿವೆ ಈ ಮೂರು ಹಂತಗಳನ್ನು ಹೊರಗಡೆ ನೋಡುವ ದರ್ಶನಕ್ಕಿಂತ ನಿನ್ನೊಳಗಿನ ದರ್ಶನ ಮೊದಲು ನೋಡು ಎಂದು ಬೆಂಗಳೂರಿನ ಸಂಸ್ಕೃತ ವಿಶ್ವ ವಿದ್ಯಾಲಯದ ವಿಶ್ರಾಂತ ಕುಲಪತಿ ಪ್ರೊ.ಮಲ್ಲೇಪುರಂ ಜಿ.ವೆಂಕಟೇಶ ಅವರು ಉದ್ಘಾಟಕ ನುಡಿಗಳನ್ನಾಡಿದರು.

ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾನಿಲಯ ಹಾಗೂ ಬೆಂಗಳೂರಿನ ಸಂತಕವಿ ಕನಕದಾಸ ಮತ್ತು ತತ್ವಪದಕಾರರ ಅಧ್ಯಯನ ಕೇಂದ್ರ ಸಹಯೋಗ ಹಾಗೂ ಕನ್ನಡ ಅಧ್ಯಯನ ವಿಭಾಗ ವತಿಯಿಂದ ವಿವಿ ಸಭಾಂಗಣದಲ್ಲಿ ತತ್ವಪದ ಸಾಹಿತ್ಯ: ನಡೆ–ನುಡಿ ಮೌಲ್ಯ ಒಂದು ದಿನದ ವಿಚಾರ ಸಂಕೀರ್ಣ ಉದ್ಘಾಟಿಸಿ ಮಾತನಾಡಿದ ಅವರು ಅಧ್ಯಾತ್ಮ ಎಂದರೇ ತನ್ನ ಒಳಗೆ ತಾನು ನೋಡಿಕೊಳ್ಳುವುದು ಅಂದರೇ ರಿವಿನೊಳಗೆ ಅರಿವು ನೋಡುವುದೇ ಅಧ್ಯಾತ್ಮವಾಗಿದೆ. ಗುರು ಶಿಷ್ಯರ ಪರಂಪರೆ ಅಧ್ಯಾತ್ಮದಲ್ಲಿ ಕಾಣಬಹುದು. ನಿನ್ನೊಳಗಿನ ಅರಿವು ತಿಳಿದು ಅರಿತು ಪ್ರತಿಯೊಬ್ಬರು ಬೆಳಗುವ ದೀಪವಾಗಬೇಕು ಎಂದರು.

# ಸಂಚಾರಿ ನಿಯಮ ಉಲ್ಲಂಘನೆಗೆ ತಕ್ಷಣ ದಂಡ, ಸಿಸಿಟಿವಿ ಕ್ಯಾಮರಾ ಕಣ್ಗಾವಲಿನಲ್ಲಿ ವಾಹನ ಸವಾರರು: ಡಾ.ಶರಣಪ್ಪ



**ಕಲಬುರಗಿ, ಮೇ.1:** ಸಂಚಾರಿ ನಿಯಮಗಳನ್ನು ಉಲ್ಲಂಘಿಸುವವರ ಮೇಲೆ ನಗರದಲ್ಲಿ ಎಐ ಆಧಾರಿತ ಕ್ಯಾಮೆರಾಗಳ ಹದ್ದಿನ ಕಣ್ಣು ವ್ಯವಸ್ಥೆ ಮಾಡಲಾಗಿದೆ. ನಗರದಲ್ಲಿ ಸಂಚಾರ ನಿಯಮಗಳನ್ನು ಉಲ್ಲಂಘಿಸಿದವರ ಮೇಲೆ ಕಠಿಣ ಕ್ರಮಗಳನ್ನು ಕೈಗೊಳ್ಳಲು ಹಾಗೂ ಸಾರ್ವಜನಿಕರು ಕಡ್ಡಾಯವಾಗಿ ಸಂಚಾರಿ ನಿಯಮ ಗಳನ್ನು ಪಾಲಿಸುವ ಉದ್ದೇಶದಿಂದ ನಗರದ ವಿವಿಧೆಡೆ ಸುಮಾರು 58 ಸ್ಥಳಗಳಲ್ಲಿ 180 ಕ್ಯಾಮರಾಗಳನ್ನು ಅಳವಡಿಸಲಾಗಿದೆ ಹಾಗೂ ಎಐ ಆಧಾರಿತ ಕ್ಯಾಮರಾ ಅಳವಡಿಸಲಾಗಿದೆ ಎಂದು ನಗರ ಪೋಲಿಸ್ ಆಯುಕ್ತ ಡಾ. ಶರಣಪ್ಪ ಎಸ್.ಡಿ. ಅವರು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಹೆಲ್ಮೆಟ್ ಧರಿಸದೇ ಇರುವುದು, ಟ್ರಿಪಲ್ ರೈಡಿಂಗ್, ಚಾಲನೆಯ ಸಂದರ್ಭದಲ್ಲಿ ಮೊಬೈಲ್ ಬಳಕೆ, ಸೀಟ್ ಬೆಲ್ಟ್ ಧರಿಸದೇ ಇರುವುದು, ನೋ ಪಾರ್ಕಿಂಗ್, ತಪ್ಪು ದಾರಿ, ಎಎನ್‌ಪಿಆರ್, ಎಫ್‌ಆರ್‌ಎಸ್ (ಮುಖ ಗುರುತಿಸುವಿಕೆ ವ್ಯವಸ್ಥೆ), ಲೈನ್ ಕ್ರಾಸಿಂಗ್ ಮುಂತಾದವುಗಳ ಮೇಲೆ ಎಐ ಆಧಾರಿತ ಕ್ಯಾಮೆರಾಗಳು ಕಣ್ಣಿಡುತ್ತವೆ ಎಂದರು.

ಎಐ ಆಧಾರಿತ ಪಾದಚಾರಿ ಎಚ್ಚರಿಕೆ ವ್ಯವಸ್ಥೆ ಕಲ್ಪಿಸಲಾಗಿದ್ದು ಈ ಮೂಲಕ ಸಾರ್ವಜನಿಕರು ಜೆಬ್ರಾ ಕ್ರಾಸ್ ಮಾಡುವಾಗ ಎಐ ಆಧಾರಿತ ಕ್ಯಾಮೆರಾಗಳು ಪಾದಚಾರಿಗಳಿಗೆ ಹಾಗೂ ಕಾರು ಚಾಲಕರಿಗೆ ಎಚ್ಚರಿಕೆ ನೀಡುತ್ತದೆ. ಕ್ರಾಸ್ ವಾಕ್ ವಲಯಕ್ಕೆ ಪ್ರವೇಶಿಸುವ ಪಾದಚಾರಿಗಳನ್ನು ಪತ್ತೆ ಮಾಡುತ್ತದೆ. ವೇಗದ ವಾಹನ ಚಾಲಕರಿಗೆ ಮಿನುಗುವ ಎಲ್‌ಇಡಿ ಸಂಕೇತಗಳು, ವಾಹನವು ಹೆಚ್ಚಿನ ವೇಗದಲ್ಲಿ ಬರುತ್ತಿದ್ದರೆ ಧ್ವನಿ ಮತ್ತು ದೃಶ್ಯ ಸಂಕೇತಗಳು, ನಿರಂತರ ಕಾರ್ಯಾಚರಣೆ, ರಾತ್ರಿ ದೃಷ್ಟಿ ಮತ್ತು ಹವಾಮಾನ ನಿರೋಧಕ ವಿನ್ಯಾಸ ವನ್ನು ಎಐ ದೃಷ್ಟಿ ಮಾಡ್ಯೂಲ್ ಹೊಂದಿದೆ ಎಂದು ಅವರು ವಿವರಿಸಿದರು.

ಒಬ್ಬ ವ್ಯಕ್ತಿ ಜೆಬ್ರಾ ಕ್ರಾಸ್ ಮಾಡುವಾಗ ಎಐ ಆಧಾರಿತ ಕ್ಯಾಮರಾ 500–700 ಮೀಟರ್ ದೂರ ಇರುವಾಗ ಕ್ರಾಸ್ ಮಾಡುವ ವ್ಯಕ್ತಿಗೆ ಹಾಗೂ ವಾಹನ ಚಾಲಕ ಇಬ್ಬರಿಗೂ ಲೈಟ್ ಬ್ಲಿಂಕ್ ಹಾಗೂ ಸಣ್ಣಧ್ವನಿಯಲ್ಲಿ ಸೈರನ್ ಹಾಕಿ ಎಚ್ಚರಿಕೆ ನೀಡುತ್ತದೆ. ಇದರಿಂದಾಗಿ ಸಂಚಾರ ಹರಿವು ಸುಧಾರಣೆ ಎಐ ಆಧಾರಿತ ಐಟಿಎಂಎಸ್ ಸಂಚಾರ ಸಂಕೇತಗಳು ಮತ್ತು ದಟ್ಟಣೆಯನ್ನು ಕ್ರಿಯಾತ್ಮಕವಾಗಿ ನಿರ್ವಹಿಸುತ್ತವೆ. ರಸ್ತೆ ಸುರಕ್ಷತೆ ಹೆಚ್ಚಳ ನೈಜಸಮಯದ ಮೇಲ್ವಿಚಾರಣೆ ಉಲ್ಲಂಘನೆಗಳನ್ನು ಪತ್ತೆ ಮಾಡಿ ಅಪಘಾತಗಳನ್ನು ಕಡಿಮೆ ಮಾಡುತ್ತದೆ. ಸ್ವಯಂಚಾಲಿತ ಜಾರಿ ಕ್ಯಾಮರಾ ಮತ್ತು ಎಐ ವ್ಯವಸ್ಥೆಗಳು ಸ್ವಯಂಚಾಲಿತವಾಗಿ ಚಲನ್ಗಳನ್ನು ಉತ್ಪಾದಿಸುತ್ತವೆ ಎಂದು ಅವರು ಹೇಳಿದರು.

ಇಂತಹ ಕ್ರಮಗಳಿಂದ ಮಾನವ ಹಸ್ತಕ್ಷೇಪ ಕಡಿತ ಕೈಯಿಂದ ಸಂಚಾರ ನಿಯಂತ್ರಣದ ಅವಲಂಬನೆ ಕಡಿಮೆ. ಪಾರದರ್ಶಕತೆ ಪಕ್ಷಪಾತವಿಲ್ಲದ, ಸಾಕ್ಷಿ ಆಧಾರಿತ ಜಾರಿ. ನೈಜ–ಸಮಯ ಮೇಲ್ವಿಚಾರಣೆ ಮತ್ತು ನಿಯಂತ್ರಣ. ಡೇಟಾ ಆಧಾರಿತ ನಿರ್ಧಾರ ತೆಗೆದುಕೊಳ್ಳುವಿಕೆ ಉತ್ತಮ ನಗರ ಯೋಜನೆಗೆ ಸಹಾಯ. ತ್ವರಿತ ತುರ್ತು ಪ್ರತಿಕ್ರಿಯೆ, ಪರಿಸರ ಪ್ರಯೋಜನಗಳು ಇಂಧನ ಬಳಕೆ ಮತ್ತು ಹೊರಸೂಸುವಿಕೆ ಕಡಿತ. ಆದಾಯ, ಉತ್ಪಾದನೆ ದಂಡ ಸಂಗ್ರಹ ದಕ್ಷತೆ ಹೆಚ್ಚಳ. ಸ್ಮಾರ್ಟ್ ಸಿಟಿ ಯೋಜನೆಗಳೊಂದಿಗೆ ಏಕೀಕರಣ ಸಾಧ್ಯವಾಗಲಿದೆ ಎಂದು ಅವರು ತಿಳಿಸಿದರು.

ಪೊಲೀಸರಿಗೆ ಇದರಿಂದ ಹೆಚ್ಚು ಅನುಕೂಲವಾಗಲಿದೆ. ವೇಗವಾಗಿ ಅಪರಾಧಿ ಗುರುತಿಸುವಿಕೆ: ಅಪರಾಧಿ ಡೇಟಾ ಜೊತೆ ತಕ್ಷಣ ಮುಖಹೊಂದಾಣಿಕೆ. ನೈಜ–ಸಮಯದ ಕಕ್ಕಾವಲು: ಲೈವ್ ಕ್ಯಾಮರಾ ಫೀಡ್‌ಗಳಲ್ಲಿ ಶಂಕಿತರನ್ನು ಪತ್ತೆ ಮಾಡುತ್ತದೆ. ತಿಳಿದಿರುವ ಅಪರಾಧಿ ಕಾಣಿಸಿಕೊಂಡಾಗ ಎಚ್ಚರಿಕೆ. ಕಾಣೆಯಾದ ಮಕ್ಕಳು/ ಹಿರಿಯರನ್ನು ಪತ್ತೆ ಮಾಡಲು ಸಹಾಯ, ದೊಡ್ಡ ಡೇಟಾ ಸೆಟ್‌ಗಳನ್ನು ಸ್ಕ್ಯಾನ್ ಮಾಡಿ ಶಂಕಿತರನ್ನು ಶೀಘ್ರವಾಗಿ ಗುರುತಿಸುವುದಕ್ಕೆ ಅನುಕೂಲವಾಗಲಿದೆ ಎಂದು ಹೇಳಿದ ಅವರು, ಸಾರ್ವಜನಿಕರು ಕಡ್ಡಾಯವಾಗಿ ಸಂಚಾರಿ ನಿಯಮಗಳನ್ನು ಪಾಲಿಸಬೇಕು ಎಂದರು.




ಮೈಸೂರಿನಲ್ಲಿ ಶುಕ್ರವಾರ ಆಲ್ ಇಂಡಿಯಾ ಯುನೈಟೆಡ್ ಟ್ರೇಡ್ ಯೂನಿಯನ್ ಸೆಂಟರ್ (ಎಐಯುಟಿಯುಸಿ) ಆಯೋಜಿಸಿದ್ದ ಮೇ ದಿನಾಚರಣೆಯಲ್ಲಿ (ಅಂತರರಾಷ್ಟ್ರೀಯ ಕಾರ್ಮಿಕರ ದಿನ) ಜನರು ಭಾಗವಹಿಸಿದರು.

# ಯಡಿಯೂರಪ್ಪ ಅಭಿಮಾನೋತ್ಸವ ಸಿದ್ಧತಾ ಸಭೆ



**ಬಳ್ಳಾರಿ ಮೇ.01.** ನಗರದ ಜಿಲ್ಲಾ ಬಿಜೆಪಿ ಕಚೇರಿಯಲ್ಲಿ ಈ ತಿಂಗಳ 9 ರಂದು ಚಿತ್ರದುರ್ಗದಲ್ಲಿ ನಡೆಯುವ ಮಾಜಿ ಮುಖ್ಯ ಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರ 50 ವರ್ಷಗಳ ರಾಜಕೀಯ ಜೀವನದ ಅಭಿಮಾನೋತ್ಸವ ಪೂರ್ವ ಸಿದ್ದತಾ ಸಭೆ ನಡೆಯಿತು.

ನಗರದ ಮಾಜಿ ಶಾಸಕ ಗಾಲಿ ಸೋಮಶೇಖರ ರೆಡ್ಡಿ, ಮಾಜಿ ಸಂಸದ ಸಣ್ಣ ಪಕ್ಕೀರಪ್ಪ, ಜಿಲ್ಲಾ ಬಿಜೆಪಿ ಅಧ್ಯಕ್ಷ ಅನಿಲ್ ನಾಯ್ಡು, ಮಾಜಿ ಅಧ್ಯಕ್ಷ ಗುತ್ತಿಗನೂರು ವಿರೂಪಾಕ್ಷಗೌಡ, ಬಿಚ್ಚುಗಲ್ಲು ಪಂಚಾಕ್ಷರಪ್ಪ ಮೊದಲಾದವರು ಅಭಿಮಾನೋತ್ಸವಕ್ಕೆ ಜಿಲ್ಲೆಯಿಂದ ಯಡಿಯೂರಪ್ಪ ಅವರ ಅಭಿಮಾನಿಗಳನ್ನು ಕರೆದುಕೊಂಡು ಹೋಗುವ ಕುರಿತು ಚರ್ಚೆ ನಡೆಸಿದರು.

ಈ ವೇಳೆ ಜಿಲ್ಲೆಯಲ್ಲಿನ ಯಡಿಯೂರಪ್ಪ ಅಭಿಮಾನಿಗಳ ಮತ್ತು ವೀರಶೈವ ಲಿಂಗಾಯತ ಸಮಾಜದ ಮುಖಂಡರುಗಳ ಸಭೆಯನ್ನು ನಾಳೆ ಸಂಜೆ. 5 ಕ್ಕೆ ನಗರದ ವೀರಶೈವ ವಿದ್ಯಾವರ್ಧಕ ಸಂಘದ ಸಭಾಂಗಣದಲ್ಲಿ ನಡೆಸಲು ನಿರ್ಧರಿಸಲಾಯ್ತು.

# ತ್ಯಾಗಮೂರ್ತಿ ಪೂಜ್ಯ ಡಾ.ಬಸವಲಿಂಗ ಪಟ್ಟದ್ದೇವರು: ಮಹೇಶ ಬನ್ನಾಳೆ





**ಬೀದರ, ಮೇ. 1:** ಅಕ್ಷರದ ಸಂತ, ಮಾತೃ ಹೃದಯಿ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರ ಜೀವನ ಮತ್ತು ಸಾಧನೆ ಪ್ರತಿಯೊಬ್ಬರಿಗೂ ಮಾದರಿಯಾಗಿದೆ. ಸಾರ್ಥಕ 75 ವಸಂತಗಳನ್ನು ಪೂರೈಸಿದ ಪರಮ ಪೂಜ್ಯರ ಅಮೃತ ಮಹೋತ್ಸವ ಅಸಂಖ್ಯಾತ ಭಕ್ತರ ಮಧ್ಯೆ ಈಚೆಗೆ ಶ್ರದ್ಧೆ, ಭಕ್ತಿಯಿಂದ ನೆರವೇರಿತು.

ಈ ಸಂದರ್ಭದಲ್ಲಿ ಪರಮ ಪೂಜ್ಯರ ಕುರಿತು ಹತ್ತಾರು ಗ್ರಂಥಗಳು ಲೋಕಾರ್ಪಣೆಗೊಂಡವು. ಅದರಲ್ಲಿ ತ್ಯಾಗಮೂರ್ತಿ ಪರಮಪೂಜ್ಯ ಡಾ.ಬಸವಲಿಂಗ ಪಟ್ಟದ್ದೇವರು ಕವನ ಸಂಕಲನ ಕೂಡ ಬಿಡುಗೊಂಡಿದ್ದು ವಿಶೇಷ. ಕರಡ್ಯಾಳ ಚನ್ನಬಸವೇಶ್ವರ ಗುರುಕುಲದಲ್ಲಿ ಶಿಕ್ಷಕರಾಗಿ ಕರ್ತವ್ಯ ನಿರ್ವಹಿಸುತ್ತಿರುವ ಮಹೇಶ್ ಬನ್ನಾಳೆ ಸಂಪಾದಕತ್ವದಲ್ಲಿ ಹೊರ ತಂದಿರುವ ಕವನ ಸಂಕಲನ ಓದುಗರ ಗಮನ ಸೆಳೆದಿದೆ.

ಬಸವಧರ್ಮ ಪ್ರಸಾರ ಸಂಸ್ಥೆ ಹಿರೇಮಠ ಸಂಸ್ಥಾನ ಭಾಲ್ಕಿ ಪ್ರಕಾಶನದಿಂದ ಪ್ರಕಟಗೊಂಡಿರುವ ಈ ಕವನ ಸಂಕಲನಕ್ಕೆ 66 ಯುವ ಬರಹಗಾರರು ಪರಮ ಪೂಜ್ಯರ ಕುರಿತು ಕವನಗಳನ್ನು ಬರೆದಿದ್ದಾರೆ. ಅದರಲ್ಲಿ ಪರಮ ಪೂಜ್ಯರು ಕಟ್ಟಿದ ವಿದ್ಯಾ ಸಂಸ್ಥೆಯಲ್ಲಿ ಕೆಲಸ ಮಾಡುತ್ತಿರುವ ಶಿಕ್ಷಕರು, ಸಿಬ್ಬಂದಿಗಳು ಸೇರಿ ಕವನ ರಚಿಸಿರುವುದು ಮತ್ತೊಂದು ವಿಶೇಷ. ಡಾ.ಬಸವಲಿಂಗ ಪಟ್ಟದ್ದೇವರ ಸಾನ್ನಿಧ್ಯದಲ್ಲಿ ಹಿರಿಯ ಸಾಹಿತಿ ಗೋ.ರು.ಚನ್ನಬಸಪ್ಪ ಅವರು ತ್ಯಾಗಮೂರ್ತಿ ಪರಮಪೂಜ್ಯ ಡಾ.ಬಸವಲಿಂಗ ಪಟ್ಟ ದ್ದೇವರು ಕವನ ಸಂಕಲನ ಬಿಡುಗಡೆಗೊಳಿಸಿದರು.

## ಡಾ.ಶಿವಶಂಕರ ಟೋಕರೆಯವರಿಗೆ ಕಸಾಪದಿಂದ ಕಾಯಕಯೋಗಿ ರಾಜ್ಯ ಪ್ರಶಸ್ತಿ ಪ್ರದಾನ



**ಬೀದರ, ಏ. 1:** ಡಾ.ಶಿವಶಂಕರ ಟೋಕರೆಯವರಿಗೆ ಕಾಯಕ ಯೋಗಿ ಪ್ರಶಸ್ತಿಯು ಅವರ ಕೌಶಲ್ಯ ಸೇವೆಗೆ ಸಂದ ಗೌರವವಾಗಿದೆ ಎಂದು ಕರ್ನಾಟಕ ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿಷತ್ತಿನ ರಾಜ್ಯ ಸಂಚಾಲಕರಾದ ದಾನಿ ಬಾಬುರಾವ್ ನುಡಿದರು.

ಕಾರ್ಮಿಕ ದಿನಾಚರಣೆ ಪ್ರಯುಕ್ತ ಕರ್ನಾಟಕ ರಾಜ್ಯ ವೈಜ್ಞಾನಿಕ ಸಂಶೋಧನ ಪರಿಷತ್ತು ಟ್ರಸ್ಟ ವತಿಯಿಂದ ಆಯೋಜಿಸಿದ "ಕಾಯಕಯೋಗಿ–26' ಪ್ರಶಸ್ತಿಗೆ ಬೀದರ ಜಿಲ್ಲೆಯಿಂದ ಆಯ್ಕೆಯಾದ ಡಾ.ಶಿವಶಂಕರ ಟೋಕರೆಯವರಿಗೆ ಅಧಿಕೃತ ಆಹ್ವಾನ ನೀಡಿ ಮಾತನಾಡಿದರು. ಸಮಾರಂಭದ ಅಧ್ಯಕ್ತೆ ವಹಿಸಿದ ಜಿಲ್ಲಾ ಕಸಾಪ ಅಧ್ಯಕ್ಷರಾದ ಸುರೇಶ ಚನ್ನಶೆಟ್ಟಿ ಅವರು ಮಾತನಾಡುತ್ತ ಶಿವಶಂಕರ ಟೋಕರೆ ಬಸವ –ಕನ್ನಡ ಕೌಶಲ್ಯ ಕ್ಷೇತ್ರದಲ್ಲಿ ಇವರ ಸೇವೆ ಅನುಪಮವಾದದ್ದು. ಸರಕಾರಿ ಐಟಿಐ ಪ್ರಾಚಾರ್ಯರಾಗಿ ಜಿಲ್ಲೆಯ 17 ಸಾವಿರ ಕುಶಲಕರ್ಮಿಗಳಿಗೆ ನೌಕರಿ ಒದಗಿಸಿದ್ದು, ಒಂದು ಐತಿಹಾಸಿಕ ದಾಖಲೆ. ರಾಷ್ಟ್ರೀಯ ಬಸವ ದಳ, ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘ,ಬಸವ ಕೇಂದ್ರ, ಕನ್ನಡ ಸಾಹಿತ್ಯ ಪರಿಷತ್ತು, ಬೃಹತ ಸಂಘಟನೆಗಳಲ್ಲಿ ಹತ್ತಾರು ವರ್ಷಗಳ ಕಾಲ ಎಲೆಮರೆಯ ಕಾಯಿಯಂತೆ ಸೇವೆ ಮಾಡಿ ಇಂದು ಹೆಜ್ಜೆ ಗುರುತು ಬಿಟ್ಟಿರುವುದು ಇಂದಿನ ಯುವ ಪೀಳಿಗೆಗೆ ಮಾರ್ಗದರ್ಶನವಾಗಿದೆ.

# ಸಂಗನಕಲ್ಲಿನಲ್ಲಿ ಭಕ್ತಿಯಿಂದ ಬುದ್ದನ ಜನ್ಮ ದಿನಾಚರಣೆ



ಬಳ್ಳಾರಿ, ಮೇ.01:ತಾಲೂಕಿನ ಸಂಗನಕಲ್ಲು ಗ್ರಾಮದ ಐತಿಹಾಸಿಕ ಬೆಟ್ಟದಲ್ಲಿನ ಬಯಲು ಬುದ್ದ ವಿಹಾರದಲ್ಲಿ. ಬುದ್ಧನ 2570 ನೇ ಜಯಂತಿಯನ್ನು ಶ್ರದ್ಧಾ ಭಕ್ತಿಯಿಂದ ಆಚರಿಸಲಾಯ್ತು.

ದೇವನಾಂಪ್ರಿಯ ಬಯಲು ಬುದ್ದ ವಿಹಾರ ಟ್ರಸ್ಟ್ ಹಮ್ಮಿಕೊಂಡಿದ್ದ ಈ ಕಾರ್ಯಕ್ರಮದಲ್ಲಿ ಮೇಯರ್ ಪಿ.ಗಾದೆಪ್ಪ, ಹಿರಿಯ ಲೆಕ್ಕ ಪರಿಶೋಧಕ ಸಿರಿಗೇರಿ ಪನ್ನರಾಜ್, ಕಮಲಾಕರ ಬಂತೇಜಿ. ಎರ್ರೆಣ್ಣ, ಓಂಕಾರಪ್ಪ, ವಿಜಯಕುಮಾರ್ ಮೊದಕಾದವರು ಪಾಲ್ಗೊಂಡು ಬುದ್ದನ ಪ್ರತಿಮೆಗೆ ಪ್ರಾರ್ಥನೆ, ಪುಷ್ಪ ನಮನ ಸಲ್ಲಿಸಿದರು.

## ಪ್ರಯಾಣಿಕರಿಂದ ನಿತ್ಯ ಭರ್ತಿಯಾಗಿ ಸಂಚರಿಸುತ್ತಿರುವ ರೈಲು

# ಕಲಬುರಗಿ–ಬೆಂಗಳೂರು ವಂದೇಭಾರತಕ್ಕೆ ಭರ್ಜರಿ ಆದಾಯ

**ಕಲಬುರಗಿ, ಮೇ. 1:** ಕಲಬುರಗಿಯಿಂದ ಬೆಂಗಳೂರಿನ ಸರ್ ಎಂ.ವಿಶ್ವೇಶ್ವರಯ್ಯ ಟರ್ಮಿನಲ್‌ಗೆ ಸೇವೆ ನೀಡುತ್ತಿರುವ ವಂದೇ ಭಾರತ್ ರೈಲಿಗೆ ಪ್ರಯಾಣಿಕರಿಂದ ಭರ್ಜರಿ ಸ್ಪಂದನೆ ಸಿಕ್ಕಿದೆ. ಕಳೆದ ಎರಡು ವರ್ಷಗಳಲ್ಲಿ 67.89 ಕೋಟಿ ಆದಾಯ ಬಂದಿರುವುದು ಹೊಸ ಉತ್ಸಾಹ ನೀಡಿದೆ.

ಕಲ್ಯಾಣ ಕರ್ನಾಟಕದ ಕೇಂದ್ರಸ್ಥಾನ ಕಲಬುರಗಿಯಿಂದ ಹಗಲಿನಲ್ಲಿ ಶೀಘ್ರ ಬೆಂಗಳೂರಿಗೆ ತಲುಪುವಂತೆ ವಂದೇ ಭಾರತ ಆರಂಭಿಸಬೇಕೆಂದು ಅಂದಿನ ಸಂಸದ ಡಾ.ಉಮೇಶ ಜಾಧವ ಅವರು ಪಟ್ಟುಹಿಡಿದು ಬೆಂಬತ್ತಿದ್ದರಿಂದ ಅವರ ಆಶಯದೊಂದಿಗೆ 2024ರ ಮಾ.12ರಂದು ಪ್ರಧಾನಿ ನರೇಂದ್ರ ಮೋದಿ ವರ್ಚುವಲ್ ಮೂಲಕ ಚಾಲನೆ ನೀಡಿದ್ದರು. ಅಲ್ಲಿಂದ ಈ ವರೆಗೆ 5.72 ಲಕ್ಷ ಪ್ರಯಾಣಿಕರು ವಂದೇಭಾರತ್ ರೈಲಿನ ಸೇವೆ ಪಡೆದುಕೊಂಡಿದ್ದಾರೆ.

ಕಲಬುರಗಿ–ಬೆಂಗಳೂರು ನಡುವಿನ ವೇಗದ ಸಂಪರ್ಕ ಒದಗಿಸಿರುವ ವಂದೇಭಾರತ್ ಎಕ್ಸ್‌ಪ್ರೆಸ್‌ನಿಂದ ಉದ್ಯೋಗಿಗಳು, ಶಿಕ್ಷಣ ಪಡೆಯುವ ವಿದ್ಯಾರ್ಥಿಗಳು, ಆರೋಗ್ಯ ಸೇವೆಗಾಗಿ ರಾಜಧಾನಿಗೆ ತೆರಳುವವರು ಹಾಗೂ ವ್ಯಾಪಾರಿಗಳಿಗೆ ಅತ್ಯಂತ ಅನುಕೂಲಕರವಾಗಿದೆ. ಉಳಿದ ರೈಲುಗಳಿಗೆ ಹೋಲಿಸಿದರೆ ಅತಿಕಡಿಮೆ ಸಮಯದಲ್ಲಿ ಬೆಂಗಳೂರಿಗೆ ತಲುಪುವ ವ್ಯವಸ್ಥೆ ಇರುವುದರಿಂದ ಇದು ಎಲ್ಲರಿಗೂ ಅಚ್ಚುಮೆಚ್ಚಿನ ರೈಲಾಗಿ ಪರಿವರ್ತನೆಯಾಗಿದೆ.



ಶೇ.100ಕ್ಕಿಂತ ಹೆಚ್ಚಿನ ಭರ್ತಿ: ವಂದೇ ಭಾರತ್ ರೈಲು ಆರಂಭದ ವರ್ಷದಲ್ಲಿಯೇ ಶೇ.100ರ ಸಮೀಪದ ಭರ್ತಿಯೊಂದಿಗೆ ಓಡಾಡುತ್ತಿತ್ತು. ಆದರೆ, ಕಳೆದ ಒಂದು ವರ್ಷದಿಂದ ಇದರ ಪ್ರಮಾಣ ಶೇ.100ನ್ನು ದಾಟಿರುವುದು ವಿಶೇಷವಾಗಿದೆ. ಈ ವರ್ಷ ಕಲಬುರಗಿ–ಎಸ್‌ಎಂವಿಬಿ ಬೆಂಗಳೂರು–ಕಲಬುರಗಿ ನಡುವೆ ಸಂಚರಿಸುವ ರೈಲಿನಲ್ಲಿ ಶೇ.103.52ರಷ್ಟು ಭರ್ತಿಯಾಗುವ ಮೂಲಕ ದಾಖಲೆ ಬರೆದಿದೆ. ಇದು ಕಲ್ಯಾಣ ಕರ್ನಾಟಕದ ಪ್ರಮುಖ ನಗರವಾದ ಕಲಬುರಗಿಯಿಂದ ರಾಜಧಾನಿ ಬೆಂಗಳೂರಿಗೆ ಪ್ರಯಾಣಿಸಲು ಜನರ ಬೇಡಿಕೆ ಹೇಗಿದೆ ಎಂಬುದನ್ನು ತೋರಿಸುತ್ತದೆ.

5.72 ಲಕ್ಷ ಜನರ ಪ್ರಯಾಣ: ಸ್ವಾತಂತ್ರ್ಯ ನಂತರ ಕಲಬುರಗಿಯಿಂದ ಬೆಂಗಳೂರಿಗೆ ಪ್ರಾರಂಭವಾದ ಮೊದಲ ವಂದೇ ಭಾರತ್ ರೈಲು ಎಂಬ ಹೆಗ್ಗಳಿಕೆಯನ್ನು ಪಡೆದುಕೊಂಡಿರುವ ಈ ಎಕ್ಸ್‌ಪ್ರೆಸ್ ನಿತ್ಯವೂ ಭರ್ತಿಯಾಗಿ ಪಯಣಿಸುತ್ತಿದೆ. ಎರಡು ವರ್ಷಗಳಲ್ಲಿ 5,72, 566 ಜನರು ಪ್ರಯಾಣಿಸಿದ್ದಾರೆ. ಸಂಪೂರ್ಣ ಹವಾನಿಯಂತ್ರಿತ ಕೋಚ್‌ಗಳು, ದೊಡ್ಡ ಗ್ಲಾಸ್‌ನ ಕಿಟಕಿಗಳು ಹಾಗೂ ಉತ್ತಮ ಸೌಲಭ್ಯಗಳು ಪ್ರಯಾಣಿಕರಿಗೆ ಮುದ ನೀಡುತ್ತವೆ ಎಂದು ಪ್ರಯಾಣಿಕ ಮಲ್ಲಿಕಾರ್ಜುನ ತಿಳಿಸಿದ್ದಾರೆ.

# ಸಿರಗುಪ್ಪ: ಕಾರ್ಮಿಕ ದಿನಾಚರಣೆಯಂದೇ ಕಾರ್ಮಿಕರಿಗೆ ನಡೆದ ದೊಡ್ಡ ದುರಂತ

**ಬಳ್ಳಾರಿ ಮೇ 01.** ಕಾರ್ಮಿಕ ದಿನಾಚರಣೆದಂದು ಕಾರ್ಮಿಕರಿಗೆ ನಡೆದ ದುರಂತದ ಘಟನೆ ಸಿರುಗುಪ್ಪ ವಿಧಾನಸಭಾ ಕ್ಷೇತ್ರದಲ್ಲಿ ನಡೆದಿದೆ.

ಶುಕ್ರವಾರದಂದು (ಚಾಮರಾಜ ನಗರ ದಿಂದ ಬೀದರ್ ರಾಷ್ಟ್ರೀಯ ಹೆದ್ದಾರಿಯಲ್ಲಿ) ಸಿಂದಿಗೇರಿ ಗ್ರಾಮ ದಿಂದ ಶಾನವಾಸಪುರ ಗ್ರಾಮಕ್ಕೆ ತೆರಳುವ ದಾರಿಯ ಮಧ್ಯದಲ್ಲಿ ಕಾರ್ಮಿಕರು ಮನೆ ಕಟ್ಟಲು ಬುನಾದಿ ಕಲ್ಲುಗಳನ್ನು ತರುವಂತ ಸಂದರ್ಭದಲ್ಲಿ ಏಕಾಏಕಿ ಟ್ಯಾಕ್ಟರ್ ಲಿಫ್ಟ್ ಮೇಲೆತ್ತಿರುವ ಕಾರಣ ಟ್ಯಾಕ್ಟರ್ ಹಿಂದಗಡೆ ಕೂತಂತವರಿಗೆ ಕಲ್ಲುಗಳ ಮೇಲೆ ಬಿದ್ದು 6 ಜನರಲ್ಲಿ ಸುರೇಂದ್ರ ಅವರಿಗೆ ಎರಡು ಕಾಲು ಮುರಿದಿದ್ದು ಅಂಬರೀಶ್ ಅವರಿಗೆ ಬೆನ್ನು ಮೂಳೆ ಮುರಿದಿದ್ದು ಇನ್ನು ನಾಲ್ಕು ಜನಕ್ಕೆ ಶ್ರೀಕಾಂತ್ ,ಬಸವರಾಜ್ , ಮಣಿಕಂಠ ಮತ್ತು ಶೇಖರ್ ಅವರಿಗೆ ಗಾಯಗಳಾಗಿದ್ದ ಘಟನೆ ನಡೆದಿದೆ.

ವಿಷಯ ತಿಳಿಸಿದ ತಕ್ಷಣ ಎಂ.ಎಸ್.ಸಿದ್ದಪ್ಪ ಬಳ್ಳಾರಿಯ ಬಿಮ್ಸ್ ಆಸ್ಪತ್ರೆಗೆ ಭೇಟಿ ನೀಡಿ ವೈದ್ಯಾಧಿಕಾರಿಗಳ ಜೊತೆ ಮಾತನಾಡಿ ಹೆಚ್ಚಿನ ಚಿಕಿತ್ಸೆ ನೀಡಬೇಕೆಂದು ಮುಖ್ಯ ವೈದ್ಯಾಧಿಕಾರಿಗಳಲ್ಲಿ ಮನವಿ ಮಾಡಿ ಮಾನವೀಯತೆ ಮೆರೆದಿದ್ದಾರೆ.



# ದೇವದಾಸಿಯರ ಅಪೂರ್ಣ ಗಣತಿ ವಿರೋಧಿಸಿ ಧರಣಿ

**ಕಲಬುರಗಿ, ಮೇ. 1:** ದೇವದಾಸಿ ಮಹಿಳೆಯರ ಎರಡು ಮತ್ತು ಮೂರನೇ ತಲೆಮಾರಿನ ಗಣತಿಯು ಅಪೂರ್ಣಗೊಂಡಿದ್ದು, ಕೂಡಲೇ ಗಣತಿ ಕಾರ್ಯವನ್ನು ಪೂರ್ಣಗೊಳಿಸಬೇಕು ಎಂದು ಒತ್ತಾಯಿಸಿ ಕರ್ನಾಟಕ ರಾಜ್ಯ ದೇವದಾಸಿ ಮಹಿಳೆಯರ ವಿಮೋಚನಾ ಸಂಘದ ನೇತೃತ್ವದಲ್ಲಿ ನಗರದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿ ಮುಂದೆ ದೇವದಾಸಿಯರು ಧರಣಿ ಸತ್ಯಾಗ್ರಹ ಮಾಡಿದರು. ಪ್ರತಿಭಟನೆಕಾರರು ಸಿಡಿಪಿಓ ಅವರ ಮೂಲಕ ರಾಜ್ಯದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಖಾತೆ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಅವರಿಗೆ ಮನವಿ ಸಲ್ಲಿಸಿ, ರಾಜ್ಯ ಸರ್ಕಾರ ತಮ್ಮ ಇಲಾಖೆ ಮೂಲಕ ಇತ್ತೀಚೆಗೆ ಮಾಜಿ ದೇವದಾಸಿ ಮಹಿಳೆಯರು ಮತ್ತು ಅವರ ಮೂರು ತಲೆಮಾರಿನ ಕುಟುಂಬಗಳ ಸದಸ್ಯರ ಗಣತಿ ಕಾರ್ಯವನ್ನು ಕೈಗೊಂಡಿದೆ. ಅದು ಅಪೂರ್ಣವಾಗಿದೆ ಅದು ಸಮಗ್ರವಾಗಿಲ್ಲ. 2007–08ರ ಗಣತಿಯೇ ಅಸಮರ್ಪಕವಾಗಿತ್ತು ಎಂದು ಅಸಮಾಧಾನ ವ್ಯಕ್ತಪಡಿಸಿದರು.




ಆದಾಗ್ಯೂ ಅದು 46660 ಮಹಿಳೆಯರನ್ನು ಗುರುತಿಸಿತ್ತು. ಆಗಲೂ 20 ಸಾವಿರಕ್ಕೂ ಅಧಿಕ ಮಹಿಳೆಯರು, ಯಾರು 1982ರಲ್ಲಿ ಅಥವಾ ಆ ನಂತರ ದೇವದಾಸಿ ಮಹಿಳೆಯರಾಗಿದ್ದಾರೋ ಅವರನ್ನು ಆ ಗಣತಿ ಪರಿಗಣಿಸಿರಲಿಲ್ಲ. ಆದ್ದರಿಂದ ನಾವು ಆಗಲು ಮರುಗಣತಿಯನ್ನು ಮಾಡುವಂತೆ ಒತ್ತಾಯ ಮಾಡಿದ್ದೇವೆ. 2007–08 ರಿಂದ ನಮ್ಮ ಸಂಘ ಏನು ಒತ್ತಾಯಿಸುತ್ತಾ ಬಂದ ಫಲವಾಗಿ, ಈಗ ಪುನಃ ಮತ್ತೆ ಮರು ಸಮೀಕಣೆ ಹೆಸರಿನಲ್ಲಿ 2025ರಲ್ಲಿ ಸರ್ಕಾರ ಗಣತಿ ಮಾಡುವಂತ ಒಂದು ಪ್ರಯತ್ನವನ್ನು ಮಾಡಿದೆ ಎಂದು ಅವರು ಸ್ವಾಗತಿಸಿದರು.

ಈಗಾಗಲೇ ಗಣತಿಯಲ್ಲಿ ಇರುವ ಮಹಿಳೆಯರನ್ನು ಗಣತಿ ಮಾಡುವುದಕ್ಕಿಂತ ಮೊದಲು, ಯಾರು ಗಣತಿಯ ಹೊರಗೆ ಇದ್ದಾರೆ ಅವರುಗಳನ್ನು ಗಣತಿ ಮಾಡಬೇಕು. ಮಾತ್ರ ಅಲ್ಲ. ಗಣತಿಯಲ್ಲಿರುವವರು ಹಾಗೂ ಗಣತಿಯಲ್ಲಿ ಇಲ್ಲದೇ ಇರ್ತಕ್ಕಂತ ಅವರ ಮಕ್ಕಳು ಮೊಮ್ಮಕ್ಕಳು ಒಂದು ಗಣತಿಯನ್ನು ಮನೆ ಮನೆಗೆ ತೆರಳಿ ಮಾಡಬೇಕು ಎಂದು ಚಳುವಳಿ ಮಾಡುತ್ತಾ ಬಂದಿದ್ದೇವೆ. ಆದರೆ ರಾಜ್ಯ ಸರ್ಕಾರ ಈ ಒಂದು ಅಭಿಪ್ರಾಯವನ್ನು ಸರಿಯಗಿ ಪರಿಗಣಿಸಲಿಲ್ಲ. ಈಗ ಅವರು ಸಮೀಕ್ಷೆಯಲ್ಲಿ ಗುರುತು ಮಾಡಿರ್ತಕ್ಕಂತದ್ದು. ಇದು ಬಹಳ ದೊಡ್ಡ ದೋಷವಾಗಿದೆ. ಅವರ ಮಕ್ಕಳು ಮೊಮ್ಮಕ್ಕಳ ಕುಟುಂಬಗಳನ್ನು ಲೆಕ್ಕಾಚಾರ ಮಾಡಿರೋದು ಕೂಡಾ ಕೇವಲ 90 ಸಾವಿರ ಅಂತ ಅದು ಕೂಡ ಸರಿ ಇಲ್ಲ ಎಂದು ಅವರು ಅಸಮಾಧಾನ ವ್ಯಕ್ತಪಡಿಸಿದರು.

ಹಿಂದೆ 46 ಸಾವಿರ ಕುಟುಂಬಗಳೆಂದು ಗಣತಿ ಮಾಡಲಾಗಿದೆ.

2007–08ರ ಆ ಸಂದರ್ಭದಲ್ಲಿ 20,000 ಜನ ಹೊರಗಡೆ ಇದ್ದದನ್ನು ನಾವು ಹೇಳಿದ್ದೇವೆ. ಸರಿ–ಸುಮಾರು ಆ ಒಸಂದು 66000 ಕುಟುಂಬಗಳಿಗೆ ಅವರ ಮಕ್ಕಳು ಮೊಮ್ಮಕ್ಕಳನ್ನು ಸೇರಿಸಿದರೆ ಹತ್ರ ಹತ್ರ ಎರಡು ಲಕ್ಷ ಕುಟುಂಬಗಳಿಗಿಂತ ಹೆಚ್ಚಿರಬೇಕು. ಆದರೆ ಇದು ಇವತ್ತು ಅಂತಹ ಸಂಖ್ಯೆಯನ್ನು ತೋರುತ್ತಿಲ್ಲ. ಆದ್ದರಿಂದ, ಇದು ಸ್ಪಷ್ಟವಾಗಿ ಗಣತಿ ಅಸಮರ್ಪಕ ವಾಗಿರುವುದನ್ನು ತೋರುತ್ತದೆ. ಆದರೂಕೂಡ ನಾವು ಈ ಸಮೀಕ್ಷೆಯನ್ನು ತಿರಸ್ಕಾರ ಮಾಡುವುದಿಲ್ಲ! ಈ ಸಮೀಕ್ಷೆಯನ್ನು ಸ್ವಾಗತ ಮಾಡುತ್ತಿದ್ದೇವೆ. ಮತ್ತು ಊಳಿದಂತ ಮಹಿಳೆಯರ ಎರಡು ಮೂರು ತಲೆಮಾರಿನ ಕುಟುಂ ಬಗಳನ್ನು ಒಳಗೊಳ್ಳುವುದಕ್ಕೆ ಸಮೀಕ್ಷೆಮುಂದುವರೆಸಬೇಕು ಎಂದು ಒತ್ತಾಯಿಸಿದರು. ದೇವದಾಸಿ ಪದ್ಧತಿ ನಿವಾರಣೆಗಾಗಿ ಸರ್ಕಾರ ಕೈಗೊಂಡಂತ ಪುನರ್ವಸತಿ ಯೋಜನೆಯ ಒಳಗಡೆ ಇರುವ ಹುಳುಕನ್ನು ಈ ಸಮೀಕ್ಷೆ ಬಯಲು ಮಾಡಿದೆ. ಮತ್ತೆ ಸರ್ಕಾರಕ್ಕೆ ಈ ದೇವದಾಸಿ ಪದ್ಧತಿಯಿಂದ ದೇವದಾಸಿ ಮಹಿಳೆಯರು ಹೊರಗಡೆ ಬರಬೇಕು ಅವರ ಕುಟುಂಬದ ಸದಸ್ಯರು ಹೊರಗಡೆ ಬರಬೇಕೆಂಬ ಅಭಿಪ್ರಾಯವು ಗಂಭೀರವಾಗಿರಲಿಲ್ಲ ಎಂಬ ಅಂಶವನ್ನು ಕೂಡ ಇದು ಬಯಲುಗೊಳಿಸುತ್ತಿದೆ ಎಂದರು.

2025ರ ಒಳಗಡೆ ಸಮೀಕ್ಷೆಯಲ್ಲಿ ಬಂದವರಲ್ಲಿ ಕೇವಲ ಒಂದು ಸಾವಿರದಷ್ಟು ಜನರಿಗೆ ಮಾತ್ರ ಮನೆಗಳನ್ನು ಕೊಡಲಾಗಿದೆ. ಮತ್ತೆ ಅರ್ಧದಷ್ಟು ಜನರಿಗೆ ಮಾತ್ರ ಪಿಂಚಣಿ ಕೊಡಲಾಗಿದೆ.

ದೇವದಾಸಿ ಮಹಿಳೆಯರ ಬಹಳ ದೊಡ್ಡ ಸಂಖ್ಯೆಯಲ್ಲಿದ್ದ ವಯಸ್ಸಾದ ಹಿರಿಯ ಮಹಿಳೆಯರು, ಅವರು ಯಾವುದೇ ಸೌಲಭ್ಯಗಳು ಸವಲತ್ತುಗಳೂ ಪಡೆಯದೇನೆ

ಈ ದೇವದಾಸಿ ಪದ್ಧತಿಯಲ್ಲಿ ನಲುಗಿ ಅವರು ತೀರಿಕೊಂಡರು. ಈ ಮಹಿಳೆಯರ ಮಕ್ಕಳು ಮೊಮ್ಮಕ್ಕಳನ್ನು ಕೂಡ ಗಣತಿಯಲ್ಲಿ ಸೇರಿಸಿಕೊಳ್ಳು ವುದಕ್ಕೆ 108 ದಾಖಲಾತಿಗಳನ್ನು ಕೇಳುವ ಮೂಲಕ ಅವರು ಗಣತಿಗೆ ಬರಲಾರದಂತೆ ತಡೆದಿರುವುದು ವಿಷಾದಕರವಾಗಿದೆ ಎಂದರು.

# RYMECಯಲ್ಲಿ ಎಂಜಿನಿಯರಿಂಗ್ ವಿದ್ಯಾರ್ಥಿಗಳ ಮಾನಸಿಕ ಆರೋಗ್ಯಕ್ಕಾಗಿ ಎ–ಬಿ–ಸಿ ಚೌಕಟ್ಟು ಕಾರ್ಯಕ್ರಮ



**ಬಳ್ಳಾರಿ ಮೇ ,01.** ವೀ. ವಿ. ಸಂಘದ ರಾವ್ ಬಹದ್ದೂರ್ ವೈ ಮಹಾಬಲೇಶ್ವರಪ್ಪ ಎಂಜಿನಿಯರಿಂಗ್ ಕಾಲೇಜು, ಬಳ್ಳಾರಿ, ಮಾರ್ಗದರ್ಶನ ಮತ್ತು ಸಮಾಲೋಚನಾ ಕೋಶ (ಎಂ.ಸಿ.ಸಿ), & ಐ.ಇ.ಇ.ಇ– ಆರ್.ವೈ.ಎಂ.ಇ.ಸಿ ವಿದ್ಯಾರ್ಥಿ ಶಾಖೆ–ಎಸ್‌ಟಿಬಿ 99412 ಸಹಯೋಗ ದೊಂದಿಗೆ, ಏಪ್ರಿಲ್ 30, 2026 ರಂದು ಬೆಳಿಗ್ಗೆ 10:30 ಕ್ಕೆ "ಮಾನಸಿಕ ಆರೋಗ್ಯದ ಎಬಿಸಿ" ಕುರಿತು ಆಹ್ವಾನಿತ ಸಂವಾದವನ್ನು ಆಯೋಜಿಸಿದೆ. ಸಂಪನ್ಮೂಲ ವ್ಯಕ್ತಿ ಸೀತಾರಾಮ್ ಎಂ ಕಾಲಾಪುರ್, ಮನಶ್ಶಾಸ್ತ್ರಜ್ಞ, "ಮನಸ್ವಿನಿ", ಬಳ್ಳಾರಿ , ಪ್ರಾಂಶುಪಾಲರಾದ ಡಾ. ಎಚ್. ಮಹಾಬಲೇಶ್ವರ, ಉಪ ಪ್ರಾಂಶುಪಾಲರಾದ ಡಾ. ಸವಿತಾ ಸೋನೋಲಿ,ಎಂಸಿಸಿ ಸೆಲ್‌ನ ಸಂಘಟಕರು ಮತ್ತು ಸದಸ್ಯರು ಡಾ. ಮಾನಸ ಕೆ.ಸಿ., ಶೀಲಾ ಬಿ.ಪಿ., ಶ್ರೀಮತಿ ಸುನೀತಾ ಎಸ್,ಭಾಗವಹಿಸಿದ್ದರು ಶ್ರೀಮತಿ ವಾಣಿ ಎಚ್ ಅವರು ನಿರೂಪಣೆ ಮಾಡಿದ್ದಾರೆ.

ಸೀತಾರಾಮ್ ಎಂ ಕಾಲಾಪುರ್, ಮನಶ್ಶಾಸ್ತ್ರಜ್ಞ, "ಮನಸ್ವಿನಿ", ಬಳ್ಳಾರಿ ಎಂಜಿನಿಯರಿಂಗ್ ವಿದ್ಯಾರ್ಥಿಗಳ ಮಾನಸಿಕ ಆರೋಗ್ಯಕ್ಕಾಗಿ ಎ–ಬಿ–ಸಿ ಚೌಕಟ್ಟು ವಿಷಯದ ಕುರಿತು ಮಾತನಾಡುವಾಗ ಎಂಜಿನಿಯರಿಂಗ್ ವಿದ್ಯಾರ್ಥಿಗಳ ಮಾನಸಿಕ ಆರೋಗ್ಯಕ್ಕಾಗಿ ಎ–ಬಿ–ಸಿ ಚೌಕಟ್ಟು ತೀವ್ರ ಶೈಕ್ಷಣಿಕ ಒತ್ತಡ, ಹೆಚ್ಚಿನ ಕೆಲಸದ ಹೊರೆಗಳು ಮತ್ತು ಪ್ರತ್ಯೇಕತೆಯನ್ನು ನಿರ್ವಹಿಸಲು ಕಾರ್ಯಸಾಧ್ಯ ಹಂತಗಳ ಮೇಲೆ ಕೇಂದ್ರೀಕರಿಸುತ್ತದೆ ಕಾರ್ಯನಿರ್ವಹಿಸಿ (ದೈಹಿಕವಾಗಿ/ಮಾನಸಿಕವಾಗಿ ಸಕ್ರಿಯರಾಗಿರಿ),

(ಸಹ ವರ್ತಿಗಳು/ ಸಮುದಾಯ ದೊಂದಿಗೆ ಸಂಪರ್ಕ ಸಾಧಿಸಿ), ಮತ್ತು ಅ. ಬದ್ಧರಾಗಿರಿ (ಅರ್ಥಪೂರ್ಣ ಯೋಜನೆಗಳಲ್ಲಿ ತೊಡಗಿಸಿಕೊಳ್ಳಿ) – ಈ ವಿಧಾನವು ಆತಂಕ ವಿರುದ್ಧ ಸ್ಥಿತಿಸ್ಥಾಪಕತ್ವವನ್ನು ಉತ್ತೇಜಿಸುತ್ತದೆ, ಸ್ಪರ್ಧೆಯಿಂದ ಸಹಯೋಗದ ಬೆಂಬಲ ವ್ಯವಸ್ಥೆಗಳಿಗೆ ಬದಲಾವಣೆಯನ್ನು ಉತ್ತೇಜಿಸುತ್ತದೆ, ಎಂಜಿನಿಯರ್‌ಗಳ ಒತ್ತಡ ನಿರ್ವಹಣೆಗೆ ಪ್ರಮುಖ ಮಾರ್ಗಗಳು (ಕ್ಷೇತ್ರದಲ್ಲಿ ಪ್ರಚಲಿತದಲ್ಲಿರುವ ಆತಂಕ, ಭಸ್ಮವಾಗುವುದು ಮತ್ತು ಖಿನ್ನತೆಯನ್ನು ಕಡಿಮೆ ಮಾಡಲು ABCಗಳನ್ನು ಕಾರ್ಯಗತಗೊಳಿಸಿ), ಸಂಸ್ಕೃತಿ ಬದಲಾವಣೆ (ಸಹಾಯ ಪಡೆಯುವುದು ದೌರ್ಬಲ್ಯ ಎಂಬ ಕಳಂಕವನ್ನು ಸಕ್ರಿಯವಾಗಿ ಮುರಿಯಿರಿ; ಇದು ವೃತ್ತಿಪರ ಅಭಿವೃದ್ಧಿಯ ಪ್ರಮುಖ ಭಾಗವಾಗಿದೆ) ನಿದ್ರೆಗೆ ಆದ್ಯತೆ ನೀಡಿ ವಿಶ್ರಾಂತಿ ಎಂಜಿನಿಯರ್‌ನ ಮೆದುಳಿಗೆ ಅತ್ಯುತ್ತಮ "ರೀಬೂಟ್" ಆಗಿದೆ ಹೇಳಿದರು.

# ಪಾಕಿಸ್ತಾನದ ಮಧ್ಯಸ್ಥಿಕೆಯಲ್ಲಿ ಅಮೆರಿಕ ಜೊತೆ ಮಾತುಕತೆಗೆ ಇರಾನ್ ಹೊಸ ಪ್ರಸ್ತಾವನೆ: ಮಾತುಕತೆಗೆ ಸಿದ್ಧ, ಒತ್ತಡಕ್ಕೆ ಮಣಿಯುವುದಿಲ್ಲ



**ಟೆಹ್ರಾನ್, ಮೇ 1:** ಅಮೆರಿಕದೊಂದಿಗೆ ಮಾತುಕತೆಗಳನ್ನು ಪುನರುಜ್ಜೀವನಗೊಳಿಸಲು ಮತ್ತು ಯುದ್ಧವನ್ನು ಕೊನೆಗೊಳಿಸಲು ಪ್ರಯತ್ನಗಳು ಮುಂದುವರೆದಿರುವುದರಿಂದ ಇರಾನ್ ಪಾಕಿಸ್ತಾನಕ್ಕೆ ಮಾತುಕತೆಗೆ ಹೊಸ ಪ್ರಸ್ತಾವನೆಯನ್ನು ಅಂಗೀಕರಿಸಿದೆ. ಗುರುವಾರ ಸಂಜೆ ಪಾಕಿಸ್ತಾನದ ಮಧ್ಯವರ್ತಿಗಳಿಗೆ ದಾಖಲೆಯನ್ನು ಹಸ್ತಾಂತರಿಸಲಾಗಿದೆ ಎಂದು ಟೆಹ್ರಾನ್‌ನ ಅಧಿಕಾರಿಗಳು ತಿಳಿಸಿದ್ದಾರೆ, ಇಸ್ಲಾಮಾಬಾದ್ ಇರಾನ್ ಮತ್ತು ವಾಷಿಂಗ್ಟನ್ ನಡುವಿನ ಪ್ರಮುಖ ಚಾನಲ್ ಆಗಿ ಕಾರ್ಯನಿರ್ವಹಿಸುವುದನ್ನು ಮುಂದುವರೆಸಿದೆ ಎಂದು ಇರಾನ್ ರಾಜ್ಯ ಮಾಧ್ಯಮ ವರದಿ ಮಾಡಿದೆ. ಟೆಹ್ರಾನ್‌ನ ಗಮನವು ಸಂಘರ್ಷವನ್ನು ಕೊನೆಗೊಳಿಸುವ ಮತ್ತು "ಸುಸ್ಥಿರ ಶಾಂತಿ" ಎಂದು ಅವರು ವಿವರಿಸಿದ್ದನ್ನು ಭದ್ರಪಡಿಸಿಕೊಳ್ಳುವತ್ತ ದೃಢವಾಗಿ ಉಳಿದಿದೆ ಎಂದು ವಿದೇಶಾಂಗ ಸಚಿವಾಲಯದ ವಕ್ತಾರ ಇಸ್ಮಾಯಿಲ್ ಬಘೈ ಹೇಳಿದರು. ರಾಜ್ಯ ದೂರದರ್ಶನದಲ್ಲಿ ಮಾತನಾಡಿದ ಅವರು, ರಾಜತಾಂತ್ರಿಕತೆ ಇನ್ನೂ ಮೇಜಿನ ಮೇಲಿದೆ, ಆದರೆ ಟೆಹ್ರಾನ್ಗೆ ಸ್ವೀಕಾರಾರ್ಹವಾದ ನಿಯಮಗಳ ಮೇಲೆ ಮಾತ್ರ ಎಂದು ಪುನರುಚ್ಚರಿಸಿದರು. ಇತ್ತೀಚಿನ ಕ್ರಮವು ಏಪ್ರಿಲ್ 11 ರಂದು ಇಸ್ಲಾಮಾಬಾದ್‌ನಲ್ಲಿ ನಡೆದ ಹಿಂದಿನ ಮಾತುಕತೆಗಳನ್ನು ಅನುಸರಿಸುತ್ತದೆ, ಇವುಗಳನ್ನು ಪಾಕಿಸ್ತಾನವು ಮಧ್ಯಸ್ಥಿಕೆ ವಹಿಸಿತು. ಆದರೆ ಎರಡೂ ಕಡೆಯವರು ಒಪ್ಪಂದಕ್ಕೆ ಬಾರದ ಕಾರಣ ವಿಫಲವಾಯಿತು. ಅಂದಿನಿಂದ, ಎರಡೂ ಕಡೆಯವರು ಪರೋಕ್ಷವಾಗಿ ಸಂದೇಶಗಳನ್ನು ವಿನಿಮಯ ಮಾಡಿಕೊಳ್ಳುತ್ತಲೇ ಇದ್ದಾರೆ, ಪ್ರಮುಖ ವಿಷಯಗಳ ಬಗ್ಗೆ ಒಮ್ಮುಖವಾಗುವ ಯಾವುದೇ ಸೂಚನೆಯಿಲ್ಲ, ಏಕೆಂದರೆ ಅವರು ಶೀತಲ ಸಮರದ ರೀತಿಯ ಪರಿಸ್ಥಿತಿಯಲ್ಲಿ ತೊಡಗಿಸಿಕೊಂಡಿದ್ದಾರೆ. ಇರಾನ್ ಅಧಿಕಾರಿಗಳು ವಾಷಿಂಗ್ಟನ್ನ ಉದ್ದೇಶಗಳನ್ನು ಪದೇ ಪದೇ ಪ್ರಶ್ನಿಸಿದ್ದಾರೆ, ಕಳೆದ ಒಂದೂವರೆ ವರ್ಷಗಳಲ್ಲಿ ನಡೆದ ಹಿಂದಿನ ಮಾತುಕತೆಗಳೆಲ್ಲವೂ ಮಿಲಿಟರಿ ಕಾರ್ಯಾಚರಣೆಗಳೊಂದಿಗೆ ಇದ್ದವು ಎಂದು ಅವರು ಗಮನಿಸಿದ್ದಾರೆ. ಇರಾನ್ ಅನ್ನು ರಾಜಿ ಮಾಡಿಕೊಳ್ಳುವಂತೆ ಒತ್ತಾಯಿಸುತ್ತಾ, ಅಮೆರಿಕವು ಅತಿಯಾದ ಬೇಡಿಕೆಗಳನ್ನು ಮಾಡುತ್ತಿದೆ ಎಂದು ಟೆಹ್ರಾನ್ ಆರೋಪಿಸಿದೆ, ಈ ವಿಧಾನವು ಅಮೆರಿಕವನ್ನು ಮಾತುಕತೆಗಳಲ್ಲಿ ನಂಬಲು ಸಾಧ್ಯವಿಲ್ಲ ಎಂಬುದಕ್ಕೆ ಸಾಕಷ್ಟು ಪುರಾವೆಯಾಗಿದೆ ಎಂದು ಟೆಹ್ರಾನ್ ವಿವರಿಸಿದ್ದಾರೆ.

ಇರಾನ್‌ನ ಮುಖ್ಯ ನ್ಯಾಯಮೂರ್ತಿ ಘೋಲಮ್ಹೊಸೇನ್ ಮೊಹ್ಸೆನಿ ಎಜೆಯ್, ಇಸ್ಲಾಮಿಕ್ ಗಣರಾಜ್ಯವು ಸಂವಾದಕ್ಕೆ ಮುಕ್ತವಾಗಿದೆ ಆದರೆ ಒತ್ತಡವನ್ನು ಸ್ವೀಕರಿಸುವುದಿಲ್ಲ ಎಂದು ಇದೇ ರೀತಿಯ ಸ್ವರವನ್ನು ಒತ್ತಿ ಹೇಳಿದರು. "ಇಸ್ಲಾಮಿಕ್ ಗಣರಾಜ್ಯವು ಎಂದಿಗೂ ಮಾತುಕತೆಗಳಿಂದ ದೂರ ಸರಿದಿಲ್ಲ" ಎಂದು ಅವರು ನ್ಯಾಯಾಂಗದ ಮಿಜಾನ್ ಆನ್ಲೈನ್ ಔಟ್ಲೆಟ್ ನಡೆಸಿದ ಹೇಳಿಕೆಗಳಲ್ಲಿ ಹೇಳಿದರು, ಟೆಹ್ರಾನ್ "ಖಂಡಿತವಾಗಿಯೂ ಹೇರಿಕೆಯನ್ನು ಸ್ವೀಕರಿಸುವುದಿಲ್ಲ" ಎಂದು ಹೇಳಿದರು. ಇರಾನ್ ಯುದ್ಧ ಮುಂದುವರಿಯುವುದನ್ನು ಬಯಸುವುದಿಲ್ಲ ಎಂದು ಅವರು ಒತ್ತಾಯಿಸಿದರು, ಆದರೆ ಮಿತಿಗಳಿರುತ್ತವೆ ಎಂದು ಸ್ಪಷ್ಟಪಡಿಸಿದರು. "ನಾವು ಯಾವುದೇ ರೀತಿಯಲ್ಲಿ ಯುದ್ಧವನ್ನು ಸ್ವಾಗತಿಸುವುದಿಲ್ಲ... ಆದರೆ ನಮ್ಮ ತತ್ವಗಳು ಮತ್ತು ಮೌಲ್ಯಗಳನ್ನು ತ್ಯಜಿಸಲು ನಾವು ಸಂಪೂರ್ಣವಾಗಿ ಸಿದ್ಧರಿಲ್ಲ" ಎಂದು ಅವರು ಹೇಳಿದರು. ಸಂಘರ್ಷದ ಸಮಯದಲ್ಲಿ ವಾಷಿಂಗ್ಟನ್ "ಏನನ್ನೂ ಸಾಧಿಸಿಲ್ಲ" ಎಂದು ಎಜೆಯ್ ವಾದಿಸಿದರು, ಇರಾನ್ ಯಾವುದೇ ಭವಿಷ್ಯದ ಮಾತುಕತೆಗಳಲ್ಲಿ "ಹಿಂದೆ ಸರಿಯುವುದಿಲ್ಲ" ಎಂದು ಎಚ್ಚರಿಸಿದರು. ಸದ್ಯಕ್ಕೆ, ಈ ಪ್ರಸ್ತಾವನೆಯು ಪಾಕಿಸ್ತಾನಿ ಮಧ್ಯವರ್ತಿಗಳ ಬಳಿ ಇದ್ದು, ಇತ್ತೀಚಿನ ಪ್ರಸ್ತಾವನೆಯೊಂದಿಗೆ ಅದು ತೊಡಗಿಸಿಕೊಳ್ಳುತ್ತದೆಯೇ ಎಂಬುದರ ಕುರಿತು ವಾಷಿಂಗ್ಟನ್‌ನಿಂದ ಇನ್ನೂ ಯಾವುದೇ ದೃಢೀಕರಣವಿಲ್ಲ.




# ಇರಾನ್ ಯುದ್ಧದ ನೈಜ ವೆಚ್ಚ 50 ಶತಕೋಟಿ ಡಾಲರ್ ಅಮೆರಿಕ ಅಧಿಕಾರಿಗಳ ಸಮಗ್ರ ವರದಿ ಅಂದಾಜು

**ವಾಷಿಂಗ್ಟನ್, ಮೇ 1:** ಇರಾನ್ ಯುದ್ಧದ ನಿಜವಾದ ವೆಚ್ಚವು ಈಗ $50 ಬಿಲಿಯನ್‌ಗೆ ಹತ್ತಿರದಲ್ಲಿದೆ ಎಂದು ಅಂದಾಜಿಸಲಾಗಿದೆ, ಆಂತರಿಕ ಮೌಲ್ಯಮಾಪನಗಳೊಂದಿಗೆ ಪರಿಚಿತವಾಗಿರುವ ಅಮೆರಿಕದ ಅಧಿಕಾರಿಗಳ ಪ್ರಕಾರ, ಈ ವಾರ ಪೆಂಟಗನ್ ಉಲ್ಲೇಖಿಸಿದ ಮೂಲ $25 ಬಿಲಿಯನ್ ಅಂಕಿ ಅಂಶಕ್ಕಿಂತ ದ್ವಿಗುಣವಾಗಿದೆ. ಕ್ಯಾಪಿಟಲ್ ಹಿಲ್‌ನಲ್ಲಿನ ಸಾಕ್ಷ್ಯದಲ್ಲಿ, ಪೆಂಟಗನ್ ಅಧಿಕಾರಿಗಳು ಎಪಿಕ್ ಫ್ಯೂರಿ ಎಂಬ ಸಂಕೇತನಾಮ ಹೊಂದಿರುವ ಅಮೆರಿಕ ಮಿಲಿಟರಿ ಕಾರ್ಯಾಚರಣೆಯ ವೆಚ್ಚವನ್ನು 500 ಕೋಟಿ ಡಾಲರ್ ಎಂದು ಅಂದಾಜಿಸಿದ್ದಾರೆ.

ಆದಾಗ್ಯೂ, ಯುದ್ಧದ ಸಮಯದಲ್ಲಿ ಹೊಡೆದ ಮಿಲಿಟರಿ ಸ್ಥಾಪನೆಗಳ ಉಪಕರಣಗಳು, ದುರಸ್ತಿ ಮತ್ತು ನಿರ್ವಹಣಾ ವೆಚ್ಚಕ್ಕೆ ಆ ಅಂಕಿ ಅಂಶವು ಸಂಪೂರ್ಣವಾಗಿ ಕಾರಣವಾಗಲಿಲ್ಲ ಎಂದು ಸಿಬಿಎಸ್ ನ್ಯೂಸ್ ವರದಿ ಮಾಡಿದೆ. ಅಂತರದ ಹೆಚ್ಚಿನ ಭಾಗವು ಈಗಾಗಲೇ ಬಳಸಿದ ಯುದ್ಧಸಾಮಗ್ರಿಗಳಿಂದ ಮತ್ತು ಅವುಗಳನ್ನು ಬದಲಾಯಿಸಲು ಹೆಚ್ಚುತ್ತಿರುವ ಬಿಲ್ನಿಂದ ಬಂದಿದೆ. ಯುಎಸ್ 24 MQ–9 ರೀಪರ್ ಡ್ರೋನ್ಗಳನ್ನು ಸಹ ಕಳೆದುಕೊಂಡಿದೆ – ಪ್ರತಿಯೊಂದೂ $30 ಮಿಲಿಯನ್ಗಿಂತ ಹೆಚ್ಚು ವೆಚ್ಚವಾಗಿದೆ – ನಷ್ಟಗಳು ಎಷ್ಟು ಮಟ್ಟಿಗೆ ಸಂಗ್ರಹವಾಗಿವೆ ಎಂಬುದನ್ನು ಇದು ಒತ್ತಿಹೇಳುತ್ತದೆ.


ರಕ್ಷಣಾ ಕಾರ್ಯದರ್ಶಿ ಪೀಟ್ ಹೆಗ್ಸೆತ್ ಮತ್ತು ಜಂಟಿ ಮುಖ್ಯಸ್ಥರಾದ ಜನರಲ್ ಡಾನ್ ಕೇನ್ ಈ ವಾರ ಪೆಂಟಗನ್‌ನ $1.5 ಟ್ರಿಲಿಯನ್ ಬಜೆಟ್ ವಿನಂತಿಯನ್ನು ಸಮರ್ಥಿಸಿಕೊಳ್ಳಲು ಶಾಸಕರ ಮುಂದೆ ಹಾಜರಾದಾಗ, ಆಂತರಿಕ ಮೌಲ್ಯಮಾಪನಗಳೊಂದಿಗೆ ಪರಿಚಿತವಾಗಿರುವ ಯುಎಸ್ ಅಧಿಕಾರಿಗಳು ಯುದ್ಧದ ಬೆಲೆ ಇಲ್ಲಿಯವರೆಗೆ 50 ಶತಕೋಟಿ ಹತ್ತಿರದಲ್ಲಿದೆ ಎಂದು ಸೂಚಿಸಿದರು. ಸೆನೆಟರ್‌ಗಳು ಒತ್ತಡ ಹೇರಿದಾಗ ಪೆಂಟಗನ್‌ನ ಕಾರ್ಯಕಾರಿ ಕಂಟ್ರೋಲರ್ ಜೂಲ್ಸ್ ಹರ್ಸ್ಟ್ ಅನಿಶ್ಚಿತತೆಯನ್ನು ಒಪ್ಪಿಕೊಂಡರು. ಮ್ಯಾನೇಜ್ಮೆಂಟ್ ಮತ್ತು ಬಜೆಟ್ ಕಚೇರಿಯಲ್ಲಿ ಕೆಲಸ ಮಾಡಿದ ಸೆಂಟರ್ ಫಾರ್ ಸ್ಟ್ರಾಟೆಜಿಕ್ ಮತ್ತು ಇಂಟರ್‌ನ್ಯಾಷನಲ್ ಸ್ಟಡೀಸ್‌ನ ರಕ್ಷಣಾ ಮತ್ತು ಭದ್ರತಾ ವಿಭಾಗದ ಹಿರಿಯ ಸಲಹೆಗಾರ ಮಾರ್ಕ್ ಕ್ಯಾನ್ಸಿಯನ್, ಈ ರೀತಿಯ ಯುದ್ಧದಲ್ಲಿ ಯುದ್ಧಸಾಮಗ್ರಿಗಳು ಅತಿದೊಡ್ಡ ಬೆಲೆಯಾಗಿದ್ದರೂ, ಇಂಧನ ವೆಚ್ಚ, ಪರ್ಯಾಯ ಸಾರಿಗೆ, ಗುಪ್ತಚರ ಮತ್ತು ಸೈಬರ್ ಕಾರ್ಯಾಚರಣೆಗಳು ಮತ್ತು ನೌಕಾ ದಿಗ್ಬಂಧನದ ನಿರ್ವಹಣೆ ಸೇರಿದಂತೆ ಇತರ ಹಲವು ಕಾಣದ ವೆಚ್ಚಗಳಿವೆ ಎಂದು ಹೇಳಿದರು.

ಯುದ್ಧ ಪ್ರಾರಂಭವಾಗುವ ಮೊದಲು ಈಗಾಗಲೇ ಒತ್ತಡದಲ್ಲಿದ್ದ ತನ್ನ ಯುದ್ಧಸಾಮಗ್ರಿಗಳ ದಾಸ್ತಾನನ್ನು ಅದರ ಮೂಲ ಮಟ್ಟಕ್ಕೆ ಪುನರ್ನಿರ್ಮಿಸಲು ವಾಷಿಂಗ್ಟನ್‌ಗೆ"ಹಲವಾರು ವರ್ಷಗಳು" ಬೇಕಾಗಬಹುದು ಎಂದು ಕ್ಯಾನ್ಸಿಯನ್ ಹೇಳಿದರು. ಆರ್ಥಿಕ ಪರಿಣಾಮವು ಮನೆಗಳನ್ನು ಸಹ ತಲುಪುತ್ತಿದೆ. ಕಾಂಗ್ರೆಸ್ಸಿನ ವಿಚಾರಣೆಯ ಸಮಯದಲ್ಲಿ, ಪ್ರತಿನಿಧಿ ರೋಖನ್ನಾ ಯುದ್ಧವು ಅಮೆರಿಕನ್ನರಿಗೆ ಹೆಚ್ಚಿನ ಬೆಲೆಗಳ ಮೂಲಕ ಎಷ್ಟು ವೆಚ್ಚವಾಗುತ್ತದೆ ಎಂದು ಕೇಳಿದರು. "ಇರಾನಿನ ಪರಮಾಣು ಬಾಂಬ್‌ನ ಬೆಲೆ ಎಷ್ಟು ಎಂದು ನಾನು ನಿಮ್ಮನ್ನು ಕೇಳುತ್ತೇನೆ" ಎಂದು ಹೆಗ್ಸೆತ್ ಹಿಂದಕ್ಕೆ ತಳ್ಳಿ, "ಅವರು ಗೊಚಾ ಪ್ರಶ್ನೆಗಳನ್ನು ಆಡುತ್ತಿದ್ದಾರೆ" ಎಂದು ಆರೋಪಿಸಿದರು. ಅಮೆರಿಕನ್ ಎಂಟರ್‌ಪ್ರೈಸ್ ಇನ್‌ಸ್ಟಿಟ್ಯೂಟ್‌ನ ಅಂದಾಜಿನ ಪ್ರಕಾರ, ಇಂಧನ ಮತ್ತು ರಸಗೊಬ್ಬರ ವೆಚ್ಚಗಳು ಹೆಚ್ಚಾಗುವುದರಿಂದ ಸರಾಸರಿ ಯುಎಸ್ ಕುಟುಂಬಕ್ಕೆ ತಿಂಗಳಿಗೆ ಸುಮಾರು $150 ಸೇರ್ಪಡೆಯಾಗಬಹುದು.

ಡೆಲವೇರ್‌ನ ಡೆಮಾಕ್ರಟಿಕ್ ಸೆನೆಟರ್ ಕ್ರಿಸ್ ಕೂನ್ಸ್ ಅವರು ಪ್ರಸ್ತುತಪಡಿಸಿದ ಅಂಕಿ ಅಂಶದ ಬಗ್ಗೆ ಅನುಮಾನ ವ್ಯಕ್ತಪಡಿಸಿ ಅದು ಕಡಿಮೆ ಎಂದು ನನಗೆ ಸ್ಪಷ್ಟವಾಗಿ ಖಚಿತವಾಗಿದೆ" ಎಂದು ಹೇಳಿದರು,

ಆ ಅಂಕಿ ಅಂಶವು ಎರಡು ತಿಂಗಳ ಕಾಲ ರಂಗಭೂಮಿಯಲ್ಲಿ ಪಡೆಗಳನ್ನು ನಿಯೋಜಿಸುವ ಮತ್ತು ಹಿಡಿದಿಟ್ಟುಕೊಳ್ಳುವ ವೆಚ್ಚ ಮತ್ತು ಇತರ ವೆಚ್ಚಗಳನ್ನು ಒಳಗೊಂಡಿಲ್ಲ ಎಂದು ಸೂಚಿಸುತ್ತದೆ.

# ಇರಾನ್ ಮೇಲೆ ಅಮೆರಿಕದ ದಾಳಿ ಬಹಳ ಮುಖ್ಯ: ಸೆನೆಟರ್ ಬ್ಲೂಮೆಂಥಾಲ್



**ವಾಷಿಂಗ್ಟನ್, ಮೇ 1:** ಇತ್ತೀಚಿನ ಮಾಹಿತಿಗಳ ಆಧಾರದ ಮೇಲೆ ಇರಾನ್ ಮೇಲೆ ಅಮೆರಿಕದ ಸಂಭಾವ್ಯ ಮಿಲಿಟರಿ ದಾಳಿಯನ್ನು ಗಂಭೀರವಾಗಿ ಪರಿಗಣಿಸಲಾಗುತ್ತಿದೆ ಎಂದು ಸೆನೆಟರ್ ರಿಚರ್ಡ್ ಬ್ಲೂಮೆಂಥಾಲ್ ಹೇಳಿದ್ದಾರೆ. ಕೆಲವು ಮಾಹಿತಿಯನ್ನು ವರ್ಗೀಕರಿಸಲಾಗಿರುವುದರಿಂದ ನಿರ್ದಿಷ್ಟ ವಿವರಗಳನ್ನು ಬಹಿರಂಗಪಡಿಸಲು ಬ್ಲೂಮೆಂಥಾಲ್ ನಿರಾಕರಿಸಿದರು, ಆದರೆ ದಾಳಿಯ ಸಾಧ್ಯತೆ "ಬಹಳ ಮುಖ್ಯ" ಎಂದು ಬ್ಲೂಮೆಂಥಾಲ್ ಗುರುವಾರ ಹೇಳಿದ್ದಾರೆ. ಅವರು ಪರಿಸ್ಥಿತಿಯನ್ನು "ತೀವ್ರವಾಗಿ ತೊಂದರೆದಾಯಕ" ಎಂದು ಕರೆದರು, ಯಾವುದೇ ಮಿಲಿಟರಿ ಕ್ರಮವು ಅಮೇರಿಕನ್ ಪಡೆಗಳನ್ನು ಅಪಾಯಕ್ಕೆ ಸಿಲುಕಿಸಬಹುದು ಮತ್ತು ಭಾರಿ ಸಾವು–ನೋವುಗಳಿಗೆ ಕಾರಣವಾಗಬಹುದು ಎಂದು ಎಚ್ಚರಿಸಿದರು. ಅದೇ ಸಮಯದಲ್ಲಿ, ದಾಳಿಯ ಕಲ್ಪನೆಯು ಹೊಸದಲ್ಲ ಎಂದು ಅವರು ಹೇಳಿದರು, ಮಿಲಿಟರಿ ನಾಯಕರು ಸ್ವಲ್ಪ ಸಮಯದಿಂದ ಅಂತಹ ಆಯ್ಕೆಗಳನ್ನು ಚರ್ಚಿಸುತ್ತಿದ್ದಾರೆ ಎಂದು ಗಮನಿಸಿದರು. ಇರಾನ್, ಯುಎಸ್ ಮತ್ತು ಇಸ್ರೇಲ್ ಎಚ್ಚರಿಕೆಗಳನ್ನು ನೀಡುವುದರೊಂದಿಗೆ ಮತ್ತು ಯುದ್ಧವು ಸಾಧ್ಯ ಎಂದು ಸೂಚಿಸುವುದರೊಂದಿಗೆ ಈ ಪ್ರದೇಶದಾದ್ಯಂತ ಉದ್ವಿಗ್ನತೆಗಳು ಹೆಚ್ಚಾಗಿವೆ. ಇರಾನ್ ಬಂದರುಗಳ ಮೇಲಿನ ಅಮೆರಿಕದ ನೌಕಾ ಮುತ್ತಿಗೆಯನ್ನು "ಅಸಹನೀಯ" "ಮಿಲಿಟರಿ ಕಾರ್ಯಾಚರಣೆಗಳ ವಿಸ್ತರಣೆ" ಎಂದು ಇರಾನ್ ಅಧ್ಯಕ್ಷ ಪೆಜೆಶ್ಕಿಯನ್ ಬಣ್ಣಿಸಿದ್ದಾರೆ, ಆದರೆ ವಾಷಿಂಗ್ಟನ್ ಯುದ್ಧವನ್ನು ಪುನರಾರಂಭಿಸಬೇಕಾಗಬಹುದು ಎಂದು ಟ್ರಂಪ್ ಹೇಳಿದರು, ನಡೆಯುತ್ತಿರುವ ಮಾತುಕತೆಗಳ ವಿವರಗಳನ್ನು ಕೆಲವೇ ಜನರಿಗೆ ಮಾತ್ರ ತಿಳಿದಿದೆ ಎಂದು ಹೇಳಿದರು. ಆದರೆ ಟ್ರಂಪ್ ಮತ್ತು ಸಲಹೆಗಾರರ ಒಂದು ಸಣ್ಣ ಗುಂಪು ಮಾತ್ರ ಇರಾನ್ ಜೊತೆಗಿನ ಮಾತುಕತೆಗಳ ನಿಖರವಾದ ಸ್ಥಿತಿಯನ್ನು ತಿಳಿದಿದ್ದಾರೆ ಎಂದು ಹೇಳಿದ್ದಾರೆ, ಸಾರ್ವಜನಿಕವಾಗಿ ಸ್ಥಗಿತಗೊಂಡಂತೆ ಕಂಡುಬಂದರೂ ಸಹ ಮಾತುಕತೆಗಳು ತೆರೆಮರೆಯಲ್ಲಿ ಮುಂದುವರಿಯಬಹುದು ಎಂದು ಸೂಚಿಸಿದ್ದಾರೆ. ಆದರೂ, ಇರಾನ್ನ ಪರಮಾಣು ಕಾರ್ಯಕ್ರಮವು ಭಿನ್ನಾಭಿಪ್ರಾಯದ ಕೇಂದ್ರ ಬಿಂದುವಾಗಿ ಉಳಿದಿದೆ.

# ಕದನ ವಿರಾಮ ಇದ್ದರೂ, ದಕ್ಷಿಣ ಲೆಬನಾನ್ ಮೇಲೆ ಇಸ್ರೇಲ್ ವೈಮಾನಿಕ ದಾಳಿ: ನಾಲ್ವರ ಸಾವು!



**ಟೈರ್, ಮೇ1:** ಇಸ್ರೇಲ್ ಶುಕ್ರವಾರ ದಕ್ಷಿಣ ಲೆಬನಾನ್ ಮೇಲೆ ಹಲವು ಬಾರಿ ವೈಮಾನಿಕ ದಾಳಿಗಳನ್ನು ನಡೆಸಿದ್ದು, ನಾಲ್ವರನ್ನು ಹತ್ಯೆ ಮಾಡಿದೆ. ಆದರೆ ಹಿಜ್ಬೊಲ್ಲಾ ಬಂಡುಕೋರರು ನಡೆಸಿದ ಡ್ರೋನ್ ಹಾಗೂ ರಾಕೆಟ್ ದಾಳಿಯಲ್ಲಿ ಉತ್ತರ ಇಸ್ರೇಲ್‌ನಲ್ಲಿ ಇಬ್ಬರು ಸೈನಿಕರು ಗಾಯಗೊಂಡಿರುವುದಾಗಿ ವರದಿಯಾಗಿದೆ.

ಏಪ್ರಿಲ್ 17 ರಿಂದ ಜಾರಿಯಲ್ಲಿರುವ ಕದನ ವಿರಾಮದ ಹೊರತಾಗಿಯೂ ಇಸ್ರೇಲ್ ಮಿಲಿಟರಿ ಮತ್ತು ಹಿಜ್ಬುಲ್ಲಾ ತಮ್ಮ ದಾಳಿಯನ್ನು ಮುಂದುವರೆಸಿವೆ. ದಕ್ಷಿಣ ಲೆಬನಾನ್‌ನ ಮೂರು ಹಳ್ಳಿಗಳ ಮೇಲಿನ ದಾಳಿಯಲ್ಲಿ ನಾಲ್ವರು ಸಾವನ್ನಪ್ಪಿದ್ದಾರೆ ಎಂದು ಇಸ್ರೇಲ್ ನ ರಾಷ್ಟ್ರೀಯ ಸುದ್ದಿ ಸಂಸ್ಥೆ ವರದಿ ಮಾಡಿದೆ.

ಹಿಜ್ಬುಲಾ ಉಗ್ರರು ತಮ್ಮ ಸಮೀಪದಲ್ಲಿರುವ ನಾಗರಿಕರಿಗೆ ತೊಂದರೆ ನೀಡುವ ಸಾಧ್ಯತೆಯಿದ್ದು, ಬೇರೆಡೆಗೆ ಸ್ಥಳಾಂತರವಾಗುವಂತೆ ನಬಾತಿಹ್ ನಗರದ ಬಳಿಯ ಹಬ್ಬೌಶ್ ಗ್ರಾಮದ ನಿವಾಸಿಗಳಿಗೆ ಇಸ್ರೇಲ್ ಮಿಲಿಟರಿ ಇಂದು ಮಧ್ಯಾಹ್ನ ಸೂಚನೆ ನೀಡಿತ್ತು.

ನಬಾತಿಹ್ ನಬತಿಯೆಹ್ ಬಳಿಯ ಕ್ಫರ್ ರುಮ್ಮನ್ ಗ್ರಾಮದಲ್ಲಿ ಅವಶೇಷಗಳಡಿಯಿಂದ ಒಬ್ಬ ವ್ಯಕ್ತಿ ಮತ್ತು ಅವನ ಮೂವರು ಪುತ್ರರು ಸೇರಿದಂತೆ ಐದು ಜನರ ಶವಗಳನ್ನು ಹೊರತೆಗೆದ ನಂತರ ಈ ದಾಳಿ ನಡೆದಿದೆ.

ಗುರುವಾರ ತಡರಾತ್ರಿ ಕ್ಫರ್ ರುಮ್ಮನ್ ಮೇಲೆ ನಡೆದ ವೈಮಾನಿಕ ದಾಳಿಯಲ್ಲಿ ಐವರು ಸಾವನ್ನಪ್ಪಿದ್ದಾರೆ ಎಂದು ರಾಷ್ಟ್ರೀಯ ಸುದ್ದಿ ಸಂಸ್ಥೆ ವರದಿ ಮಾಡಿದೆ. ಈ ದಾಳಿಯಲ್ಲಿ ಒಬ್ಬ ಲೆಬನಾನಿನ ಸೈನಿಕನೂ ಸಾವನ್ನಪ್ಪಿರುವುದಾಗಿ ಹೇಳಿದೆ.

ದಾಳಿಯಲ್ಲಿ ಅಲಿ ಜಾಬರ್ ಎಂಬ ಸೈನಿಕ ಸಾವನ್ನಪ್ಪಿದ್ದಾನೆ ಎಂದು ಲೆಬನಾನಿನ ಸೇನೆ ದೃಢಪಡಿಸಿದೆ. ಶುಕ್ರವಾರ ಮಧ್ಯಾಹ್ನದ ವೇಳೆಗೆ, ಇಸ್ರೇಲಿ ಮಿಲಿಟರಿ ನೆಲೆಗಳ ಮೇಲೆ ಡ್ರೋನ್‌ಗಳು ಮತ್ತು ರಾಕೆಟ್‌ಗಳನ್ನು ಹಾರಿಸಿರುವುದಾಗಿ ಹಿಜ್ಬೊಲ್ಲಾ ಬಂಡುಕೋರರು ಹೇಳಿಕೆಯಲ್ಲಿ ತಿಳಿಸಿದ್ದಾರೆ.

# ಐಪಿಎಲ್: ಆರ್‌ಆರ್ ವಿರುದ್ಧ ದೆಹಲಿಗೆ ಗೆಲುವು



ಐಪಿಎಲ್ 43 ನೇ ಪಂದ್ಯದಲ್ಲಿ ರಾಜಸ್ಥಾನ್ ರಾಯಲ್ಸ್ ಮತ್ತು ಡೆಲ್ಲಿ ಕ್ಯಾಪಿಟಲ್ ಪರಸ್ಪರ ಮುಖಾಮುಖಿಯಾಗಿದ್ದವು.

ಇದು ರಾಜಸ್ಥಾನಕ್ಕೆ ಹತ್ತನೇ ಪಂದ್ಯ ಮತ್ತು ದೆಹಲಿಗೆ ಒಂಬತ್ತನೇ ಪಂದ್ಯವಾಗಿತ್ತು. ಈ ಪಂದ್ಯದಲ್ಲಿ ರಾಜಸ್ಥಾನ ತಂಡವನ್ನು ಮಣಿಸಿದ ಡೆಲ್ಲಿ ಕ್ಯಾಪಿಟಲ್ಸ್ ಈ ಆವೃತ್ತಿಯಲ್ಲಿ 4ನೇ ಗೆಲುವು ದಾಖಲಿಸಿ ಪಾಯಿಂಟ್ ಪಟ್ಟಿಯಲ್ಲಿ ಸಿಎಸ್‌ಕೆ ತಂಡವನ್ನು ಹಿಂದಿಕ್ಕಿ 6ನೇ ಸ್ಥಾನಕ್ಕೇರಿದೆ. ಇತ್ತ 4ನೇ ಸೋಲಿಗೆ ಕೊರಳೊಡ್ಡಿದ ರಾಜಸ್ಥಾನ್ ಪಾಯಿಂಟ್ ಪಟ್ಟಿಯಲ್ಲಿ 4ನೇ ಸ್ಥಾನದಲ್ಲೇ ಉಳಿದುಕೊಂಡಿದೆ. ಈ ಪಂದ್ಯದಲ್ಲಿ ಟಾಸ್ ಗೆದ್ದ ರಾಜಸ್ಥಾನ್ ಮೊದಲು ಬ್ಯಾಟಿಂಗ್ ಮಾಡಿ ದಾಖಲೆಯ 225 ರನ್ ಕಲೆಹಾಕಿತು. ಈ ಗುರಿ ಬೆನ್ನಟ್ಟಿದ ಡೆಲ್ಲಿ ಕ್ಯಾಪಿಟಲ್ಸ್ 20ನೇ ಓವರ್‌ನಲ್ಲಿ 3 ವಿಕೆಟ್‌ಗಳನ್ನು ಕಳೆದುಕೊಂಡು ಗೆಲುವಿನ ನಗೆ ಬೀರಿತು.

**ಕೈಕೊಟ್ಟ ಜೈಸ್ವಾಲ್, ವೈಭವ್**

ಈ ಪಂದ್ಯದಲ್ಲಿ ಮೊದಲು ಬ್ಯಾಟಿಂಗ್ ಮಾಡಿದ ರಾಜಸ್ಥಾನ್ ರಾಯಲ್ಸ್?ಗೆ ಉತ್ತಮ ಆರಂಭ ಸಿಗಲಿಲ್ಲ. ಮಿಚೆಲ್ ಸ್ಟಾರ್ಕ್ ಬೌಲ್ ಮಾಡಿದ ಮೊದಲ ಓವರ್‌ನ ಮೊದಲ ಎಸೆತದಲ್ಲಿ ಸಿಕ್ಸರ್ ಬಾರಿಸಿದ ಯಶಸ್ವಿ ಜೈಸ್ವಾಲ್, ಅದೇ ಓವರ್‌ನ ಮೂರನೇ ಎಸೆತದಲ್ಲಿ ಔಟಾದರು. ವೈಭವ್ ಸೂರ್ಯವಂಶಿ (4) ಕೂಡ ಎರಡನೇ ಓವರ್‌ನಲ್ಲಿ ಔಟಾದರು. ನಂತರ ನಾಯಕ ರಿಯಾನ್ ಪರಾಗ್, ಧ್ರುವ್ ಜುರೆಲ್ (42) ಅವರೊಂದಿಗೆ 102 ರನ್‌ಗಳ ಜೊತೆಯಾಟ ಕಟ್ಟುವುದರ ಜೊತೆಗೆ ಈ ಆವೃತ್ತಿಯ ಮೊದಲ ಅರ್ಧಶತಕವನ್ನು ಬಾರಿಸಿದರು.

**90 ರನ್ ಬಾರಿಸಿದ ಪರಾಗ್**

ಆದಾಗ್ಯೂ ಶತಕದಂಚಿನಲ್ಲಿ ಎಡವಿದ ರಿಯಾನ್ ಪರಾಗ್ 90 ರನ್ ಗಳಿಸಿ ಔಟಾದರು. ಕೊನೆಯಲ್ಲಿ ಅಬ್ಬರಿಸಿದ ಡೊನೊವನ್ ಫೆರೇರಾ ಕೇವಲ 14 ಎಸೆತಗಳಲ್ಲಿ ಅಜೇಯ 47 ರನ್ ಗಳಿಸಿ ತಂಡವನ್ನು 225 ರನ್‌ಗಳಿಗೆ ಕೊಂಡೊಯ್ದರು. ದೆಹಲಿ ಪರ ಬೌಲಿಂಗ್‌ನಲ್ಲಿ ಮಿಂಚಿದ ಸ್ಟಾರ್ಕ್ 40 ರನ್‌ಗಳಿಗೆ ಮೂರು ವಿಕೆಟ್ ಕಬಳಿಸಿದರು.

**ಡೆಲ್ಲಿಗೆ ಭರ್ಜರಿ ಆರಂಭ**

ಈ ಗುರಿ ಬೆನ್ನು ಹತ್ತಿದ ದೆಹಲಿಗೆ ಈ ಆವೃತ್ತಿಯಲ್ಲಿ ಮೊದಲ ಬಾರಿಗೆ ಅದ್ಭುತ ಆರಂಭಿಕ ಜೊತೆಯಾಟ ಸಿಕ್ಕಿತು. ಕಳಪೆ ಫಾರ್ಮ್‌ನಿಂದ ಬಳಲುತ್ತಿದ್ದ ಪಾತುಮ್ ನಿಸ್ಸಂಕಾ (62) ಈ ಪಂದ್ಯದಲ್ಲಿ ಕೇವಲ 23 ಎಸೆತಗಳಲ್ಲಿ ಅರ್ಧಶತಕ ಗಳಿಸಿದರು. ಫಾರ್ಮ್‌ನಲ್ಲಿರುವ ರಾಹುಲ್ ಜೊತೆಗೆ ನಿಸ್ಸಂಕಾ 9.3 ಓವರ್‌ಗಳಲ್ಲಿ 110 ರನ್‌ಗಳನ್ನು ಸೇರಿಸಿದರು. ರಾಹುಲ್ (75) ಕೂಡ 27 ಎಸೆತಗಳಲ್ಲಿ ಅರ್ಧಶತಕ ಗಳಿಸಿದರು ಮತ್ತು ನಿತೀಶ್ ರಾಣಾ (33) ಅವರೊಂದಿಗೆ ತಂಡವನ್ನು 171 ರನ್‌ಗಳ ಗಡಿ ದಾಟಿಸಿದರು.

**ಅತಿದೊಡ್ಡ ರನ್ ಚೇಸಿಂಗ್ ದಾಖಲೆ**

ತಂಡದ ಮೊತ್ತ 177 ರನ್‌ಗಳಿದ್ದಾಗ ಇಬ್ಬರೂ ಬ್ಯಾಟ್ಸ್‌ಮನ್‌ಗಳು ಔಟಾದರು. ಆದಾಗ್ಯೂ, ಟ್ರಿಸ್ಟಾನ್ ಸ್ಟಬ್ಸ್ (ಅಜೇಯ 18) ಮತ್ತು ಅಶುತೋಷ್ ಶರ್ಮಾ (ಅಜೇಯ 25) ಆ ನಂತರ ಅರ್ಧಶತಕದ ಜೊತೆಯಾಟವನ್ನಾಡಿ ತಂಡವನ್ನು ದೊಡ್ಡ ಗೆಲುವಿನತ್ತ ಮುನ್ನಡೆಸಿದರು. ಡೆಲ್ಲಿ 19.1 ಓವರ್‌ಗಳಲ್ಲಿ ಗುರಿಯನ್ನು ತಲುಪಿ, ಐಪಿಎಲ್ ಇತಿಹಾಸದಲ್ಲಿ ಅತಿದೊಡ್ಡ ರನ್ ಚೇಸಿಂಗ್ ದಾಖಲೆಯನ್ನು ಮಾಡಿತು.

